ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜುಲೈ 4 ಶುಕ್ರವಾರ 2025

ಸಂಪುಟ: 46 | ಸಂಚಿಕೆ: 78

ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23 ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695 ಸುದ್ದಿ ಜಾಹೀರಾತಿಗಾಗಿ– ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com

ಜಾಹೀರಾತು: ad@mysurumithra.com,

website: www.mysurumithra.com

ಮೈಸೂರು ಮಿತ್ರ

ಮೊದಲ ಆಷಾಢ ಶುಕ್ರವಾರದಂದು ಬೆಟ್ಟದಲ್ಲಿ ಅವ್ಯವಸ್ಥೆ ಆರೋಪ

ಸಂಸದ ಯದುವೀರ್ ಪರಿಶೀಲನೆ; ಸಮಸ್ಯೆ ಪುನರಾವರ್ತನೆ ಆಗದಂತೆ ಸೂಚನೆ



ಚಾಮುಂಡಿಬೆಟ್ಟದಲ್ಲಿ ಆಷಾಢಮಾಸ ಶುಕ್ರವಾರದ ಪೂಜಾ ಮಹೋತ್ಸವಕ್ಕೆ ಮಾಡಿರುವ ಸಿದ್ಧತೆಗಳನ್ನು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಪರಿಶೀಲಿಸಿದರು.

ಮೈಸೂರು, ಜು.3(ಎಂಟಿವೈ)– ಆಷಾಢ ಮಾಸ ಶುಕ್ರವಾರದಂದು ನಡೆಯುವ ವಿಶೇಷ ಪೂಜಾ ಮಹೋತ್ಸವಕ್ಕೆ ಚಾಮುಂಡಿಬೆಟ್ಟದಲ್ಲಿ ಮಾಡಿರುವ ಸಿದ್ಧತಾ ಕಾರ್ಯವನ್ನು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಪರಿಶೀಲಿಸಿದರು.

ಆಷಾಢ ಮೊದಲ ಶುಕ್ರವಾರದಂದು ಚಾಮುಂಡಿಬೆಟ್ಟದಲ್ಲಿ ಸರಿಯಾಗಿ ವ್ಯವಸ್ಥೆ ಮಾಡದ ಕಾರಣ ಭಕ್ತರು ತೊಂದರೆ ಅನುಭವಿಸಿದರು ಎಂಬ ಆರೋಪ ಕೇಳಿ ಬಂದ ಹಿನ್ನೆಲೆಯಲ್ಲಿ ಇಂದು ಬೆಳಗ್ಗೆ ಚಾಮುಂಡಿಬೆಟ್ಟಕ್ಕೆ ತೆರಳಿ ಪರಿಶೀಲಿಸಿದರು. ಈ ವೇಳೆ ಚಾಮುಂಡೇಶ್ವರಿ ಕ್ಷೇತ್ರ ಪ್ರಾಧಿಕಾರದ ಕಾರ್ಯದರ್ಶಿ ಡಾ.ಎಂ.ಜೆ. ರೂಪ ಸಂಸದ ಯದುವೀರ್ ಅವರಿಗೆ ಬೆಟ್ಟದಲ್ಲಿ ಮಾಡಿರುವ ವ್ಯವಸ್ಥೆ, ಭಕ್ತರ ಸುರಕ್ಷತೆ ದೃಷ್ಟಿಯಿಂದ ಮಾಡಿರುವ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು.

ಅಧಿಕಾರಿಗಳಿಂದ ಮಾಹಿತಿ ಪಡೆದ ನಂತರ ಯದುವೀರ್ ಕೆಲ ಸಲಹೆ–ಸೂಚನೆ ನೀಡಿದರು. ಬೆಟ್ಟಕ್ಕೆ ಬರುವ ಭಕ್ತರಿಗೆ ಅನುಕೂಲವಾಗುವಂತೆ ಕ್ರಮಕೈಗೊಳ್ಳಬೇಕು. ನ್ಯೂನತೆ ಸರಿಪಡಿಸಬೇಕು. ಗೊಂದಲ ಮರುಕಳಿಸದಂತೆ ಕಟ್ಟೆಚ್ಚರ ವಹಿಸುವಂತೆ ಸೂಚಿಸಿದರು.

ಬಳಿಕ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಆಷಾಢ ಮಾಸದ ಮೊದಲ ಶುಕ್ರವಾರದ ಪೂಜಾ ಮಹೋತ್ಸವದ ವೇಳೆ ಭಕ್ತರು ದೇವರ ದರ್ಶನ ಮಾಡುವಲ್ಲಿ ಸಮಸ್ಯೆಯಾಗಿತ್ತು. ಧರ್ಮ ದರ್ಶನ, ಟಿಕೆಟ್ ಮೂಲಕ ದರ್ಶನ ಅವ್ಯವಸ್ಥೆಯಿಂದ ಕೂಡಿತ್ತು ಎಂದು ದೂರು ಕೇಳಿ ಬಂದಿತ್ತು. ಈ ಹಿನ್ನೆಲೆಯಲ್ಲಿ ಇಂದು ಭೇಟಿ ನೀಡಿ ಪರಿಶೀಲಿಸಿದ್ದೇನೆ. ಎರಡನೇ ಶುಕ್ರವಾರದಲ್ಲಿ ಇಂತಹ ಅವ್ಯವಸ್ಥೆ ಮರುಕಳಿಸದಂತೆ ಸೂಚಿಸಿದ್ದೇನೆ ಎಂದರು.

2000 ರೂ., 300 ರೂ. ಟಿಕೆಟ್, ಸಾಮಾನ್ಯ ದರ್ಶನ ಭಾಗದಲ್ಲಿ ವೀಕ್ಷಣೆ ನಡೆಸಿದ್ದೇನೆ. ನ್ಯೂನತೆ ಸರಿ ಮಾಡುವಂತೆ ಸೂಚನೆ ನೀಡಿದ್ದೇನೆ. ದರ್ಶನ ಸಂದರ್ಭದಲ್ಲಿ ಸರಿಯಾಗಿ ವ್ಯವಸ್ಥೆ ಮಾಡಿಲ್ಲ, ಧರ್ಮ ದರ್ಶನ, ಟಿಕೆಟ್ ಪಡೆದು ಹೋಗುವವರು ಎಲ್ಲರೂ ಒಂದೇ ಕಡೆ ಬಂದು ಸೇರಿ ಗೊಂದಲ ಉಂಟಾಗುತ್ತಿದೆ. ಪ್ರಸಾದ ವಿತರಣೆಯಲ್ಲೂ ಸರಿಯಾದ ವ್ಯವಸ್ಥೆ ಮಾಡಿಲ್ಲ. ಹಾಗಾಗಿ ಸಂಬಂಧಪಟ್ಟ ಅಧಿಕಾರಿಗಳಿಂದ ಮಾಹಿತಿ ಪಡೆದಿದ್ದೇನೆ. ಮುಂದೆ ಇಂತಹ ಸಮಸ್ಯೆ ಮರುಕಳಿಸದಂತೆ ನೋಡಿಕೊಳ್ಳಲು ಸೂಚನೆ ನೀಡಿದ್ದೇನೆ ಎಂದು ತಿಳಿಸಿದರು. ನಂತರ ಚಾಮುಂಡೇಶ್ವರಿ ದೇವಿಯ ದರ್ಶನ ಪಡೆದರು. ಪ್ರಧಾನ ಅರ್ಚಕ ಶಶಿಶೇಖರ್ ದೀಕ್ಷಿತ್ ಅವರು ಯದುವೀರ್ ಅವರಿಗೆ ಶಾಲು ಹೊದಿಸಿ, ಹಾರ ಹಾಕಿ ಪ್ರಸಾದ ವಿತರಣೆ ಮಾಡಿದರು.

ಮೈಸೂರು ಜಿಮ್‌ನಲ್ಲಿ ಹೃದಯಾಘಾತದಿಂದ ಹಾಸನ ಮೂಲದ ಇಂಜಿನಿಯರ್ ಸಾವು

ಮೈಸೂರು, ಜು.3(ಆರ್‌ಕೆ)– ಮೈಸೂರಿನ ಜಿಮ್‌ವೊಂದರಲ್ಲಿ ಟ್ರೆಡ್ ಮಿಲ್ ಮಾಡುತ್ತಿರುವಾಗಲೇ ತೀವ್ರ ಹೃದಯಾಘಾತದಿಂದ ಹಾಸನ ಮೂಲದ ಸಿವಿಲ್ ಇಂಜಿನಿಯರ್ ಸಾವನ್ನಪ್ಪಿರುವ ಘಟನೆ ಕಳೆದ ಶನಿವಾರ ಸಂಭವಿಸಿದೆ.



ಮೈಸೂರಿನ ಗೋಕುಲಂ ನಿವಾಸಿ ಬಿ.ಎನ್.ಶ್ರೀಧರ್(51) ಸಾವನ್ನಪ್ಪಿದವರು. ಮೂಲತಃ ಹಾಸನ ಜಿಲ್ಲೆ, ಹೊಳೆನರಸೀಪುರ ತಾಲೂಕು ಜಂಜನಗಳ್ಳಿ ಗ್ರಾಮದ ನಾಗರತ್ನಮ್ಮ ಮತ್ತು ನಿಂಗೇಗೌಡ ದಂಪತಿಯ ಮಗನಾದ ಶ್ರೀಧರ್ ಕಳೆದ 10 ವರ್ಷಗಳಿಂದಲೂ ಹೃದಯ ಸಂಬಂಧಿ ಕಾಯಿಲೆಯಿಂದ ಬಳಲುತ್ತಿದ್ದು, ಸ್ಟಂಟ್ ಅಳವಡಿಸಲಾಗಿತ್ತು ಎನ್ನಲಾಗಿದೆ.

ಅವಿವಾಹಿತನಾದ ಅವರು ಮೈಸೂರಿನ ಗೋಕುಲಂನಲ್ಲಿ ವಾಸವಿದ್ದು, ಸಿವಿಲ್ ಇಂಜಿನಿಯರಿಂಗ್ ವೃತ್ತಿ ಮಾಡುತ್ತಿದ್ದರು. ಎಂದಿನಂತೆ ಕಳೆದ ಶನಿವಾರ ಸಂಜೆ ವಿಜಯನಗರದ ಶ್ರೀ ಯೋಗಾ ನರಸಿಂಹ ಸ್ವಾಮಿಯ ದೇವಾಲಯ ಸಮೀಪದ ಜಿಮ್‌ವೊಂದರಲ್ಲಿ ಟ್ರೆಡ್‌ಮಿಲ್ ಮಾಡುತ್ತಿರುವಾಗಲೇ ಶ್ರೀಧರ್ ಕುಸಿದು ಬಿದ್ದರು. ತಕ್ಷಣ ಅವರನ್ನು ಹತ್ತಿರದ ಖಾಸಗಿ ಆಸ್ಪತ್ರೆಗೆ ಕರೆದೊಯ್ಯಲಾಯಿತಾದರೂ, ಚಿಕಿತ್ಸೆ ಫಲಕಾರಿಯಾಗದೇ ಕೊನೆಯುಸಿರೆಳೆದರು. ವಿಷಯ ತಿಳಿಯುತ್ತಿದ್ದಂತೆಯೇ ಪೋಷಕರು ಬಂದು ಮೃತದೇಹವನ್ನು ಹಾಸನಕ್ಕೆ ಕೊಂಡೊಯ್ದರು ಎಂದು ಮೂಲಗಳು ತಿಳಿಸಿವೆ.

ವನ್ಯಜೀವಿಗಳ ಹತ್ಯೆ ವಿಚಾರವಾಗಿ ಜನಪ್ರತಿನಿಧಿಗಳೂ ಸೊಲ್ಲೆತ್ತಬೇಕು

● ಸಂಸದ ಯದುವೀರ್ ಅಭಿಮತ ● ಅರಣ್ಯ ಅಧಿಕಾರಿಗಳು ಅರಣ್ಯ, ವನ್ಯಜೀವಿಗಳ ಬಗ್ಗೆ ನಮಗೆ ಮಾತ್ರವೇ ತಿಳಿದಿರುವುದು ಎಂಬ ಮನೋಭಾವನೆ ಹೊಂದಿದ್ದಾರೆ

ಮೈಸೂರು, ಜು.3(ಎಂಟಿವೈ)– ಮಲೆ ಮಹದೇಶ್ವರ ವನ್ಯಧಾಮ ಹುಲಿ ಹಾಗೂ ಬಂಡೀಪುರದ ಬಫರ್ ಜೋನ್‌ನಲ್ಲಿ ಕೋತಿಗಳ ಹತ್ಯೆಯಂತಹ ಪ್ರಕರಣಗಳು ಮರುಕಳಿಸದಂತೆ ಜನಪ್ರತಿನಿಧಿಗಳು ಗಮನಹರಿಸಬೇಕು ಎಂದು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅಭಿಪ್ರಾಯಪಟ್ಟಿದ್ದಾರೆ.

ಚಾಮುಂಡಿಬೆಟ್ಟದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಮಲೆ ಮಹದೇಶ್ವರ ವನ್ಯಧಾಮದಲ್ಲಿ ಐದು ಹುಲಿಗಳು ವಿಷ ಪ್ರಾಶನದಿಂದ ಮೃತಪಟ್ಟಿವೆ. ಬಂಡೀಪುರದ ಬಫರ್ ಜೋನ್‌ನಲ್ಲಿ 18 ಕೋತಿಗಳಿಗೆ ವಿಷವುಣಿಸಿ ಕೊಲ್ಲಲಾಗಿದೆ. ಈ ಪ್ರಕರಣಗಳ ವಿರುದ್ಧ ಯಾವ ಜನಪ್ರತಿನಿಧಿಗಳು ಮಾತನಾಡುತ್ತಿಲ್ಲ. ಇದೊಂದು ಗಂಭೀರ ಸಮಸ್ಯೆ ಆಗಿದೆ. ಯಾಕೆ ಅವರಿಗೆ ಅರ್ಥ ಆಗುತ್ತಿಲ್ಲ ಎಂಬುದೇ ಗೊತ್ತಾಗುತ್ತಿಲ್ಲ. ಈ ವಿಚಾರದಲ್ಲಿ ನಾನು ಮಾತ್ರ ಧ್ವನಿ ಎತ್ತುವ ಕೆಲಸ ಆಗುತ್ತಿದೆ. ಅರಣ್ಯ ಪ್ರದೇಶದಲ್ಲಿ ಹಾದು ಹೋಗಿರುವ ರಸ್ತೆಗಳಲ್ಲಿ ರಾತ್ರಿ ಸಂಚಾರದ ಬಗ್ಗೆ ಸದನದಲ್ಲಿ ನಾನೊಬ್ಬನೇ ಧ್ವನಿ ಎತ್ತುತ್ತಿದ್ದೇನೆ. ಚಾಮರಾಜನಗರ ಜನಪ್ರತಿನಿಧಿಗಳು ಇನ್ನಾದರೂ ಇದನ್ನು ಗಂಭೀರವಾಗಿ ಪರಿಗಣಿಸಬೇಕು. ಪ್ರಕರಣ ಸಂಬಂಧ ಅರಣ್ಯ ಅಧಿಕಾರಿಗಳ ಮೇಲೆ ಕಠಿಣ ಕ್ರಮ ಆಗಬೇಕು. ಅರಣ್ಯ ಅಧಿಕಾರಿಗಳು ಯಾವುದೇ ಸಭೆ ಕರೆದರೂ ಬರುವುದಿಲ್ಲ. ಅರಣ್ಯದ ಬಗ್ಗೆ ನಮಗೆ ಏನೂ ಗೊತ್ತಿಲ್ಲ ಎಂದುಕೊಂಡಿದ್ದಾರೆ. ಆದರೆ ನಮಗೆ ಮಾತ್ರವೇ ಎಲ್ಲ ಗೊತ್ತಿದೆ. ಚಾಮರಾಜನಗರ ಶೇ.50ಕ್ಕೂ ಹೆಚ್ಚು ಅರಣ್ಯ ಹೊಂದಿದೆ. ಅದನ್ನ ಉಳಿಸಿಕೊಂಡು ಹೋಗುವ ಜವಾಬ್ದಾರಿ ನಮ್ಮ ಮೇಲಿದೆ ಎಂದರು.

ಸಿಎಂ ಸಿದ್ದರಾಮಯ್ಯ ವರ್ತನೆ ಸರಿ ಇರಲಿಲ್ಲ: ವೇದಿಕೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೈ ಎತ್ತಿ ಗದರಿದ ಹಿನ್ನೆಲೆಯಲ್ಲಿ ಪೊಲೀಸ್ ಅಧಿಕಾರಿ ಸ್ವಯಂ ನಿವೃತ್ತಿ ಪಡೆಯಲು ನಿರ್ಧರಿಸಿದ್ದಾರೆ. ಅವರು ಮಾನಸಿಕವಾಗಿ ಕುಗ್ಗಿ ಈ ನಿರ್ಧಾರಕ್ಕೆ ಬಂದಿದ್ದಾರೆ. ಅಧಿಕಾರಿಗಳು ತಪ್ಪು ಮಾಡಿದ್ದರೆ, ಕಾನೂನು ಚೌಕಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು. ಬಹಿರಂಗವಾಗಿ ಅಧಿಕಾರಿಗೆ ಅವಮಾನ ಮಾಡುವುದು ಸರಿಯಲ್ಲ. ಇದು ನಮ್ಮ ರಾಜ್ಯದಲ್ಲಿ ಮಾತ್ರ ಅಲ್ಲ, ಎಲ್ಲೂ ಆಗಬಾರದು. ಅಧಿಕಾರಿಗಳು, ಜನಪ್ರತಿನಿಧಿಗಳು ಪರಸ್ಪರ ಗೌರವ ಕೊಟ್ಟು ಕೆಲಸ ಮಾಡಬೇಕು. ಸಿಎಂ ಸಿದ್ದರಾಮಯ್ಯ ನಡೆದುಕೊಂಡ ರೀತಿಯನ್ನು ಮಾಧ್ಯಮಗಳಲ್ಲಿ ಎಲ್ಲರೂ ನೋಡಿದ್ದಾರೆ. ಅವರ ವರ್ತನೆ ಸರಿ ಇರಲಿಲ್ಲ. ಅಧಿಕಾರಿಗಳು ಜನಪ್ರತಿನಿಧಿಗಳ ಆದೇಶ ಪಾಲಿಸಬೇಕು. ಒಂದು ವೇಳೆ ಪಾಲಿಸದಿದ್ದರೆ ಅದನ್ನ ಕೇಳಲು ಸಾಕಷ್ಟು ಮಾರ್ಗಗಳಿವೆ. ಅದನ್ನು ಬಿಟ್ಟು ನಿಂದಿಸಿದ್ದು, ಅವರ ಮೇಲೆ ಕೈ ಎತ್ತಿದ್ದು ಸರಿಯಲ್ಲ ಎಂದು ಅಭಿಪ್ರಾಯಪಟ್ಟರು.

ಆಂತರಿಕ ವಿಚಾರ: ಬಿಜೆಪಿ ರಾಜ್ಯಾಧ್ಯಕ್ಷರ ಬದಲಾವಣೆ ವಿಚಾರ ಪಕ್ಷದ ಆಂತರಿಕ ಸಂಗತಿ. ಅದನ್ನು ಬಹಿರಂಗವಾಗಿ ಮಾತನಾಡುವುದಿಲ್ಲ ಎಂದರು. ರಾಜ್ಯದಲ್ಲಿ ಸಿಎಂ ಬದಲಾವಣೆಯೂ ಸೇರಿದಂತೆ ಕಾಂಗ್ರೆಸ್ ಆಂತರಿಕ ವಿಚಾರದ ಬಗ್ಗೆ ಮಾಹಿತಿ ಇಲ್ಲ. ಆಂತರಿಕ ಕಚ್ಚಾಟದಿಂದ ಆಡಳಿತ ಯಂತ್ರ ಕುಸಿದಿದೆ. ಸರ್ಕಾರ ಉತ್ತಮ ಆಡಳಿತ ನೀಡುವತ್ತ ಗಮನ ಹರಿಸಬೇಕು ಎಂದು ಸಲಹೆ ನೀಡಿದರು.

ಚಾಮುಂಡಿಬೆಟ್ಟದಲ್ಲೂ ವಸ್ತ್ರ ಸಂಹಿತೆ ಜಾರಿಯಾಗಬೇಕು: ಚಾಮುಂಡಿ ಬೆಟ್ಟದಲ್ಲಿ ವಸ್ತ್ರ ಸಂಹಿತೆ ಜಾರಿಗೊಳಿಸುವ ಪರವಾಗಿ ನಾನು ಇದ್ದೇನೆ. ಧಾರ್ಮಿಕ ಕ್ಷೇತ್ರಗಳಿಗೆ ಬಂದಾಗ ಜನರು ಧಾರ್ಮಿಕ ನಂಬಿಕೆ, ಭಾವನೆಯಿಂದಲೇ ಬರಬೇಕು. ಅದು ನಮ್ಮ ಸಂಸ್ಕೃತಿಯ ಭಾಗವಾಗಿದೆ. ಚಾಮುಂಡಿ ಬೆಟ್ಟದಲ್ಲೂ ವಸ್ತ್ರ ಸಂಹಿತೆ ಜಾರಿಯಾಗಬೇಕು. ಇದರಿಂದ ಬರುವ ಭಕ್ತರಿಗೂ ಸಮಸ್ಯೆ ಆಗಬಾರದು. ತಿರುಪತಿ ಮಾದರಿ ಚಾಮುಂಡಿ ಬೆಟ್ಟದಲ್ಲೂ ಮೊಬೈಲ್ ನಿರ್ಬಂಧ ಮಾಡಬೇಕು. ಇತ್ತೀಚಿಗೆ ಕೆಲವರು ಗೊತ್ತಿದ್ದೋ, ಗೊತ್ತಿಲ್ಲದೋ ದೇವಿಯ ಮೂಲ ವಿಗ್ರಹದ ವಿಡಿಯೋ ಮಾಡುತ್ತಿದ್ದಾರೆ. ಇದು ಧಾರ್ಮಿಕ ಕ್ಷೇತ್ರದ ಪಾವಿತ್ರ್ಯತೆಗೆ ಧಕ್ಕೆ ತರುತ್ತದೆ. ಹಾಗಾಗಿ ಈ ನಿಟ್ಟಿನಲ್ಲಿ ಸೂಕ್ತ ಕಾನೂನನ್ನು ಜಾರಿ ಮಾಡಬೇಕು ಎಂದರು.

ಮಹಾವೀರ ವಿದ್ಯಾಮಂದಿರದಲ್ಲಿ ನಾಳೆ ಉಚಿತ ಆರೋಗ್ಯ ತಪಾಸಣೆ ಶಿಬಿರ

ಮೈಸೂರು: ಮೈಸೂರು ಶ್ರೀ ಜೈನ್ ಎಜುಕೇಶನ್ ಸೊಸೈಟಿ, ಮಹಾವೀರ ವಿದ್ಯಾಮಂದಿರದ ವತಿಯಿಂದ ರೋಟರಿ ಈಸ್ಟ್ ಹಾಗೂ ಯುಪಿಎಚ್‌ಸಿ(ಜೆ.ಪಿ.ನಗರ) ಸಹಯೋಗದೊಂದಿಗೆ ಶನಿವಾರ(ಜು.5) ಶ್ರೀರಾಮಪುರದಲ್ಲಿರುವ ಶ್ರೀ ಮಹಾವೀರ ವಿದ್ಯಾಮಂದಿರದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಏರ್ಪಡಿಸಲಾಗಿದೆ.

ಬಿ.ಪಿ, ಶುಗರ್, ಸ್ತ್ರೀರೋಗ ಸೇರಿದಂತೆ ಇತರೇ ಆರೋಗ್ಯ ಸಮಸ್ಯೆಗಳ ಬಗ್ಗೆ ವೈದ್ಯರಾದ ಡಾ.ಸೌಮ್ಯ, ಡಾ.ಶರ್ವಾಣಿ, ಸ್ತ್ರೀರೋಗ ತಜ್ಞರಾದ ಡಾ. ಸೈಯದ್ ನಗ್ಮಾ ಜಮೀರ್ ಅವರುಗಳು ತಪಾಸಣೆ ನಡೆಸಿ ಸಲಹೆ–ಸೂಚನೆಗಳನ್ನು ನೀಡಲಿದ್ದಾರೆ ಎಂದು ಶಾಲೆಯ ಉಪ ಪ್ರಾಂಶುಪಾಲರಾದ ಶ್ರೀಮತಿ ಆಶಾ ಅವರು ತಿಳಿಸಿದ್ದಾರೆ. ವಿವರಗಳಿಗಾಗಿ ಮೊ.7760740815, 9108680534, 9731311974, 8147471375 ಮೂಲಕ ಸಂಪರ್ಕಿಸಬಹುದಾಗಿದೆ. ಶಿಬಿರವು ಬೆಳಗ್ಗೆ 9ರಿಂದ ಮಧ್ಯಾಹ್ನದವರೆಗೂ ನಡೆಯಲಿದೆ.

ನಾಳೆ ಒಡನಾಡಿ ಬಂಧು ಸಿಜಿಕೆ ನೆನಪು ಸರಣಿ ಕಾರ್ಯಕ್ರಮ

ಮೈಸೂರು, ಜು.3– ಕನ್ನಡ ಹವ್ಯಾಸಿ ರಂಗಭೂಮಿಗೆ ಒಡಲಾಳ, ಮಹಾಚೈತ್ರ, ಸುಲ್ತಾನ್ ಟಿಪ್ಪು, ನೀಗಿಕೊಂಡ ಸಂಸ, ಶೇಕ್ಸ್‌ಪಿಯರ್ ಸ್ವಪ್ನ ನೌಕೆ, ರುಡಾಲಿ, ಅಂಬೇಡ್ಕರ್, ದಂಡೆ ಮುಂತಾದ ಮಹತ್ವದ ನಾಟಕಗಳನ್ನು ನಿರ್ದೇಶಿಸಿ ಕನ್ನಡ ರಂಗಭೂಮಿಯ ಮೌಲ್ಯವನ್ನು ಹೆಚ್ಚಿಸಿದ ಕ್ರಿಯಾಶೀಲ ನಿರ್ದೇಶಕ, ಕನಸುಗಾರ, ಸಂಘಟಕ ಹಾಗೂ ಸದಾಕಾಲ ಯುವ ರಂಗಕರ್ಮಿಗಳಿಗೆ ಮಾರ್ಗದರ್ಶನ ನೀಡುತ್ತಿದ್ದ ಸಿ.ಜಿ.ಕೆ ಅವರ ಒಡನಾಡಿ ಬಂಧು ಸಿಜಿಕೆ–75 ಮಾಸದ ನೆನಪು ಸರಣಿ ವಿಶೇಷ ಕಾರ್ಯಕ್ರಮವನ್ನು ಬೆಂಗಳೂರಿನ ರಂಗ ಚಂದಿರ ಟ್ರಸ್ಟ್ ವತಿಯಿಂದ ಜುಲೈ 5ರಂದು ಮೈಸೂರಿನ ಕಲಾಮಂದಿರದ ಕಿರುರಂಗಮಂದಿರದಲ್ಲಿ ಏರ್ಪಡಿಸಲಾಗಿದೆ.

ಸಿಜಿಕೆಯ ಒಡನಾಡಿಗಳಾದ ಎಸ್.ಆರ್. ರಮೇಶ, ಜನಾರ್ದನ್ (ಜನ್ನಿ), ಮೈಮ್ ರಮೇಶ್, ಎಚ್. ಬಿ. ರಮೇಶ್ ಕುಮಾರ್, ಎಸ್.ನಾಗರಾಜ್, ಹಿರಿಯ ವಿದ್ವಾಂಸ ಡಾ. ನಾಗಣ್ಣ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಎಂ. ಪ್ರಕಾಶಮೂರ್ತಿ, ಸಾಹಿತಿ ಡಾ. ಅಮ್ಮಸಂದ್ರ ಸುರೇಶ್, ಡಾ. ಬೇಲೂರು ರಘುನಂದನ್, ಶ್ರೀಮತಿ ಮಂಜುಳ ಮಾನಸ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಒಡನಾಡಿ ಬಂಧು ಸಿಜಿಕೆ–75 ಮಾಸದ ನೆನಪು ರಂಗ ಗೌರವಕ್ಕೆ ಅಕ್ಮಲ್ ಪಾಷ, ಶಿವಾಜಿ ರಾವ್ ಜಾದವ್, ಡಾ. ನಂದ ಕುಮಾರಸ್ವಾಮಿ, ಶ್ರೀಮತಿ ರಶ್ಮಿ ಗೋವಿಂದರಾಜಸ್ವಾಮಿ, ಎನ್.ನಾಗರಾಜ ಐತಾಳ್ ಪಾತ್ರರಾಗಲಿದ್ದಾರೆ. ಎಸ್‌ಎಲ್‌ಎನ್ ಸ್ವಾಮಿ ನಿರ್ದೇಶನದಲ್ಲಿ ಏಷಿಯನ್ ಬುಕ್ ಆಫ್ ರೆಕಾರ್ಡ್ಸ್‌ನಲ್ಲಿ ದಾಖಲಾಗಿರುವ "ಪಂಚಗವ್ಯ" ನಾಟಕ ಪ್ರದರ್ಶನ ಏರ್ಪಡಿಸಲಾಗಿದೆ.

ನಾಳೆ ಗಾಂಧಿ ಅನುಯಾಯಿ ಎಲ್.ನರಸಿಂಹಯ್ಯರಿಗೆ ಪ್ರೊ. ಎಂ.ಕರಿಮುದ್ದೀನ್ ಪ್ರಶಸ್ತಿ ಪ್ರದಾನ


ಮೈಸೂರು, ಜು.3– ಪ್ರಖರ ಗಾಂಧೀ ಚಿಂತಕರೂ, ಶಿಕ್ಷಣವೇತ್ತರೂ ಆಗಿರುವ ಎಲ್. ನರಸಿಂಹಯ್ಯ ತೊಂಡೋಟಿ ಅವರು ಮಂಡ್ಯದ ಗಾಂಧೀ ಭವನ ನೀಡಲಿರುವ ಈ ಸಾಲಿನ ಪ್ರೊ.ಎಂ.ಕರಿಮುದ್ದೀನ್ ಸ್ಮಾರಕ ಗಾಂಧೀ ಸೇವಾ ಪ್ರಶಸ್ತಿಗೆ ಭಾಜನರಾಗಿದ್ದಾರೆ.


ಇತ್ತೀಚೆಗೆ ತಮ್ಮ 91ನೇ ವರ್ಷಕ್ಕೆ ಪಾದಾರ್ಪಣೆ ಮಾಡಿರುವ ಎಲ್‌ಎನ್ ಅವರು ಕನಕಪುರ ತಾಲೂಕು ಹಾರೋಹಳ್ಳಿ ಗ್ರಾಮಾಂತರ ಪ್ರೌಢಶಾಲೆಯಲ್ಲಿ ಮೂವತ್ತಕ್ಕೂ ಹೆಚ್ಚು ವರ್ಷಗಳ ಕಾಲ ಮುಖ್ಯೋಪಾಧ್ಯಾಯರಾಗಿ ಆ ಶಾಲೆಗೆ ಗಾಂಧೀ ಮೌಲ್ಯಗಳ ಚೌಕಟ್ಟು ಹಾಕಿದವರು. ವಿವಿಧ ಸಾಹಿತ್ಯಕ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ತುಮಕೂರು ಮತ್ತು ರಾಮನಗರ ಜಿಲ್ಲೆಗಳ ಶಾಲಾ ಮಕ್ಕಳಿಗೆ ಗಾಂಧೀ ತತ್ವಗಳನ್ನು ಪರಿಚಯಿಸಿದವರು. ಅವರು ರಚಿಸಿದ ಕಥನ ಕವನ 'ಗಾಂಧೀ ಗೋವಿನ ಕಥೆ' ಮಕ್ಕಳಿಗೆ ಪ್ರಿಯವಾದ ಪುಸ್ತಿಕೆ. ಕನ್ನಡ ಸಾಹಿತ್ಯ ಪರಿಷತ್ ಇವರಿಗೆ 2022 ರ ಎ. ಆರ್. ನಾರಾಯಣ ಘಟ್ಟ – ಸರೋಜಮ್ಮ ಗಾಂಧೀ ಪುದುವಟ್ಟು ದತ್ತಿ ಪ್ರಶಸ್ತಿ ನೀಡಿ ಗೌರವಿಸಿದೆ.

ಪ್ರೊ. ಎಂ. ಕರಿಮುದ್ದೀನ್

ಶ್ರೀರಂಗಪಟ್ಟಣ ತಾಲೂಕು ಗಂಜಾಂ ನಿವಾಸಿಯಾಗಿದ್ದ ದಿ. ಪ್ರೊ.ಎಂ. ಕರೀಮುದ್ದೀನ್ ಕನ್ನಡ ಪ್ರಾಧ್ಯಾಪಕರೂ, ಭಾಷಾ ತಜ್ಞರೂ, ವಾಗ್ಮಿಗಳೂ, ಬರಹಗಾರರೂ ಆಗಿ ಪ್ರಸಿದ್ಧರು. ಕನ್ನಡ, ಅರೇಬಿಕ್, ಹಿಂದಿ, ಸಂಸ್ಕೃತ, ಇಂಗ್ಲಿಷ್‌ನಲ್ಲಿ ಪ್ರಾವೀಣ್ಯತೆ ಪಡೆದಿದ್ದರು. ಅನಾಥ ಮುಸ್ಲಿಂರು, ಸಂಚಿತ ಚಿಂತನ, ಬಾಳು – ಬದುಕು ಕೃತಿಗಳ ಲೇಖಕರು. ಶ್ರೀಯುತರ ಸಂಸ್ಮರಣೆಯಲ್ಲಿ ಈ ಗಾಂಧೀ ಸೇವಾ ಪ್ರಶಸ್ತಿಯನ್ನು ಮಂಡ್ಯದ ಗಾಂಧೀ ಭವನದಲ್ಲಿ ಜುಲೈ ಐದರಂದು ನೀಡಿ ಗೌರವಿಸಲಾಗುತ್ತಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

ನಾಳೆ ವಿಶೇಷ ಸ್ವಾತಿ ಪೂಜೆ





ಮೈಸೂರು, ಜು.3– ಮೈಸೂರಿನ ಕಾಳಿದಾಸ ರಸ್ತೆಯಲ್ಲಿರುವ ಇತಿಹಾಸ ಪ್ರಸಿದ್ಧ ಶ್ರೀ ಯದುಗಿರಿ ಯತಿರಾಜ ಮಠ, ಮೈಸೂರು ಶಾಖೆಯ ಶ್ರೀ ಲಕ್ಷ್ಮೀ ನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ಜು.5ರಂದು ಶನಿವಾರ ಸ್ವಾತಿ ನಕ್ಷತ್ರದ ಪ್ರಯುಕ್ತ ವಿಶೇಷ ಪೂಜೆ ಆಯೋಜಿಸಲಾಗಿದೆ.

ಅಂದು ಬೆಳಿಗ್ಗೆ 8ಕ್ಕೆ ಸಂಕಲ್ಪ, 9ಕ್ಕೆ ಅಭಿಷೇಕ, 10.30ಕ್ಕೆ ಅಲಂಕಾರ, 11.30ಕ್ಕೆ ಮಹಾಮಂಗಳಾರತಿ, ಮಧ್ಯಾಹ್ನ 12.30ಕ್ಕೆ ಶಾತ್ತುಮೊರೈ, 1 ಗಂಟೆಗೆ ತೀರ್ಥ ಪ್ರಸಾದ ವಿನಿಯೋಗವನ್ನು ಏರ್ಪಡಿಸಲಾಗಿದೆ. ಸಂಜೆ 7.30ಕ್ಕೆ ಪ್ರಾಕಾರೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ದೇವಸ್ಥಾನದ ಮುಖ್ಯಸ್ಥ ವಿದ್ವಾನ್ ಕೆ.ಆರ್.ಯೋಗಾನರಸಿಂಹನ್ (ಮುರುಳಿ ಅಯ್ಯಂಗಾರ್) ತಿಳಿಸಿದ್ದಾರೆ. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸ್ವಾಮಿಯ ಕೃಪೆಗೆ ಪಾತ್ರರಾಗಬೇಕೆಂದು ಕೋರಿದ್ದಾರೆ. ಮಾಹಿತಿಗೆ ಮೊಬೈಲ್ 9342188323, 7598832271 ಸಂಪರ್ಕಿಸಬಹುದು.

ಬ್ಯಾಂಕ್ ಪರೀಕ್ಷಾ ತರಬೇತಿಗೆ ಒಂದು ದಿನದ ಓರಿಯಂಟೇಷನ್ ಕಾರ್ಯಕ್ರಮ

ಮೈಸೂರು: ಮೈಸೂರಿನ ಕೃಷಿಕ್ ಸರ್ವೋದಯ ಫೌಂಡೇಷನ್, ಕೆಎಸ್‌ಎಫ್ ಅಕಾಡೆಮಿ, ಮೈಸೂರು ಶಾಖೆ ವತಿಯಿಂದ ಜು.5ರಂದು ಒಂದು ದಿನದ ಬ್ಯಾಂಕ್ ಪರೀಕ್ಷಾ ತರಬೇತಿಗೆ ಉಚಿತ ಓರಿಯಂಟೇಷನ್ ಕಾರ್ಯಕ್ರಮ ಆಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ಬ್ಯಾಂಕ್ ಹಾಗೂ ಸರ್ಕಾರಿ ನೌಕರಿ ಪರೀಕ್ಷೆಗಳ ತಯಾರಿ ವಿಧಾನ, ಸಿಲಬಸ್, ಯಶಸ್ಸುಗಳ ಹಂತಗಳು, ವ್ಯವಹಾರಿಕ ಸಲಹೆಗಳ ಕುರಿತು ವಿಷಯ ತಜ್ಞರು, ಅನುಭವಿ ಬ್ಯಾಂಕ್ ಅಧಿಕಾರಿಗಳು ಮಾರ್ಗದರ್ಶನ ನೀಡಲಿದ್ದಾರೆ. ಮಾಹಿತಿಗೆ ಮೊ.82960 31570.

ರಾಷ್ಟ್ರೀಯ ಪ್ಲಾಸ್ಟಿಕ್ ಚೀಲ ಮುಕ್ತ ದಿನ

ದೇವರಾಜ ಮಾರ್ಕೆಟ್ ಮುಂಭಾಗ ಬಟ್ಟೆ ಬ್ಯಾಗ್ ವಿತರಿಸಿ ಜಾಗೃತಿ



ರಾಷ್ಟ್ರೀಯ ಪ್ಲಾಸ್ಟಿಕ್ ಚೀಲ ಮುಕ್ತ ದಿನದ ಅಂಗವಾಗಿ ಗ್ರಾಹಕರಿಗೆ ಉಚಿತ ಬಟ್ಟೆ ಬ್ಯಾಗ್ ವಿತರಿಸಿದರು.

ಮೈಸೂರು, ಜು.3– ಅಖಿಲ ಭಾರತೀಯ ಗ್ರಾಹಕ ಪಂಚಾಯತ್ ಮೈಸೂರು ಘಟಕ ಹಾಗೂ ಕೆಎಂಪಿಕೆ ಚಾರಿಟೆಬಲ್ ಟ್ರಸ್ಟ್ ವತಿಯಿಂದ ರಾಷ್ಟ್ರೀಯ ಪ್ಲಾಸ್ಟಿಕ್ ಚೀಲ ಮುಕ್ತದಿನದ ಅಂಗವಾಗಿ ದೇವರಾಜ ಮಾರ್ಕೆಟ್ ಮುಂಭಾಗ ಪ್ಲಾಸ್ಟಿಕ್ ಬ್ಯಾಗ್ ತ್ಯಜಿಸಿ ಬಟ್ಟೆ ಬ್ಯಾಗ್ ಬಳಸಿ ಘೋಷವಾಕ್ಯದೊಂದಿಗೆ ಗ್ರಾಹಕರಿಗೆ ಉಚಿತ ಬಟ್ಟೆ ಬ್ಯಾಗ್ ವಿತರಿಸಿ ಜಾಗೃತಿ ಮೂಡಿಸಲಾಯಿತು.

ಬಳಿಕ ಮಾತನಾಡಿದ ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಮ ಅಯ್ಯಂಗಾರ್, ಪರಿಸರಕ್ಕೆ ಮಾರಕವಾಗಿರುವ ಪ್ಲಾಸ್ಟಿಕ್ ಬಳಕೆಯನ್ನು ಪ್ರತಿಯೊಬ್ಬರೂ ತ್ಯಜಿಸಬೇಕು. ಆ ಮೂಲಕ ಪ್ಲಾಸ್ಟಿಕ್ ಮುಕ್ತ ನಗರ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದರು.

ಕರ್ನಾಟಕ ಹಿತರಕ್ಷಣಾ ವೇದಿಕೆ ಅಧ್ಯಕ್ಷ ವಿನಯ್ ಕುಮಾರ್, ಎಸ್.ಎನ್. ರಾಜೇಶ್, ರವಿಚಂದ್ರ, ಹರೀಶ್ ನಾಯ್ಡು, ದುರ್ಗಾ ಪ್ರಸಾದ್, ರಾಕೇಶ್, ಶ್ರೀಕಾಂತ್ ಕಶ್ಯಪ್, ಹಾಗೂ ಇನ್ನಿತರರು ಹಾಜರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

4.07.2025 ಶುಕ್ರವಾರ, ಮಳೆ ನಕ್ಷತ್ರ: ಆರ್ದ್ರಾ, 22.06.2025ರಿಂದ 05.07.2025
ವಿಶ್ವವಸು ನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಆಷಾಢ ಮಾಸ, ಶುಕ್ಲ ಪಕ್ಷ,
ತಿಥಿ: ನವಮಿ, ನಕ್ಷತ್ರ: ಚಿತ್ತ, ರಾಹುಕಾಲ: ಬೆಳಗ್ಗೆ 10.30 ರಿಂದ 12 ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ದೇಹ ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ, ಬೆಳಗ್ಗೆ 6.30 ರಿಂದ.

■ **ಶ್ರೀ ಚಂದ್ರಮೌಳೀಶ್ವರ ಸ್ವಾಮಿ ದೇವಸ್ಥಾನಂ ಚಾರಿಟೆಬಲ್ ಟ್ರಸ್ಟ್ :** 83ನೇ ಜಯಂತ್ಯುತ್ಸವ–2025, ಬೆಳಗ್ಗೆ 9 ಗಂಟೆಗೆ ಗಿರಿಜಾ ಕಲ್ಯಾಣ, ಸ್ಥಳ: ಶ್ರೀ ಚಂದ್ರಮೌಳೀಶ್ವರ ಸ್ವಾಮಿ ದೇವಸ್ಥಾನ, ದೇವಸ್ಥಾನದ ರಸ್ತೆ, ವಾಣಿವಿಲಾಸ ಮೊಹಲ್ಲಾ.

■ **ಅಭಿನವ ಶಂಕರಾಲಯ, ಶಂಕರ ಮಠ ಫೋರ್ಟ್ ಮೊಹಲ್ಲಾ :** ಆಷಾಢ ಶುಕ್ರವಾರಗಳ ವಿಶೇಷ ಪೂಜಾ ಮಹೋತ್ಸವ, ಶ್ರೀ ಸರಸ್ವತೀ ಅಲಂಕಾರ (ವೀಣಾ ಶಾರದಾ), ಬೆಳಗ್ಗೆ 10ಕ್ಕೆ ಶ್ರೀ ಸರಸ್ವತೀ ಹೋಮ, ಧನ್ವಂತರೀ ಹೋಮ, ಮಧ್ಯಾಹ್ನ 12ಕ್ಕೆ ಪೂರ್ಣಾಹುತಿ, ಮಹಾಮಂಗಳಾರತಿ, ಪ್ರಸಾದ ವಿನಿಯೋಗ, ಸಂಜೆ 5ಕ್ಕೆ 108 ಮಾತೆಯರಿಂದ ಲಲಿತಾ ಸಹಸ್ರನಾಮ ಕುಂಕುಮಾರ್ಚನೆ, ಸಂಜೆ 6.30 ರಿಂದ ವಿದುಷಿ ಪಿ.ಬಿ. ಕೀರ್ತನ, ವಿದುಷಿ ಅದಿತಿ ನಡುತೋಟ ಮತ್ತು ವೃಂದದವರಿಂದ ಸಂಗೀತ ಗಾಯನ ಕಾರ್ಯಕ್ರಮ, ರಾತ್ರಿ 9.30ಕ್ಕೆ ಪ್ರಾಕಾರೋತ್ಸವ, ಮಹಾಮಂಗಳಾರತಿ, ಅಷ್ಟಾವಧಾನ ಸೇವೆ, ಸ್ಥಳ: ಅಭಿನವ ಶಂಕರಾಲಯ, ಫೋರ್ಟ್ ಮೊಹಲ್ಲಾ.

■ **ತ್ರಯೀನ್ಯಾಸ್ ಶ್ರೀವಿದ್ಯಾ ಫೌಂಡೇಷನ್ :** ಶ್ರೀ ಮಹಾವಾರಾಹಿ ಗುಪ್ತ (ಆಷಾಢ) ನವರಾತ್ರಿ ಮಹೋತ್ಸವ, ಬೆಳಗ್ಗೆ 10ಕ್ಕೆ ನವಮಿ, ಶ್ರೀ ಚಕ್ರಾರ್ಚನೆ, ನವಾವರಣ ಪೂಜಾ, ಸಗ್ರಹಮಖ ಚಂಡಿಯಾಗ, ಮಧ್ಯಾಹ್ನ 1ಗಂಟೆಗೆ ಪೂರ್ಣಾಹುತಿ, ಬಲಿಹರಣ, ಕುಮಾರಿ, ಸುವಾಸಿನಿ, ವಟುಕಪೂಜಾ, ಮಹಾಮಂಗಳಾರತಿ, ಅಷ್ಟಾವಧಾನ ಸೇವೆ, ಪ್ರಸಾದ ವಿನಿಯೋಗ, ಸ್ಥಳ: ತ್ರಯೀನ್ಯಾಸ್ ಶ್ರೀ ವಿದ್ಯಾ ಫೌಂಡೇಷನ್, ಜಯಲಕ್ಷ್ಮಿಪುರಂ.

■ **ಶ್ರೀ ಸತ್ಯಸಾಯಿ ಸೇವಾ ಸಂಘಟನೆಗಳು, ಮೈಸೂರು ಜಿಲ್ಲೆ :** ವಾಹಿನಿ ಮಹೋತ್ಸವ, ಭಗವದ್ಗೀತಾ ಪ್ರದರ್ಶನ, ಸ್ಥಳ: ಶ್ರೀ ಸತ್ಯಸಾಯಿ ಬಾಬಾ ಶಾಲೆ, ಬೃಂದಾವನ ಆಸ್ಪತ್ರೆ ರಸ್ತೆ, ಜಯಲಕ್ಷ್ಮಿಪುರಂ, ಬೆಳಗ್ಗೆ 10 ರಿಂದ.

■ **ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ನಾಡಪ್ರಭು ಕೆಂಪೇಗೌಡ ಅಧ್ಯಯನ ಮತ್ತು ಸಂಶೋಧನಾ ವಿಸ್ತರಣಾ ಕೇಂದ್ರ :** ನಾಡಪ್ರಭು ಕೆಂಪೇಗೌಡರ 516ನೇ ಜಯಂತಿ ಕಾರ್ಯಕ್ರಮ, ಸಾನ್ನಿಧ್ಯ : ಆದಿಚುಂಚನಗಿರಿ ಶಾಖಾ ಮಠದ ಶ್ರೀ ಸೋಮನಾಥ ಸ್ವಾಮೀಜಿ, ಅಧ್ಯಕ್ಷತೆ : ಕರಾಮುವಿವಿ ಕುಲಪತಿ ಪ್ರೊ. ಶರಣಪ್ಪ ವಿ. ಹಲಸೆ, ಉದ್ಘಾಟನೆ : ವೈದ್ಯ ಸಾಹಿತಿ ಡಾ. ಎಸ್.ಪಿ. ಯೋಗಣ್ಣ, ಮುಖ್ಯ ಅತಿಥಿಗಳು : ಡಾ. ಪಿ. ಬೋರೇಗೌಡ, ಶಾಸಕ ಕೆ. ಹರೀಶ್‌ಗೌಡ, ಕೆಎಸ್‌ಜಿಹೆಚ್ ವಿಶ್ವವಿದ್ಯಾನಿಲಯ ಕುಲಸಚಿವ ಪ್ರೊ. ಎಂ.ಜಿ. ಮಂಜುನಾಥ್, ಕರಾಮುವಿವಿ ಕುಲಸಚಿವ ಪ್ರೊ. ಎಸ್.ಕೆ.ನವೀನ್ ಕುಮಾರ್, ಸ್ಥಳ: ಘಟಿಕೋತ್ಸವ ಭವನ, ಕರಾಮುವಿವಿ, ಬೆಳಗ್ಗೆ 11ಕ್ಕೆ.

■ **ಅಭಿರುಚಿ ಪ್ರಕಾಶನ :** ಪ್ರಕಾಶನದ 30ನೇ ಸಂಭ್ರಮ ಕಾರ್ಯಕ್ರಮ, ಉದ್ಘಾಟನೆ : ಚಲನಚಿತ್ರ ನಟ ಪ್ರಕಾಶ್ ರೈ, ಮುಖ್ಯ ಅತಿಥಿಗಳು : ಬೂಕರ್ ಪ್ರಶಸ್ತಿ ಪುರಸ್ಕೃತರಾದ ಭಾನು ಮುಷ್ತಾಕ್, ಪ್ರಾಧ್ಯಾಪಕಿ ಡಾ. ಲತಾ, ರಾಜ್ಯ ಮಾಹಿತಿ ಆಯುಕ್ತ ಡಾ. ಹರೀಶ್‌ಕುಮಾರ್, ಹಿರಿಯ ಲೇಖಕ ಪ್ರೊ. ಪಿ.ವಿ. ನಂಜರಾಜ ಅರಸ್, ಹಿರಿಯ ಪ್ರಕಾಶಕ ಪ್ರೊ. ಬಿ.ಎನ್. ಶ್ರೀರಾಮ, ಬಾನು ಮುಶ್ತಾಕ್ ಅವರ 'ಎದೆಯ ಹಣತೆ' 3ನೇ ಮುದ್ರಣ, 'ಹಸೀನಾ ಮತ್ತು ಇತರ ಕಥೆಗಳು' ನಾಲ್ಕನೇ ಮುದ್ರಣ, ಪ್ರೊ. ಪಿ.ವಿ.ನಂಜರಾಜ ಅರಸ್ ಅವರ 'ಇತಿಹಾಸ ಸೃಷ್ಟಿಸಿದ ಪುಟ್ಟ ಹಳ್ಳಿ ಹದಿನಾರು', 'ಟೀಪೂ ಮಾನ್ಯತೆ ಸಿಗದ ಸುಲ್ತಾನ್; ಅಂದು–ಇಂದು' ಎರಡನೇ ಮುದ್ರಣ ಪುಸ್ತಕ ಬಿಡುಗಡೆ, ಸ್ಥಳ: ಕೊಡಗು ಸಹಕಾರ ಸಂಘ, ಜಯಲಕ್ಷ್ಮೀಪುರಂ, ಸಂಜೆ 4ಕ್ಕೆ.

■ **ಮೈಸೂರು ರಿದಮ್ಸ್ :** ವೈದ್ಯರ ದಿನಾಚರಣೆ ಅಂಗವಾಗಿ ರಸಸಂಜೆ ಕಾರ್ಯಕ್ರಮ, ಬಹುಭಾಷಾ ಜನಪ್ರಿಯ ಚಿತ್ರಗೀತೆಗಳು, ವೈದ್ಯರಿಗೆ ನಮನ ಸಂಗೀತ ನೃತ್ಯಗಳ ಸಮ್ಮಿಲನ, ಮುಖ್ಯ ಅತಿಥಿಗಳು : ಮಾಜಿ ಸಂಸದ ಪ್ರತಾಪ್ ಸಿಂಹ, ವಿಧಾನಪರಿಷತ್ ಸದಸ್ಯ ಡಾ. ಡಿ. ತಿಮ್ಮಯ್ಯ, ಅಪರ ಜಿಲ್ಲಾಧಿಕಾರಿ ಡಾ. ಪಿ. ಶಿವರಾಜ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವಿಭಾಗೀಯ ಉಪನಿರ್ದೇಶಕ ಡಾ. ಕೆ.ಹೆಚ್. ಪ್ರಸಾದ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಎಂ.ಡಿ. ಸುದರ್ಶನ್, ಗಾಯಕ ಸ್ಟಾನ್ಲಿ ಪಾರ್ಕರ್, ಮಾಜಿ ಸಚಿವ ಸಾ.ರಾ. ಮಹೇಶ್, ಶಾಸಕ ಸಿ.ಎನ್. ಮಂಜೇಗೌಡ, ಹಿರಿಯ ಪತ್ರಕರ್ತ ಅಂಶಿಪ್ರಸನ್ನಕುಮಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಪಿ.ಸಿ. ಕುಮಾರಸ್ವಾಮಿ, ಕಾಂಗ್ರೆಸ್ ಮುಖಂಡ ಎನ್.ಎಂ. ನವೀನ್‌ಕುಮಾರ್, ಕರ್ನಾಟಕ ಸುಗಮ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಡಾ. ನಾಗರಾಜ್ ವಿ. ಬೈರಿ, ಶ್ರೀಮತಿ ಅನಿತಾ ಸಾ.ರಾ. ಮಹೇಶ್, ಸ್ಥಳ: ನಾದಬ್ರಹ್ಮ ಸಂಗೀತ ಸಭಾ, ಜೆಎಲ್‌ಬಿ ರಸ್ತೆ, ಸಂಜೆ 4.30 ರಿಂದ.


■ **ಶ್ರೀ ವ್ಯಾಸರಾಜಪುರ ಮಠ (ಸೋಸಲೆ) :** ಶ್ರೀ ವ್ಯಾಸರಾಜ ಮಠಾಧೀಶರಾದ ಶ್ರೀ 1008 ಶ್ರೀ ವಿದ್ಯಾಶ್ರೀಶತೀರ್ಥ ಶ್ರೀಪಾದಂಗಳವರ 9ನೇ ಪೀಠಾರೋಹಣ ವಾರ್ಷಿಕೋತ್ಸವ, ಶ್ರೀ ವ್ಯಾಸತೀರ್ಥ ವಿದ್ಯಾಪೀಠದ 10ನೇ ವಾರ್ಷಿಕೋತ್ಸವ ಸಮಾರಂಭ, ಮುಖ್ಯ ಅತಿಥಿಗಳು : ಜಿಲ್ಲಾಧಿಕಾರಿ ಲಕ್ಷ್ಮೀಕಾಂತರೆಡ್ಡಿ, ನಿವೃತ್ತ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳಾದ ಕೆ.ಜಯರಾಜ್, ಸಿ.ಎಸ್. ಸುರಂಜನ್, ಮಾಜಿ ವಿಜ್ಞಾನಿ ಪ್ರಹ್ಲಾದ್ ರಾಮರಾವ್, ಡಾ. ಎಚ್.ಎಸ್. ರಾಘವೇಂದ್ರರಾವ್, ಹೆಚ್.ಎಸ್.ಹರಿಪ್ರಸಾದ್, ಅಭಿನಂದನಾ ಭಾಷಣ : ಪೂರ್ಣಪ್ರಜ್ಞ ಸಂಶೋಧನಾ ಮಂದಿರದ ನಿವೃತ್ತ ನಿರ್ದೇಶಕ ಡಾ. ಆನಂದತೀರ್ಥಚಾರ್ಯ ನಾಗಸಂಪಿಗೆ, ಧಾರ್ಮಿಕ ಉಪನ್ಯಾಸಕ ವಿದ್ವಾನ್ ಬ್ರಹ್ಮಣ್ಯಾಚಾರ್ಯ, ಸ್ಥಳ: ಶ್ರೀ ವ್ಯಾಸರಾಜಪುರ ಮಠ, ಸಂಜೆ 6ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಸಾಧನ – ಶೋಧನ ಗ್ರಾಮೀಣ ಪರಿಸರದ ಉಪಕರಣಗಳು, ಲೇಖನ : ಡಾ. ಎಂ. ಎನ್. ಚಿಕ್ಕಮಾದು, ಪ್ರಸ್ತುತಿ : ಡಾ. ಮೈಸೂರು ಉಮೇಶ್, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ– ಜಿ. ಪುಷ್ಪಲತಾ ಹಾಗೂ ಸದಾಶಿವ ಪಾಟೀಲ್, ವ್ಯಾಖ್ಯಾನ–ಪ್ರೊ. ಮೊರಬದ ಮಲ್ಲಿಕಾರ್ಜುನ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಕನ್ನಡ ಚಿತ್ರಗೀತೆಗಳು, 9.00 ನಮ್ಮ ಆರೋಗ್ಯ – ಭಾರತೀಯ ವೈದ್ಯರ ದಿನಾಚರಣೆಯ ಸಂದರ್ಭದಲ್ಲಿ ವೈದ್ಯರ ಕರ್ತವ್ಯ ಜವಾಬ್ದಾರಿ ಮತ್ತು ಕ್ಷೇಮಾಭಿವೃದ್ಧಿ ಕುರಿತು ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಮನೋವೈದ್ಯಕೀಯ ವಿಭಾಗದ ಪ್ರೊಫೆಸರ್ ಹಾಗೂ ಮುಖ್ಯಸ್ಥರಾದ ಡಾ. ಬಿ.ಎನ್. ರವೀಶ್ ಅವರೊಂದಿಗೆ ಮಾತುಕತೆ ಮತ್ತು ರೋಗಿಗಳು ಮತ್ತು ವೈದ್ಯರ ಬಾಂಧವ್ಯ ಕುರಿತು ಡಾ.ಕೇಶವಮೂರ್ತಿ ವಿ. ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ–ಬೇದ್ರೆ ಮಂಜುನಾಥ್, 9.30 ಗಾಂಧಿ ಸ್ಮೃತಿ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಅಕ್ಕರೈ ಸುಬ್ಬಲಕ್ಷ್ಮಿ ಮತ್ತು ಅಕ್ಕರೈ ಸ್ವರ್ಣಲತಾ ಅವರಿಂದ ದ್ವಂದ್ವ ಗಾಯನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಕಾಮನ ಬಿಲ್ಲು ಬದುಕಿನ ಬಣ್ಣಗಳ ಚಿತ್ತಾರ, ಪ್ರಸ್ತುತಿ : ಜಿ. ಎನ್. ಮಂಜುನಾಥ್

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಕಾದಂಬರಿ ವಿಹಾರ – ಎಂ. ಆರ್. ಶ್ರೀನಿವಾಸಮೂರ್ತಿಯವರ ರಂಗಣ್ಣನ ಕನಸಿನ ದಿನಗಳು ಕಾದಂಬರಿಯ ಬಾನುಲಿ ಓದು. ಪ್ರಸ್ತುತಿ : ಉಮೇಶ್. ಎಸ್.ಎಸ್.,1.00 ಪ್ರಗತಿ ಪಥ– ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.40 ದಾರಿದೀಪ–ಪ್ರಾಯೋಜಿತ ಕಾರ್ಯಕ್ರಮ. ಪ್ರಾಯೋಜಕರು: FEBA India, 2.55 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ : ಜಿ.ಕೆ. ರವೀಂದ್ರಕುಮಾರ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಅಮೃತ ವೆಂಕಟೇಶ್ – ವೀಣಾ ವಾದನ, 4.00 ಮಹಿಳಾರಂಗ, 4.30 ವೃತ್ತಿ ಮಾರ್ಗದರ್ಶನ–ಐ.ಟಿ.ಐ. ತರಬೇತಿ ಮತ್ತು ಉದ್ಯೋಗ ಅವಕಾಶಗಳು ಕುರಿತು ಹೆಚ್. ಡಿ. ಕೋಟೆಯ ಸರ್ಕಾರಿ ಐ.ಟಿ.ಐ. ಕಾಲೇಜಿನ ಟ್ರೈನಿಂಗ್ ಆಫೀಸರ್ ಹಾಗೂ ಉತ್ತಮ ಎನ್.ಎಸ್.ಎಸ್. ಅಧಿಕಾರಿ ರಾಜ್ಯಪ್ರಶಸ್ತಿ ಪುರಸ್ಕೃತರಾದ ರವಿಶಂಕರ್ ಜಿ. ಅವರೊಂದಿಗೆ ಮಾತುಕತೆ, ಇವರೊಂದಿಗೆ ಭಾಗವಹಿಸುತ್ತಾರೆ –ಬೇದ್ರೆ ಮಂಜುನಾಥ್, 6.50 ಕೃಷಿರಂಗ–ಬಿತ್ತನೆ ಬೀಜ ಪೂರೈಕೆಯಲ್ಲಿ ಕರ್ನಾಟಕ ರಾಜ್ಯ ಬೀಜ ನಿಗಮದ ಪಾತ್ರ ಪ್ರಾಯೋಜಿತ ನೇರ ಫೋನ್–ಇನ್ ಕಾರ್ಯಕ್ರಮ. ಭಾಗವಹಿಸುತ್ತಾರೆ–ಕರ್ನಾಟಕ ರಾಜ್ಯ ಬೀಜ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಕೆ.ಜಿ. ಅನೂಪ್, 7.20 ಪರಾಗ –ಬೇಸಾಯದ ಬದುಕು ಸರಾಗ, 7.45 ಕನ್ನಡದಲ್ಲಿ ಭಾಷಣ, 8.00 ವಿಜ್ಞಾನ ಭಾರತಿ, 8.30 ಹಿಂದಿ ಚಿತ್ರಗೀತೆಗಳು, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ–ಎಂ. ಡಿ. ರಾಮನಾಥನ್ – ಹಾಡುಗಾರಿಕೆ, 10.00 ಹಳ್ಳಿ ಹಾಡು, ಭಾಗವಹಿಸುತ್ತಾರೆ–ಬಸವನ ಹಳ್ಳಿಯ ದೊಡ್ಡರಾಚಪ್ಪ ಮತ್ತು ಸಂಗಡಿಗರು, ಪ್ರಸ್ತುತಿ–ಡಾ. ಮೈಸೂರು ಉಮೇಶ್, 10.25 ಸವಿನೆನಪು– ಹಳೆಯ ಕನ್ನಡ ಚಿತ್ರಗೀತೆಗಳು



ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜುಲೈ 4 ಶುಕ್ರವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 78 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಹಾಸನದಲ್ಲಿ ಕಳೆದ 24 ಗಂಟೆಯಲ್ಲಿ ಹೃದಯಾಘಾತದಿಂದ ಮತ್ತೆ ನಾಲ್ವರು ಸಾವು

ಹಾಸನ, ಜು.3– ಜಿಲ್ಲೆಯಲ್ಲಿ ಹೃದಯಾಘಾತದಿಂದ ಸರಣಿ ಸಾವು ಮುಂದುವರೆದಿದೆ. ಕಳೆದ 24 ಗಂಟೆಗಳಲ್ಲಿ ನಾಲ್ವರು ಹೃದಯಾಘಾತಕ್ಕೆ ಬಲಿಯಾಗಿದ್ದಾರೆ.


ಸಂಪತ್‌ಕುಮಾರ್ (53), ಸಿ.ಬಿ ವಿರೂಪಾಕ್ಷ (70), ಸಂತೋಷ್ (41), ದೇವಮ್ಮ (72) ಮೃತಪಟ್ಟವರು. ಹಾಸನ ನಗರದ ಕರೀಗೌಡ ಕಾಲೋನಿ ನಿವಾಸಿ ಸಂಪತ್‌ಕುಮಾರ್‌ಗೆ ದಿಢೀರ್ ಎದೆನೋವು ಕಾಣಿಸಿಕೊಂಡಿದೆ. ಕೂಡಲೇ ಅವರನ್ನು ಕುಟುಂಬಸ್ಥರು ಹಿಮ್ಸ್ ಆಸ್ಪತ್ರೆಗೆ ಕರೆದೊಯ್ದಿದ್ದು, ಚಿಕಿತ್ಸೆ ಫಲಕಾರಿಯಾಗದೇ ಆಸ್ಪತ್ರೆಯಲ್ಲಿ ಸಂಪತ್‌ಕುಮಾರ್ ಸಾವನ್ನಪ್ಪಿದ್ದಾರೆ.

ಆಸ್ಪತ್ರೆಗೆ ಸಾಗಿಸುವ ಮಾರ್ಗಮಧ್ಯೆ ದುರಂತ ಅಂತ್ಯ: ಸಕಲೇಶಪುರ ತಾಲೂಕಿನ, ಬೆಳಗೋಡು ಹೋಬಳಿ ಚಿಕ್ಕನಾಯಕನಹಳ್ಳಿ ಗ್ರಾಮದ ಸಿ.ಬಿ ವಿರೂಪಾಕ್ಷ ಅವರಿಗೆ ಕಳೆದ ರಾತ್ರಿ 11.30ರ ಸುಮಾರಿನಲ್ಲಿ ಎದೆನೋವು ಕಾಣಿಸಿಕೊಂಡಿದ್ದು, ಕೂಡಲೇ ಅವರನ್ನು ಕುಟುಂಬಸ್ಥರು ಸಕಲೇಶಪುರ ಕ್ರಾಫರ್ಡ್ ಆಸ್ಪತ್ರೆಗೆ ಕರೆದೊಯ್ಯುತ್ತಿದ್ದರು. ಆದರೆ ಆಸ್ಪತ್ರೆಗೆ ಸಾಗಿಸುವ ಮಾರ್ಗ ಮಧ್ಯೆಯೇ ಕೊನೆಯುಸಿರೆಳೆದಿದ್ದಾರೆ.

ಮಲಗಿದ್ದಲ್ಲೇ ಸಾವು: ಗ್ರಾಪಂ ಸದಸ್ಯ ಹೃದಯಾಘಾತಕ್ಕೆ ಬಲಿಯಾಗಿರುವ ಘಟನೆ ಆಲೂರು ತಾಲೂಕಿನ, ಕಲ್ಲಾರೆ ಗ್ರಾಮದಲ್ಲಿ ನಡೆದಿದೆ. ಸಂತೋಷ್ (41) ಹೃದಯಾಘಾತದಿಂದ ಮೃತಪಟ್ಟ ವ್ಯಕ್ತಿ. ರಾತ್ರಿ ಮಲಗಿದ್ದಲ್ಲಿಯೇ ಹೃದಯಾಘಾತವಾಗಿದೆ. ಬೆಳಗ್ಗೆ ಮೇಲೆ ಳದಿದ್ದಾಗ ಕುಟುಂಬಸ್ಥರು ನೋಡಿದ್ದು ಕೂಡಲೇ ಹಾಸನದ ಖಾಸಗಿ ಆಸ್ಪತ್ರೆಗೆ ಕರೆತಂದಿದ್ದಾರೆ. ಅಷ್ಟರಲ್ಲಿ ಹೃದಯಾಘಾತದಿಂದ ಸಂತೋಷ್ ಮೃತಪಟ್ಟಿರುವುದಾಗಿ ವೈದ್ಯರು ತಿಳಿಸಿದ್ದಾರೆ. ಸಂತೋಷ್ ಕಾರಗೋಡು ಗ್ರಾಪಂ. ಸದಸ್ಯರಾಗಿದ್ದು ಕುಟುಂಬಸ್ಥರ ಆಕ್ರಂದನ ಮುಗಿಲುಮುಟ್ಟಿತ್ತು.

ಚಿಕಿತ್ಸೆ ಪಡೆದು ವಾಪಸ್ ಬರುವಾಗ ಸಾವು: ಮತ್ತೊಂದು ಪ್ರಕರಣದಲ್ಲಿ ಹೃದಯಾಘಾತ ದಿಂದ ವೃದ್ಧೆ ಸಾವನ್ನಪ್ಪಿರುವ ಘಟನೆ ಸಕಲೇಶಪುರ ತಾಲೂಕಿನ ಅರೆಕೆರೆ ಗ್ರಾಮದಲ್ಲಿ ನಡೆದಿದೆ. ದೇವಮ್ಮ (72) ಹೃದಯಾಘಾತಕ್ಕೆ ಬಲಿಯಾದ ವೃದ್ಧೆ. ದೇವಮ್ಮ ಮನೆಯಲ್ಲಿದ್ದ ವೇಳೆ ಅವರಿಗೆ ಎದೆನೋವು ಕಾಣಿಸಿಕೊಂಡಿದೆ. ಎದೆನೋವು ಹೆಚ್ಚಾಗುತ್ತಲೇ ಬೆಂಗಳೂರು ಜಯದೇವ ಆಸ್ಪತ್ರೆಗೆ ತೆರಳಿ ವೈದ್ಯರ ಸಲಹೆ, ಚಿಕಿತ್ಸೆ ಔಷಧಿ ಪಡೆದು ಗ್ರಾಮಕ್ಕೆ ವಾಪಾಸ್ಸಾಗುತ್ತಿದ್ದರು. ಬೆಂಗಳೂರಿನಿಂದ ಗ್ರಾಮಕ್ಕೆ ವಾಪಸ್ಸಾಗುವ ಮಾರ್ಗ ಮಧ್ಯೆ ದೇವಮ್ಮ ಮೃತಪಟ್ಟಿದ್ದಾರೆ. ಹಾಸನ ಜಿಲ್ಲೆಯಲ್ಲಿ ಹೃದಯಾಘಾತದಿಂದ ಮೃತಪಟ್ಟವರ ಸಂಖ್ಯೆ 31ಕ್ಕೆ ಏರಿಕೆಯಾಗಿದ್ದು ಜಿಲ್ಲೆಯ ಜನರಲ್ಲಿ ಮತ್ತಷ್ಟು ಆತಂಕ ಹೆಚ್ಚಿಸಿದೆ.

ಸಾವಿನ ಸಂಖ್ಯೆ 31ಕ್ಕೆ ಏರಿಕೆ




ನನ್ನ ಭೂಮಿ ಗ್ಯಾರಂಟಿ ಅಭಿಯಾನಕ್ಕೆ ಮತ್ತಷ್ಟು ವೇಗ

- ಬರೀ 7 ತಿಂಗಳಲ್ಲಿ 1,04,222 ಭೂಮಿ ಸರ್ವೇ ಕಾರ್ಯ ಆರಂಭ; ಶೀಘ್ರವೇ ಪೋಡಿ ಪ್ರಕ್ರಿಯೆ ಪೂರ್ಣ
- ಕಂದಾಯ ಸಚಿವ ಕೃಷ್ಣ ಬೈರೇಗೌಡ ಮಾಹಿತಿ

ಬೆಂಗಳೂರು, ಜು.3(ಕೆಎಂಶಿ)– ರೈತರಿಗೆ ಕಾಂಗ್ರೆಸ್ ಸರ್ಕಾರ ನೀಡಿದ 'ನನ್ನ ಭೂಮಿ ಗ್ಯಾರಂಟಿ' ಅಭಿಯಾನ ವೇಗ ಪಡೆದುಕೊಂಡಿದ್ದು, ಕೇವಲ 7 ತಿಂಗಳಲ್ಲಿ 1,04,222 ಜಮೀನುಗಳನ್ನು ಅಳತೆಗೆ ತೆಗೆದುಕೊಳ್ಳಲಾಗಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಮಾಹಿತಿ ನೀಡಿದರು.

ವಿಕಾಸಸೌಧದಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ಎಲ್ಲಾ ಜಿಲ್ಲಾಧಿಕಾರಿಗಳ ಮಾಸಿಕ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಬಳಿಕ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 'ಈ ಹಿಂದಿನ ಸರ್ಕಾರದ ಅವಧಿಯಲ್ಲಿ ಮೂರು ವರ್ಷಕ್ಕೆ ಕೇವಲ 5,801 ಪ್ರಕರಣಗಳಲ್ಲಿ ಮಾತ್ರ ರೈತರಿಗೆ ಪೋಡಿ ದುರಸ್ತಿ ಮಾಡಿಕೊಡಲಾಗಿತ್ತು. ಆದರೆ, ಪ್ರಸ್ತುತ ಕಳೆದ ಡಿಸೆಂಬರ್‌ನಲ್ಲಿ 'ನನ್ನ ಭೂಮಿ ಗ್ಯಾರಂಟಿ' ಹೆಸರಿನಲ್ಲಿ ಪೋಡಿ ಅಭಿಯಾನ ಕೈಗೊಂಡಿದ್ದು, ಕೇವಲ 7 ತಿಂಗಳಲ್ಲಿ 1,04,222 ಜಮೀನುಗಳನ್ನು ಅಳತೆಗೆ ತೆಗೆದುಕೊಳ್ಳಲಾಗಿದೆ' ಎಂದು ತಿಳಿಸಿದರು.

ಈ ಪೈಕಿ ಶೇ.20ರಷ್ಟು ಭೂಮಿಯ ಅಳತೆ ಕೆಲಸವೂ ಮುಗಿದಿದೆ. ಉಳಿದ ಪ್ರಕರಣಗಳನ್ನು ಮುಂದಿನ 6 ತಿಂಗಳಲ್ಲಿ ಪೋಡಿ ಮಾಡಿಕೊಡಲು ಸೂಚಿಸಲಾಗಿದೆ.



ಇದಲ್ಲದೆ, ಇನ್ನೂ 50 ರಿಂದ 70 ಸಾವಿರ ಪೋಡಿ ಪ್ರಕರಣಗಳು ದಾಖಲಾಗುವ ನಿರೀಕ್ಷೆ ಇದೆ ಎಂದು ಮಾಹಿತಿ ನೀಡಿದರು. ಮೂರು–ನಾಲ್ಕು ದಶಕಗಳ ಹಿಂದೆ ರೈತರಿಗೆ ದರ್ಖಾಸ್ತಿನಲ್ಲಿ

▶ 6ನೇ ಪುಟಕ್ಕೆ

ಗ್ರಾಮ ಆಡಳಿತ ಅಧಿಕಾರಿಗಳಿಗೆ ಸವಲತ್ತು

ಸ್ವಾತಂತ್ರ್ಯ ಪೂರ್ವ ಕಾಲದಿಂದಲೂ ಗ್ರಾಮ ಆಡಳಿತ ಅಧಿಕಾರಿಗಳಿಗೆ ಸ್ವಂತ ಕಚೇರಿ ಇಲ್ಲ. ಹೀಗಾಗಿ ಅವರು ಬೀದಿಯಲ್ಲೇ ನಿಂತು ಕೆಲಸ ಮಾಡಬೇಕಾದ ಅನಿವಾರ್ಯತೆ ಇತ್ತು. ತಮಗೆ ಕಚೇರಿ ನೀಡುವಂತೆ ಅವರೂ ಸಹ ಅನೇಕ ಬಾರಿ ಹೋರಾಟ ನಡೆಸಿದ್ದಾರೆ. ಅವರ ಹೋರಾಟ ನ್ಯಾಯಯುತವಾಗಿದ್ದು, ಸರ್ಕಾರವೂ ಸ್ಪಂದಿಸಿದೆ. ಗ್ರಾಪಂ ಕಚೇರಿಗಳಲ್ಲೇ ಗ್ರಾಮ ಆಡಳಿತ ಅಧಿಕಾರಿಗಳಿಗೂ ಕಚೇರಿ ವ್ಯವಸ್ಥೆ ಮಾಡುವ ಸಂಬಂಧ ಗ್ರಾಮೀಣಾಭಿವೃದ್ಧಿ ಸಚಿವರ ಜೊತೆ ಚರ್ಚೆ ನಡೆಸಲಾಗಿದ್ದು, ಅದರಂತೆ ಈ ಹಿಂದೆ 1,200 ಅಧಿಕಾರಿಗಳಿಗೆ ಕಚೇರಿ ವ್ಯವಸ್ಥೆ ನೀಡಲಾಗಿದೆ.

ಕಳೆದ ಒಂದು ತಿಂಗಳ ಅವಧಿಯಲ್ಲಿ ಅಭಿಯಾನದ ಮಾದರಿಯಲ್ಲಿ 2,600 ಕಡೆಗಳಲ್ಲಿ ಕಚೇರಿ ವ್ಯವಸ್ಥೆ ಮಾಡಲಾಗಿದ್ದು, ಉಳಿದ 3500 ಅಧಿಕಾರಿಗಳಿಗೂ ಶೀಘ್ರದಲ್ಲೇ ಕಚೇರಿ ನೀಡಲಾಗುವುದು. ಗ್ರಾಪಂ ಆವರಣಗಳಲ್ಲಿ ಕೊಠಡಿ ನಿರ್ಮಿಸಲು ಸ್ಥಳಾವಕಾಶ ಇದ್ದರೆ, ಗುರುತಿಸುವಂತೆ ಜಿಲ್ಲಾಧಿಕಾರಿಗಳಿಗೂ ಸೂಚಿಸಲಾಗಿದೆ ಎಂದರು. ಗ್ರಾಮ ಆಡಳಿತ ಅಧಿಕಾರಿಗಳಿಗೆ ಸರ್ಕಾರದಿಂದ ಈಗಾಗಲೇ 4,000 ಲ್ಯಾಪ್‌ಟಾಪ್ ನೀಡಲಾಗಿದೆ. ಅವರಿಗೆ ಅಗತ್ಯವಾದ ಅಪ್ಲಿಕೇಶನ್ ಸೇರಿದಂತೆ ಎಲ್ಲಾ ವ್ಯವಸ್ಥೆಗಳನ್ನೂ ಮಾಡಿಕೊಟ್ಟು ಅವರೂ ಸಹ ಕಡತಗಳನ್ನು ಇ–ಆಫೀಸ್ ಮೂಲಕ ವಿಲೇ ವಾರಿ ಮಾಡುವಂತಾಗಬೇಕು. ಆಗ ಮಾತ್ರ ಆಡಳಿತ ವೇಗ ಪಡೆಯಲಿದ್ದು, ಜಿಲ್ಲಾಧಿಕಾರಿಗಳು ಈ ನಿಟ್ಟಿನಲ್ಲಿ ಕಾರ್ಯ ಪ್ರವೃತ್ತರಾಗಲೂ ಸಹ ಇಂದಿನ ಸಭೆಯಲ್ಲಿ ಸೂಚಿಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

ಮುಂದೆ ಚುನಾವಣೆಗೆ ಸ್ಪರ್ಧಿಸಲ್ಲ; ಸಕ್ರಿಯ ರಾಜಕಾರಣದಲ್ಲಿರ್ತೀನಿ

- ಆಪ್ತರ ಬಳಿ ಸಿಎಂ ಸಿದ್ದರಾಮಯ್ಯ ಸುಳಿವು
- ಈ ಹಿಂದೆಯೇ ಇದೇ ನನ್ನ ಕೊನೆ ಚುನಾವಣೆ ಎಂದಿದ್ದರು
- ರಾಹುಲ್ ಗಾಂಧಿ ವಿದೇಶದಿಂದ ವಾಪಸ್ಸಾದ ನಂತರ ದೆಹಲಿಗೆ ತೆರಳಿ ರಾಜ್ಯ ರಾಜಕೀಯ ವಿಚಾರ ಚರ್ಚೆ

ಬೆಂಗಳೂರು, ಜು.3(ಕೆಎಂಶಿ)– ಮುಖ್ಯಮಂತ್ರಿ ಸಿದ್ದರಾಮಯ್ಯ ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ವರುಣ ಕ್ಷೇತ್ರದಿಂದ ಕಣಕ್ಕಿಳಿಯದಿರಲು ನಿರ್ಧರಿಸಿದ್ದಾರೆ.

ಪ್ರಸಕ್ತ ವಿಧಾನಸಭಾ ಅವಧಿ ಪೂರ್ಣಗೊಳ್ಳುತ್ತಿದ್ದಂತೆ ಚುನಾವಣಾ ಕಣಕ್ಕಿಳಿಯದಿರಲು ತೀರ್ಮಾನಿಸಿರುವ ಸಿದ್ದರಾಮಯ್ಯ, ಆದರೆ ಸಕ್ರಿಯ ರಾಜಕಾರಣದಲ್ಲಿ ಮುಂದುವರೆಯುವುದಾಗಿ ಹೇಳಿದ್ದಾರೆ.

ಕಳೆದ ವಿಧಾನಸಭಾ ಚುನಾವಣೆ ಸಂದರ್ಭದಲ್ಲೇ ಇದು ನನ್ನ ಕೊನೆ ಚುನಾವಣೆ ಎಂದಿದ್ದರು. ಆದರೆ, ಇತ್ತೀಚಿನ ದಿನಗಳಲ್ಲಿ ಬೆಂಬಲಿಗರ ಒತ್ತಾಯಕ್ಕೆ ಮಣಿದು ತಮ್ಮ ನಿರ್ಧಾರವನ್ನು ಬದಲಿಸಿದ್ದರು.

ಬುಧವಾರ ನಂದಿಬೆಟ್ಟದಲ್ಲಿ ನಡೆದ ಸಚಿವ ಸಂಪುಟ ಸಭೆಗೂ ಮುನ್ನ ಅಧಿಕೃತ ನಿವಾಸ ಕಾವೇರಿಯಲ್ಲಿ ತಮ್ಮ ಆಪ್ತ ಸಚಿವರೊಂದಿಗೆ ರಾಜಕೀಯ ವಿದ್ಯಮಾನಗಳ ಕುರಿತು ಚರ್ಚೆ ಸಂದರ್ಭದಲ್ಲಿ ಇನ್ನು ಮುಂದೆ ಚುನಾವಣೆಗೆ ನಿಲ್ಲುವುದಿಲ್ಲ ಎಂದು ಸ್ಪಷ್ಟಪಡಿಸಿದರು.



ನಾಯಕತ್ವ ಕುರಿತಂತೆ ಸಂಪುಟ ಸಭೆಯಲ್ಲೇ ಒಂದು ಸಾಲಿನ ನಿರ್ಣಯ ಕೈಗೊಳ್ಳುವಂತೆ ಕೆಲವು ಸಚಿವರು ಮುಖ್ಯಮಂತ್ರಿ ಅವರನ್ನು ಒತ್ತಾಯಿಸಿದರು. ಸಚಿವರ ಒತ್ತಾಸೆಗೆ ಒಲವು ತೋರದ ಸಿದ್ದರಾಮಯ್ಯ, ಪ್ರಸಕ್ತ ಸನ್ನಿವೇಶದಲ್ಲಿ ಇಂತಹ ನಿರ್ಣಯದಿಂದ ಪಕ್ಷದ ವರಿಷ್ಠರಿಗೆ ತಪ್ಪು ಸಂದೇಶ ಕಳುಹಿಸಿದಂತಾಗುತ್ತದೆ.

ನಾಯಕತ್ವ ವಿಚಾರದಲ್ಲಿ ವರಿಷ್ಠರ ತೀರ್ಮಾನವೇ ಅಂತಿಮ, ಈ ವಿಷಯದಲ್ಲಿ ಸಾರ್ವಜನಿಕವಾಗಿ ಹೇಳಿಕೆ ನೀಡಿ ಗೊಂದಲ ಎಬ್ಬಿಸುವುದು ಬೇಡ. ಏನು ಹೇಳಬೇಕೋ ಅದನ್ನು ನಾನೇ ಮಾಧ್ಯಮದ ಮುಂದೆ ಹೇಳುತ್ತೇನೆ ಎಂದರು. ಈ ಬೆಳವಣಿಗೆ ನಂತರ ನಂದಿಬೆಟ್ಟದ ಕೆಳಭಾಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಐದು ವರ್ಷ ನಾನೇ ಮುಖ್ಯಮಂತ್ರಿ ಎಂಬ ಘೋಷಣೆ ಮಾಡಿದರು.

ಇದಕ್ಕೂ ಮುನ್ನ ಸಂಪುಟ ಸಭೆಯಲ್ಲೇ ರಾಹುಲ್ ಗಾಂಧಿ ವಿದೇಶ ಪ್ರವಾಸದಿಂದ ಹಿಂತಿರುಗಿದ ನಂತರ ನಾನು ಮತ್ತೆ ದೆಹಲಿಗೆ ತೆರಳಿ ಅವರನ್ನು ಭೇಟಿ ಮಾಡಿ, ರಾಜಕೀಯ ವಿಷಯಗಳ ಬಗ್ಗೆ ಚರ್ಚೆ ಮಾಡುತ್ತೇನೆ.

ವಿಧಾನಪರಿಷತ್ತಿನಲ್ಲಿ ತೆರವಾಗಿರುವ ನಾಲ್ಕು ಸ್ಥಾನಗಳ ಭರ್ತಿ, ಹಿಂದುಳಿದ ಆಯೋಗದ ಸಮೀಕ್ಷೆ ಸೇರಿದಂತೆ ಹಲವು ವಿಚಾರ ಪ್ರಸ್ತಾಪ ಮಾಡುತ್ತೇನೆ.

ರಾಹುಲ್ ಕೊಡುವ ಸಲಹೆ–ಸೂಚನೆಯಂತೆ ನಡೆದುಕೊಳ್ಳುತ್ತೇನೆ. ಅವರ ಮಾತುಗಳನ್ನು ಉಲ್ಲಂಘಿಸಿ ನಾನು ಯಾವುದೇ ತೀರ್ಮಾನ ಕೈಗೊಳ್ಳಲಾಗದು ಎಂದಿದ್ದಾರೆ.

ಎರಡನೇ ಆಷಾಢ ಶುಕ್ರವಾರ: ಮೆಟ್ಟಿಲು ಹತ್ತಿ ಬರುವ ಭಕ್ತರು ಧರ್ಮದರ್ಶನ ಸಾಲಿನಲ್ಲೇ ದರ್ಶನ ಪಡೆಯಬೇಕು

ಮುಂಜಾನೆ 5 ಗಂಟೆಯಿಂದ ಸಂಜೆ 6 ಗಂಟೆವರೆಗೆ ಮಾತ್ರ ಮೆಟ್ಟಿಲು ಹತ್ತಲು ಅವಕಾಶ



ಸಂಗ್ರಹ ಚಿತ್ರ

ಮೈಸೂರು, ಜು.3(ಎಂಟಿವೈ)– ಆಷಾಢ ಶುಕ್ರವಾರದಂದು ವಿಶೇಷ ಪೂಜಾ ಮಹೋತ್ಸವದಲ್ಲಿ ಪಾಲ್ಗೊಳ್ಳಲು ಚಾಮುಂಡಿಬೆಟ್ಟಕ್ಕೆ ಮೆಟ್ಟಿಲು ಹತ್ತಿ ಬರುವ ಭಕ್ತರಿಗೆ ಧರ್ಮ ದರ್ಶನದ ಸಾಲಿನಲ್ಲಿ ದೇವಾಲಯಕ್ಕೆ ತೆರಳಲು ಅವಕಾಶ ಮಾಡಿಕೊಡಲಾಗಿದೆ.

ಆಷಾಢ ಮೊದಲ ಶುಕ್ರವಾರದಂದು ಮೆಟ್ಟಿಲು ಹತ್ತಿ ಬಂದ ಭಕ್ತರು ದರ್ಶನ ಪಡೆಯಲು ಇದ್ದ ಗೊಂದಲ ಸಂಬಂಧ ಪೊಲೀಸ್ ಇಲಾಖೆ ಹಾಗೂ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರವು ಸಮಾಲೋಚಿಸಿ, ಮೆಟ್ಟಿಲು ಹತ್ತಿ ಬರುವ ಭಕ್ತರಿಗೆ ಮಾಡಿದ್ದ ವ್ಯವಸ್ಥೆಯಲ್ಲಿ ಕೆಲ ಮಾರ್ಪಾಡು ಮಾಡಿದೆ. ಮುಂಜಾನೆ 5 ಗಂಟೆಯಿಂದ ಪಾದದಿಂದ ಮೆಟ್ಟಿಲು ಹತ್ತಲು ಅವಕಾಶ ನೀಡಲಾಗುತ್ತಿದ್ದು, ಸಂಜೆ 6 ಗಂಟೆವರೆಗೂ ಮೆಟ್ಟಿಲು ಹತ್ತಬಹುದಾಗಿದೆ. ಸುರಕ್ಷತಾ ದೃಷ್ಟಿಯಿಂದ ಸಂಜೆ 6 ಗಂಟೆ ನಂತರ ಮೆಟ್ಟಿಲು ಹತ್ತಲು ಭಕ್ತರಿಗೆ ಅವಕಾಶ ನೀಡದಿರಲು ನಿರ್ಧರಿಸಲಾಗಿದೆ. ಅಲ್ಲದೆ, ಬೆಟ್ಟಕ್ಕೆ ಮೆಟ್ಟಿಲು ಮೂಲಕ ಬಂದ ಭಕ್ತರು ಬ್ಯಾರಿಕೇಡ್ ಮೂಲಕ

▶ 6ನೇ ಪುಟಕ್ಕೆ

ಒಳ ಮೀಸಲಾತಿ ಜಾರಿಗೆ ಆಗ್ರಹಿಸಿ ಆ.1ರಿಂದ ಬಿಜೆಪಿ ರಾಜ್ಯಾದ್ಯಂತ ಅಸಹಕಾರ ಚಳವಳಿ

ಮಾಜಿ ಉಪ ಮುಖ್ಯಮಂತ್ರಿ, ಹಾಲಿ ಸಂಸದ ಗೋವಿಂದ ಕಾರಜೋಳ ಎಚ್ಚರಿಕೆ

ಬೆಂಗಳೂರು, ಜು.3(ಕೆಎಂಶಿ)– ಒಳ ಮೀಸಲಾತಿ ಜಾರಿಗೆ ಒತ್ತಾಯಿಸಿ ಬಿಜೆಪಿ ಆಗಸ್ಟ್ 1ರಿಂದ ರಾಜ್ಯಾದ್ಯಂತ ಸರ್ಕಾರದ ವಿರುದ್ಧ ಅಸಹಕಾರ ಚಳವಳಿ ನಡೆಸಲಿದೆ ಎಂದು ಮಾಜಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ ಇಂದಿಲ್ಲಿ ಎಚ್ಚರಿಸಿದ್ದಾರೆ.

ಬಿಜೆಪಿ ಆಡಳಿತದಲ್ಲಿ ಬಸವರಾಜ ಬೊಮ್ಮಾಯಿ ನೇತೃತ್ವ ಸರ್ಕಾರ ಜೆ.ಸಿ.ಮಾಧುಸ್ವಾಮಿ ಅಧ್ಯಕ್ಷತೆಯ ಸಮಿತಿ ರಚಿಸಿ ಜನಸಂಖ್ಯೆಗೆ ಅನುಗುಣವಾಗಿ ಒಳ ಮೀಸಲಾತಿ ಹಂಚಿಕೆ ಮಾಡಿದ್ದು, ಆ ಶಿಫಾರಸನ್ನು ಕೂಡಲೇ ಅನುಷ್ಠಾನಕ್ಕೆ ತರಬೇಕು.

ಜೆ.ಸಿ.ಮಾಧುಸ್ವಾಮಿ ಅಧ್ಯಕ್ಷತೆಯ ಸಮಿತಿ ಶಿಫಾರಸನ್ನು ಸುಪ್ರೀಂಕೋರ್ಟ್‌ಗೂ ಸಲ್ಲಿಸಿದ್ದು ತಪ್ಪು, ಅಡೆತಡೆ ಗಳಿದ್ದರೆ ತಿದ್ದಲು ಅವಕಾಶವಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರ ಒಳ ಮೀಸಲಾತಿ ಜಾರಿಗೊಳಿಸದ ಹುನ್ನಾರ ನಡೆಸಿದೆ ಎಂದರು.



ಅಸ್ಪೃಶ್ಯರು ತಮ್ಮ ಬದುಕಿಗಾಗಿ, ಉಳಿವಿಗಾಗಿ ದೊಡ್ಡ ಆಂದೋಲನ ಮಾಡಲು ಸಿದ್ಧರಿದ್ದೇವೆ. ಜುಲೈ 31ರೊಳಗೆ ಜಾರಿ ಒಳ ಮೀಸಲಾತಿ ಆಗದಿದ್ದರೆ ರಾಜ್ಯದ 30 ಜಿಲ್ಲೆಗಳಲ್ಲೂ ಅಸಹಕಾರ ಚಳವಳಿ ಮಾಡುತ್ತೇವೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಬದ್ಧತೆ ಇದ್ದರೆ, ಸಾಮಾಜಿಕ ನ್ಯಾಯದ ದೃಷ್ಟಿಯಿಂದ ಒಳಮೀಸಲಾತಿ ಜಾರಿ ಮಾಡಲಿ. ಆಂಧ್ರಪ್ರದೇಶ, ತೆಲಂಗಾಣ, ಹರಿಯಾಣ ಮೊದಲಾದೆಡೆ ಈಗಾಗಲೇ ಒಳಮೀಸಲಾತಿ ಜಾರಿ ಮಾಡಿ ನ್ಯಾಯ ಒದಗಿಸಿಕೊಡಲಾಗಿದೆ. ಕರ್ನಾಟಕ ಸರ್ಕಾರ ಒಳ ಮೀಸಲಾತಿ ಆದೇಶ ಜಾರಿ ಮಾಡದೆ, ಕೇವಲ ಮತ ಬ್ಯಾಂಕ್ ರಾಜಕಾರಣ ಗಿಮಿಕ್ ಮಾಡುತ್ತಿದೆ. ಒಳ ಮೀಸಲಾತಿಗೆ ಸಂಬಂಧಿಸಿದಂತೆ ಇನ್ನೊಮ್ಮೆ ಸಮೀಕ್ಷೆ ನಡೆಸಿ 40 ದಿನಗಳಲ್ಲಿ ಜಾರಿ ಮಾಡುವುದಾಗಿ

▶ 6ನೇ ಪುಟಕ್ಕೆ

ಮುಖ್ಯಮಂತ್ರಿ, ಗೃಹ ಸಚಿವರ ಮನವೊಲಿಕೆ

ಎಎಸ್‌ಪಿ ನಾರಾಯಣ ಬರಮನಿ ಮತ್ತೆ ಕರ್ತವ್ಯಕ್ಕೆ ಹಾಜರು

ಧಾರವಾಡ, ಜು.3– ವೇದಿಕೆಯಲ್ಲಿ ಸಾರ್ವಜನಿಕವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕಪಾಳಮೋಕ್ಷ ಮಾಡಲು ಮುಂದಾಗಿದ್ದು, ಅದರಿಂದ ಆದ ಅವಮಾನದಿಂದ ಪೊಲೀಸ್ ಹುದ್ದೆಗೆ ಸ್ವಯಂ ನಿವೃತ್ತಿ ಪಡೆಯಲು ಮುಂದಾಗಿದ್ದ ಎಎಸ್‌ಪಿ ನಾರಾಯಣ ಬರಮನಿಗೆ ಸಿಎಂ ಸಿದ್ದರಾಮಯ್ಯ ಮತ್ತು ಗೃಹ ಸಚಿವ ಡಾ ಜಿ ಪರಮೇಶ್ವರ್ ಮನವೊಲಿಸಿದ್ದಾರೆ ಎಂದು ತಿಳಿದುಬಂದಿದೆ.



▶ 6ನೇ ಪುಟಕ್ಕೆ

ಲಾಟರಿ ಸಿಎಂ ಸಿದ್ದರಾಮಯ್ಯ ಕುರ್ಚಿ ಅಲುಗಾಡುತ್ತಿದೆ: ಜೆಡಿಎಸ್ ಲೇವಡಿ

ಬೆಂಗಳೂರು, ಜು.3– ಲಾಟರಿ ಸಿಎಂ ಸಿದ್ದರಾಮಯ್ಯ ಅವರ ಕುರ್ಚಿ ಅಲುಗಾಡುತ್ತಿದೆ ಎಂದು ಜೆಡಿಎಸ್ ಲೇವಡಿ ಮಾಡಿದೆ.

ಐದು ವರ್ಷ ನಾನೇ ಮುಖ್ಯಮಂತ್ರಿ ಎಂದು ಹೇಳಿಕೊಂಡು ತಿರುಗುವ ಕರ್ಮ ಸಿದ್ದರಾಮಯ್ಯನವರಿಗೆ ಬರಬಾರದಿತ್ತು. ನಾನೇ ಸಿಎಂ... ನಾನೇ ಸಿಎಂ... ಎಂದು ಮಾಧ್ಯಮಗಳ ಮುಂದೆ ಗಂಟಲು ಹರಿದುಕೊಳ್ಳುತ್ತಿರುವುದರ ಹಿಂದೆ ಸಿಎಂ ಕುರ್ಚಿ ಅಲುಗಾಡುತ್ತಿರುವುದನ್ನು ಸೂಚಿಸುತ್ತಿದೆ ಎಂದು ಜೆಡಿಎಸ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದೆ.



ನಾಯಕತ್ವ ಬದಲಾವಣೆ ಆಗಬೇಕು ಎಂದು ಡಿಸಿಎಂ ಡಿಕೆ ಶಿವಕುಮಾರ್ ಬಣದ ಇಕ್ಬಾಲ್ ಹುಸೇನ್, ಹೆಚ್.ಸಿ ಬಾಲಕೃಷ್ಣ, ರಂಗನಾಥ್, ರವಿ ಗಾಣಿಗ ಸೇರಿದಂತೆ ಹಲವು ಬಹಿರಂಗವಾಗಿ ಹೇಳಿಕೆ ಕೊಡುತ್ತಿದ್ದಾರೆ.


ಇನ್ನು ತಮ್ಮ ನಾಯಕನ ಕುರ್ಚಿಗೆ ಕುತ್ತು ಬಂದಿರುವುದು ಸ್ಪಷ್ಟವಾಗುತ್ತಲೇ ಸಿದ್ದರಾಮಯ್ಯ ಆಪ್ತರು ಸಹ ಕೂಗುಮಾರಿಗಳಂತೆ ಅವರ ಪರ ಬ್ಯಾಟ್ ಬೀಸುತ್ತಿದ್ದಾರೆ. ಲಾಟರಿ ಸಿಎಂ ಸಿದ್ದರಾಮಯ್ಯ ಅವರೇ, ನಿಮ್ಮ ಕಾಂಗ್ರೆಸ್ ಸರ್ಕಾರದ ದುರಾಡಳಿತದ ವಿರುದ್ಧ ಮತ್ತು ನಿಮ್ಮ ನಾಯಕತ್ವದ ಬಗ್ಗೆ ಸಚಿವರು ಹಾಗೂ ಕಾಂಗ್ರೆಸ್ ಶಾಸಕರಲ್ಲೇ ಅಸಮಾಧಾನದ ಬೆಂಕಿ ಎದ್ದು, ಹಾದಿ ಬೀದಿಯಲ್ಲಿ ಹೊಗೆಯಾಡುತ್ತಿದೆ. ವಿಪಕ್ಷಗಳ ವಿರುದ್ಧ ಬೆಂಕಿಯುಗುಳಿದರೆ, ನಿಮ್ಮ ಹೊಟ್ಟೆ ಕಿಚ್ಚು ಮತ್ತಷ್ಟು ಉಲ್ಬಣಿಸುತ್ತದೆ ಹೊರತು ಉಪಶಮನವಾಗುವುದಿಲ್ಲ ಎಂದು ಕಿಡಿಕಾರಿದೆ.

ತಂದೆ–ತಾಯಿಯ ಬೀದಿಗೆ ತಳ್ಳುವ ಹೀನ ಕೃತ್ಯ; 3,000ಕ್ಕೂ ಹೆಚ್ಚು ಪ್ರಕರಣ ದಾಖಲು

ಆಸ್ಪತ್ರೆ ಸೇರಿದ ಹಡೆದ ತಾಯಿಯನ್ನ ನಮ್ಮ ತಾಯಿಯೇ ಅಲ್ಲ ಅಂತಾರೆ...!

ಬೆಂಗಳೂರು, ಜು.3– ತಂತ್ರಜ್ಞಾನ, ಫ್ಯಾಶನ್, ಉದ್ಯೋಗ, ಶಿಕ್ಷಣ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಕರ್ನಾಟಕ ಹಾಗೂ ಕರ್ನಾಟಕ ಜನತೆ ಮುಂದಿದ್ದಾರೆ. ಆದರೆ, ಪವಿತ್ರ ಸಂಬಂಧಗಳು ಅರ್ಥ ಕಳೆದುಕೊಳ್ಳುತ್ತಿದೆ. ಮಕ್ಕಳಿಗೆ ವಯಸ್ಸಾದ ಪೋಷಕರು ಬೇಡವಾಗುತ್ತಿದ್ದಾರೆ. ಮನೆಯಿಂದ ಹೇಗಾದರೂ ಮಾಡಿ ಪೋಷಕರನ್ನು ಬೀದಿಗೆ ತಳ್ಳುತ್ತಿರುವ ಪ್ರಕರಣ ಹೆಚ್ಚಾಗುತ್ತಿದೆ. ಸಾಲು ಸಾಲು ಪ್ರಕರಣಗಳು ವರದಿಯಾಗುತ್ತಿದೆ. ಈ ರೀತಿ ಮಾಡಿದ 3,000 ಮಕ್ಕಳ ವಿರುದ್ಧ ಪ್ರಕರಣ ದಾಖಲಾಗಿದೆ. ಮೂಲಗಳ ಪ್ರಕಾರ ಪೊಲೀಸ್ ಮೆಟ್ಟಿಲೇರದೆ ಬೀದಿಯಲ್ಲಿ ಅಲೆದಾಡುತ್ತಿರುವ ಪೋಷಕರ ಸಂಖ್ಯೆ ಇದಕ್ಕೂ ಹೆಚ್ಚಿದೆ ಎನ್ನಲಾಗುತ್ತಿದೆ.

ಮಕ್ಕಳು ತಮ್ಮ ಆಸ್ತಿಯನ್ನು ಪಡೆದುಕೊಂಡಿದ್ದಾರೆ. ತಮ್ಮ ಬಳಿ ಏನೂ ಇಲ್ಲ. ಮನೆಯಿಂದ ಹೊರಗೆ ಹಾಕಿದ್ದಾರೆ. ಮಕ್ಕಳು ಹೊರಗೆ ಹಾಕಿದ ಕಾರಣ ಬೀದಿಯಲ್ಲಿದ್ದೇವೆ. ಆಸ್ಪತ್ರೆಗೆ ದಾಖಲಿಸಿದ ಬಳಿಕ ಮಕ್ಕಳು ತಿರುಗಿ ನೋಡಿಲ್ಲ. ಹೀಗೆ ಒಂದಲ್ಲ ಎರಡಲ್ಲ ಬರೋಬ್ಬರಿ 3000ಕ್ಕೂ ಅಧಿಕ ಪ್ರಕರಣಗಳು ರಾಜ್ಯದಾದ್ಯಂತ ದಾಖಲಾಗಿವೆ. ಪೋಷಕರೇ ತಮ್ಮ ಮಕ್ಕಳ ವಿರುದ್ಧ ನೀಡಿದ ಪ್ರಕರಣಗಳಿವು. ಇನ್ನು ಪೋಷಕರು ಕೇಸ್, ಕೋರ್ಟ್ ಅಂತಾ



ಯಾಕೆ ಬೇಕು ಎಂದು ಬೀದಿಯಲ್ಲಿ ಭಿಕ್ಷೆ ಬೇಡುತ್ತಾ, ಸಣ್ಣ–ಪುಟ್ಟ ವ್ಯಾಪಾರ ಮಾಡುತ್ತಾ ದಿನ ದೂಡುತ್ತಿರುವವರ ಸಂಖ್ಯೆಯೂ ಕಡಿಮೆ ಏನಿಲ್ಲ. ಈ ಕುರಿತು ಸಚಿವ ಶರಣ್ ಪ್ರಕಾಶ್ ಪಾಟೀಲ್ ಸ್ಫೋಟಕ ಮಾಹಿತಿ ಬಹಿರಂಗಪಡಿಸಿದ್ದಾರೆ. ರಾಜ್ಯದಾದ್ಯಂತ ಅಸಿಸ್ಟೆಂಟ್ ಕಮಿಷನರ್ ಕೋರ್ಟ್‌ನಲ್ಲಿ 3,010 ಪ್ರಕರಣಗಳು ದಾಖಲಾಗಿವೆ. ಈ ಪೈಕಿ 2000 ಪ್ರಕರಣಗಳು ಅಂತ್ಯಗೊಂಡಿವೆ. 1,000ಕ್ಕೂ ಹೆಚ್ಚು ಪ್ರಕರಣಗಳು ಹಾಗೇ ಉಳಿದುಕೊಂಡಿದೆ ಎಂದಿದ್ದಾರೆ.

ಬೆಂಗಳೂರಿನಲ್ಲಿ ಅತೀ ಹೆಚ್ಚು ಪ್ರಕರಣ: ಮಕ್ಕಳು ತಮ್ಮ ಪೋಷಕರನ್ನು ಬೀದಿಗೆ ತಳ್ಳುತ್ತಿರುವ ಪೈಕಿ ರಾಜ್ಯದಲ್ಲಿ ಬೆಂಗಳೂರು ಮೊದಲ ಸ್ಥಾನದಲ್ಲಿದೆ. ಬೆಂಗಳೂರಿನಲ್ಲಿ 827 ಪ್ರಕರಣ ದಾಖಲಾಗಿದೆ. ಈ ಮೂಲಕ ಗರಿಷ್ಠ ಎನಿಸಿಕೊಂಡಿದೆ. ಈ ಪೈಕಿ ಕೇವಲ 274 ಪ್ರಕರಣಗಳು ಮಾತ್ರ ಇತ್ಯರ್ಥವಾಗಿವೆ ಎಂದು ಶರಣ್ ಪ್ರಕಾಶ್ ಪಾಟೀಲ್ ಹೇಳಿದ್ದಾರೆ.

ನನ್ನ ತಾಯಿ ಅಲ್ಲ ಎಂದು ಫೋನ್ ಕಟ್: ಧಾರವಾಡದಲ್ಲಿ ಬಾಡಿಗೆ ಮನೆಯಲ್ಲಿರುವ ತಾಯಿಯೊಬ್ಬರು ತೀವ್ರ ಹೊಟ್ಟೆನೋವಿನಿಂದ ಬಳಲಿದ್ದಾರೆ. ಇಬ್ಬರು ಮಕ್ಕಳು ಅವರ ಪತ್ನಿಯರು, ಕುಟುಂಬ ಸಮೇತ ಬೇಸಿಗೆ ರಜೆಯಲ್ಲಿ ಧಾರವಾಡಕ್ಕೆ ಆಗಮಿಸಿದ್ದರು. ಈ ವೇಳೆ ಸೊಸೆಯಂದಿರಿಬ್ಬರು ಅತ್ತೆಯನ್ನು ಆಸ್ಪತ್ರೆಗೆ ದಾಖಲಿಸಿದ್ದಾರೆ. ಇತ್ತ ಇಬ್ಬರು ಮಕ್ಕಳ ಪೈಕಿ ಒಬ್ಬ ಬೆಂಗಳೂರಿನಲ್ಲಿ ನೆಲೆಸಿದ್ದರೆ, ಮತ್ತೊಬ್ಬ ಮುಂಬೈನಲ್ಲಿ ನೆಲೆಸಿದ್ದಾನೆ. ಇಬ್ಬರು ತವರಿಗೆ ಆಗಮಿಸಿದ ಬೆನ್ನಲ್ಲೇ ತಾಯಿ ಆಸ್ಪತ್ರೆಗೆ ದಾಖಲಾಗಿದ್ದಾರೆ. ಮರು ದಿನವೇ ಒಂದಷ್ಟು ಹಣ ಕಟ್ಟಿ ಇಬ್ಬರೂ ಜಾಗ ಖಾಲಿ ಮಾಡಿದ್ದಾರೆ. ತಾಯಿಗೆ ಸಣ್ಣ ಆಪರೇಶನ್ ಮಾಡಲಾಗಿದೆ. ಕೆಲ ದಿನಗಳ ವಿಶ್ರಾಂತಿ ಬಳಿಕ ತಾಯಿ ಚೇತರಿಸಿಕೊಂಡಿದ್ದಾರೆ. ಆಸ್ಪತ್ರೆಯಿಂದ ಬಿಡುಗಡೆ ಮಾಡಲು ಆಸ್ಪತ್ರೆ ಸಿಬ್ಬಂದಿ ಮುಂದಾಗಿದ್ದಾರೆ. ಆದರೆ, ಅವರು ಆಸ್ಪತ್ರೆ ಸೇರಿದ ಮೇಲೆ ಸಂಬಂಧಿಕರು, ಮಕ್ಕಳು ಯಾರೂ ಬಂದಿಲ್ಲ. ವಯಸ್ಸು ಹಾಗೂ ಆರೋಗ್ಯದ ದೃಷ್ಟಿಯಿಂದ ಯಾರಾದರೂ ಜೊತೆಗೆ ಬೇಕು ಎಂದು ಆಸ್ಪತ್ರೆ ಸಿಬ್ಬಂದಿ ಹೇಳಿದ್ದಾರೆ. ಹಾಗಾಗಿ ಸಿಬ್ಬಂದಿ ಮಕ್ಕಳಿಬ್ಬರಿಗೂ ಕರೆ ಮಾಡಿದರೆ ಅವರು ತಮ್ಮ 'ತಾಯಿ ಅಲ್ಲ' ಎಂದು ಕರೆ ಕಟ್ ಮಾಡಿದ್ದಾರೆ.

ಈ ಪ್ರಕರಣ ಪೊಲೀಸ್ ಠಾಣೆ ಮೆಟ್ಟಿಲೇರಿದೆ. ಪೊಲೀಸರು ದಾಖಲೆ ಪರಿಶೀಲಿಸಿ, ತಾಯಿಯಿಂದ ಆಸ್ತಿಯನ್ನು ತಮ್ಮ ಹೆಸರಿಗೆ ಬರೆಯಿಸಿಕೊಂಡಿರುವ ಮಕ್ಕಳು, ಬಳಿಕ ತಾಯಿಯನ್ನು ನಿರ್ಲಕ್ಷಿಸಿದ್ದಾರೆ. ಪೊಲೀಸರು ಗದರಿದಾಗ ತಮ್ಮ ತಾಯಿ ಎಂದು ಒಪ್ಪಿಕೊಂಡಿದ್ದಾರೆ. ಆದರೆ ತಾಯಿಯನ್ನು ಸ್ವೀಕರಿಸಲು ನಿರಾಕರಿಸಿದ್ದಾರೆ. ಇದೇ ರೀತಿ ಹಲವು ಪ್ರಕರಣಗಳು ರಾಜ್ಯದಾದ್ಯಂತ ನಡೆಯುತ್ತಿದೆ. ಇಂತಹ ಪೋಷಕರನ್ನು ಅನಾಥಾಶ್ರಮಕ್ಕೆ ಸೇರಿಸಲಾಗುತ್ತಿದೆ. ಈ ಹೀನ ಬೆಳವಣಿಗೆ ಕರ್ನಾಟಕದಲ್ಲಿ ಹೆಚ್ಚಾಗುತ್ತಿದೆ. ಸರ್ಕಾರ ಈ ನಿಟ್ಟಿನಲ್ಲಿ ಸೂಕ್ತ ಕಾನೂನು ತರಬೇಕಿದೆ.

ನಕ್ಕರೆ ಅದೇ ಸ್ವರ್ಗ

ಗುಂಡ ಹೊಸ ಡ್ರೈವರ್‌ನನ್ನು ನೇಮಿಸಿಕೊಂಡ.

ಮೊದಲನೆ ದಿನ ಡ್ರೈವರ್ ಕಾರು ಚಲಾಯಿಸುತ್ತಿದ್ದಾಗ ಹಿಂದೆ ಕೂತಿದ್ದ ಗುಂಡ ಏನೋ ಹೇಳಲೆಂದು ಡ್ರೈವರ್ ಭುಜ ತಟ್ಟಿದ. ಬೆಚ್ಚಿ ಬಿದ್ದ ಡ್ರೈವರ್ ನಿಯಂತ್ರಣ ತಪ್ಪಿ ಯದ್ವಾತದ್ವಾ ಕಾರು ಓಡಿಸಿ ಬೇಲಿಗೆ ಗುದ್ದಿ ನಿಲ್ಲಿಸಿದ.

ಗುಂಡ : ಯಾಕಯ್ಯ ಏನಾಯಿತು. ಅದ್ಯಾಕೆ ನಾನು ಮುಟ್ಟಿದಾಗ ಬೆಚ್ಚಿ ಬಿದ್ದೆ?

ಡ್ರೈವರ್ : ಇನ್ನುಂದೆ ಯಾವತ್ತೂ ಹಾಗೆ ಮುಟ್ಟಬೇಡಿ ಸರ್... ಯಾಕಂದ್ರೆ ನಾನು ನಿನ್ನೆಯವರೆಗೂ ಶವ ಸಾಗಿಸುವ ವಾಹನ ಓಡಿಸ್ತಾ ಇದ್ದೆ!

ಮೈಸೂರು ಮಿತ್ರ

ಶುಕ್ರವಾರ, 4 ಜುಲೈ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ..........

ಪ್ರತಿ ವಸ್ತುವಿಗೂ ಬೆಲೆ ಕಟ್ಟುವಷ್ಟು ಸಿರಿವಂತನಾಗು!
ಆದರೆ ಪ್ರತಿಯೊಬ್ಬರ ಭಾವನೆಗಳಿಗೆ ಬೆಲೆ ಕೊಡದಷ್ಟು ಬಡವನಾಗಬೇಡ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಜಾಣನಿಗೆ ಮಾತಿನ ಪೆಟ್ಟು, ದಡ್ಡನಿಗೆ ದೊಣ್ಣೆ ಪೆಟ್ಟು.

ನಿಮ್ಮ ಪತ್ರಗಳು

ಬಿಡಾಡಿ ಕುದುರೆಗಳಿಂದ ರಕ್ಷಣೆ ಕೊಡಿ



ಮಾನ್ಯರೆ,

ಮೈಸೂರಿನ ವಿಜಯನಗರ ಒಂದನೇ ಹಂತದಿಂದ ಕಾಳಿದಾಸ ರಸ್ತೆಗೆ ಸೇರುವ ಕನ್ನಡ ಸಾಹಿತ್ಯ ಪರಿಷತ್ ರಸ್ತೆಯಲ್ಲಿ ಏಕಾಏಕಿ ದಿಢೀರನೆ ಮೂರ‍್ನಾಲ್ಕು ಕುದುರೆಗಳು ಪ್ರತ್ಯಕ್ಷ ಗೊಂಡಿದ್ದು, ವಾಹನ ಸವಾರರಿಗೆ ವಿಪರೀತ ತಲೆನೋವು ತಂದೊಡ್ಡಿವೆ. ಈ ಕುದುರೆಗಳು ಮಾಲೀಕ ನಿಲ್ಲದೇ ಸಾಕಷ್ಟು ಬಾರಿ ಓಡಾಡುತ್ತಿದ್ದು, ಕೆಲವೊಮ್ಮ ಹಸು–ದನಗಳಂತೆ ನಿಂತ ಜಾಗದಲ್ಲೇ ನಿಂತು, ವಾಹನಗಳು ಎಷ್ಟೇ ಬಾರಿ ಹಾರ್ನ್ ಮಾಡಿದರೂ ದಾರಿ ಬಿಡದೇ ಮೊಂಡು ಸ್ವಭಾವದಲ್ಲಿ ವರ್ತಿಸುತ್ತಿವೆ. ಇಲ್ಲಿ ತರಕಾರಿ ವ್ಯಾಪಾರಸ್ಥರು ಸಹ ಇದ್ದು ಅವರ ದೈನಂದಿನ ವ್ಯಾಪಾರದ ತರಕಾರಿಗಳನ್ನು ಈ ಕುದುರೆಗಳು ತಿಂದು ಹಾಳು ಮಾಡುತ್ತಿವೆ. ನಗರ ಪಾಲಿಕೆಯ ಅಧಿಕಾರಿಗಳು ಕಿವಿಗೊಡದೇ ಸುಮ್ಮನೆ ಕಣ್ಮುಚ್ಚಿ ಕುಳಿತಿರುವುದು ಶೋಚನೀಯ ಸಂಗತಿಯಾಗಿದೆ.

–ಯಶಸ್. ಆರ್, ಲೇಖಕ ಹಾಗೂ ಸಾಮಾಜಿಕ ಕಾರ್ಯಕರ್ತ, ಮೈಸೂರು.

ಭೀಮನಕೊಲ್ಲಿ ರಸ್ತೆ ದುರಸ್ತಿ ಯಾವಾಗ?

ಮಾನ್ಯರೆ,

ಮೈಸೂರು ಜಿಲ್ಲೆ ಹೆಗ್ಗಡದೇವನಕೋಟೆ ತಾಲೂಕಿನಲ್ಲಿ ಇರುವ ದೇವಸ್ಥಾನಗಳಲ್ಲಿ ಒಂದಾದ ಭೀಮನಕೊಲ್ಲಿ ಮಹದೇಶ್ವರ ಸ್ವಾಮಿ ದೇವಾಲಯವು ಅತೀ ಹೆಚ್ಚು ಭಕ್ತಾದಿಗಳನ್ನು ಆಕರ್ಷಿಸಿ ಪ್ರಸಿದ್ಧಿಗಳಿಸಿರುವುದು ಸರಿಯಷ್ಟೆ. ಈ ದೇವಸ್ಥಾನಕ್ಕೆ ಬಂದು ಹೋಗುವ ಭಕ್ತಾದಿಗಳು ಮತ್ತು ಸುತ್ತಮುತ್ತಲಿನ ಗ್ರಾಮಗಳ ಸಾವಿರಾರು ಜನರು ಪ್ರತಿನಿತ್ಯ ಕಬಿನಿ ಜಲಾಶಯದಿಂದ ಕೆಂಚನಹಳ್ಳಿ ಮುಖಾಂತರ ಎನ್. ಬೇಗೂರು ಮತ್ತು ಭೀಮನಕೊಲ್ಲಿ ದೇವಾಲಯಕ್ಕೆ ಹೋಗಿ ಬರುವವರು ಈ ಹದಗೆಟ್ಟ ರಸ್ತೆಯಿಂದ ಹೈರಾಣಾಗಿ ಬವಣೆ ಪಡುತ್ತಿರುವುದು ಪ್ರತಿಯೊಬ್ಬ ಸ್ಥಳೀಯರಿಗೂ ಗೊತ್ತಿರುವ ಸಂಗತಿ. ಸ್ಥಳೀಯ ಜನರು ಹಲವಾರು ಬಾರಿ ಹೆಗ್ಗಡದೇವನಕೋಟೆ ತಾಲೂಕಿನ ಶಾಸಕರಿಗೆ ಮನವಿ ಸಲ್ಲಿಸಿದರು ಏನು ಪ್ರಯೋಜನವಾಗಿಲ್ಲ. ಆಂಬುಲೆನ್ಸ್‌ನಲ್ಲಿ ಗರ್ಭಿಣಿಯರನ್ನು ಮತ್ತು ತುರ್ತು ಚಿಕಿತ್ಸೆ ಬೇಕಾಗಿರುವ ರೋಗಿಗಳನ್ನು ತೀರ ಹದಗೆಟ್ಟಿರುವ ಈ ರಸ್ತೆಯಲ್ಲಿ ಸಾಗಿಸಲು ಆಂಬುಲೆನ್ಸ್ ಸಿಬ್ಬಂದಿ ಪಟ್ಟಿರುವ ಪಾಡು ಹೇಳತೀರದು. ತಾಲೂಕಿಗೆ 200 ಕೋಟಿ ಅನುದಾನ ಬಂದಿದೆ ಎಂದು ಹೇಳಿರುವ ಹೆಗ್ಗಡದೇವನಕೋಟೆ ತಾಲೂಕಿನ ಶಾಸಕರು ಆ ಅನುದಾನದಲ್ಲಿ ಈ ರಸ್ತೆಯನ್ನು ಆದಷ್ಟು ಬೇಗ ದುರಸ್ತಿಗೊಳಿಸುವುದು ಸೂಕ್ತ.

–ಬೆಸಗರಹಳ್ಳಿ ರವಿ ಪ್ರಸಾದ್, ಮೈಸೂರು.

ಮರಗಳ ಬೇರು ಕಡಿದು ಗ್ಯಾಸ್ ಪೈಪ್‌ಲೈನ್ ಕಾಮಗಾರಿ


ಮಾನ್ಯರೇ,



ಮೈಸೂರಿನಲ್ಲಿ ಗ್ಯಾಸ್ ಪೈಪ್‌ಲೈನ್ ಕಾಮಗಾರಿ ನಡೆಯುತ್ತಿರುವುದು ಸರಿ. ಆದರೆ ಎಷ್ಟರಮಟ್ಟಿಗೆ ಸುರಕ್ಷಿತವಾಗಿ ಮಾಡುತ್ತಿದ್ದಾರೆ ಗೊತ್ತಿಲ್ಲ, ಇದರ ಮಧ್ಯೆ ರಸ್ತೆ ಉದ್ದಕ್ಕೂ ಅಗೆಯುವಾಗ ಮರದ ಬೇರುಗಳನ್ನು ಕಡಿದು ಅಭಿವೃದ್ಧಿ ಮಾಡುತ್ತಿದ್ದು, ಮಳೆ–ಗಾಳಿ ಬಂದಾಗ ಮರಗಳು ಬಿದ್ದರೆ ಇಲ್ಲಸಲ್ಲದ ಕಾರಣಗಳನ್ನು ಹೇಳಿ ಪರಿಸರವಾದಿಗಳನ್ನು ದೂರಿ ನಂತರ ಮರಗಳ ಸಾಮೂಹಿಕ ಹನನ ಮಾಡುತ್ತಾರೆ. ಮಳೆ ಬಂದಾಗ ಈ ಮರಗಳು ಯಾವ ಕಾರಣಕ್ಕೆ ಧರೆಗೆ ಉರುಳಿತು ಎಂದು ಅರಣ್ಯ ಇಲಾಖೆ ಆಗಲಿ, ಪಾಲಿಕೆ ಆಗಲಿ ಸಾರ್ವಜನಿಕರಿಗೆ ಹೇಳಲ್ಲ. ಹಾಗಾಗಿ ನಗರದಲ್ಲಿ ಅಭಿವೃದ್ಧಿ ಕಾಮಗಾರಿ ಕೈಗೊಳ್ಳುವಾಗ ಮರದ ಬೇರುಗಳನ್ನು ಕಡಿಯದೇ ಪರ್ಯಾಯ ವ್ಯವಸ್ಥೆಯನ್ನು ಮಾಡಿ ಪರಿಸರ ಉಳಿಸಿ. ಮುಂದೆ ಆಗುವ ದೊಡ್ಡ ಅನಾಹುತಗಳನ್ನು ತಪ್ಪಿಸಿ ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಮಾಡುತ್ತೇನೆ.

– ಭಾನುಮೋಹನ್, ಪರಿಸರವಾದಿ, ಮೈಸೂರು.

ಹೂಟಗಳ್ಳಿ ನಗರಸಭಾ ಕಚೇರಿಯ ಬ್ಯಾಂಕಿನ ವೇಳೆ 4.30ಕ್ಕೆ ವಿಸ್ತರಿಸಿ, ಕನ್ನಡ ಅಕ್ಷರಗಳನ್ನು ಸರಿಪಡಿಸಿ



ಮಾನ್ಯರೆ,

ಮೈಸೂರು ತಾಲೂಕು ಹೂಟಗಳ್ಳಿಯ ನಗರ ಸಭಾ ಕಚೇರಿಯ ಬ್ಯಾಂಕಿನ ಕೌಂಟರ್‌ನ ಕಿಟಕಿಗೆ ಕನ್ನಡದಲ್ಲಿ ಬರೆದು ಅಂಟಿಸಿರುವ ಚೀಟಿ ನೋಡಿದಾಗ ಇಲ್ಲಿಯ ಅಧಿಕಾರಿಗಳು ಕನ್ನಡದ ಬಗ್ಗೆ ಎಷ್ಟು ನಿರ್ಲಕ್ಷ್ಯವಹಿಸಿದ್ದಾರೆ ಎಂದು ಗೊತ್ತಾಗುತ್ತದೆ. ಸದರಿ ಕಚೇರಿಯವರು ಕನ್ನಡದಲ್ಲಿ ಕಂದಾಯ ಕಟುವ್ವ ಸ್ಥಳ ಎಂದು ಬರೆದಿದ್ದಾರೆ. ಈ ರೀತಿ ಕನ್ನಡ ಅಕ್ಷರಗಳನ್ನು ತಪ್ಪಾಗಿ ಬರೆದಿರುವುದನ್ನು ಸರಿಪಡಿಸುವುದು ಅಧಿಕಾರಿಗಳ ಕರ್ತವ್ಯ ಅಲ್ಲವೇ ಅಥವಾ ನಮಗ್ಯಾಕೆ ಎಂಬ ತಾತ್ಸಾರವೇ? ಈ ರೀತಿ ಬರೆಯುವ ಬದಲು ಕಂದಾಯ ಪಾವತಿಸುವ ಸ್ಥಳ ಎಂದು ಬರೆಯುವುದು ಸೂಕ್ತ.

ಮೈಸೂರಿನಲ್ಲಿ ಕಂದಾಯ ಪಾವತಿಸಿಕೊಳ್ಳುವ ಪ್ರತಿಯೊಂದು ಕಚೇರಿಗಳಲ್ಲಿ ಬ್ಯಾಂಕಿನ ವೇಳೆ ಬೆಳಿಗ್ಗೆ 10.30 ರಿಂದ 1.30 ರವರೆಗೆ ಮಧ್ಯಾಹ್ನ 2.30 ರಿಂದ 4.30 ರವರೆಗೆ ಕಾರ್ಯ ನಿರ್ವಹಿಸುತ್ತವೆ. ಆದರೆ, ಹೂಟಗಳ್ಳಿ ನಗರಸಭಾ ಕಚೇರಿಯಲ್ಲಿ ಮಾತ್ರ ಕಾರ್ಯ ನಿರ್ವಹಿಸುವ ಬ್ಯಾಂಕಿನ ವೇಳೆ ಮಧ್ಯಾಹ್ನ 3.30ಕ್ಕೆ ಅಂತ್ಯವಾಗುತ್ತದೆ. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಅವಾಂತರಗಳು ನಡೆದ ಮೇಲೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದವರೇ ನಿರ್ಮಿಸಿ ಅಭಿವೃದ್ಧಿಪಡಿಸಿದ ಬಡಾವಣೆಗಳು ಮತ್ತು ಕೆಲವು ಖಾಸಗಿ ಬಡಾವಣೆಗಳ ನಿವೇಶನಗಳ ಮಾಲೀಕರು ಕಂದಾಯ ಪಾವತಿಸಲು ದೂರದ ಸ್ಥಳಗಳಿಂದ ಮತ್ತು ಬೇರೆ ಬೇರೆ ಊರುಗಳಿಂದ ಬರಬೇಕಾದ ಪರಿಸ್ಥಿತಿ ಇರುತ್ತದೆ. ನಿವೇಶನ ಮಾಲೀಕರು ಕಚೇರಿಯ ಹತ್ತಿರದಲ್ಲಿಯೇ ಇರುವುದಿಲ್ಲ. ಎಲ್ಲರೂ ಆದಷ್ಟು ದೂರದಲ್ಲಿಯೇ ಇರುತ್ತಾರೆ. ಈ ಕಚೇರಿಗೆ ಬರುವಷ್ಟರಲ್ಲಿ ಮಧ್ಯಾಹ್ನ ಬ್ಯಾಂಕಿನ ವೇಳೆ ಮುಗಿದಿರುತ್ತದೆ. ಆದ್ದರಿಂದ ಬ್ಯಾಂಕಿನ ವೇಳೆಯ ಅವಧಿ 4.30 ರವರೆಗೆ ವಿಸ್ತರಿಸಲಿ ಮತ್ತು ಕನ್ನಡ ಅಕ್ಷರಗಳನ್ನು ಸರಿಪಡಿಸಲಿ.

–ಎಂ.ಎನ್.ಧರಣಿ ವೆಂಕಟೇಶ್, ಸ್ಥಿರಾಸ್ತಿಗಳ ಜಿಲ್ಲಾ ಪತ್ರ ಬರಹಗಾರರು, ಮೈಸೂರು

ಭರವಸೆಯೇ ಬದುಕಿನ ಮಹಾಬೆಳಕು



ಪರಮೇಶ ಕೆ.ಉತ್ತನಹಳ್ಳಿ
ಕನ್ನಡ ಸಹಾಯಕ ಪ್ರಾಧ್ಯಾಪಕ,
ಮೊ: 77958 62281


ಬದುಕು ಕೇವಲ ಮೂರಕ್ಷರದ ಪದವಲ್ಲ ನೂರು ವರುಷ ಜೋಪಾನವಾಗಿ ಸಾಕಬೇಕಾದ ಬೆಳಕು, ಬೆಳಕು ಎಂದಾಕ್ಷಣ ವಿದ್ಯುತ್ ದೀಪಗಳ ಬೆಳಗಿಸಿದ ತಕ್ಷಣ ಗೋಚರವಾಗುವ ರೂಪವಲ್ಲ, ಎಣ್ಣೆ ಸುರಿದು ಬತ್ತಿ ಇರಿಸಿ ಕಡ್ಡಿಗೀರಿ ಬೆಳಗಿಸುವ ದೀಪ. ಈ ಬದುಕಿನ ಬೆಳಕನ್ನು ಕಾಪಿಟ್ಟು ಕಾಯುವುದು ಅಷ್ಟು ಸರಳ ಸಂಗತಿ ಅಲ್ಲ. ಇದು ಹಲವಾರು ಸವಾಲುಗಳು, ತಿರುವುಗಳು, ಹಳ್ಳಕೊಳ್ಳಗಳ, ಏರು ಇಳಿಜಾರುಗಳ ಸಾಲು. ಅಷ್ಟೇ ಅಲ್ಲದೇ ಕನಸುಗಳು, ಹತಾಶೆಗಳು ಹಾಗೂ ನಂಬಿಕೆಗಳ ಸಂಗಮ. ಈ ಎಲ್ಲಾ ಘಟಕಗಳ ಮಧ್ಯೆ, ನಮಗೆ ಜೀವನವನ್ನು ಅರ್ಥಪೂರ್ಣಗೊಳಿಸುವ ಅತೀ ಪ್ರಮುಖ ಅಂಶವೊಂದು ಇದ್ದೇ ಇದೆ, ಅದನ್ನು ನಾವು ಭರವಸೆ ಎಂದು ಕರೆದುಬಿಡೋಣ. ಬದುಕು ಅಲೆಯಾಗಿ ಬೀಸುವ ತಂಗಾಳಿಯ ಮುಂದೆ ಹಚ್ಚಿಟ್ಟಿರುವ ಹಣತೆ. ಜೀವ ಇರುವವರೆಗೆ, ಹಣತೆ ಉರಿಯುವವರೆಗೆ ಭರವಸೆಯ ಕವಿತೆ ಒರತೆಯಂತೆ ಚಿಮ್ಮುತ್ತಿರಬೇಕು.

ಓ ಮುದ್ದು ಕಂದ
ಇಂದು ನೀನು ನಡೆವ ದಾರಿ
ನಾಳೆಗೆ ಹೆದ್ದಾರಿಯಾಗಬಹುದು
ನಡೆದು ಬಿಡು ಈ ಕಿರುಹಾದಿಯಲ್ಲಿ
ಬೆಳಗಲಿ ನಾಳೆಯ ಬದುಕು
ಭರವಸೆಯಲ್ಲಿ ಹೊಂಗನಸು ಚೆಲ್ಲಿ
ನಗುತಿರಲಿ ತಿಳಿಬೆಳಕು,
ನಡೆದು ಸಾಗುವಾಗ ಕೊಂಚ ಸಹನೆಬೇಕು,
ಜ್ಞಾನದ ದೀವಟಿಗೆ ಜೊತೆಗಿರಬೇಕು.

ಎಂಬ ಹಿರಿಯ ಭಾವನೆಯಲ್ಲಿ ಭರವಸೆಯನ್ನು ಜೀವಂತಿಕೆಯಾಗಿರಿಸಿಕೊಂಡು ನೋವಿರಲಿ ನಲಿವಿರಲಿ ಸಾಗುತ್ತಲೇ ಇರಬೇಕು. ಅದಕ್ಕೆ ಹೇಳುವುದು ನಾಳೆಯ ನಂಬಿಕೆಯೊಂದಿಗೆ ಬದುಕುವುದೇ ಭರವಸೆ' ಎಂಬ ಮಾತು ಅರಿಯದವರು ಅರಿತಿರುವವರಿಗೂ ಎಲ್ಲರಿಗೂ ಸಮಾನವಾಗಿ ಅರ್ಥವಾಗುವಂತಹ ಸತ್ಯ. ಭರವಸೆ ಇಲ್ಲದ ಬದುಕು ಮೌನದಲ್ಲಿ ಮಗುಚಿಕೊಳ್ಳುವ ಬೀಜದಂತೆ. ಬೆಳೆಯಲಾರದ, ಅರಳಲಾರದ, ಬದುಕಲಾರದ ಸ್ಥಿತಿ.

ಭರವಸೆ ಎಂದರೇನು?

ಭರವಸೆ ಎಂದರೆ ನೋವುಗಳ ನಡುವೆ ನಲಿವಿನ ತರು– ಲತೆಗಳ ಶಕ್ತಿ. ಅದು ಕತ್ತಲೆಯ ನಡುವೆಯೂ ಬೆಳಕಿನ ಶೋಧನೆ. ಜೀವನದಲ್ಲಿ ಎಷ್ಟೇ ಕಷ್ಟಗಳು, ವಿಫಲತೆಗಳು ಎದುರಾದರೂ, ಮುಂದೆ ಒಳ್ಳೆಯದಾಗಲಿದೆಯೆಂಬ ನಂಬಿಕೆಯಿಂದ ಬದುಕುವುದು. ಇದು ಮಾನವ ಮನಸ್ಸಿನ ಆಂತರಿಕ ಚಿಲುಮೆ. ಯಾವುದೇ ಚಿಕ್ಕ ಪರಿಹಾರವಿಲ್ಲದಂತಹ ಸಮಸ್ಯೆಯಲ್ಲಿಯೂ, ಭರವಸೆ ರವಷ್ಟು ಒಂದು ಗುಟುಕು ಬೆಳಕಿನ ಕಿರಣವಾಗಿ ಹೊಳೆಯುತ್ತದೆ. ಭರವಸೆಯ ಹೊಸ್ತಿಲಲ್ಲಿ ಬದುಕು ಸದಾ ಜೀವಂತವಾಗಿರಬೇಕು. ಒಮ್ಮೆ ಭರವಸೆ ಕಳೆದುಕೊಂಡರೆ ಅದರ ವಿಶ್ವಾಸದ ಸಂಪಾದನೆ ಕಷ್ಟವಾಗುತ್ತದೆ. ಈ ಜೀವನದ ರಥಯಾತ್ರೆಯಲ್ಲಿ ಆಗಾಗ ಭರವಸೆಗೆ ಭಂಗ ತರುವ ಸಂಗತಿಗಳು ಎದುರಾಗಬಹುದು. ಏಕೆಂದರೆ ಬದುಕು ಎಂದಿಗೂ ಅನಿರೀಕ್ಷಿತಗಳ ಮಹಾಕಾವ್ಯ. ಆಗ ಈ ಮನಕ್ಕೆ ಅನಿಸುವುದು ಕನಸುಗಳ ಹೊತ್ತು, ನಾಳೆಯ ಭರವಸೆಗಳ ಹೃದಯದಲ್ಲಿ ತುಂಬಿಕೊಂಡು, ಬದುಕಿನ ಊರಿನಿಂದ ಸಾವಿನ ಮನೆಗೆ ನಡೆಯುತ್ತಿದ್ದ ಓ ಮನವೇ, ಎದುರಾದ ಸನ್ನಿವೇಶಕೆ–ದುಸ್ಥಿತಿಯ ಪರಿಸ್ಥಿತಿಗೆ ಕಲ್ಲುಗಳು ಮರುಗುತ್ತಿವೆ, ಕಣ್ಣ ಕಡಲು ತುಂಬಿದೆ, ಹೃದಯ ನೊಂದು ಮಿಡಿದಿದೆ, ಭಾವನೆಗಳ ಬಾಂದಳದಲಿ ಮನವು ವಿಲವಿಲನೆ ಒದ್ದಾಡಿದೆ, ಆಶಾಗೋಪುರವೇ ಕಳಚಿದೆ, ಬದುಕಿನ ಸಮುದ್ರವೇ ಬತ್ತಿ ಹೋಗಿದೆ, ಭರವಸೆಯ ಬೆಳಕಿನ ಮೇಲೆ ಕತ್ತಲೆಯ ಹಿಮಪಾತ ಕವಿದಿದೆ, ಈಗ ಕನಸು ಚೂರಾಗಿವೆ, ಭವಿಷ್ಯದ ದಿನಗಳು ವಿರೂಪವಾಗಿ



ಗೋಚರಿಸಿವೆ, ಕಾಲವೇ ನೀನು ಬಲು ಕ್ರೂರಿ–ಜೀವನದ ಕರುಣೆ ಇಲ್ಲದೆ ಕರೆದೆಯ ಯಮಪುರಿಗೆ ಜೀವವ ಪ್ರಾಣ ಹೀರಿ, ಪ್ರಾಣಪಕ್ಷಿ ಹಾರುವುದು ಜೀವಲೋಕದಿಂದ, ಸಹಬಾಳ್ವೆಯ ಸವಿಭಾವ ಕೊರಗಿ ಕೊರಗಿ ನರಳುವುದು ವಿಲಕ್ಷಣ ಭಾವದಿಂದ, ಬಾರದ ಲೋಕಕೆ ಬರಿಗೈಲಿ ನಡೆದು, ಬಿಕ್ಕಿ ಬಿಕ್ಕಿ ಅಳುವುದು ಜೀವ ಭರವಸೆಯ ನೆನೆದು, ಎಂತಹ ಸಂದಿಗ್ಧ ಸ್ಥಿತಿ. ಇಂತಹ ಸಂದರ್ಭಗಳಲ್ಲಿ ಎದೆಗುಂದಬಾರದು, ಧೈರ್ಯಗೆಡಬಾರದು. ಬದುಕಿನ ನೂರು ಪುಟಗಳು ಕೇವಲ ಕಣ್ಣೀರಿನ ಸಾಲುಗಳೇ ಆಗಿರುವುದಿಲ್ಲ. ಆಗ ಅಂದುಕೊಳ್ಳಬೇಕಾದ ಭರವಸೆಯ ಮಾತು

ನೆನ್ನೆಯ ಇಷ್ಟಗಳೇ ಇಂದು ಇಲ್ಲದಿರುವಾಗ
ಇವತ್ತಿನ ಕಷ್ಟಗಳು ನಾಳೆ ಇರುವುದಿಲ್ಲ.
ನಗುವಾಗಿರಲಿ ಎಂದೂ ಮನ
ಗೆಲುವಾಗಿರಲಿ ಎಂದೆಂದು ಜೀವನ,
ಸೋತಾಗ ತಲೆ ತಗ್ಗಿಸುವುದೇಕೆ
ಗುರಿಯ ಮೇಲಿರಲಿ ಕಣ್ಣು,
ಗೆದ್ದಾಗ ಬೀಗುವುದೇಕೆ
ಬದುಕು ಭರವಸೆಯಲ್ಲಿ
ಅನುಗಾಲ ಮಾಗುವ ಹಣ್ಣು...

ಭರವಸೆಯ ಪ್ರೇರಣಾದಾಯಕ ದೃಷ್ಟಾಂತ: ಒಮ್ಮೆ ತರಗತಿಯಲ್ಲಿ ಗುರುಗಳು ವಿದ್ಯಾರ್ಥಿಗಳಿಗೆ ಬದುಕಲು ಬೇಕಾದ ಮೂಲಭೂತ ಅಗತ್ಯವೇನು ಎಂದು ಪ್ರಶ್ನಿಸಿದರು. ಕೆಲವು ವಿದ್ಯಾರ್ಥಿಗಳು ನೀರು, ಆಹಾರ, ಗಾಳಿ ಎಂದು ಉತ್ತರಿಸಿದರು. ಇನ್ನೊಂದಷ್ಟು ವಿದ್ಯಾರ್ಥಿಗಳು ಹಣ, ಆಸ್ತಿ ಎಂದು ಹೇಳಿದರು. ಆದರೆ ಅದೇ ತರಗತಿಯ ಮೂಲೆಯಲ್ಲಿ ಮೌನವಾಗಿ ಕೂತಿದ್ದ ವಿದ್ಯಾರ್ಥಿಯೊಬ್ಬ ನಾಳೆಯ ಬಗ್ಗೆ ಭರವಸೆ ನಮಗೆ ಮೂಲಭೂತವಾಗಬೇಕು ಗುರುಗಳೇ ಎಂದು ಉತ್ತರಿಸಿ ಬಿಟ್ಟ, ಗುರುಗಳು ಅವನನ್ನು ನೋಡಿ , "ಶಹಬ್ಬಾಸ್!" ಎಂದು ಬೆನ್ನು ತಟ್ಟಿದರು. ಗುರುಗಳ ಮಾತಿನಲ್ಲಿ ಒಂದು ತತ್ವವಿದೆ. ಅದೇನೆಂದರೆ ಭರವಸೆ ಇಲ್ಲದ ಜೀವನ, ಉಸಿರಿದ್ದರೂ ಉಸಿರಾಟವಿಲ್ಲದಂತೆ.

ಇವತ್ತಿನ ಪೋಷಕರು ಮಕ್ಕಳಿಗಾಗಿ ಆಸ್ತಿ ಮಾಡುತ್ತಾರೆ. ಆದರೆ ಅದು ಕ್ಷಣಿಕ ಮಕ್ಕಳನ್ನೇ ಆಸ್ತಿಯಾಗಿಸುವ ಹೊಣೆಗಾರಿಕೆಯನ್ನು ತಳ್ಳಿಹಾಕುತ್ತಾರೆ. ಏಕೆಂದರೆ ನಮ್ಮ ಕಾಲಕ್ಕೆ ನಾವು ಕಷ್ಟ ಪಟ್ಟಿದ್ದೇವೆ. ನಮ್ಮ ಮಕ್ಕಳಿಗೆ ಕಷ್ಟಗಳ ಬಾಧೆ ತಟ್ಟಬಾರದೆಂದು ಅನಗತ್ಯವಾದ ಬೇಡಿಕೆಗಳನ್ನು ಸಹ ಪೋಷಕರು ಅಗತ್ಯವಾಗಿ ಒದಗಿಸುವುದರಿಂದ ಮಕ್ಕಳು ದಾರಿ ತಪ್ಪುತ್ತಾರೆ. ಭರವಸೆಯ ಬೆಳಕನ್ನು ಚಿತೆಗೇರಿಸಿ ಸಣ್ಣ–ಸಣ್ಣ ಕಾರಣಗಳಿಗಾಗಿ ನೋವು ಯಾತನೆಗಳಿಗಾಗಿ ಅತ್ಯಮೂಲ್ಯವಾದ ಬದುಕನ್ನೇ ಕೊಂದುಕೊಳ್ಳುವ ಹಾದಿ ಹಿಡಿಯುವುದು, ನಾಳೆ ನಾನು ಬದುಕಲು ಸಾಧ್ಯವಿಲ್ಲವೇನೋ ಎಂಬಂತಹ ಚೈತನ್ಯ ಹೀನವಾಗಿ ಆತ್ಮಹತ್ಯೆಗೆ ಒಳಗಾಗುವುದನ್ನು ಕಂಡರೆ ಮನಸ್ಸಿಗೆ ನೋವಾಗುತ್ತದೆ.

ಭರವಸೆ ಯಶಸ್ಸಿಗೆ ಮೂಲ ಮಂತ್ರ: ಸೋಲೇ ಗೆಲುವಿನ ಸೋಪಾನ. ಸೋಲದೆ ಗೆದ್ದರೆ ಮಂದಹಾಸ, ಸೋತು ಗೆದ್ದರೆ ಇತಿಹಾಸ ಆದರೆ ಸೋಲುಗಳು ಬದುಕಿನ ನಿಜವಾದ ಪಾಠಗಳನ್ನು ಬೋಧಿಸುವ ಗುರುಗಳು, ಗೆದ್ದಾಗ ಮತಿಗೆಡದೆ, ಸೋತಾಗ ಧೃತಿಗೆಡದೆ ಪ್ರಯತ್ನದಲ್ಲಿ ರತ್ನವನ್ನು ಹುಡುಕುವ ಭರವಸೆಯಲ್ಲಿ ಬಾಳಿನ ಬಗ್ಗೆ ಆಸೆಯನ್ನು ಹೊಂದಿ ಮುಂದೆ ಸಾಗಬೇಕು. ಪ್ರತಿಯೊಬ್ಬರೂ ಜೀವನದಲ್ಲಿ ಏನಾದರೂ ಸಾಧಿಸಬೇಕು ಎಂಬ ಆಸೆ ಇಟ್ಟುಕೊಳ್ಳುತ್ತಾರೆ. ಆದರೆ ಎಲ್ಲರೂ ಸಾಧಕರಾಗುವುದಿಲ್ಲ. ಒಂದೆರಡು ಬಾರಿ ಸೋತ ಮಾತ್ರಕ್ಕೆ ತಮ್ಮೊಳಗೆ ಸ್ನೇಹಜೀವಿಯಂತೆ ಕೆಲಸ ಮಾಡುತ್ತಿದ್ದ ಭರವಸೆಯನ್ನೇ ಕಳೆದುಕೊಂಡು ಬಿಟ್ಟಿರುತ್ತಾರೆ. ಒಂದು ಮಾತಂತು ಸತ್ಯ, ನಮ್ಮ ಶಕ್ತಿಗಳ ಬಗ್ಗೆ ಭರವಸೆ ಇಲ್ಲದಿದ್ದರೆ, ನಾವು ಎಷ್ಟೇ ಬುದ್ಧಿವಂತರು, ಸಮರ್ಥರು ಎನಿಸಿದರೂ ಯಶಸ್ಸು ದೂರವಾಗುತ್ತದೆ. ಎಷ್ಟು ಬಾರಿ ಸೋತರು ಭರವಸೆಯನ್ನು ಮಾತ್ರ ಕಳೆದುಕೊಳ್ಳಬಾರದು.

> ಬದುಕಿನಲ್ಲಿ ಸವಾಲುಗಳು ಅನಿವಾರ್ಯ. ಆದರೆ ಅವುಗಳಿಂದ ಹಿಂತಿರುಗುವುದು ಸೋಲನ್ನು ಸ್ವೀಕರಿಸುವಂತೆ. ಸ್ವಾಮಿ ವಿವೇಕಾನಂದರು ಹೇಳಿದ್ದಂತೆ: ಸವಾಲುಗಳನ್ನು ಎದುರಿಸೋಣ, ಅವು ನಮ್ಮನ್ನು ಜೀವನಕ್ಕೆ ತಯಾರಿಸುತ್ತವೆ, ಗೆಲುವಿಗೆ ಮುನ್ನಡೆಸುತ್ತವೆ. ಅದನ್ನು ಅನುಭವಿಸಿದವರು ಮಾತ್ರ ತಿಳಿಯಬಲ್ಲರು. ತುತ್ತೂರಿ ಊದಿದ ಮಾತುಗಳು ಅಲ್ಲ, ಅದು ಅನುಭವದ ಗಂಧ.

ಭರವಸೆಯಲ್ಲಿ ಅರಳಿದ ಬೆಳಕುಗಳು: ಕೆಲ ಸಾಧಕರು ಜೀವನದಲ್ಲಿ ಮೊದಲು ಸೋತವರು, ಆಮೇಲೆ ಆದರ್ಶದ ರೂವಾರಿಯಾಗಿ ನಿಂತವರು. ಮುಂಬೈ ಫುಟಪಾತ್‌ನ ಕಲ್ಲು ಬೆಂಚಿನ ಮೇಲೆ ಮಲಗುತ್ತಿದ್ದ ಬಾಲಕ ಇಂದು ಶಾರುಖ್ ಖಾನ್, ಪೆಟ್ರೋಲ್ ಬಂಕ್‌ನಲ್ಲಿ ಕೆಲಸ ಮಾಡಿದ ಧೀರೂಬಾಯಿ ಅಂಬಾನಿ ನಂತರ ದೇಶದ ದೊಡ್ಡ ಉದ್ಯಮಿಯಾದರು. ಬಸ್ ಕಂಡಕ್ಟರ್ ಆಗಿದ್ದ ರಜನೀಕಾಂತ್ ಇಂದು ಬಿಲಿಯನ್ ಅಭಿಮಾನಿಗಳ ಆರಾಧ್ಯದೈವವಾಗಿದ್ದಾರೆ. ಸೂಪರ್ ಸ್ಟಾರ್ ಎಂದು ಕರೆಸಿಕೊಳ್ಳುತ್ತಿದ್ದಾರೆ. ಪತ್ರಿಕೆ ಹಂಚುತ್ತಿದ್ದ ಅಬ್ದುಲ್ ಕಲಾಂ ವಿಜ್ಞಾನಿಯಾಗಿ, ರಾಷ್ಟ್ರಪತಿಯಾಗಿ ಇಡೀ ದೇಶದ ಹಿರಿಮೆಯಾಗಿ ಭಾರತರತ್ನವಾದರು. ಇವರು ಎಲ್ಲರೂ ನಿನ್ನೆಯ ಬದುಕಿನ ಭಾರವನ್ನೇ ಹೊತ್ತು ಸಾಗಿದವರು. ಆದರೆ ನಾಳೆಯ ಬೆಳಕಿನ ಭರವಸೆಯಲ್ಲಿ ಬದುಕಿದವರು.

ಭರವಸೆ ಇಲ್ಲದ ಬದುಕು ಹೆಜ್ಜೆಗಲ್ಲುಗಳ ಸಂಗ್ರಹ: ನಿನಗೆ ನೀನೇ ಶಿಲ್ಪಿ ಎಂಬ ಸ್ವಾಮಿ ವಿವೇಕಾನಂದರ ಮಾತಿನಂತೆ ನಮ್ಮ ಬದುಕಿನ ದಾರಿಯನ್ನು ನಾವೇ ಕಂಡುಕೊಳ್ಳಬೇಕು. ಅಂತೆಯೇ ನಮ್ಮ ಬದುಕಿನ ದಾರಿಯನ್ನು ನಾವೇ ಕ್ರಮಿಸಬೇಕು. ಅನೇಕ ಬಾರಿ ನಾವು ಸೋಲುವುದಕ್ಕೆ ನಾವುಗಳೇ ಕಾರಣರಾಗಿರುತ್ತೇವೆ. ನಾವು ಕೆಲಸ ಪ್ರಾರಂಭಿಸುವ ಮೊದಲು, ಇದು ನನ್ನಿಂದ ಸಾಧ್ಯವಿದೆಯೋ, ಸಾಧ್ಯವಿಲ್ಲವೊ ಎಂದು ಭರವಸೆಯನ್ನು ಕಳೆದುಕೊಳ್ಳುತ್ತೇವೆ. ಇನ್ನು ಕೆಲವೊಮ್ಮೆ, ಇತರರು ನಮಗೆ ದಿಕ್ಕು ತಪ್ಪಿಸುವವರು ಇರುತ್ತಾರೆ. ಆಗ ಅವರು ಅದು ನಿನ್ನಿಂದ ಆಗದು ಅಂದಾಗ, ನಮ್ಮ ಮೇಲಿನ ನಂಬಿಕೆ–ಭರವಸೆ ಅರ್ಧ ಭಾಗ ಕುಸಿದು ಹೋಗಿರುತ್ತದೆ. ಅದಮ್ಯ ಚೈತನ್ಯದಲ್ಲಿ ದೃಢತೆಯಿಂದ ಒಂದು ಬಂಡೆಯಂತೆ ಸ್ಥಿರವಾಗಿ ನಿಂತು, ನನ್ನಿಂದ ಇದು ಸಾಧ್ಯ, ನಾನು ಮಾಡೇ ತೀರುತ್ತೇನೆ ಎಂಬ ಭರವಸೆಯನ್ನು ಬಾಳಿನಲ್ಲಿ ಉಳಿಸಿಕೊಂಡವರು ಎಲ್ಲ ಬಗೆಯ ಸವಾಲುಗಳನ್ನು ಎದುರಿಸಿ ಜಯ ಸಾಧಿಸುತ್ತಾರೆ.

ಸಾಧ್ಯವಿರುವುದನ್ನು ಯೋಚಿಸೋಣ: ಮನಸ್ಸಿದ್ದರೆ ಮಾರ್ಗ ಎಂಬ ಮಾತಿನಂತೆ ಮನಸ್ಸು ಮಾಡಿದರೆ ಅಸಾಧ್ಯಗಳು ಸಾಧ್ಯಗಳಾಗಿ ಗರಿ ಬಿಚ್ಚುತ್ತವೆ. ಒಬ್ಬ ವ್ಯಕ್ತಿ ಏನನ್ನಾದರೂ ಸಾಧಿಸಬೇಕೆಂದು ದೃಢವಾಗಿ ನಿರ್ಧರಿಸಿದರೆ, ಅವನಿಗೆ ಬೇಕಾದ ಮಾರ್ಗಗಳು ತಾನಾಗಿಯೇ ತೆರೆದುಕೊಳ್ಳುತ್ತವೆ. ಯಾವುದೇ ಅಡ್ಡಿ ಆತಂಕಗಳಿದ್ದರೂ, ಅವುಗಳನ್ನು ಎದುರಿಸಿ ಮುನ್ನುಗ್ಗಲು ಅವನಿಗೆ ಸಾಧ್ಯವಾಗುತ್ತದೆ. ಅಂದರೆ, ಒಂದು ಕೆಲಸವನ್ನು ಮಾಡಲು ನಿಜವಾಗಿಯೂ ಬಯಸಿದರೆ, ಆ ಕೆಲಸವನ್ನು ಸಾಧಿಸಲು ಬೇಕಾದ ಮಾರ್ಗಗಳನ್ನು ಕಂಡುಕೊಳ್ಳುವುದು ಕಷ್ಟವಲ್ಲ. ಮನಸ್ಸು ದೃಢವಾಗಿದ್ದರೆ, ಸಾಧನೆ ಖಚಿತ. ಯಾವುದನ್ನು ನಾವು ಸಾಧಿಸಲು ಅಸಾಧ್ಯವೆಂದು ಭಾವಿಸುತ್ತೇವೆಯೋ, ಅದರ ಬಗ್ಗೆ ಯೋಚಿಸುವ ಬದಲು, ನಮ್ಮಿಂದ ಸಾಧ್ಯವಾಗುವ, ಸಣ್ಣ ಆದರೂ ನಿಶ್ಚಿತವಾದ ಹೆಜ್ಜೆಗಳ ಬಗ್ಗೆ ಯೋಚಿಸೋಣ. ಜೀವನ ಒಂದು ಉದ್ದ ದಾರಿ. ಒಂದೇ ನಿಟ್ಟಿನಲ್ಲಿ ಜಯವಿಲ್ಲ, ಆದರೆ ನಿರಂತರ ಪ್ರಯತ್ನದಲ್ಲಿ ದಾರಿ ತೆರೆದುಕೊಳ್ಳುತ್ತದೆ.

ಸವಾಲು ಹಿಂಜರಿಯುವ ಪರದೆಯಲ್ಲ, ಬೆಳ್ಳಿ ಪರದೆಯೆ: ಬದುಕಿನಲ್ಲಿ ಸವಾಲುಗಳು ಅನಿವಾರ್ಯ. ಆದರೆ ಅವುಗಳಿಂದ ಹಿಂದೆ ಸರಿಯುವುದು ಸೋಲನ್ನು ಸ್ವೀಕರಿಸಿದಂತೆ. ಸ್ವಾಮಿ ವಿವೇಕಾನಂದರು ಹೇಳಿದ್ದಂತೆ ಸವಾಲುಗಳನ್ನು ಎದುರಿಸೋಣ, ಅವು ನಮ್ಮನ್ನು ಜೀವನಕ್ಕೆ ತಯಾರಿಸುತ್ತವೆ, ಗೆಲುವಿಗೆ ಮುನ್ನಡೆಸುತ್ತವೆ. ಅದನ್ನು ಅನುಭವಿಸಿದವರು ಮಾತ್ರ ತಿಳಿಯಬಲ್ಲರು. ತುತ್ತೂರಿ ಊದಿದ ಮಾತುಗಳು ಅಲ್ಲ, ಅದು ಅನುಭವದ ಗಂಧ.

ಈ ಜಗತ್ತಿನಲ್ಲಿ ದುಡಿದು ಸತ್ತವರು ಕಡಿಮೆ. ದಕ್ಕದೆ ಇರುವುದಕ್ಕೆ ಕೊರಗಿ ಸತ್ತವರೇ ಹೆಚ್ಚು. ಅನೇಕರಿಗೆ 'ಕೆಲಸವಿಲ್ಲದೆ ಖಾಲಿಯಾಗಿ ಕೂರುವ ಬದುಕು ಆನಂದದ ಬದುಕು' ಎಂಬ ಭ್ರಮೆಯಿದೆ. ಆದರೆ, ಕೆಲಸವಿಲ್ಲದ ದಿನಗಳು ಆರೋಗ್ಯ, ಮನಸ್ಸು ಎರಡಕ್ಕೂ ಹಾನಿಕಾರಕ. ಇದು ಉತ್ಸಾಹದ ಬದುಕಿನ ಶತ್ರು, ಇಂದು ದುಡಿದರೆ ನಾಳೆ ನೆಮ್ಮದಿ ಎಂಬ ನಂಬಿಕೆಯೊಂದಿಗೆ ದುಡಿದಾಗ ಮಾತ್ರ ನಿಜವಾದ ನೆಮ್ಮದಿ ದೊರೆಯುತ್ತದೆ.

ಭರವಸೆಯ ದೀಪ ಉರಿಸೋಣ: ಒಂದು ಕೈಲ್ಲಿ ಪೆನ್ಸಿಲ್ ಇದೆ, ಬರೆಯುತ್ತಾ ಸಾಗು, ಮತ್ತೊಂದು ಕೈಯ್ಯಲ್ಲಿ ರಬ್ಬರ್ ಇದೆ. ತಪ್ಪಾದರೆ ಅಳಿಸಿ ಕ್ಷಮಿಸಿ ಎಂದು ವಿನಮ್ರವಾಗಿ ಬೇಡುತ್ತಾ ಮತ್ತೆ ಬರೆಯುತ್ತ ಸಾಗಿದರೆ ಬದುಕು ಸುಂದರ, ಇದು ದೈವ ಮಂದಿರ. ಏನೇ ಸಮಸ್ಯೆಗಳು ಎದುರಾದರೂ ಪರಿಹಾರದ ಮಾರ್ಗಗಳು ಇದ್ದೇ ಇರುತ್ತವೆ. ಅವು ಹೊರಮುಖವಾಗಿರುವುದಕ್ಕಿಂತ ಒಳಮುಖವಾಗಿ ನಮ್ಮೊಳಗೆ ಇರುತ್ತವೆ ಕಂಡುಕೊಳ್ಳುವವರು ಮುಂದೆ ಸಾಗುವರು, ಕಂಡುಕೊಳ್ಳಲಾಗದವರು ಸೋಲುವರು. ಅದಕ್ಕೆ ಬಲ್ಲವರು ಹೇಳಿರುವುದು ಸಮಸ್ಯೆಗಳಿಗೆ ನಮ್ಮೊಳಗೆ ಪರಿಹಾರವೆಂಬ ಭರವಸೆಯ ಬೆಳಕು ಉರಿಸಬೇಕು.

ಭರವಸೆಯ ಹೂವು ಅರಳಲಿ: ಭರವಸೆ ಎಂದರೆ ನಿಜಕ್ಕೂ ಒಂದು ಹೂವು. ಅದು ನೆಲದ ಕೆಳಗಣ ಮಣ್ಣು, ನೀರು, ಸೂರ್ಯನ ಬೆಳಕು ಎಲ್ಲಾ ಅನುಭವಿಸಿದ ಮೇಲೆ ಮಾತ್ರ ಅರಳುತ್ತದೆ. ಆದರೆ ಅರಳಿದ ಬಳಿಕ ಅದರ ಸುವಾಸನೆ ಎಲ್ಲೆಲ್ಲಿಗೂ ಹರಡುತ್ತದೆ. ಹಾಗೆಯೇ ಭರವಸೆ ಇರುವ ವ್ಯಕ್ತಿಯ ಬದುಕು ತನ್ನಂತೆ ಮತ್ತವರಿಗೂ ಪ್ರೇರಣೆಯಾಗಿ, ಬೆಳಕಾಗಿ ಪರಿಣಮಿಸುತ್ತದೆ. ಭರವಸೆ ಎಂದರೆ ಸುಮ್ಮನೆ ಬಯಕೆ ಅಥವಾ ನಿರೀಕ್ಷೆ ಅಲ್ಲ. ಅದು ಬದುಕನ್ನು ಸಾಗಿಸಲು ಬೇಕಾದ ಆಂತರಿಕ ಇಂಧನ. ಜೀವನದಲ್ಲಿ ಯಾವುದೇ ಸಂದರ್ಭ ಬಂದರೂ ಹತಾಶೆ, ವ್ಯಥೆ, ಸಂಕಟ, ಸೋಲು ನಾವು ನಂಬಿಕೆಯಿಂದ, ಶ್ರದ್ಧೆಯಿಂದ, ಆತ್ಮವಿಶ್ವಾಸದಿಂದ ಸಾಗಿದರೆ, ಗೆಲುವು ನಮ್ಮದಾಗುವುದು. ನಾಳೆಯ ಬಗ್ಗೆ ನಂಬಿಕೆ ಇಟ್ಟುಕೊಳ್ಳೋಣ. ಭರವಸೆಯ ದೀಪ ಹಚ್ಚೋಣ. ಬದುಕನ್ನು ಬೆಳಗಿಸೋಣ.

ಚಿತ್ರದುರ್ಗದಲ್ಲಿ 3ನೇ ಹಂತದ ಹೋರಾಟ ಕುರಿತು ಪೂರ್ವಭಾವಿ ಸಭೆ

ಒಳಮೀಸಲಾತಿ ಹೋರಾಟ ವಿಫಲಗೊಳಿಸಲು ಹಲವು ಸಂಚು

ಕರ್ನಾಟಕ ಸಾಮಾಜಿಕ ನ್ಯಾಯಪರ ವಕೀಲರ ವೇದಿಕೆ ಅಧ್ಯಕ್ಷ ಎಸ್.ಅರುಣ್ ಕುಮಾರ್ ಆರೋಪ



ಪೂರ್ವಭಾವಿ ಸಭೆಗೂ ಮುನ್ನ ಚಿತ್ರದುರ್ಗದ ಮಾದಾರ ಚೆನ್ನಯ್ಯ ಗುರುಪೀಠಕ್ಕೆ ಭೇಟಿ ನೀಡಿದ ಅರುಣ್‌ಕುಮಾರ್ ಹಾಗೂ ಭಾಸ್ಕರ್ ಪ್ರಸಾದ್ ಸೇರಿದಂತೆ ಇನ್ನಿತರ ಮುಖಂಡರು, ಡಾ.ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮೀಜಿಯವರ ಆಶೀರ್ವಾದ ಪಡೆದರು.

ಮೈಸೂರು,ಜು.3(ಪಿಎಂ)–ಒಳಮೀಸಲಾತಿ ಜಾರಿ ಹೋರಾಟದಲ್ಲಿ ಗೊಂದಲ ಸೃಷ್ಟಿಸಿ ವಿಫಲಗೊಳಿಸಲು ಹಲವು ಸಂಚುಗಳು ನಡೆಯುತ್ತಿವೆ. ಆ ಮೂಲಕ ಯಥಾಸ್ಥಿತಿ ವ್ಯವಸ್ಥೆ ಮುಂದುವರೆಯುವಂತೆ ಮಾಡಲು ಕ್ರಿಮಿನಲ್ ಸ್ಟ್ರಾಟರ್ಜಿ ಮಾಡಲಾಗುತ್ತಿದೆ ಎಂದು ಹಿರಿಯ ವಕೀಲರೂ ಆದ ಕರ್ನಾಟಕ ಸಾಮಾಜಿಕ ನ್ಯಾಯಪರ ವಕೀಲರ ವೇದಿಕೆ ಅಧ್ಯಕ್ಷ ಎಸ್.ಅರುಣ್‌ಕುಮಾರ್ ಆರೋಪಿಸಿದರು.

ಚಿತ್ರದುರ್ಗದ ಪ್ರವಾಸಿ ಮಂದಿರದಲ್ಲಿ ಒಳ ಮೀಸಲಾತಿ ಜಾರಿಗಾಗಿ ಮೂರನೇ ಹಂತದ ಹೋರಾಟ ಕೈಗೆತ್ತಿಕೊಳ್ಳುವ ಸಂಬಂಧ ಗುರುವಾರ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ನಮ್ಮ ಹೋರಾಟದ ದಿಕ್ಕು ತಪ್ಪಿಸಲು ಯತ್ನಿಸಲಾಗುತ್ತಿದೆ. ಕೆಲವರು ಹೋರಾಟ ಮುಂದಿಟ್ಟುಕೊಂಡು ಎಡ ಮತ್ತು ಬಲವೆಂದು ವಿಂಗಡಣೆ ಮಾಡುತ್ತಿದ್ದಾರೆ ಎಂದು ಬಿಂಬಿಸಲಾಗುತ್ತಿದೆ. ಮತ್ತೆ ಕೆಲವರು ಬಿಜೆಪಿ, ಆರ್‌ಎಸ್‌ಎಸ್ ನಿಯಂತ್ರಿತ ಹೋರಾಟ ಇದು ಎಂದು ಬಿಂಬಿಸಲು ಪ್ರಯತ್ನಿಸುತ್ತಿದ್ದಾರೆ. ಆ ಮೂಲಕ ನಮ್ಮ ಹೋರಾಟದಲ್ಲಿ ಗೊಂದಲ ಸೃಷ್ಟಿಸಲು ಹುನ್ನಾರ ನಡೆಸಲಾಗುತ್ತಿದೆ ಎಂದು ದೂರಿದರು.

ಒಳ ಮೀಸಲಾತಿ ಜಾರಿಯನ್ನು ನೆಪವೊಡ್ಡಿ ಮುಂದೂಡಲಾಗುತ್ತಿದೆ. ಮತ್ತೊಂದೆಡೆ ಈಗ ನಡೆಯುತ್ತಿರುವ ಪರಿಶಿಷ್ಟ ಜಾತಿಯ ಸರ್ವೇಯ ಕಾಲಾವಕಾಶ ಹೆಚ್ಚಿಸಲು ಆಗ್ರಹಿಸಲಾಗುತ್ತಿದೆ. ಹೀಗೆ ಕೇಳುತ್ತಿರುವುದು ಹೆಚ್ಚಿನ ಸಂಖ್ಯೆಯಲ್ಲಿ ಮಾದಿಗ ಸಮುದಾಯವರು ಮಾತ್ರ. ಆದರೆ ಜಾಸ್ತಿ ಅನುಕೂಲ ಪಡೆದುಕೊಂಡ ಬಲಗೈ ಸಮುದಾಯದವರು ಹೆಚ್ಚು ಸಮಯ ಕೇಳುತ್ತಿಲ್ಲ. ಪರಿಶಿಷ್ಟ ಜಾತಿ ಪಟ್ಟಿಯಲ್ಲಿರುವ ಇನ್ನಿತರ ಸಮುದಾಯದವರೂ ಕೇಳುತ್ತಿಲ್ಲ ಎಂದರು.

ಎಲ್ಲಾ ಸಮೀಕ್ಷೆಯಲ್ಲಿ ಮಾದಿಗರೇ ನಂ.1: ಯಾವುದೇ ಸಮೀಕ್ಷೆ ತೆಗೆದುಕೊಂಡರೂ ಎಲ್ಲದರಲ್ಲೂ ಮಾದಿಗ ಸಮುದಾಯದ ಜನಸಂಖ್ಯೆಯೇ ಹೆಚ್ಚು. ಕರ್ನಾಟಕದ ಪರಿಶಿಷ್ಟ ಜಾತಿಯಲ್ಲಿ ಮಾದಿಗ ಸಮುದಾಯದ ಜನಸಂಖ್ಯೆಯೇ ಹೆಚ್ಚು. ಸಾಮಾನ್ಯವಾಗಿ ಜನಸಂಖ್ಯೆಯಲ್ಲಿ ಕಡಿಮೆ ಇದ್ದ ಸಮುದಾಯದವರು ಒಳಮೀಸಲಾತಿ ಕೇಳಬೇಕು. ಆದರೆ ನಮ್ಮ ಸಮುದಾಯದ ವಿಚಾರದಲ್ಲಿ ಇದು ಉಲ್ಟಾ ಆಗಿದೆ. ಜನಸಂಖ್ಯೆ ಹೆಚ್ಚಿರುವ ಸಮುದಾಯವು ಒಳಮೀಸಲಾತಿ ಜಾರಿಗೆ ಆಗ್ರಹಿಸುತ್ತಿರುವ ಪರಿಸ್ಥಿತಿ ಬಂದಿರುವುದೇ ದೊಡ್ಡ ವಿಪರ್ಯಾಸ. ಇದಕ್ಕೆ ನಾನಾ ಅಂಶಗಳು ಕಾರಣ ಎಂದು ತಿಳಿಸಿದರು.

ಸರ್ವೇಯಲ್ಲಿ ಗೊಂದಲವಿದ್ದು, ಮಾದಿಗ ಸಮುದಾಯ ಹೆಚ್ಚು ಜನಸಂಖ್ಯೆ ಹೊಂದಿದೆ ಎಂದು ಒಪ್ಪಿಕೊಳ್ಳುವುದು ಹೇಗೆ ಎಂಬಿತ್ಯಾದಿಯಾಗಿ ಆಕ್ಷೇಪ ವ್ಯಕ್ತಪಡಿಸಲಾಗುತ್ತಿದೆ. ಸುಪ್ರೀಂಕೋರ್ಟ್ ತೀರ್ಪಿನ ಹಿನ್ನೆಲೆಯಲ್ಲಿ ಒಳಮೀಸಲಾತಿ ಜಾರಿಯ ಅನಿವಾರ್ಯ ಸೃಷ್ಟಿಯಾದ ಬಳಿಕ ಇವರ ಹುನ್ನಾರ ವೇಗ ಪಡೆದುಕೊಂಡಿದೆ ಎಂದು ದೂರಿದರು.

ಕರ್ನಾಟಕ ಸಾಮಾಜಿಕ ನ್ಯಾಯ ಪರ ವಕೀಲರ ವೇದಿಕೆ ರಾಜ್ಯ ಪ್ರಧಾನ ಕಾರ್ಯದರ್ಶಿ ಬೂದಿತಿಟ್ಟ ರಾಜೇಂದ್ರ ಎಲ್. ಮಾಳಪ್ಪ, ಉಪಾಧ್ಯಕ್ಷ ಶಿವಕುಮಾರ್ ಬೆಳ್ತೂರ್, ಮುಖಂಡರಾದ ರಘುರಾಜ್‌ಕೊಳ್ಳಿ, ಎಂ.ಆರ್.ಸುಧೀಂದ್ರ ಕುಮಾರ್, ಸುರೇಶ್, ಸಿ.ಬಸವರಾಜ್, ರಘು, ಫಕೀರಪ್ಪ, ಶಿವಣ್ಣ ಇತರರು ಹಾಜರಿದ್ದರು.

ಆ.1ರಂದು ರಾಜ್ಯಾದ್ಯಂತ ರಾಜ್ಯ ಸರ್ಕಾರದ ಅಣುಕು ಶವಯಾತ್ರೆ ; ಭಾಸ್ಕರ್ ಪ್ರಸಾದ್

ಮೈಸೂರು,ಜು.3(ಪಿಎಂ)– ಒಳ ಮೀಸಲಾತಿ ಜಾರಿಗೊಳಿಸದೇ ಸುಪ್ರೀಂಕೋರ್ಟ್ ಆದೇಶ ಧಿಕ್ಕರಿಸಿರುವ ರಾಜ್ಯ ಸರ್ಕಾರದ ವಿರುದ್ಧ ಆ.1ರಂದು ರಾಜ್ಯದ ಎಲ್ಲಾ ಜಿಲ್ಲಾ ಹಾಗೂ ತಾಲೂಕು ಕೇಂದ್ರಗಳಲ್ಲಿ ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆ ಮುಂಭಾಗ ರಾಜ್ಯ ಸರ್ಕಾರದ ಅಣಕು ಶವಯಾತ್ರೆ ನಡೆಸಿ, ಸಾಮೂಹಿಕ ಕೇಶ ಮುಂಡನ ಮಾಡಿಕೊಳ್ಳುವ ಹೋರಾಟ ನಡೆಸುವುದಾಗಿ ಒಳ ಮೀಸಲಾತಿ ಹೋರಾಟ ಸಮಿತಿ ರಾಜ್ಯ ಸಂಚಾಲಕ ಭಾಸ್ಕರ್ ಪ್ರಸಾದ್ ತಿಳಿಸಿದರು.

ಮೂರನೇ ಹಂತದ ಹೋರಾಟ ಸಂಬಂಧ ನಡೆದ ಪೂರ್ವಭಾವಿ ಸಭೆ ಬಳಿಕ ಕೈಗೊಂಡ ನಿರ್ಣಯಗಳ ಬಗ್ಗೆ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದರು. ಒಳಮೀಸಲಾತಿ ಜಾರಿಗೊಳಿಸುವಂತೆ ಸುಪ್ರೀಂಕೋರ್ಟ್ ತೀರ್ಪು ನೀಡಿ ಆ.1ಕ್ಕೆ ಒಂದು ವರ್ಷವಾಗುತ್ತದೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪರಿಶಿಷ್ಟ ಜಾತಿಯ 101 ಜಾತಿಗಳಿಗೆ ವಂಚನೆ ಮಾಡಿಕೊಂಡು ಬರುತ್ತಿದ್ದಾರೆ. ಹಾಗಾಗಿ ಆ.1ರಿಂದ 30ರೊಳಗೆ ಯಾವುದಾದರೂ ಒಂದು ದಿನಾಂಕ ನಿಗದಿಪಡಿಸಿ ದೆಹಲಿ ಚಲೋ ನಡೆಸಲಾಗುವುದು. ಆ ಮೂಲಕ ರಾಹುಲ್ ಗಾಂಧಿ ನಿವಾಸಕ್ಕೆ ಮುತ್ತಿಗೆ ಹಾಕಿ ರಾಜ್ಯದಲ್ಲಿರುವ ನಿಮ್ಮ ಪಕ್ಷದ ಸರ್ಕಾರಕ್ಕೆ ಸಾಮಾಜಿಕ ನ್ಯಾಯದ ಅರ್ಥ ಗೊತ್ತಿದೆಯೇ ಎಂದು ಪ್ರಶ್ನಿಸಲಾಗುವುದು ಎಂದರು. ಇದಲ್ಲದೆ ಪ್ರಧಾನಿ ಹಾಗೂ ರಾಷ್ಟ್ರಪತಿಗೆ ಮನವಿ ಸಲ್ಲಿಸಲಾಗುವುದು. ಜೊತೆಗೆ ಎಲ್ಲಾ ಪಕ್ಷಗಳ ರಾಜಕೀಯ ನಾಯಕರು, ಹೋರಾಟಗಾರರು, ಜನಪರ ಸಂಘಟನೆಗಳು, ಮಠಾಧೀಶರು ಮೊದಲಾದವರನ್ನು ಭೇಟಿಯಾಗಿ ಬೆಂಬಲ ಕೋರುತ್ತೇವೆ ಎಂದರು.

ಶಾಲಿನಿ ರಜನೀಶ್ ವಿರುದ್ಧ ಅಸಭ್ಯ ಹೇಳಿಕೆ ರವಿಕುಮಾರ್ ವಿರುದ್ಧ ಎಫ್‌ಐಆರ್

ಬೆಂಗಳೂರು, ಜು.3– ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ್ದಕ್ಕೆ ಬಿಜೆಪಿ ಪರಿಷತ್ ಸದಸ್ಯ ರವಿಕುಮಾರ್ ವಿರುದ್ಧ ವಿಧಾನಸೌದ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಜೆಪಿ ನಗರದ ನಿವಾಸಿಯಾಗಿರುವ ನಂದಾದೀಪಾ ಮಹಿಳಾ ಸಂಘದ ಅಧ್ಯಕ್ಷೆ ನಾಗರತ್ನ ನೀಡಿದ ದೂರಿನ ಹಿನ್ನೆಲೆಯಲ್ಲಿ ಬಿಎನ್‌ಎಸ್ ಸೆಕ್ಷನ್ 351(3)(ಅನೈತಿಕತೆಯ ಆರೋಪ), 75(3) (ಅಶ್ಲೀಲ ಹೇಳಿಕೆ), 79(ಮಹಿಳೆಯ ಮಾನಕ್ಕೆ ಕುಂದು ತರುವ ಉದ್ದೇಶದಿಂದ ಪ್ರಯೋಗಿಸಲಾದ ಪದ) ಅಡಿ ಪ್ರಕರಣ ದಾಖಲಾಗಿದೆ.

ದೂರಿನ ವಿವರ: ನಾನು ನಂದಾದೀಪ ಮಹಿಳಾ ಸಂಘದ ಅಧ್ಯಕ್ಷೆಯಾಗಿರುತ್ತೇನೆ. ಜು.1 ರಂದು ಬಿಜೆಪಿ ನಾಯಕರು ಮಹಾತ್ಮ ಗಾಂಧಿ ಪ್ರತಿಮೆ ಬಳಿ ಪ್ರತಿಭಟನೆ ನಡೆಸಿ ಮಾತನಾಡುತ್ತಿದ್ದರು. ಈ ಸಂದರ್ಭದಲ್ಲಿ ರವಿಕುಮಾರ್ ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಶ್ರೀಮತಿ ಶಾಲಿನಿ ರಜನೀಶ್ ಅವರನ್ನು ಅಸಭ್ಯ ರೀತಿಯಲ್ಲಿ 'ಅವರು ರಾತ್ರಿ ಸರ್ಕಾರಕ್ಕೆ ಹಗಲು ಸಿಎಂಗೆ ಕೆಲಸ ಮಾಡುತ್ತಾರೆಂದು' ಸಾರ್ವಜನಿಕವಾಗಿ ಹೇಳಿಕೆ ನೀಡಿದ್ದು ಟಿವಿಯಲ್ಲಿ ಪ್ರಸಾರವಾಗಿತ್ತು.

ಟಿವಿಯಲ್ಲಿ ಬಂದ ಸುದ್ದಿ ನೋಡಿ ನನಗೆ ನೋವುಂಟಾಗಿದ್ದು, ಅವರ ಹೇಳಿಕೆಯು ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಹುದ್ದೆಗೆ ಅಗೌರವ ತೋರಿದಂತಾಗಿದೆ. ಇಡೀ ಮಹಿಳಾ ಕುಲಕ್ಕೆ ಅಗೌರವ ತೋರಿದ್ದಾರೆ. ಇವರ ಮಾತು ಲೈಂಗಿಕ ಅರ್ಥ ಬರುವಂತಹ ಹೇಳಿಕೆಯಾಗಿದ್ದು,ರವಿಕುಮಾರ್ ಹೇಳಿಕೆಯಿಂದ ಮಹಿಳೆ ಹಾಗೂ ಮಹಿಳಾ ಸಮಾಜಕ್ಕೂ ಅಗೌರವ ಉಂಟಾಗಿದ್ದು, ಅವರ ವಿರುದ್ಧ ಕಾನೂನು ರೀತಿ ಕ್ರಮ ಜರುಗಿಸಬೇಕೆಂದು ದೂರಿನಲ್ಲಿ ತಿಳಿಸಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ

ಈ ಬಾರಿಯೂ ಮೈಸೂರು ದಸರಾ ಜಂಬೂಸವಾರಿಯಲ್ಲಿ ಮೇಯರ್ ಇಲ್ಲ!

ಮೈಸೂರು ಪಾಲಿಕೆಗೆ ಚುನಾವಣೆ ನಡೆಸದ ಸರ್ಕಾರದ ನಡೆಗೆ ಪಕ್ಷಾತೀತ ಆಕ್ರೋಶ

ಮೈಸೂರು, ಜು.3(ಬಿಎಲ್‌ಯು)– ಮೈಸೂರು ಪೇಟ ಹಾಗೂ ಗೌನ್ ಧರಿಸಿ ಕುದುರೆಯಲ್ಲಿ ಸಾಗುವ ಮೇಯರ್, ವಿಶ್ವ ವಿಖ್ಯಾತ ಮೈಸೂರು ದಸರಾ ಜಂಬೂಸವಾರಿ ಮೆರವಣಿಗೆಯ ಹೈಲೈಟ್ ಆಗಿರುತ್ತಾರೆ. ಆದರೆ ಕಳೆದ ವರ್ಷದಂತೆ ಈ ಬಾರಿ ಕೂಡ ಮೈಸೂರಿನ ಪ್ರಥಮ ಪ್ರಜೆಗೆ ಜಂಬೂ ಸವಾರಿ ಮೆರವಣಿಗೆಯಲ್ಲಿ ಸಾಗುವ ಯೋಗ ಬಂದಿಲ್ಲ.

ನಗರಪಾಲಿಕೆಯ ಕೌನ್ಸಿಲ್ ಸಭೆಯ ಸಂದರ್ಭ ದಲ್ಲಿ ಮೇಯರ್ ಅವರನ್ನು ಪೂಜ್ಯ ಮೇಯರ್ ಅವರೆ ಎಂದು ಸದಸ್ಯರು ಉಲ್ಲೇಖಿಸುತ್ತಾರೆ. ಈ ಮೂಲಕ ಮೇಯರ್ ಸ್ಥಾನವನ್ನು ಗೌರವಯುತ, ಪ್ರತಿಷ್ಠಿತ ಭಾವನೆಯಿಂದ ನೋಡಲಾಗುತ್ತದೆ.

ಈ ಹಿನ್ನೆಲೆ ವಿಶ್ವ ವಿಖ್ಯಾತ ಮೈಸೂರು ದಸರಾ ಜಂಬೂಸವಾರಿ ಮೆರವಣಿಗೆಯಲ್ಲಿ ಮೇಯರ್ ಅವರಿಗೆ ಕುದುರೆ ಸವಾರಿಯಲ್ಲಿ ಸಾಗಲು ಅವಕಾಶ ನೀಡಲಾಗುತ್ತದೆ. ಪ್ರಾಯಶಃ ದೇಶದ ಯಾವುದೇ ನಗರ ಪಾಲಿಕೆಯ ಮೇಯರ್ ಅವರಿಗೆ ಸಿಗದ ಮಾನ್ಯತೆ ಮೈಸೂರು ನಗರಪಾಲಿಕೆಯ ಮೇಯರ್‌ಗೆ ದೊರೆತಿದೆ.

ಮಿರಿ ಮಿರಿ ಮಿನುಗುವ ರೇಷ್ಮೆಯ ಮೈಸೂರು ಪೇಟ ಹಾಗೂ ಗೌನ್ ಧರಿಸುವ ಮೇಯರ್ ಅವರು ಮೈಸೂರು ಅರಮನೆಯಿಂದ ಬನ್ನಿಮಂಟಪದವರೆಗೆ ಕುದುರೆ ಮೇಲೆ ಜಂಬೂಸವಾರಿ ಮೆರವಣಿಗೆಯಲ್ಲಿ ಸಾಗುತ್ತಾರೆ. ಲಕ್ಷಾಂತರ ಜನರು ಸೇರುವ ಹಾಗೂ ಕೋಟ್ಯಾಂತರ ಜನರು ವೀಕ್ಷಣೆ ಮಾಡುವ ಜಂಬೂ ಸವಾರಿ ಮೆರವಣಿಗೆಯಲ್ಲಿ ಜನರತ್ತ ಕೈ ಬೀಸುತ್ತಾ ಸಾಗುವ ಮೇಯರ್ ಅವರಿಗೆ ಸಿಗುವ ಈ ಅವಕಾಶ ದೇವರು ಕೊಟ್ಟ ವರ ಎಂದು ಭಾವಿಸಲಾಗುತ್ತದೆ.

ಜಂಬೂಸವಾರಿ ಮೆರವಣಿಗೆಯಲ್ಲಿ ಸಾಗಲು ಅಶ್ವಾರೋಹಿ ದಳದ ಪೊಲೀಸರು ಮೇಯರ್ ಅವರಿಗೆ 15 ದಿನಗಳ ಕಾಲ ತಾಲೀಮು ನೀಡುವರು.

ಮೇಯರ್ ಅವರು ಜಂಬೂಸವಾರಿ ಮೆರವಣಿಗೆಯಲ್ಲಿ ಕುದುರೆ ಸವಾರಿಯಲ್ಲಿ ಸಾಗುವುದು ಹಲವು



ಬಹಳಷ್ಟು ಕೆಲಸ ನನೆಗುದಿಗೆ ಬಿದ್ದಿದೆ

ಸ್ಥಳೀಯ ಸಂಸ್ಥೆಗಳ ಅವಧಿ ಮುಗಿದ ತಕ್ಷಣ ಸರ್ಕಾರ ಚುನಾವಣೆ ನಡೆಸಬೇಕು. ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬಹಳಷ್ಟು ಕೆಲಸಗಳು ಸ್ಥಗಿತವಾಗಿದೆ. ಈ ಹಿನ್ನೆಲೆಯಲ್ಲಿ ಕೂಡಲೇ ಸರ್ಕಾರ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸಬೇಕು.

- **ಜಿ.ಎಂ.ರಾಮು,** ಮಾಜಿ ಅಧ್ಯಕ್ಷ, ಜಿಲ್ಲಾ ಪಂಚಾಯತ್, ಮೈಸೂರು.

ವರ್ಷಗಳಿಂದ ನಡೆದುಕೊಂಡು ಬಂದಿರುವ ಸಂಪ್ರದಾಯ. ಆದರೆ ಇತ್ತೀಚಿನ ಕೆಲವು ವರ್ಷ ಗಳಿಂದ ಜಿಲ್ಲಾ ಪಂಚಾಯತ್ ಅಧ್ಯಕ್ಷರು ಕೂಡ ಜಂಬೂಸವಾರಿ ಮೆರವಣಿಗೆಯಲ್ಲಿ ಸಾಗುತ್ತಿದ್ದಾರೆ.

ಆದರೆ ಮೈಸೂರು ನಗರಪಾಲಿಕೆಗೆ ಚುನಾವಣೆ ನಡೆಸದ ಕಾರಣ ಮೇಯರ್‌ಗೆ ಜಂಬೂಸವಾರಿ ಮೆರವಣಿಗೆಯಲ್ಲಿ ಸಾಗುವ ಯೋಗ ದೊರೆತಿಲ್ಲ.

ದೇಶದ ಒಕ್ಕೂಟ ವ್ಯವಸ್ಥೆಯಲ್ಲಿ ರಾಜ್ಯಗಳ ಆಡಳಿತ ಬಹಳ ಮುಖ್ಯ ಹಾಗೂ ಅನಿವಾರ್ಯವಾಗಿರು ವಂತೆ ರಾಜ್ಯಗಳ ಆಡಳಿತ ನಿರ್ವಹಣೆಯಲ್ಲಿ ಸ್ಥಳಿಯ ಸಂಸ್ಥೆಗಳ ಆಡಳಿತ ವ್ಯವಸ್ಥೆ ಕೂಡ ಬಹಳ ಮುಖ್ಯ ಮತ್ತು ಅನಿವಾರ್ಯವಾಗಿರುತ್ತದೆ.

ಆದರೆ ರಾಜ್ಯ ಕಾಂಗ್ರೆಸ್ ಸರ್ಕಾರ ಕಳೆದ ಎರಡು ವರ್ಷಗಳಿಂದ ನಗರ ಪಾಲಿಕೆ, ಜಿಲ್ಲಾ ಪಂಚಾಯತ್ ಹಾಗೂ ತಾಲೂಕು ಪಂಚಾಯತ್‌ಗಳಿಗೆ ಚುನಾವಣೆ ನಡೆಸಿಲ್ಲ. ಸ್ಥಳಿಯ ಸಂಸ್ಥೆಗಳಿಗೆ ಅಧಿಕಾರಿ ಗಳನ್ನು ಆಡಳಿತಾಧಿಕಾರಿಗಳಾಗಿ ನೇಮಕ ಮಾಡಿ ಅಧಿಕಾರಿಗಳ ದರ್ಬಾರ್‌ಗೆ ಬಿಟ್ಟು ಮೌನವಹಿಸಿದೆ.

ಮೈಸೂರು ನಗರ ಪಾಲಿಕೆ, ಜಿಲ್ಲಾ ಪಂಚಾಯತ್ ಹಾಗೂ ತಾಲೂಕು ಪಂಚಾಯತ್‌ಗಳಲ್ಲಿ ಜನಪ್ರತಿನಿಧಿಗಳ ಹಾಗೂ ಸಮಸ್ಯೆ ಹೇಳಿಕೊಳ್ಳುವ ಜನರು ತುಂಬಿರುತ್ತಿದ್ದರು. ಆದರೆ ಸ್ಥಳೀಯ ಸಂಸ್ಥೆಗಳಲ್ಲಿ ಜನಪ್ರತಿನಿಧಿಗಳಿಲ್ಲದ ಕಾರಣ ನಗರಪಾಲಿಕೆ, ಜಿಲ್ಲಾ ಪಂಚಾಯತ್ ಹಾಗೂ ತಾಲೂಕು ಪಂಚಾಯತ್ ಕಚೇರಿಗಳು ಬಿಕೋ ಎನ್ನುತ್ತಿವೆ.

ಸ್ಥಳೀಯ ಸಂಸ್ಥೆಗಳಲ್ಲಿ ಅಧಿಕಾರಿಗಳು ಕೈಗೆ ಸಿಗುವುದಿಲ್ಲ ಹಾಗೂ ಹೀಗೂ ಅಲೆದೂ ಅಧಿಕಾರಿಯನ್ನು ಭೇಟಿ ಮಾಡಿದರೆ ಆ ಕೆಲಸ ಮಾಡಿಸಲು ಮತ್ತಷ್ಟು ದಿನ ಅಲೆಯಬೇಕು. ಇಲ್ಲವೇ ಲಂಚ ಕೊಡಬೇಕು.

ಈ ಮೊದಲು ಮತದಾರರು ತಾವು ಮತ ನೀಡಿದ ಜನಪ್ರತಿನಿಧಿ ಬಳಿ ದರ್ಪ ತೋರಿ ಕೆಲಸ ಮಾಡಿಸಿ ಕೊಳ್ಳುತ್ತಿದ್ದರು. ಆದರೆ ಈಗ ಅಧಿಕಾರಿಗಳ ಬಳಿ ಹಾಗೆ ದರ್ಪ ತೋರಲು ಸಾಧ್ಯವಿಲ್ಲ. ಒಂದು ವೇಳೆ ದರ್ಪ ತೋರಿದರೆ ಆಗುವ ಕೆಲಸವು ಆಗುವುದಿಲ್ಲ, ಜೊತೆಗೆ ಸರ್ಕಾರಿ ಕೆಲಸಕ್ಕೆ ಅಡ್ಡಿ ಉಂಟು ಮಾಡಿದ್ದಾರೆಂದು ಪೊಲೀಸರಿಗೆ ದೂರು ನೀಡುತ್ತಾರೆ. ಇದರಿಂದ ಜನರು ಸ್ಥಳೀಯ ಸಂಸ್ಥೆಗಳ ಕಡೆ ಮುಖ ಮಾಡುತ್ತಿಲ್ಲ. ಅನಿವಾರ್ಯವಾಗಿ ಯಾವುದಾದರೂ ಕೆಲಸ ಆಗಬೇಕೆಂದರೆ ಮಧ್ಯವರ್ತಿಗಳಿಗೆ ಹಣ ಕೊಟ್ಟು ಆ ಕೆಲಸ ಮಾಡಿಸಿಕೊಳ್ಳುವ ಪರಿಸ್ಥಿತಿ ಬಂದಿದೆ.

ಸ್ಥಳೀಯ ಆಡಳಿತದ ಬಗ್ಗೆ ಪರಿವೆಯೇ ಇಲ್ಲ



"ನಗರ ಪಾಲಿಕೆಗೆ ಚುನಾವಣೆ ನಡೆಸದ ಕಾರಣ ಮೈಸೂರು ದಸರಾ ಜಂಬೂಸವಾರಿ ಮೆರವಣಿಗೆಯಲ್ಲಿ ಮೇಯರ್ ಅನುಪಸ್ಥಿತಿ ಎದ್ದು ಕಾಣುತ್ತದೆ. ಈ ಮೂಲಕ ಮೈಸೂರಿನ ಪರಂಪರೆ ಹಾಗೂ ಸಂಪ್ರದಾಯಕ್ಕೆ ಸರ್ಕಾರ ಧಕ್ಕೆ ತಂದಿದೆ. ಒಕ್ಕೂಟ ವ್ಯವಸ್ಥೆಯಲ್ಲಿ ರಾಜ್ಯಗಳ ಆಡಳಿತದಷ್ಟೆ ಸ್ಥಳೀಯ ಸಂಸ್ಥೆಗಳ ಆಡಳಿತ ಕೂಡ ಮುಖ್ಯವಾಗಿರುತ್ತದೆ. ಸ್ಥಳೀಯ ಸಂಸ್ಥೆಗಳಲ್ಲಿ ಜನಪ್ರತಿನಿಧಿಗಳ ಆಡಳಿತವಿಲ್ಲದೆ ಖಾಲಿ ಬಿಡಬಾರದು. ಜನರ ಸಮಸ್ಯೆಗಳೇನು ಎಂದು ಸ್ಥಳೀಯವಾಗಿರುವ ನಮಗೆ ಮಾತ್ರ ಗೊತ್ತಿದೆ ಇದನ್ನು ಅರಿತು ಅಧಿಕಾರಿಗಳಿಗೆ ಗಮನಕ್ಕೆ ತಂದು ಸಮಸ್ಯೆ ಪರಿಹಾರ ಮಾಡುತ್ತೇವೆ. ಆದರೆ ನಮಗೆ ಅಧಿಕಾರವಿಲ್ಲ ಎಂದ ಮೇಲೆ ಯಾವ ರೀತಿ ಸಮಸ್ಯೆ ಪರಿಹಾರ ಮಾಡಲು ಸಾಧ್ಯ. ಆದರೆ ನಗರಪಾಲಿಕೆ ಚುನಾವಣೆ ನಡೆಸಿದರೆ ತಾವು ಸೋಲುತ್ತೇವೆ ಎಂಬ ಭಯದಿಂದ ಕಾಂಗ್ರೆಸ್ ಸರ್ಕಾರ ಚುನಾವಣೆ ನಡೆಸುತ್ತಿಲ್ಲ.

- **ಶಿವಕುಮಾರ್,** ಮಾಜಿ ಮೇಯರ್, ಮೈಸೂರು ನಗರಪಾಲಿಕೆ

ಕಾರ್ಪೊರೇಟರ್ ಕೆಲಸವನ್ನ ಶಾಸಕರು, ಸಂಸದರು ಮಾಡುತ್ತಾರೆಯೇ!

ವಿಶ್ವ ವಿಖ್ಯಾತ ಮೈಸೂರು ದಸರಾದಲ್ಲಿ ಕುದುರೆ ಮೇಲೆ ಸಾಗುವ ಮೇಯರ್ ಜನರ ಪ್ರಮುಖ ಆಕರ್ಷಣೆಯೂ ಹೌದು. ಆದರೆ ಈ ಸರ್ಕಾರ ಮೇಯರ್ ಸ್ಥಾನವನ್ನು ನಿರ್ಲಕ್ಷ್ಯ ಮಾಡುತ್ತಿದೆ. ಆ ಸ್ಥಾನಕ್ಕೆ ಗೌರವಕ್ಕೆ ಧಕ್ಕೆ ತರುತ್ತಿದೆ. ಜನರ ಸಣ್ಣಪುಟ್ಟ ಕೆಲಸಗಳನ್ನು ಶಾಸಕರು, ಸಂಸದರು ಅಥವಾ ಸಚಿವರು ಮಾಡಲು ಸಾಧ್ಯವಿಲ್ಲ. ಅದೇನಿದ್ದರೂ ನಗರಪಾಲಿಕೆ ಸದಸ್ಯರು ಮಾತ್ರ ಮಾಡಿಸಲು ಸಾಧ್ಯ. ಆದರೆ ಚುನಾವಣೆ ನಡೆಸದೆ ಜನಪ್ರತಿಧಿಗಳು ಇಲ್ಲದಿದ್ದರೆ ಜನರ ಸಮಸ್ಯೆ ಪರಿಹಾರ ಮಾಡುವುದು ಹೇಗೆ. ಇದನ್ನು ಅರಿತು ಸರ್ಕಾರ ಕೂಡಲೇ ನಗರ ಪಾಲಿಕೆಗೆ ಚುನಾವಣೆ ನಡೆಸಬೇಕು.

- **ಸುನಂದಾ ಪಾಲನೇತ್ರ,** ಮಾಜಿ ಮೇಯರ್, ಮೈಸೂರು ನಗರಪಾಲಿಕೆ

ಕೆಂಪೇಗೌಡರ ಚಿತ್ರವುಳ್ಳ ಫಲಕ ಮುರಿದು ಹಾಕಿದ ದುಷ್ಕರ್ಮಿಗಳು

ಗ್ರಾಮಸ್ಥರ ಖಂಡನೆ; ಪ್ರತಿಭಟನೆ



ಮೈಸೂರು ತಾಲೂಕು ಹಂಚ್ಯಾ ಗ್ರಾಮದಲ್ಲಿ ಕೆಂಪೇಗೌಡರ ವೃತ್ತ ನಾಮಫಲಕ ಮುರಿದಿರುವುದನ್ನು ಖಂಡಿಸಿ ಗುರುವಾರ ಮೇಣದಬತ್ತಿ ಹೊತ್ತಿಸಿ, ಮೌನ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಜು.3– ತಾಲೂಕಿನ ಹಂಚ್ಯಾ ಗ್ರಾಮದಲ್ಲಿ ಕೆಂಪೇಗೌಡರ ನಾಮ ಫಲಕ ಮುರಿದಿರುವುದನ್ನು ಖಂಡಿಸಿ, ಕೆಂಪೇಗೌಡ ಯುವಶಕ್ತಿ ವೇದಿಕೆಯಿಂದ ಗುರುವಾರ ಕಪ್ಪುಪಟ್ಟಿ ಧರಿಸಿ, ಮೇಣದಬತ್ತಿ ಹಚ್ಚಿ ಮೌನ ಪ್ರತಿಭಟನೆ ನಡೆಸಲಾಯಿತು.

ಮೈಸೂರು ನಗರಪಾಲಿಕೆ ಮಾಜಿ ಸದಸ್ಯ ಹಾಗೂ ಕೆಂಪೇಗೌಡ ಜಯಂತ್ಯುತ್ಸವ ಸಮಿತಿ ಅಧ್ಯಕ್ಷ ಪ್ರಶಾಂತ್ ಗೌಡ, ಕರ್ನಾಟಕ ಕಾವಲು ಪಡೆಯ ಮೋಹನ್ ಕುಮಾರಗೌಡ, ಜಿಲ್ಲಾ ಒಕ್ಕಲಿಗ ಸಂಘದ ಪ್ರಧಾನ ಕಾರ್ಯದರ್ಶಿ ಚೇತನ್, ನಿರ್ದೇಶಕ ಎ.ರವಿ, ಮೈಸೂರು ತಾಲೂಕು ಒಕ್ಕಲಿಗ ಸಂಘದ ಅಧ್ಯಕ್ಷ ಕೃಷ್ಣೇಗೌಡ, ನೇಗಿಲಯೋಗಿ ರವಿಕುಮಾರ್, ಬೆಳವಾಡಿ ಶ್ರೀನಿವಾಸ್, ಆಲನಹಳ್ಳಿ ಶಂಕರ್, ಕಾಂಗ್ರೆಸ್ ಮುಖಂಡ ಕೆ.ಎಸ್.ಸಣ್ಣ ಸ್ವಾಮಿ, ಗ್ರಾಮದ ಮುಖಂಡರಾದ ವಿ.ವೆಂಕಟೇಶ್, ಮಹದೇವು, ಶ್ರೀನಿವಾಸ್, ಕೆಂಪೇಗೌಡರ ಯುವಶಕ್ತಿ ವೇದಿಕೆ ರಾಜ್ಯ ಉಪಾಧ್ಯಕ್ಷ ಸ್ವಾಮಿ, ಬೋರೇಗೌಡ, ಚಾಮುಂಡಿ, ನಾಗಣ್ಣ, ಮರಿಯಪ್ಪನ ಸಿದ್ದರಾಜು, ಗವಿ ಸಿದ್ದೇಗೌಡ ಇನ್ನಿತರರು ಭಾಗವಹಿಸಿದ್ದರು.

ಇದಕ್ಕೂ ಮುನ್ನ ಒಕ್ಕಲಿಗರ ಶ್ರೀರಾಮ ಮಂದಿರದ ಆವರಣದಲ್ಲಿ ನಡೆದ ಸಭೆಯಲ್ಲಿ ಘಟನೆಯನ್ನು ಖಂಡಿಸಿ, ವೃತ್ತದಲ್ಲಿ ಅಳವಡಿಸಿದ್ದ ಫಲಕ ಮುರಿದ ಕಿಡಿಗೇಡಿಗಳ ವಿರುದ್ಧ ಪೊಲೀಸರು ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಲಾಯಿತು. ಅಲ್ಲದೆ ಇದೇ ಸ್ಥಳದಲ್ಲಿ ಮುಂದಿನ ದಿನಗಳಲ್ಲಿ ಕೆಂಪೇಗೌಡರ ಪ್ರತಿಮೆ ನಿರ್ಮಿಸಿ, ಇಂತಹ ಘಟನೆ ಮರುಕಳಿಸದಂತೆ ಜನಜಾಗೃತಿ ಕೈಗೊಳ್ಳಲು ನಿರ್ಧರಿಸಲಾಯಿತು.

ಎಫ್‌ಐಆರ್ ದಾಖಲು: ಗ್ರಾಮದ ಕೆಂಪೇಗೌಡ ವೃತ್ತದಲ್ಲಿ ಕಳೆದ ಏಳು ವರ್ಷದ ಹಿಂದೆ ಕೆಂಪೇಗೌಡರ ಭಾವಚಿತ್ರವುಳ್ಳ ಫಲಕ ನೆಡಲಾಗಿತ್ತು. ರಸ್ತೆಯ ಅಗಲೀಕರಣ ಸಮಯದಲ್ಲಿ ತಾತ್ಕಾಲಿಕವಾಗಿ ತೆರವು ಮಾಡಿ, ಕಾಮಗಾರಿ ಪೂರ್ಣಗೊಂಡ ಬಳಿಕ ಮತ್ತೆ ಬೋರ್ಡ್ ನೆಡಲಾಗಿತ್ತು. ಆದರೆ ಜು.1ರಂದು ತಡರಾತ್ರಿ ಕಂಬವನ್ನು ಯಾರೋ ದುಷ್ಕರ್ಮಿಗಳು ಮುರಿದು ಹಾಕಿ ಸಮುದಾಯದ ಭಾವನೆಗೆ ಧಕ್ಕೆ ತಂದಿದ್ದಾರೆ. ಫಲಕ ಹಾಕುವಾಗ ವಿರೋಧ ವ್ಯಕ್ತಪಡಿಸಿದ್ದ ಗ್ರಾಮದ ಮೂವರ ಬಗ್ಗೆ ಅನುಮಾನ ವಿದೆ ಎಂದು ಮೈಸೂರು ದಕ್ಷಿಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ನೋಟ್‌ಬುಕ್ ವಿತರಣೆ



ಮೈಸೂರು ನಗರ(ಜಿಲ್ಲಾ) ಕನ್ನಡ ಪರ ಸಂಘಟನೆಯ ನಾಗರಿಕ ಹಿತರಕ್ಷಣಾ ವೇದಿಕೆ ವತಿಯಿಂದ ಎನ್.ಆರ್.ಮೊಹಲ್ಲಾ 3ನೇ ಇನ್‌ಫೆಂಟ್ರಿ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆ ಮಕ್ಕಳಿಗೆ ನೋಟ್‌ಬುಕ್ ವಿತರಿಸಲಾಯಿತು. ವೇದಿಕೆ ಅಧ್ಯಕ್ಷ ಮಂಜುನಾಥ್(ಮಿಲ್ಕ್ ಮಂಜು), ಖ್ಯಾತ ವೈದ್ಯ ಡಾ.ರಾಜೇಂದ್ರ ಡಾ.ರಾಜ್ ಸಂಘದ ಅಧ್ಯಕ್ಷ ಎಂ.ರಾಮೇಗೌಡ, ಪ್ರಧಾನ ಕಾರ್ಯದರ್ಶಿ ಮೋಹನ್‌ಕುಮಾರ್, ಬಾಲಕೃಷ್ಣಗೌಡ, ಯೋಗೇಶ್, ಕಾರ್ಯದರ್ಶಿ ಸರ್ದಾರ್ ಮಹೇಶ್, ಮಂಜುನಾಥ್, ಮಹಮ್ಮದ್, ರಂಗಪ್ಪಗೌಡ ಮತ್ತಿತರರು ಉಪಸ್ಥಿತರಿದ್ದರು.

ಒಲಿಂಪಿಕ್ಸ್ ಪದಕ ವಿಜೇತ ನೀರಜ್ ಚೋಪ್ರಾ ಸನ್ಮಾನಿಸಿದ ಸಿಎಂ



ಬೆಂಗಳೂರು, ಜು.3– ಸತತ 2 ಬಾರಿ ಒಲಿಂಪಿಕ್ಸ್‌ನಲ್ಲಿ ಪದಕ ವಿಜೇತ, ವಿಶ್ವದ ನಂ.1 ಜಾವೆಲಿನ್ ಪಟು ನೀರಜ್ ಚೋಪ್ರಾ ಅವರು ಬೆಂಗಳೂರಿನಲ್ಲಿದ್ದು, ಇಂದು ಮುಖ್ಯ ಮಂತ್ರಿಗಳ ಅಧಿಕೃತ ನಿವಾಸ ಕಾವೇರಿಗೆ ಭೇಟಿ ನೀಡಿದ್ದರು.

ಸಿಎಂ ಸಿದ್ದರಾಮಯ್ಯ ಅವರನ್ನು ಸೌಹಾರ್ದಯುತವಾಗಿ ಭೇಟಿ ಮಾಡಿ ಮಾತುಕತೆ ನಡೆಸಿದರು. ಇದೇ ವೇಳೆ ನೀರಜ್ ಚೋಪ್ರಾ ಅವರಿಗೆ ಹಾರ ಹಾಕಿ, ಶಾಲು ಹೊದಿಸಿ ಮುಖ್ಯಮಂತ್ರಿಗಳು ಸನ್ಮಾನಿಸಿದರು. ಜೊತೆಗೆ ನಮ್ಮ ದೇಶಕ್ಕೆ ಇನ್ನಷ್ಟು ಪದಕಗಳನ್ನು ಗೆದ್ದು ತರುವಂತೆ ಶುಭ ಹಾರೈಸಿದರು.

ಈ ವೇಳೆ ಒಲಂಪಿಕ್ ಅಸೋಸಿಯೇಷನ್ ಅಧ್ಯಕ್ಷರೂ ಆದ ವಿಧಾನ ಪರಿಷತ್ ಸದಸ್ಯ ಗೋವಿಂದರಾಜು ಅವರು ಉಪಸ್ಥಿತರಿದ್ದರು. ಜುಲೈ 5ರಂದು ಕಂಠೀರವ ಕ್ರೀಡಾಂಗಣದಲ್ಲಿ ನಡೆಯಲಿರುವ ಕ್ಲಾಸಿಕ್ ಜಾವೆಲಿನ್ ಸ್ಪರ್ಧೆಯಲ್ಲಿ ನೀರಜ್ ಚೋಪ್ರಾ ಭಾಗವಹಿಸಲಿದ್ದಾರೆ.

ಮೈಸೂರು, ಹಾಸನ, ಚಾ.ನಗರ, ಮಂಡ್ಯ ಸೇರಿ 21 ಜಿಲ್ಲಾ ಡಿಸಿಸಿ ಅಧ್ಯಕ್ಷರ ಬದಲಾವಣೆ ಪ್ರಕ್ರಿಯೆ ಆರಂಭ

ವೀಕ್ಷಕರ ನೇಮಿಸಿದ ಕೆಪಿಸಿಸಿ

ಮೈಸೂರು, ಜು.3– ಮೈಸೂರು ಸೇರಿದಂತೆ 21 ಜಿಲ್ಲೆಗಳ ಡಿಸಿಸಿ ಅಧ್ಯಕ್ಷರ ಬದಲಾವಣೆಗೆ ಕಾಂಗ್ರೆಸ್ ಮುಂದಾಗಿದ್ದು, ಈ ನಿಟ್ಟಿನಲ್ಲಿ ವೀಕ್ಷಕರನ್ನು ನೇಮಿಸಲಾಗಿದೆ.

ಮೈಸೂರು ನಗರ ಮತ್ತು ಗ್ರಾಮಾಂತರ ಅಧ್ಯಕ್ಷ ಸ್ಥಾನಕ್ಕೆ ಹೆಸರು ಸೂಚಿಸಲು ಕೆಪಿಸಿಸಿ ಉಪಾಧ್ಯಕ್ಷರಾದ ಮಾಜಿ ಸಚಿವ ರಮಾನಾಥ ರೈ, ವಿಧಾನಪರಿಷತ್ ಸದಸ್ಯರಾದ ಐವನ್ ಡಿಸೋಜ ಹಾಗೂ ಶ್ರೀಮತಿ ಬಲ್ಕೀಶ್ ಭಾನು ಅವರನ್ನು ನೇಮಿಸಲಾಗಿದೆ. ಮಂಡ್ಯಕ್ಕೆ ವಿಧಾನ ಪರಿಷತ್ ಸದಸ್ಯ ಎಸ್.ರವಿ, ಐವೈಸಿ ಮಾಜಿ ಅಧ್ಯಕ್ಷ ಬಿ.ವಿ.ಶ್ರೀನಿವಾಸ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಡಾ.ಡಿಎಲ್.ವಿಜಯ್ ಕುಮಾರ್, ಚಾಮರಾಜನಗರಕ್ಕೆ ಮಾಜಿ ಸಚಿವ ಶಿವಶಂಕರ ರೆಡ್ಡಿ ಹಾಗೂ ಮಾಜಿ ಶಾಸಕ ಎನ್.ಸಂಪಂಗಿ, ಹಾಸನ ಜಿಲ್ಲೆಗೆ ಕೆಪಿಸಿಸಿ ಉಪಾಧ್ಯಕ್ಷ ವಿ.ಆರ್.ಸುದರ್ಶನ್, ಎಐಸಿಸಿ ಕಾರ್ಯದರ್ಶಿ ಸೂರಜ್ ಹೆಗ್ಡೆ ಹಾಗೂ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಆರ್.ಮಂಜುನಾಥ್ ಸೇರಿದಂತೆ ಒಟ್ಟು 21 ಜಿಲ್ಲೆಗಳಿಗೆ ವೀಕ್ಷಕರನ್ನು ನೇಮಿಸಿ, ಕೆಪಿಸಿಸಿ ಅಧ್ಯಕ್ಷರೂ ಆದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಗುರುವಾರ ಆದೇಶಿಸಿದ್ದಾರೆ.

ಎಐಸಿಸಿ ಸೂಚನೆ ಮೇರೆಗೆ ಒಂದು ಅಥವಾ ಒಂದಕ್ಕಿಂತ ಹೆಚ್ಚು ಅವಧಿಗೆ ಡಿಸಿಸಿ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿರುವವರನ್ನು ಬದಲಾವಣೆ ಮಾಡುವ ಹಿನ್ನೆಲೆಯಲ್ಲಿ ಹಿರಿಯ ಮುಖಂಡರನ್ನು ವೀಕ್ಷಕರನ್ನಾಗಿ ನೇಮಕ ಮಾಡಲಾಗಿದೆ. ವೀಕ್ಷಕರು ಕೂಡಲೇ ಎಲ್ಲಾ ಹಂತದ ಮುಖಂಡರ ಸಭೆ ನಡೆಸಿ, ಆಯಾಯ ಜಿಲ್ಲೆಗಳಲ್ಲಿ ಪಕ್ಷ ಸಂಘಟನೆ ಸ್ಥಿತಿಗತಿ ಅವಲೋಕಿಸಬೇಕು. ಅದೇ ವೇಳೆ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರ ನೇಮಕ ಮಾಡಲು ಒಮ್ಮತದ ವ್ಯಕ್ತಿಯ ಹೆಸರು ಶಿಫಾರಸು ಮಾಡಲು ಚರ್ಚೆ ನಡೆಸಬೇಕು.

ಜಿಲ್ಲಾ ಮಟ್ಟದಲ್ಲಿ ಸಕ್ರಿಯವಾಗಿ ಪಕ್ಷದಲ್ಲಿ ಗುರುತಿಸಿಕೊಂಡಿರುವ, ಸಂಘಟನಾ ಸಾಮರ್ಥ್ಯ, ಪಕ್ಷದ ಹಿರಿತನ, ಪ್ರಾಮಾಣಿಕತೆ, ಪಕ್ಷನಿಷ್ಠೆ ಕಾರ್ಯ ನಿರ್ವಹಿಸುತ್ತಿರುವ ಎರಡು ಅಥವಾ ಮೂರು ವ್ಯಕ್ತಿಗಳ ಹೆಸರನ್ನು ಆದ್ಯತೆ ಮೇರೆಗೆ ಪಟ್ಟಿ ಮಾಡಿ, ಮುಚ್ಚಿದ ಲಕೋಟೆಯಲ್ಲಿ ಕೆಪಿಸಿಸಿ ಅಧ್ಯಕ್ಷರಿಗೆ ಗೌಪ್ಯವಾಗಿ ಸಲ್ಲಿಸುವಂತೆ ಸೂಚಿಸಲಾಗಿದೆ.

ಇಂಗ್ಲೆಂಡ್ ವಿರುದ್ಧ 2ನೇ ಟೆಸ್ಟ್

46 ವರ್ಷಗಳ ಹಳೆಯ ದಾಖಲೆ ಸೇರಿ ನಾಲ್ವರು ಕ್ರಿಕೆಟ್ ದಿಗ್ಗಜರ ದಾಖಲೆ ಮುರಿದ ಶುಭ್‌ಮನ್ ಗಿಲ್

ಬರ್ಮಿಂಗ್ ಹ್ಯಾಮ್, ಜು.3– ಇಂಗ್ಲೆಂಡ್ ವಿರುದ್ಧದ 2ನೇ ಟೆಸ್ಟ್ ಪಂದ್ಯದಲ್ಲಿ ಭಾರತ ತಂಡದ ನಾಯಕ ಶುಭ್‌ಮನ್ ಗಿಲ್ ಬ್ಯಾಟಿಂಗ್ ಅಬ್ಬರ ಮುಂದುವರೆದಿದ್ದು, ಮೊದಲ ಇನ್ನಿಂಗ್ಸ್‌ನಲ್ಲಿ ದಾಖಲೆಯ ದ್ವಿಶತಕ ಸಿಡಿಸಿ ಹಲವು ಕ್ರಿಕೆಟ್ ದಿಗ್ಗಜರ ದಾಖಲೆಗಳ ಹಿಂದಿಕ್ಕಿದ್ದಾರೆ.

ಬರ್ಮಿಂಗ್‌ಹ್ಯಾಮ್‌ನ ಎಡ್ಜ್‌ಬ್ಯಾಸ್ಟನ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ 2ನೇ ಟೆಸ್ಟ್ ಪಂದ್ಯದ 2ನೇ ದಿನದಾಟದಲ್ಲಿ ಭಾರತ 587 ರನ್ ಗಳಿಸುವ ಮೂಲಕ ಸರ್ವಪತನ ಕಂಡಿತು. ಭಾರತದ ಪರ ನಾಯಕ ಶುಭ್‌ಮನ್ ಗಿಲ್ ದ್ವಿಶತಕ (269) ಸಿಡಿಸಿದ್ದಾರೆ.

ದ್ವಿಶತಕ ಸಿಡಿಸಿದ 2ನೇ ಕಿರಿಯ ಭಾರತೀಯ ಆಟಗಾರ: ಇಂಗ್ಲೆಂಡ್ ವಿರುದ್ಧ ದ್ವಿಶತಕ ಸಿಡಿಸಿದ ಭಾರತದ 2ನೇ ಕಿರಿಯ ಆಟಗಾರ ಎಂಬ ಕೀರ್ತಿಗೆ ಗಿಲ್ ಪಾತ್ರರಾಗಿದ್ದಾರೆ. ಗಿಲ್ ಈ ಸಾಧನೆ ಮಾಡುವ ವೇಳೆಗೆ ಅವರ ವಯಸ್ಸು 25 ವರ್ಷ 298 ದಿನಗಳಾಗಿವೆ. ಇದಕ್ಕೂ ಮೊದಲು 1964ರಲ್ಲಿ ದೆಹಲಿಯಲ್ಲಿ ಪಟೌಡಿ (23 ವರ್ಷ 39 ದಿನ) ದ್ವಿಶತಕ ಸಿಡಿಸಿದ ಭಾರತದ ಅತ್ಯಂತ ಕಿರಿಯ ಆಟಗಾರ ಎನಿಸಿಕೊಂಡಿದ್ದಾರೆ. ಈ ಪಟ್ಟಿಯಲ್ಲಿ ಸಚಿನ್ ತೆಂಡೂಲ್ಕರ್ 3ನೇ ಸ್ಥಾನ, ವಿರಾಟ್ ಕೊಹ್ಲಿ 4ನೇ ಸ್ಥಾನದಲ್ಲಿದ್ದಾರೆ.

46 ವರ್ಷಗಳ ಹಳೆಯ ದಾಖಲೆ ಪತನ: ಶುಭಮನ್ ಗಿಲ್ ಇಂಗ್ಲೆಂಡ್‌ನಲ್ಲಿ ದ್ವಿಶತಕ ಬಾರಿಸಿದ ಮೊದಲ ಭಾರತೀಯ ನಾಯಕರಾದರು. ಆ ಮೂಲಕ ಭಾರತದ ಕ್ರಿಕೆಟ್ ದಂತಕಥೆ ಸುನಿಲ್ ಗವಾಸ್ಕರ್ ಅವರ 46 ವರ್ಷಗಳ ಹಳೆಯ ದಾಖಲೆ ಮುರಿದರು. 1979 ರಲ್ಲಿ ದಿ ಓವಲ್ ಕ್ರೀಡಾಂಗಣದಲ್ಲಿ ಸುನಿಲ್ ಗವಾಸ್ಕರ್ 221 ರನ್ ಗಳಿಸಿದ್ದರು.

ಕ್ರಿಕೆಟ್ ದಿಗ್ಗಜರ ದಾಖಲೆ ಬ್ರೇಕ್: ಇದೇ ವೇಳೆ ಗಿಲ್ ಇಂಗ್ಲೆಂಡ್ ನೆಲದಲ್ಲಿ ಟೆಸ್ಟ್ ಪಂದ್ಯವೊಂದರಲ್ಲಿ ಗರಿಷ್ಠ ರನ್ ಕಲೆ ಹಾಕಿ ಭಾರತದ ಕ್ರಿಕೆಟ್ ದಿಗ್ಗಜರ ದಾಖಲೆಗಳನ್ನು ಬ್ರೇಕ್ ಮಾಡಿದ್ದಾರೆ. ಈ ಹಿಂದೆ 2002ರಲ್ಲಿ ದಿ ವಾಲ್ ಖ್ಯಾತಿಯ ರಾಹುಲ್ ದ್ರಾವಿಡ್ (217), 1979ರಲ್ಲಿ ಸುನಿಲ್ ಗವಾಸ್ಕರ್ (221 ರನ್) 2004ರಲ್ಲಿ ಸಚಿನ್ ತೆಂಡೂಲ್ಕರ್ (241) ದಾಖಲೆಗಳನ್ನು ಹಿಂದಿಕ್ಕಿದ್ದಾರೆ.



ಗಿಲ್ ದ್ವಿಶತಕ: ಭಾರತ 587 ರನ್‌ಗೆ ಆಲೌಟ್

ಎಡ್ಜ್‌ಬಾಸ್ಟನ್, ಜು.3– ನಾಯಕ ಶುಭ್‌ಮನ್ ಗಿಲ್ ಅವರ ಆಕರ್ಷಕ ದ್ವಿಶತಕದ ನೆರವಿನಿಂದ ಭಾರತ ಇಂಗ್ಲೆಂಡ್ ವಿರುದ್ಧದ 2ನೇ ಟೆಸ್ಟ್ ಪಂದ್ಯದ ಮೊದಲ ಇನ್ನಿಂಗ್ಸ್‌ನಲ್ಲಿ 151 ಓವರ್‌ಗಳಲ್ಲಿ ಆಲೌಟಾಗುವ ಮೂಲಕ 587 ರನ್‌ಗಳ ಬೃಹತ್ ಮೊತ್ತ ದಾಖಲಿಸಿದೆ. 310 ರನ್‌ಗಳಿಂದ 2ನೇ ದಿನದಾಟ ಆರಂಭಿಸಿದ ಭಾರತದ ಪರ ದಿಟ್ಟ ಬ್ಯಾಟಿಂಗ್ ಪ್ರದರ್ಶನ ನೀಡಿದ ಶುಭಮನ್‌ಗಿಲ್ 30 ಬೌಂಡರಿ, 3 ಸಿಕ್ಸರ್ ಒಳಗೊಂಡ 269 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಇವರಿಗೆ ಉತ್ತಮ ಸಾಥ್ ನೀಡಿದ ರವೀಂದ್ರ ಜಡೇಜಾ 89, ವಾಷಿಂಗ್‌ಟನ್ ಸುಂದರ್ 42 ರನ್ ಗಳಿಸಿದರು. ಇಂಗ್ಲೆಂಡ್ ಪರ ಶೋಯೆಬ್ ಬಷೀರ್ 3, ಜೋಶ್ ಟಂಗ್, ಕ್ರಿಸ್ ವೋಕ್ಸ್ ತಲಾ 2, ಬ್ರೈಡನ್ ಕಾರ್ಸೆ, ಜೋ ರೂಟ್, ಬೆನ್ ಸ್ಟೋಕ್ಸ್ ತಲಾ ಒಂದೊಂದು ವಿಕೆಟ್ ಉರುಳಿಸಿದರು. ಬಳಿಕ ಮೊದಲ ಇನ್ನಿಂಗ್ಸ್ ಆರಂಭಿಸಿರುವ ಇಂಗ್ಲೆಂಡ್ 2ನೇ ದಿನದಂತ್ಯಕ್ಕೆ 20 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ 77 ರನ್‌ಗಳಿಸಿದ್ದು, 510 ರನ್‌ಗಳ ಹಿನ್ನಡೆಯಲ್ಲಿದೆ. ಆಂಗ್ಲರ ಪರ ಜೋ ರೂಟ್ 18, ಹ್ಯಾರಿ ಬ್ರೂಕ್ 30 ರನ್ ಗಳಿಸಿ ಅಜೇಯರಾಗಿ ಉಳಿಯುವ ಮೂಲಕ 3ನೇ ದಿನಕ್ಕೆ ಬ್ಯಾಟಿಂಗ್ ಕಾಯ್ದುಕೊಂಡಿದ್ದಾರೆ.

ಆನ್‌ಲೈನ್ ಕೆಲಸದ ಆಮಿಷಕ್ಕೆ ಬಲಿಯಾಗಿ 10.68 ಲಕ್ಷ ಕಳೆದುಕೊಂಡ ಮಹಿಳೆ!



ಮೈಸೂರು, ಜು.3– ಆನ್‌ಲೈನ್ ಕೆಲಸದಿಂದ ಹೆಚ್ಚು ಹಣ ಸಂಪಾದಿಸಬಹುದು ಎಂದು ನಂಬಿಸಿ, ಮಹಿಳೆಯೊಬ್ಬರಿಂದ 10.68 ಲಕ್ಷ ರೂ. ವರ್ಗಾವಣೆ ಮಾಡಿಸಿಕೊಂಡು ವಂಚಿಸಿರುವ ಬಗ್ಗೆ ಮೈಸೂರಿನ ಸೆನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನಗರದ ದಟ್ಟಗಳ್ಳಿಯ 59 ವರ್ಷದ ಮಹಿಳೆ, ಫೇಸ್‌ಬುಕ್‌ನಲ್ಲಿ ಆನ್‌ಲೈನ್ ಜಾಬ್ ಬಗ್ಗೆ ಜಾಹೀರಾತು ನೋಡಿ ಅಲ್ಲಿದ್ದ ಮೊಬೈಲ್ ನಂಬರ್‌ಗೆ ಕರೆ ಮಾಡಿದ್ದಾರೆ. ನಂತರ ಇವರೊಂದಿಗೆ ವಾಟ್ಸಾಪ್‌ನಲ್ಲಿ ಸಂಪರ್ಕದಲ್ಲಿದ್ದ ವಂಚಕರು, ಪಾರ್ಸೆಲ್ ಕಳುಹಿಸಿರುವ ಕಾರ್ಡ್ ಅನ್ನು ಸ್ವೀಕರಿಸಿದ ನಂತರ ಕೆಲಸ ನೀಡುವುದಾಗಿ ತಿಳಿಸಿದ್ದಾರೆ. ಅಲ್ಲದೆ ಆ ಪಾರ್ಸೆಲ್ ಪಡೆಯಲು ಹಣ ಪಾವತಿಸಬೇಕೆಂದು ಹೇಳಿದ್ದರು. ಇದನ್ನು ನಂಬಿದ ಮಹಿಳೆ ತಮ್ಮ ಎರಡು ಬ್ಯಾಂಕ್ ಖಾತೆಗಳಿಂದ ಹಣ ವರ್ಗಾವಣೆ ಮಾಡಿ, ವಂಚನೆಗೆ ಒಳಗಾಗಿದ್ದಾರೆ.

ಸ್ವಚ್ಛನಗರಿ ಮೈಸೂರು ಮಧ್ಯೆ ಇದೆ ತಿಪ್ಪೆಗುಂಡಿ; ಕೊಳೆತ ಕಸದಿಂದ ಹೊರಸೂಸುವ ದುರ್ವಾಸನೆಗೆ ಜನ ತತ್ತರ

● ಹಳೆ ಆರ್‌ಎಂಸಿ ಆವರಣದಲ್ಲಿ ಕಸದ್ದೇ ಕಾರುಬಾರು ● ಅಧಿಕಾರಿಗಳಿಗೆ ಎಷ್ಟೇ ದೂರಿತ್ತರು ಡೋಂಟ್‌ಕೇರು!





ಬಂಬೂಬಜಾರ್‌ನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಹಣ್ಣುಗಳ ಸಗಟು ಮಾರುಕಟ್ಟೆಯಲ್ಲಿ ವಿಲೇವಾರಿಯಾಗದೆ ಬಿದ್ದಿರುವ ಕೊಳೆತ ಕಸದ ರಾಶಿ ಹಾಗೂ ದೊಡ್ಡ ಮೋರಿ ಮುಚ್ಚುವ ಕಾಮಗಾರಿ ಅಪೂರ್ಣಗೊಂಡಿರುವುದನ್ನು ಕಾಣಬಹುದು.

ಮೈಸೂರು, ಜು.3(ಎಂಕೆ)– ಮೈಸೂರು ಬಂಬೂಬಜಾರ್‌ನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ(ಎಪಿಎಂಸಿ)ಯ ಹಣ್ಣುಗಳ ಸಗಟು ಮಾರುಕಟ್ಟೆಯಲ್ಲಿ ವಿಲೇವಾರಿಯಾಗದ ಭಾರಿ ಪ್ರಮಾಣದ ಕೊಳೆತ ಕಸ..!

ನಿತ್ಯ ಸಾವಿರಾರು ಮಂದಿ ಭೇಟಿ ನೀಡುವ ಎಂಪಿಎಂಸಿ ಹಣ್ಣುಗಳ ಸಗಟು ಮಾರುಕಟ್ಟೆಯ ಕಸ ವಿಲೇವಾರಿಯಲ್ಲಿ ಅಧಿಕಾರಿ ಮತ್ತು ಗುತ್ತಿಗೆದಾರರ ತೀವ್ರ ನಿರ್ಲಕ್ಷ್ಯತೆಯಿಂದಾಗಿ ರಾಶಿ ರಾಶಿ ಕೊಳೆತ ಹಣ್ಣುಗಳ ಕಸ ಬಿದ್ದಲ್ಲೇ ಬಿದ್ದಿದ್ದು, ದುರ್ವಾಸನೆ ಜೊತೆಗೆ ನೊಣಗಳ ಹಾವಳಿ ವ್ಯಾಪಾರಸ್ಥರನ್ನು ಅಕ್ಷರಶಃ ಕಂಗೆಡಿಸಿದೆ.

ವಿಲೇವಾರಿಯಾಗದೆ ಸಾಂಕ್ರಾಮಿಕ ರೋಗ ಹರಡುವ ಭೀತಿ ಹೆಚ್ಚಾಗುತ್ತಿದೆ. ಕೂಡಲೇ ಕಸ ವಿಲೇವಾರಿ ಮಾಡುವಂತೆ 'ಮೈಸೂರು ಮಿತ್ರ'ನಲ್ಲಿ ಎಚ್ಚರಿಸಿದ್ದರೂ ಎಚ್ಚೆತ್ತುಕೊಳ್ಳದ ಎಂಪಿಎಂಸಿ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ನಿರ್ಲಕ್ಷ್ಯತೆ ತೋರಿದ್ದಾರೆ. ಸುದ್ದಿ ಪ್ರಕಟಗೊಂಡ ಆರಂಭದಲ್ಲಿ ಕಸ ವಿಲೇವಾರಿ ಕೆಲಸ ಚುರುಕುಗೊಳಿಸಿದ್ದು, ಮಾರುಕಟ್ಟೆಯಲ್ಲಿ ಶುಚಿತ್ವ ಕಾಪಾಡುವುದಾಗಿ ತಿಳಿಸಿದ್ದ ಗುತ್ತಿಗೆದಾರರು, ಮತ್ತದೇ ಚಾಳಿ ಮುಂದುವರೆಸಿದ್ದು, ತಿಂಗಳಿಂದಲೂ ವಿಲೇವಾರಿಯಾಗದ ಕಸದ ರಾಶಿ ಇನ್ನೂ ಅಲ್ಲೇ ಕೊಳೆಯುತ್ತಾ ಬಿದ್ದಿದೆ.

ಮಾರುಕಟ್ಟೆಯ ಮುಖ್ಯ ದ್ವಾರದಲ್ಲಿಯೇ ಲಾರಿ ಲೋಡ್‌ನಷ್ಟು ಕೊಳೆತ ಕಸ ಬಿದ್ದಿದ್ದು, ಹಿಂಡಿಂಡೂ ನೊಣಗಳು ಗುಂಯ್ ಗುಟ್ಟುತ್ತಿವೆ. ಅಲ್ಲದೇ ವಿಪರೀತ ಸೊಳ್ಳೆ ಕಾಟದಿಂದಾಗಿ ಮಳಿಗೆದಾರರು ವ್ಯಾಪಾರ–ವಹಿವಾಟು ನಡೆಸಲಾಗದೆ ಪರದಾಡುವಂತಾಗಿದೆ. ದುರ್ವಾಸನೆಯಿಂದಾಗಿ ಉಸಿರಾಡುವುದಕ್ಕೂ ಕಷ್ಟಪಡುವ ದುಸ್ಥಿತಿ ನಿರ್ಮಾಣವಾಗಿದೆ.

ಸಿಬ್ಬಂದಿ ಕೊರತೆ: ವಿಶಾಲ ಬಂಬೂ ಬಜಾರ್‌ನ ಎಂಪಿಎಂಸಿ ಮಾರುಕಟ್ಟೆಯಲ್ಲಿ ಒಂದು ಕಡೆಯಿಂದ ಕಸ ವಿಲೇವಾರಿ ಮಾಡಿದರೆ, ಹಿಂದೆಯಿಂದ ಮತ್ತದೇ ಸ್ಥಿತಿಗೆ ಬಂದಿರುತ್ತದೆ. ಇರುವ 7 ಮಂದಿ ಸ್ವಚ್ಛತಾ ಸಿಬ್ಬಂದಿಯಿಂದ ಇಡೀ ಮಾರುಕಟ್ಟೆಯ ಶುಚಿತ್ವ ಕಾಪಾಡಲು ಸಾಧ್ಯವಾಗುತ್ತಿಲ್ಲ. ಅದರಲ್ಲಿ ಇಬ್ಬರು ಮಹಿಳೆಯರು ಕಸ ಗುಡಿಸಿ ಗುಡ್ಡೆ ಮಾಡಿದರೆ, ಉಳಿದ ಐವರು ಟ್ರ್ಯಾಕ್ಟರ್ ಲೋಡ್ ಮಾಡಿ ಬೇರೆ ಸ್ಥಳಕ್ಕೆ ಕಸ ವಿಲೇವಾರಿ ಮಾಡುತ್ತಿದ್ದಾರೆ ಎಂದು ಮಳಿಗೆದಾರರು 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಒಂದು ಟ್ರ್ಯಾಕ್ಟರ್ ಸಾಲದು: ಮಾರುಕಟ್ಟೆ ಕಸ ವಿಲೇವಾರಿ ಒಂದು ಟ್ರ್ಯಾಕ್ಟರ್ ಬಳಕೆ ಮಾಡುತ್ತಿದ್ದು, ಅದು ಕೂಡ ಚಿಕ್ಕದಾಗಿದೆ. ಮಾರುಕಟ್ಟೆಯಲ್ಲಿ ಉತ್ಪತ್ತಿಯಾಗುವ ಕಸ ವಿಲೇವಾರಿಗೆ ಲಾರಿ ಅಗತ್ಯವಿದೆ. ಟ್ರ್ಯಾಕ್ಟರ್‌ನಲ್ಲಿ ಒಂದೆರಡು ಟ್ರಿಪ್ ಅಷ್ಟೇ ವಿಲೇವಾರಿ ಮಾಡಲು ಸಾಧ್ಯ. ಲಾರಿ ವ್ಯವಸ್ಥೆ ಮಾಡುವ ಅಗತ್ಯವಿದ್ದರೂ ಗುತ್ತಿಗೆದಾರರು ಇರುವ ಹಳೇ ಟ್ರ್ಯಾಕ್ಟರ್‌ನಲ್ಲೇ ಕಸ ವಿಲೇವಾರಿ ಮಾಡಿಸುತ್ತಿರುವುದರಿಂದ ಕೆಲಸ ಸಾಗುತ್ತಿಲ್ಲ ಎಂದು ವಿವರಿಸಿದ್ದಾರೆ.

ಅಧಿಕಾರಿಗಳ ಸ್ಪಂದನೆ ಇಲ್ಲ: ಕಸ ವಿಲೇವಾರಿ ಸೇರಿದಂತೆ ಮಾರುಕಟ್ಟೆಯ ಯಾವುದೇ ವಿಚಾರದಲ್ಲಿ ಅಧಿಕಾರಿಗಳ ಸ್ಪಂದನೆ ಇಲ್ಲ. ಪ್ರತೀ ತಿಂಗಳು ಬಾಡಿಗೆ ಕಟ್ಟುತ್ತಿದ್ದೇವೆ. ಆದರೆ, ಕಸದಲ್ಲಿ ಕಸವಾಗಿ ಬದುಕುತ್ತಿದ್ದೇವೆ. ವ್ಯಾಪಾರ–ವಹಿವಾಟು ಚೆನ್ನಾಗಿದ್ದು, ಹಣ ಸಂಪಾದನೆಯಾದರೂ ಅನಾರೋಗ್ಯದಿಂದ ಸಂಪಾದಿಸುವ ಹಣ ಆಸ್ಪತ್ರೆ ಪಾಲಾಗುತ್ತಿದೆ ಎಂದು ಮಾರುಕಟ್ಟೆಯ ವ್ಯಾಪಾರಸ್ಥರು ಅಳಲು ತೋಡಿಕೊಂಡಿದ್ದಾರೆ.

ಅರ್ಧಂಬರ್ಧ ಕೆಲಸ...!

ಸಗಟು ಮಾರುಕಟ್ಟೆಯೊಳಗೆ ಹಾದುಹೋಗಿರುವ ದೊಡ್ಡ ಮೋರಿಯ ಮುರಿದಿದ್ದ ಸ್ಲ್ಯಾಬ್ ತೆರವುಗೊಳಿಸಿ, ಹೊಸದಾಗಿ ಸ್ಲ್ಯಾಬ್ ಅಳವಡಿಸುವ ಕಾಮಗಾರಿಯೂ ಅರ್ಧಂಬರ್ಧವಾಗಿದೆ. ಹಾಳಾಗಿದ್ದ ಮೋರಿಯ ಸ್ವಲ್ಪ ಭಾಗವಷ್ಟೇ ಸ್ಲ್ಯಾಬ್ ಅಳವಡಿಸಿದ್ದು, ಇನ್ನೂ ಕಾಮಗಾರಿ ಬಾಕಿ ಉಳಿಸಲಾಗಿದೆ. ಮೋರಿ ಸಮೀಪದಲ್ಲೇ ಗೂಡ್ಸ್ ವಾಹನಗಳು ಸಂಚರಿಸಲಿದ್ದು, ಯಾವಾಗ ಬೇಕಾದರೂ ಅನಾಹುತ ಸಂಭವಿಸಬಹುದು.

ನಾಳೆಯೇ ಕಸ ವಿಲೇವಾರಿಗೆ ಸೂಚನೆ...

ಬಂಬೂಬಜಾರ್‌ನ ಎಪಿಎಂಸಿ ಹಣ್ಣುಗಳ ಸಗಟು ಮಾರುಕಟ್ಟೆಯಲ್ಲಿ ಕಸ ವಿಲೇವಾರಿ ವ್ಯವಸ್ಥಿತವಾಗಿ ನಡೆಯುತ್ತಿಲ್ಲ ಎಂಬುದು ಗಮನಕ್ಕೆ ಬಂದಿದ್ದು, ನಾಳೆಯೇ(ಜು.4) ಕಸ ವಿಲೇವಾರಿ ಮಾಡುವಂತೆ ಎಪಿಎಂಸಿ ಅಧಿಕಾರಿಗಳಿಗೆ ಸೂಚಿಸಲಾಗುವುದು. ಸಾರ್ವಜನಿಕರ ಆರೋಗ್ಯ ದೃಷ್ಟಿಯಿಂದ ಕಸ ವಿಲೇವಾರಿ ಮಾಡಬೇಕು. ಈ ಕುರಿತು ಸಂಪೂರ್ಣ ಮಾಹಿತಿ ಪಡೆದು ಮಾರುಕಟ್ಟೆಯಲ್ಲಿ ಶುಚಿತ್ವ ಕಾಪಾಡುವಂತೆ ತಿಳಿಸಲಾಗುವುದು.

- **ಜಿ.ಲಕ್ಷ್ಮಿಕಾಂತ್ ರೆಡ್ಡಿ,** ಜಿಲ್ಲಾಧಿಕಾರಿ

ಮೈಸೂರು ಮಿತ್ರ ಶುಕ್ರವಾರ 4 ಜುಲೈ 2025


ಭಾರತೀನಗರ ಗ್ರಾಪಂಗೆ ಜಿಪಂ ಸಿಇಓ ದಿಢೀರ್ ಭೇಟಿ

ಕುಡಿಯುವ ನೀರಿನ ಘಟಕ, ಯೋಜನೆ ಸೇರಿದಂತೆ ಕಡತಗಳ ಪರಿಶೀಲನೆ

ಭಾರತೀನಗರ, ಜು.3– ಇಲ್ಲಿನ ಗ್ರಾಪಂಗೆ ಜಿಪಂ ಸಿಇಓ ಕೆ.ಆರ್.ನಂದಿನಿ ದಿಢೀರ್ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಗ್ರಾಪಂನ ಎಲ್ಲಾ ಕೊಠಡಿಗಳನ್ನು ಪರಿಶೀಲಿಸಿದ ಜಿಪಂ ಸಿ–ಇಓ ಅವರು ಗ್ರಾಪಂ ಯೋಜನೆಗಳಾದ ಇಸ್ವತ್ತು, ಸಕಾಲ, ತೆರಿಗೆ ವಸೂಲಾತಿ, ನರೇಗಾ, ಎಸ್‌ಬಿಎಂ, ಹೌಸಿಂಗ್ ಸೇರಿದಂತೆ ಇತರೆ ಎಲ್ಲಾ ಯೋಜನೆಗಳನ್ನು ಪರಿಶೀಲಿಸಿದರು. ಬಳಿಕ ಗ್ರಂಥಾಲಯ ಮತ್ತು ಶುದ್ಧ ಕುಡಿಯುವ ನೀರಿನ ಘಟಕಕ್ಕೆ ಭೇಟಿ ನೀಡಿ ಶುದ್ಧ ಕುಡಿಯುವ ನೀರಿನ ಘಟಕ ಉಪಯೋಗವಾಗುತ್ತಿದೆಯೇ ಮತ್ತು ಪಂಚಾಯಿತಿ ಉತ್ತಮವಾಗಿ ನಿರ್ವಹಣೆ ಮಾಡುತ್ತಿದೆಯೇ ಎಂದು ಪ್ರಶ್ನಿಸಿದರು. ಇದಕ್ಕೆ ಉತ್ತರಿಸಿದ ಸಾರ್ವಜನಿಕರು ಉತ್ತಮವಾಗಿ ನಿರ್ವಹಣೆ ಮಾಡುತ್ತಿದೆ ಎಂದರು.

ಗ್ರಾಪಂ ಸಿಬ್ಬಂದಿಗಳು ಇ–ಖಾತಾದಾರರು ಅರ್ಜಿಗಳನ್ನು ಸಲ್ಲಿಸಲು ಬಂದಾಗ ಎಲ್ಲಾ ದಾಖಲಾತಿಗಳನ್ನು ಪರಿಶೀಲಿಸಿ ತೆಗೆದುಕೊಳ್ಳಬೇಕು. ಸೂಕ್ತವಾದ ದಾಖಲಾತಿ ಇಲ್ಲದಿದ್ದರೆ ಅದನ್ನು ತಿರಸ್ಕರಿಸಿ ಅವರಿಗೆ ಸೂಕ್ತ ದಾಖಲಾತಿ ನೀಡುವಂತೆ



ಭಾರತೀನಗರ ಗ್ರಾಪಂಗೆ ಜಿಪಂ ಸಿಇಓ ಕೆ.ಆರ್.ನಂದಿನಿ ಭೇಟಿ ನೀಡಿ, ಪರಿಶೀಲಿಸಿದರು.

ಮಾಹಿತಿ ನೀಡಬೇಕೆಂದು ತಿಳಿಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಜಿಪಂ ಸಿಇಓ ಕೆ.ಆರ್.ನಂದಿನಿ, ಜಿಲ್ಲೆಯ ತಾಪಂ ಹಾಗೂ ಗ್ರಾಪಂಗಳಿಗೆ ಸಾರ್ವಜನಿಕರ ಹಿತದೃಷ್ಟಿಯಿಂದ ಆಗಾಗ್ಗೆ ದಿಢೀರ್ ಭೇಟಿ ನೀಡಿ ಪರಿಶೀಲಿಸಲಾಗುತ್ತಿದೆ. ಇಂದು ಭಾರತೀನಗರ ಗ್ರಾಪಂಗೆ ಭೇಟಿ ನೀಡಿ ಇ–ಖಾತೆಯನ್ನು ಗಣಕಯಂತ್ರದಲ್ಲಿ ಪರಿಶೀಲಿಸಲಾಗಿದೆ. ಇ–ಖಾತೆಗಳು 45 ದಿನಗಳ ಮೇಲೆ ಇಡಬಾರದೆಂದು ನಿಯಮಗಳಿವೆ. ಅದನ್ನು ಪಾಲನೆ ಮಾಡಬೇಕೆಂದು ಸೂಚಿಸಲಾಗಿದೆ. ಗ್ರಾಪಂಗಳಲ್ಲಿ ದಾಖಲೆಗಳನ್ನು ಸರಿಯಾಗಿ ನಿಭಾಯಿಸಬೇಕಾಗಿದೆ. ಕಡತ ನಿರ್ವಹಣೆಗೆ ಒಂದು ಕೊಠಡಿ ಸಾಲದು. ಹೆಚ್ಚುವರಿ ಕಡತ ಇಡಲು ಮತ್ತೊಂದು ರೆಕಾರ್ಡ್ ರೂಂ ಮಾಡುವಂತೆ ತಿಳಿಸಿದ್ದೇವೆ ಎಂದರು.

ಇದಕ್ಕಾಗಿ ಒಂದು ತಿಂಗಳ ಕಾಲಾವಕಾಶ ಕೇಳಿದ್ದಾರೆ. ಬೇರೆ ಎಲ್ಲಾ ವಿಚಾರದಲ್ಲೂ ಪ್ರಗತಿ ಸಾಧಿಸಿದ್ದಾರೆ. ಇ–ಸ್ವತ್ತು ವಿಚಾರದಲ್ಲಿ ಸ್ವಲ್ಪ ತೊಡಕು ಉಂಟಾಗಿದೆ. ಇದಕ್ಕೆ ಇಓ ರಾಮಲಿಂಗಯ್ಯ ಅವರಿಗೂ ಕೂಡ ಸರಿಪಡಿಸುವಂತೆ ಸೂಚಿಸಲಾಗಿದೆ ಎಂದರು.

ಗ್ರಂಥಾಲಯಗಳಿಗೆ ಪೀಠೋಪಕರಣ ಸರಬರಾಜು: ಗ್ರಾಪಂಗಳಲ್ಲಿರುವ ಗ್ರಂಥಾಲಯಗಳ ಸಮಸ್ಯೆ ನಮ್ಮ ಗಮನಕ್ಕೆ ಬಂದರೆ ಅದನ್ನು ಬಗೆಹರಿಸಲು ಕ್ರಮ ಕೈಗೊಳ್ಳುತ್ತೇವೆ. ಈಗಾಗಲೇ ಹೊಸ ಗ್ರಂಥಾಲಯಗಳಿಗೆ ಪೀಠೋಪಕರಣಗಳು ಸರಬರಾಜು ಆಗುತ್ತಿವೆ. ನಿಗದಿತ ಸಮಯಕ್ಕೆ ಗ್ರಂಥಾಲಯ ತೆಗೆದು ಜನರಿಗೆ ಅನುಕೂಲ ಕಲ್ಪಿಸಬೇಕೆಂದರು.

ಈ ವೇಳೆ ತಾಪಂ ಇಓ ರಾಮಲಿಂಗಯ್ಯ, ಕುಡಿಯುವ ನೀರು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಇಂಜಿನಿಯರ್ ಪ್ರಮೋದ್, ಜಿಪಂ ಅಧಿಕಾರಿಗಳಾದ ಲಕ್ಷ್ಮಿ, ಯೋಗೇಶ್, ಇಂಜಿನಿಯರ್‌ಗಳಾದ ತ್ಯಾಗರಾಜು, ಶರತ್, ನವೀನ, ನರಸಿಂಹಮೂರ್ತಿ, ಫಾಲ್ಗುಣ ಇತರರಿದ್ದರು.

ಪಿಡಿಓಗಳ ಭರ್ತಿಗೆ ಕ್ರಮ

ಜಿಲ್ಲೆಯಲ್ಲಿ ಖಾಲಿ ಇರುವ ಗ್ರಾಪಂ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ನೇಮಕ ಮಾಡುವಂತೆ ಸರ್ಕಾರದ ಗಮನಕ್ಕೆ ಈಗಾಗಲೇ ತರಲಾಗಿದೆ. ಸದ್ಯದ ಪರಿಸ್ಥಿತಿಯಲ್ಲಿ ಖಾಲಿ ಇರುವ ಗ್ರಾಪಂಗಳನ್ನು ಹೆಚ್ಚುವರಿಯಾಗಿ ನೋಡಿಕೊಳ್ಳುವಂತೆ ಸೂಚಿಸಲಾಗಿದೆ. ಸರ್ಕಾರ ಪಿಡಿಓಗಳನ್ನು ಭರ್ತಿ ಮಾಡಿದ ಕೂಡಲೇ ಸಮಸ್ಯೆ ನಿವಾರಣೆಗೊಳ್ಳಲಿದೆ ಎಂದರು.

ಹಳೆಬೀಡು ಗ್ರಾಪಂಗೆ ಮಂಗಳಮ್ಮ ಉಪಾಧ್ಯಕ್ಷೆ

ಪಾಂಡವಪುರ, ಜು.3– ತಾಲೂಕಿನ ಹಳೆಬೀಡು ಗ್ರಾಮ ಪಂಚಾಯತ್ ನೂತನ ಉಪಾಧ್ಯಕ್ಷೆಯಾಗಿ ಜೆಡಿಎಸ್ ಬೆಂಬಲಿತ ಅಭ್ಯರ್ಥಿ ನರಹಳ್ಳಿ ಮಂಗಳಮ್ಮ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಈ ಹಿಂದಿನ ಅಧ್ಯಕ್ಷೆ ಗೌರಮ್ಮ ಅವರ ರಾಜೀನಾಮೆಯಿಂದ ತೆರವಾದ ಉಪಾಧ್ಯಕ್ಷ ಸ್ಥಾನಕ್ಕೆ ಗುರುವಾರ ನಡೆದ ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತ ಅಭ್ಯರ್ಥಿ ಮಂಗಳಮ್ಮ ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ಎಲ್.ಶಿವಪ್ರಸಾದ್ ಘೋಷಿಸಿದರು. ನೂತನ ಉಪಾಧ್ಯಕ್ಷೆಯಾಗಿ ಮಂಗಳಮ್ಮ ಆಯ್ಕೆಯಾಗುತ್ತಿದ್ದಂತೆ ಗ್ರಾಪಂ ಆವರಣದಲ್ಲಿ ನೆರೆದಿದ್ದ ಬೆಂಬಲಿಗರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು. ಇದೇ ವೇಳೆ ಅಧ್ಯಕ್ಷರು, ಸದಸ್ಯರು ಹಾಗೂ ಎಲ್ಲಾ ಮುಖಂಡರು ನೂತನ ಉಪಾಧ್ಯಕ್ಷೆಯನ್ನು ಅಭಿನಂದಿಸಿದರು.

ಉಪಾಧ್ಯಕ್ಷೆ ಮಂಗಳಮ್ಮ ಮಾತನಾಡಿ, ನಮ್ಮ ನಾಯಕರು, ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರ ಆಶೀರ್ವಾದ ಹಾಗೂ ಎಲ್ಲಾ ಸದಸ್ಯರ ಸಹಕಾರದಿಂದ ಹಳೆಬೀಡು ಗ್ರಾಪಂ ಉಪಾಧ್ಯಕ್ಷೆಯಾಗಿ ಅವಿರೋಧವಾಗಿ ಆಯ್ಕೆಯಾಗಿದ್ದೇನೆ. ಮುಂದಿನ ದಿನಗಳಲ್ಲಿ



ಹಳೇಬೀಡು ಗ್ರಾಪಂ ಉಪಾಧ್ಯಕ್ಷರಾಗಿ ಮಂಗಳಮ್ಮ ಆಯ್ಕೆಯಾದರು.

ಅಧ್ಯಕ್ಷರ ಜೊತೆಗೂಡಿ ಗ್ರಾಪಂ ವ್ಯಾಪ್ತಿಯ ಹಳ್ಳಿಗಳ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದರು.

ಈ ವೇಳೆ ಗ್ರಾಪಂ ಅಧ್ಯಕ್ಷ ಹೆಚ್.ಸಿ.ಧನಂಜಯ, ಸದಸ್ಯರಾದ ಹೆಚ್.ಪಿ.ಪುಟ್ಟೇಗೌಡ, ಗೌರಮ್ಮ, ಹೆಚ್.ಪಿ.ಪದ್ಮರಾಜು, ಸೌಭಾಗ್ಯಮ್ಮ, ಚಿಕ್ಕತಾಯಮ್ಮ, ಜಯಲಕ್ಷ್ಮಮ್ಮ, ಸಿ.ಜೆ.ರಾಧ, ಎಂ.ಎ.ಶೋಭ, ಮಂಜುಳ, ಮುಖಂಡರಾದ ಜೆಡಿಎಸ್ ಜಿಲ್ಲಾ ಉಪಾಧ್ಯಕ್ಷ ಪುಟ್ಟಣ್ಣ, ಮುಖಂಡರಾದ ಸಣ್ಣಪ್ಪ, ದಾಸಯ್ಯ, ಮೇನಾಗರ ಛೇರ್ಮನ್ ಪುಟ್ಟಸ್ವಾಮೀಗೌಡ, ಎಂ.ಶಿವಕುಮಾರ್, ಕೆಂಪೇಗೌಡ, ಪಿಡಿಓ ನಾಗರಾಜು, ಕಾರ್ಯದರ್ಶಿ ಪಾಪೇಗೌಡ ಸೇರಿದಂತೆ ಹಲವರಿದ್ದರು.

ಬಾಬು ಜಗಜೀವನ ರಾಂ ಪುಣ್ಯಸ್ಮರಣೆ



ಮಂಡ್ಯ, ಜು.3– ಹಸಿರುಕ್ರಾಂತಿ ಹರಿಕಾರ, ಭಾರತದ ಮಾಜಿ ಉಪಪ್ರಧಾನಿ ಡಾ.ಬಾಬು ಜಗಜೀವನ ರಾಂ ಅವರ 39ನೇ ಪುಣ್ಯತಿಥಿಯನ್ನು ಜು.6ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿ ಕಚೇರಿ ಮುಂಭಾಗದ ಉದ್ಯಾನವನದಲ್ಲಿರುವ ಡಾ.ಬಾಬು ಜಗಜೀವನ್ ರಾಂ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಮೂಲಕ ಆಚರಿಸಲಾಗುವುದು.

ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಮುಖಂಡರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಂಡ್ಯದಲ್ಲಿ ನಾಳೆ ನಾಲ್ವಡಿ ಪ್ರಶಸ್ತಿ ಪ್ರದಾನ, ಪುಸ್ತಕ ಬಿಡುಗಡೆ: ಕೆ.ಟಿ.ಹನುಮಂತು



ಸುದ್ದಿಗೋಷ್ಠಿಯಲ್ಲಿ ಕೆ.ಟಿ.ಹನುಮಂತು ಮಾತನಾಡಿದರು.

ಮಂಡ್ಯ, ಜು.3– ನಂಜಮ್ಮ ಮೋಟೇಗೌಡ ಚಾರಿಟೇಬಲ್ ಮತ್ತು ಎಜುಕೇಷನಲ್ ಟ್ರಸ್ಟ್ ವತಿಯಿಂದ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಶಸ್ತಿ ಪ್ರದಾನ ಹಾಗೂ ಪುಸ್ತಕ ಬಿಡುಗಡೆ ಸಮಾರಂಭ ಜು.5ರಂದು ಸಂಜೆ 4.30ಕ್ಕೆ ನಗರದ ಕೆ.ವಿ.ಶಂಕರಗೌಡ ಶತಮಾನೋತ್ಸವ ಭವನದಲ್ಲಿ ಆಯೋಜಿಸಲಾಗಿದೆ ಎಂದು ಟ್ರಸ್ಟ್ ಅಧ್ಯಕ್ಷ ಕೆ.ಟಿ.ಹನುಮಂತು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಟ್ರಸ್ಟ್ ವತಿಯಿಂದ ಹಲವು ಪ್ರಶಸ್ತಿಗಳನ್ನು ನೀಡುತ್ತಿದ್ದು, ಈ ಬಾರಿಯ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಶಸ್ತಿಗೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರನ್ನು ಆಯ್ಕೆ ಮಾಡಲಾಗಿದೆ ಎಂದರು.

ಮಾಜಿ ಸಚಿವ ಡಿ.ಸಿ.ತಮ್ಮಣ್ಣ ಪ್ರಶಸ್ತಿ ಪ್ರದಾನ ಮಾಡಲಿದ್ದು, ಲೋಕೇಶ್ ಚಂದಗಾಲು ಅವರ 'ನಾಲ್ವಡಿ ನಾಡು' ಪುಸ್ತಕವನ್ನು ಬಿಡುಗಡೆ ಮಾಡುವರು. ಶಾಸಕ ಪಿ.ರವಿಕುಮಾರ್‌ಗೌಡ ಅಧ್ಯಕ್ಷತೆ ವಹಿಸಲಿದ್ದು, ನಗರಸಭೆ ಅಧ್ಯಕ್ಷ ಎಂ.ವಿ.ಪ್ರಕಾಶ್, ಕರ್ನಾಟಕ ಸಂಘದ ಅಧ್ಯಕ್ಷ ಡಾ.ಜಯಪ್ರಕಾಶ್‌ಗೌಡ, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಕೆ.ಎಸ್.ರಾಜಣ್ಣ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದು, ವಿಧಾನಪರಿಷತ್ ಮಾಜಿ ಸದಸ್ಯ ಕೆ.ಟಿ.ಶ್ರೀಕಂಠೇಗೌಡ ಗೌರವ ಉಪಸ್ಥಿತಿ ವಹಿಸುವರು ಎಂದರು.

ಗೋಷ್ಠಿಯಲ್ಲಿ ಲಂಕೇಶ್, ಡೇವಿಡ್ ಪ್ರತಿಭಾಂಜಲಿ, ಪ್ರೊರಮೇಶ್, ಎಸ್.ಎಂ. ಲೋಕೇಶ್, ಉದಯ್‌ಶಂಕರ್, ಕೃಷ್ಣಪ್ಪ ಇದ್ದರು.

ವೈದ್ಯ, ಪತ್ರಿಕಾ, ಮಂಡ್ಯ ಜಿಲ್ಲಾ ಸಂಸ್ಥಾಪನಾ ದಿನಾಚರಣೆ

ಕೆ.ಆರ್.ಪೇಟೆ, ಜು.3– ಪಟ್ಟಣದ ಪ್ರಗತಿ ಆಂಗ್ಲ ಮಾಧ್ಯಮ ಶಾಲೆಯಲ್ಲಿ ವೈದ್ಯ, ಪತ್ರಿಕಾ ಹಾಗೂ ಮಂಡ್ಯ ಜಿಲ್ಲಾ ಸಂಸ್ಥಾಪನಾ ದಿನ ಆಚರಿಸಲಾಯಿತು.

ತಾಲೂಕಿನ ಅಗ್ರಹಾರಬಾಚಹಳ್ಳಿ ಗ್ರಾಪಂ ಅಧ್ಯಕ್ಷ ಎ.ಸಿ.ದಿವಿಕುಮಾರ್ ಗಿಡಕ್ಕೆ ನೀರೆರೆಯುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಶಾಲೆಯಲ್ಲಿ ವೈದ್ಯ, ಪತ್ರಿಕಾ ದಿನ ಆಚರಿಸುವುದರಿಂದ ಮಕ್ಕಳಲ್ಲಿ ವೈದ್ಯರು ಮತ್ತು ಮಾಧ್ಯಮಗಳ ಬಗ್ಗೆ ಜಾಗೃತಿ ಮೂಡಿಸಲು ಸಾಧ್ಯವಾಗುತ್ತದೆ. ವಿದ್ಯಾರ್ಥಿಗಳಿಗೆ ಸರಿಯಾದ ಮಾರ್ಗದರ್ಶನ ನೀಡುವ ಮೂಲಕ ಅವರನ್ನು ಉತ್ತಮ ಪ್ರಜೆಗಳಾಗಿ ರೂಪಿಸಬಹುದು. ಮಕ್ಕಳು ಆದರ್ಶ ಗುಣಗಳನ್ನು ಬೆಳೆಸಿಕೊಳ್ಳಬೇಕು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪತ್ರಿಕೆಗೆ ಉತ್ತಮ ಬೆಲೆ ನೀಡಲಾಗಿದೆ. ಅದನ್ನು ಉಳಿಸಿ ಬೆಳೆಸುವ ಕೆಲಸ ಪತ್ರಕರ್ತರ ಮೇಲಿದೆ ಎಂದರು.

ತಾಲೂಕು ಆಯುಷ್ ವೈದ್ಯಾಧಿಕಾರಿ ಡಾ.ಸುಬ್ರಮಣ್ಯ ಮಾತನಾಡಿ, ವಿದ್ಯಾರ್ಥಿಗಳು ದೈಹಿಕ, ಮಾನಸಿಕವಾಗಿ ಸದೃಢರಾಗಿರಬೇಕು. ಆಗ ಮಾತ್ರ ಉತ್ತಮ ಶಿಕ್ಷಣ ಪಡೆಯಲು ಸಾಧ್ಯವಾಗುತ್ತದೆ. ಮಕ್ಕಳು ಮೊಬೈಲ್ ಮತ್ತು ಟಿವಿಯಿಂದ ದೂರ ಇರಬೇಕು.



ವೈದ್ಯ ಕನ್ನಡ ಪತ್ರಿಕಾ ಹಾಗೂ ಮಂಡ್ಯ ಜಿಲ್ಲಾ ಸಂಸ್ಥಾಪನಾ ದಿನಾಚರಣೆಯನ್ನು ಅಗ್ರಹಾರಬಾಚಹಳ್ಳಿ ಗ್ರಾಪಂ ಅಧ್ಯಕ್ಷ ಎ.ಸಿ.ದಿವಿಕುಮಾರ್ ಉದ್ಘಾಟಿಸಿದರು.

ಅವುಗಳನ್ನು ಹೆಚ್ಚು ಬಳಸುವುದರಿಂದ ಕಣ್ಣು ಮತ್ತು ಮನಸ್ಸಿನ ಮೇಲೆ ದುಷ್ಪರಿಣಾಮ ಬೀರುತ್ತದೆ. ಆದ್ದರಿಂದ ಅವುಗಳನ್ನು ನಿಯಂತ್ರಿಸಬೇಕು. ಓದಿನ ಕಡೆ ಹೆಚ್ಚಿನ ಗಮನ ನೀಡಬೇಕು ಎಂದರು.

ಪತ್ರಕರ್ತ ಆರ್.ಶ್ರೀನಿವಾಸ್ ಮಾತನಾಡಿದರು. ನಿವೃತ್ತ ಪ್ರಾಂಶುಪಾಲ ಕೆ.ಕಾಳೇಗೌಡ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಪ್ರಗತಿ ಶಿಕ್ಷಣ ಸಂಸ್ಥೆ ಕಾರ್ಯನಿರ್ವಹಣಾಧಿಕಾರಿ ಹಾಗೂ ಆಹಾರ ತಜ್ಞೆ ಡಾ.ಎಂ.ಕೆ.ವೇೂನಿಕಾ ಪ್ರಾಸ್ತಾವಿಕ ಭಾಷಣ ಮಾಡಿದರು. ಗೋವಾದಲ್ಲಿ ನಡೆದ ರಾಷ್ಟ್ರೀಯ ಕರಾಟೆ ಸ್ಪರ್ಧೆಯಲ್ಲಿ ವಿಜೇತರಾದ ಕುಮಾರಿ ಜಿ.ಎ.ಧನ್ಯ, ಕೆ.ಎಂ.ಅಶ್ವಿನ್ ಹಾಗೂ ತೇಜಸ್ ಅವರನ್ನು ಸನ್ಮಾನಿಸಲಾಯಿತು. ಅಬಾಕಸ್‌ನಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ವಿತರಿಸಲಾಯಿತು. ವೈದ್ಯರ ದಿನಾಚರಣೆ ಅಂಗವಾಗಿ ಡಾ.ಸುಬ್ರಮಣ್ಯ, ಪತ್ರಿಕಾ ದಿನಾಚರಣೆ ಅಂಗವಾಗಿ ಪತ್ರಕರ್ತ ಶ್ರೀನಿವಾಸ್, ರಂಗನಾಥ್ ಹಾಗೂ ಮಂಡ್ಯ ಜಿಲ್ಲಾ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ಗ್ರಾಪಂ ಅಧ್ಯಕ್ಷ ಎ.ಸಿ.ದಿವಿಕುಮಾರ್ ಅವರನ್ನು ಸನ್ಮಾನಿಸಲಾಯಿತು. ಕರಾಟೆ ಶಿಕ್ಷಕ ಹೇಮಂತ್ ಸೇರಿದಂತೆ ವಿದ್ಯಾರ್ಥಿಗಳು, ಇನ್ನಿತರರಿದ್ದರು.

ಕೃತಕ ಕೈ, ಕಾಲು ಜೋಡಣೆ ಉಚಿತ ಶಿಬಿರ

ಮಂಡ್ಯ, ಜು.3– ಆದಿಚುಂಚನಗಿರಿ ವಿವಿ, ಆದಿಚುಂಚನಗಿರಿ ಆಸ್ಪತ್ರೆ ವತಿಯಿಂದ ಕರ್ನಾಟಕ ಮಾರವಾಡಿ ಯೂತ್ ಫೆಡರೇಷನ್ ಸಂಯುಕ್ತಾಶ್ರಯದಲ್ಲಿ ಆದಿಚುಂಚನಗಿರಿ ಮಠದ ನಿರ್ಮಲಾನಂದನಾಥ ಸ್ವಾಮೀಜಿ



ಸುದ್ದಿಗೋಷ್ಠಿಯಲ್ಲಿ ಆದಿಚುಂಚನಗಿರಿ ಆಸ್ಪತ್ರೆ ಮುಖ್ಯಸ್ಥ ಡಾ.ಕೆ.ಎಂ.ಶಿವಕುಮಾರ್ ಮಾತನಾಡಿದರು.

ಅವರ ಹುಟ್ಟುಹಬ್ಬ ಅಂಗವಾಗಿ ಕೃತಕ ಕೈ ಮತ್ತು ಕಾಲು ಜೋಡಣೆ ಉಚಿತ ಶಿಬಿರವನ್ನು ಜು.10ರಿಂದ 20ರವರೆಗೆ ನಾಗಮಂಗಲ ತಾಲೂಕಿನ ಆದಿಚುಂಚನಗಿರಿ ವೈದ್ಯಕೀಯ ಸಂಸ್ಥೆಯಲ್ಲಿ ಆಯೋಜಿಸ ಲಾಗಿದೆ ಎಂದು ಆದಿಚುಂಚನಗಿರಿ ಆಸ್ಪತ್ರೆ ಮುಖ್ಯಸ್ಥ ಡಾ.ಕೆ.ಎಂ.ಶಿವಕುಮಾರ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಪಘಾತ, ಇನ್ನಿತರ ಖಾಯಿಲೆಗಳಿಂದ ಕೈ ಮತ್ತು ಕಾಲು ಕಳೆದುಕೊಂಡವರಿಗೆ ಕೃತಕವಾಗಿ ಕೈ ಮತ್ತು ಕಾಲುಗಳ ಅಳತೆ ಪಡೆದು ಸೂಕ್ತ ಉಪಕರಣಗಳನ್ನು ಉಚಿತವಾಗಿ ವಿತರಿಸಲಾಗುವುದು ಎಂದರು.

ಶಿಬಿರದ ಹೊರತಾಗಿ 50 ಮಂದಿಗೆ ಕೃತಕ ಕೈ ಮತ್ತು ಕಾಲು ಜೋಡಣೆ ಮಾಡಲಾಗಿದ್ದು, ಇದೀಗ ಆಯೋಜಿಸಲಾಗಿರುವ ಶಿಬಿರಕ್ಕೆ 230 ಮಂದಿ ನೋಂದಾಯಿಸಿಕೊಂಡಿದ್ದಾರೆ ಎಂದರು.

ಪ್ರಸ್ತುತ ಶಿಬಿರ ನಡೆಯುವ ವೇಳೆಯೂ ನೋಂದಾಯಿಸಿಕೊಳ್ಳಲು ಅವಕಾಶವಿದ್ದು, ಸಾರ್ವಜನಿಕರು ಸದರಿ ಅವಕಾಶದ ಸದುಪಯೋಗಪಡಿಸಿಕೊಳ್ಳುವಂತೆ ಮನವಿ ಮಾಡಿದ ಅವರು, ಆಸ್ಪತ್ರೆ ವತಿಯಿಂದ ಕಳೆದ ಬಾರಿಯೂ ಕೃತಕ ಕೈ ಕಾಲು ಜೋಡಣೆ ಶಿಬಿರ ನಡೆಸಲಾಗಿದ್ದು 270 ಮಂದಿಗೆ ಕೃತಕ ಕೈ ಕಾಲು ಜೋಡಣೆ ಮಾಡಲಾಗಿತ್ತು ಎಂದು ಮಾಹಿತಿ ನೀಡಿದರು.

ಶಿಬಿರದಲ್ಲಿ ಪಾಲ್ಗೊಳ್ಳುವ ಶಿಬಿರಾರ್ಥಿಗಳಿಗೆ ಉಚಿತ ವಸತಿ, ಊಟದ ವ್ಯವಸ್ಥೆ ಮಾಡಲಾಗುವುದು. ಶಿಬಿರ ಮುಗಿದ ಮರುದಿನ ಜು.21ರಂದು ಶಿಬಿರಾರ್ಥಿಗಳಿಗೆ ಕೃತಕ ಕೈಕಾಲು ಉಪಕರಣಗಳ ವಿತರಣೆ ಮಾಡಲಾಗುವುದು ಎಂದರು. ಗೋಷ್ಠಿಯಲ್ಲಿ ಗೇಬ್ರಿಯೆಲ್ ಇದ್ದರು.

ಮೂರನೇ ಪುಟದಿಂದ

ಗ್ಯಾರಂಟಿ ಅಭಿಯಾನಕ್ಕೆ ಮತ್ತಷ್ಟು ವೇಗ

ಮಂಜೂರಾಗಿದ್ದ ಜಮೀನಿಗೆ ಈವರೆಗೆ ಪೋಡಿ ಆಗಿಲ್ಲ. ಇದರಿಂದ ರೈತರು ಸಾಕಷ್ಟು ಸಮಸ್ಯೆ ಎದುರಿಸಿದ್ದರು. ಈ ಸಮಸ್ಯೆಗೆ ಶಾಶ್ವತ ಪರಿಹಾರ ನೀಡುವ ಸಲುವಾಗಿಯೇ 'ನನ್ನ ಭೂಮಿ' ಹೆಸರಿನಲ್ಲಿ ಪೋಡಿ ಅಭಿಯಾನ ಆರಂಭಿಸಲಾಯಿತು. ಈ ಅಭಿಯಾನದಡಿ ಜನರ ಅರ್ಜಿಗೆ ಕಾಯದೆ ಸರ್ಕಾರವೇ ರೈತರ ಮನೆ ಬಾಗಿಲಿಗೆ ತೆರಳಿ ಪೋಡಿ ಮಾಡಿಕೊಡುತ್ತಿದೆ. ಹಿಂದೆ ಮಂಜೂರಾಗಿದ್ದ ಜಮೀನಿಗೆ ಪಕ್ಕಾ ದಾಖಲೆಗಳನ್ನು ಅವರ ಕೈಗೆ ಕೊಟ್ಟು ಅವರ ಭೂ ಮಾಲೀಕತ್ವಕ್ಕೆ ಗ್ಯಾರಂಟಿ ನೀಡುವುದು ಈ ಕಾರ್ಯ ಕ್ರಮದ ವಿಶೇಷ ಎಂದು ವಿವರಿಸಿದರು.

'ಭೂ ಸುರಕ್ಷಾ' ಯೋಜನೆಯಡಿಯಲ್ಲಿ ಈವರೆಗೆ 29.8 ಕೋಟಿ ಮೂಲ ದಾಖಲೆಗಳನ್ನು ಸ್ಕ್ಯಾನ್ ಮಾಡಿ ಡಿಜಿಟಲೀಕರಣಗೊಳಿಸಲಾಗಿದ್ದು, ವರ್ಷಾಂತ್ಯದೊಳಗೆ ತಹಶೀಲ್ದಾರ್ ಕಚೇರಿಗಳಲ್ಲಿರುವ ಎಲ್ಲಾ ಮೂಲ ಕಡತಗಳನ್ನೂ ಸ್ಕ್ಯಾನ್ ಮಾಡಿ ಡಿಜಿಟಲೀಕರಿಸಲಾಗುವುದು ಎಂದು ಕೃಷ್ಣ ಬೈರೇಗೌಡ ಅವರು ತಿಳಿಸಿದರು.

ರೈತರು ತಹಶೀಲ್ದಾರ್ ಕಚೇರಿಗಳಲ್ಲಿ ತಮ್ಮ ಭೂ ದಾಖಲೆಗಳನ್ನು ತೆಗೆದುಕೊಳ್ಳಲು ಸಾಕಷ್ಟು ಪಡಿಪಾಟಲು ಪಡುತ್ತಿದ್ದಾರೆ. ಎಷ್ಟೋ ದಾಖಲೆಗಳು ಕಳೆದೇ ಹೋಗಿದ್ದರೆ, ಮತ್ತಷ್ಟು ದಾಖಲೆಗಳನ್ನು ಕಾನೂನು ಬಾಹಿರವಾಗಿ ತಿದ್ದುವ ಮೂಲಕ ರೈತರನ್ನು ಕೋರ್ಟ್, ಕಚೇರಿಗಳಿಗೆ ಅಲೆದಾಡಿಸಲಾಗುತ್ತಿದೆ. ರೈತರಿಗೆ ಈ ಎಲ್ಲಾ ಶೋಷಣೆಗಳಿಂದ ಮುಕ್ತಿ ನೀಡುವ ಸಲುವಾಗಿಯೇ 'ಭೂ ಸುರಕ್ಷಾ' ಯೋಜನೆಯನ್ನು ಜಾರಿಗೆ ತರಲಾಯಿತು. ಈ ಯೋಜನೆ ಯಶಸ್ವಿಯಾದರೆ ಹಲವು ಅಕ್ರಮಗಳನ್ನು ತಡೆಯಬಹುದು. ಅಲ್ಲದೆ, ರೈತರು ಅನಗತ್ಯವಾಗಿ ಸರ್ಕಾರಿ ಕಚೇರಿ ಅಲೆಯುವುದನ್ನು ತಪ್ಪಿಸುವುದರ ಜೊತೆಗೆ ಮನೆಯಿಂದ ಆನ್ಲೈನ್ ಮೂಲಕವೇ ಅರ್ಜಿ ಸಲ್ಲಿಸಿ ದಾಖಲೆ ಪಡೆದು ಕೊಳ್ಳಬಹುದು ಎಂದರು. ಈ ಯೋಜನೆಯನ್ನು ಪ್ರಾಯೋಗಿಕವಾಗಿ 31 ತಾಲೂಕುಗಳಲ್ಲಿ ಆರಂಭಿಸಿ ಇದೀಗ ಎಲ್ಲಾ ತಾಲೂಕು ಗಳಲ್ಲೂ ಕೆಲಸ ಆರಂಭಿಸಲಾಗಿದೆ. ರಾಜ್ಯಾದ್ಯಂತ ತಹಶೀಲ್ದಾರ್, ಎಸಿ–ಡಿಸಿ ಕಚೇರಿಗಳಲ್ಲಿ ಸುಮಾರು 100 ಕೋಟಿ ಮೂಲ ದಾಖಲೆ ಪುಟಗಳಿವೆ ಎಂದು ಅಂದಾಜಿಸಲಾಗಿದ್ದು, ಡಿಸೆಂಬರ್ ಅಂತ್ಯದೊಳಗೆ ಎಲ್ಲಾ ಪುಟ ಗಳನ್ನೂ ಸ್ಕ್ಯಾನ್ ಮಾಡಿ ಡಿಜಿಟಲೀಕರಿಸುವ ಗುರಿ ಹೊಂದಲಾಗಿದೆ ಎಂದರು.

ಗ್ರಾಮ ಆಡಳಿತ ಅಧಿಕಾರಿಗಳಿಗೆ ಜಿಲ್ಲಾ ಪಂಚಾಯತ್ ಕಚೇರಿ ಆವರಣದಲ್ಲಿ ಕಚೇರಿ ವ್ಯವಸ್ಥೆ ಮಾಡಿ ಕೊಡುವಂತೆ ಎಲ್ಲಾ ಜಿಲ್ಲಾಧಿಕಾರಿಗಳಿಗೂ ಸೂಚಿಸಲಾಗಿದೆ. ಈಗಾಗಲೇ ರಾಜ್ಯಾದ್ಯಂತ ಸುಮಾರು 2,600 ಕಡೆಗಳಲ್ಲಿ ವಿಎ ಗಳಿಗೆ ಕಚೇರಿ ನೀಡಲಾಗಿದೆ ಎಂದು ತಿಳಿಸಿದರು.

ತಕರಾರು ಅರ್ಜಿ ವಿಲೇವಾರಿ ತ್ವರಿತ: ತಹಶೀಲ್ದಾರ್ ಹಾಗೂ ಉಪ–ವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿರುವ ತಕರಾರು ಅರ್ಜಿಗಳ ವಿಲೇವಾರಿಯೂ ಪ್ರಗತಿಯ ಹಾದಿಯಲ್ಲಿದೆ. ಈ ಮೂಲಕ ಸರ್ಕಾರಿ ಕಚೇರಿಗಳಿಗೆ ರೈತರು ಅನವಶ್ಯಕವಾಗಿ ಅಲೆಯುವುದು ತಪ್ಪಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಅಭಿಪ್ರಾಯಪಟ್ಟರು.

ಈ ಬಗ್ಗೆ ಮಾಹಿತಿ ಹಂಚಿಕೊಂಡ ಅವರು, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುವ ಮುನ್ನ ತಹಶೀಲ್ದಾರ್ ಕಚೇರಿಗಳಲ್ಲಿ ಅವಧಿ ಮೀರಿದ 10,774 ಪ್ರಕರಣಗಳು ಬಾಕಿ ಇದ್ದವು. ಇಂದು ಆ ಸಂಖ್ಯೆಯನ್ನು 457ಕ್ಕೆ ಇಳಿಸಲಾಗಿದೆ. ಉಪ ವಿಭಾಗಾಧಿಕಾರಿಗಳ ನ್ಯಾಯಾ ಲಯದಲ್ಲಿ ಅವಧಿ ಮೀರಿದ 62,857 ಪ್ರಕರಣಗಳು ಬಾಕಿ ಇದ್ದವು ಈ ಸಂಖ್ಯೆಯನ್ನು 20,211ಕ್ಕೆ ಇಳಿಸಲಾಗಿದೆ. ಉಳಿದ ಪ್ರಕರಣಗಳನ್ನು ಮುಂದಿನ 4 ತಿಂಗಳಲ್ಲಿ ನ್ಯಾಯಯುತ ವಿಲೇವಾರಿಗೆ ಒಳಪಡಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಸಾಲಿನಲ್ಲೇ ದರ್ಶನ ಪಡೆಯಬೇಕು

ಸಾಗಿ ಧರ್ಮದರ್ಶನದ ಸಾಲಿಗೆ ಸೇರುವ ವ್ಯವಸ್ಥೆ ಮಾಡಲಾಗಿದೆ. ಇದರಿಂದ ಮೆಟ್ಟಿಲು ಹತ್ತಿ ಬರುವ ಭಕ್ತರು, ಧರ್ಮ ದರ್ಶನದ ಸಾಲಿನಲ್ಲೇ ತೆರಳಿ ದೇವಾಲಯ ಪ್ರವೇಶಿಸಿ, ದರ್ಶನ ಪಡೆಯಬೇಕಾಗಿದೆ. ಬೆಟ್ಟದಲ್ಲಿ 15 ಸಾವಿರಕ್ಕಿಂತ ಹೆಚ್ಚು ಮಂದಿ ಭಕ್ತರು ಸೇರಲು ಸಾಧ್ಯವಾಗದೇ ಇರುವುದರಿಂದ ಭಕ್ತರು ಸಹಕರಿಸುವಂತೆ ಹಾಗೂ ನೂಕುನುಗ್ಗಲಿಗೆ ಒಳಗಾಗದಂತೆ ಮನವಿ ಪ್ರಾಧಿಕಾರ ಮನವಿ ಮಾಡಿದೆ.

ಇಂದು ಎರಡನೇ ಶುಕ್ರವಾರ: ಚಾಮುಂಡಿಬೆಟ್ಟದಲ್ಲಿ ಇಂದು ಆಷಾಢ ಮಾಸದ ಎರಡನೆ ಶುಕ್ರವಾರದ ಅಂಗವಾಗಿ ಬೆಟ್ಟದ ದೇವಾಲಯದಲ್ಲಿ ವಿಶೇಷ ಪೂಜಾ ಮಹೋತ್ಸವ ಜರುಗಲಿದೆ. ಮುಂಜಾನೆ 3 ಗಂಟೆಯಿಂದಲೇ ನಾಡದೇವಿಗೆ ವಿಶೇಷ ಅಭಿಷೇಕ ಸೇರಿದಂತೆ ಪೂಜೆ ಜರುಗಲಿದೆ. ಬೆಳಗ್ಗೆ 5.30ರಿಂದ ಭಕ್ತರಿಗೆ ದರ್ಶನಕ್ಕೆ ಅವಕಾಶ ನೀಡಲಾಗುತ್ತದೆ. ಎಂದಿನಂತೆ ನಾಳೆಯೂ ಖಾಸಗಿ ವಾಹನಗಳ ಪ್ರವೇಶ ನಿರ್ಬಂಧಿಸಲಾಗಿದೆ.

ನೈಪುಣ್ಯ ಸ್ಕೂಲ್ ಆಫ್ ಎಕ್ಸಲೆನ್ಸ್ ಕ್ಯಾಂಪಸ್‌ನಲ್ಲಿ ಸುಸಜ್ಜಿತ ಈಜುಕೊಳ ಉದ್ಘಾಟನೆ

ಮೌಲ್ಯಯುತ ಶಿಕ್ಷಣಕ್ಕೆ ಅತ್ಯುತ್ತಮ ಸವಲತ್ತು ಅತ್ಯಗತ್ಯ

ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್

ಮೈಸೂರು, ಜು.3(ಪಿಎಂ)– ಜಾಗತಿಕ ಪೈಪೋಟಿಯಲ್ಲಿ ತೊಡಗಿಕೊಳ್ಳಲು, ಭವಿಷ್ಯದಲ್ಲಿ ಮಕ್ಕಳು ಪ್ರತಿಭಾ ಸಾಮರ್ಥ್ಯ ಹೊಂದುವಂತಾಗಲು, ಪ್ರಾಥಮಿಕ ಶಿಕ್ಷಣದಲ್ಲಿ ಗುಣಮಟ್ಟ ಕಾಯ್ದುಕೊಳ್ಳಲು ಹಾಗೂ ಮೌಲ್ಯಯುತ ಶಿಕ್ಷಣ ಒದಗಿಸಲು ಅತ್ಯುತ್ತಮ ಸವಲತ್ತು ಅತ್ಯಗತ್ಯ. ಈ ನಿಟ್ಟಿನಲ್ಲಿ ಪ್ರಸ್ತುತ ಶಿಕ್ಷಣ ಸಂಸ್ಥೆಗಳಿಗೆ ಸಾಕಷ್ಟು ಸವಾಲುಗಳಿವೆ ಎಂದು ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಹೇಳಿದರು.

ಮೈಸೂರಿನ ಕನಕದಾಸನಗರದ (ದಟ್ಟಗಳ್ಳಿ) ನೈಪುಣ್ಯ ಸ್ಕೂಲ್ ಆಫ್ ಎಕ್ಸಲೆನ್ಸ್ ಕ್ಯಾಂಪಸ್‌ನಲ್ಲಿ ನಿರ್ಮಿಸಿರುವ ನೂತನ ಈಜುಕೊಳದ ಉದ್ಘಾಟನೆಯನ್ನು ಗುರುವಾರ ನೆರವೇರಿಸಿ ಮಾತನಾಡಿದ ಅವರು, ಕಳೆದ ದಶಕಗಳಿಗೆ ಹೋಲಿಸಿದರೆ ಇಂದು ಪ್ರಾಥಮಿಕ ಶಿಕ್ಷಣ ಹಂತದಲ್ಲಿ ಮಕ್ಕಳಿಗೆ



ಮೈಸೂರಿನ ಕನಕದಾಸನಗರದ ನೈಪುಣ್ಯ ಸ್ಕೂಲ್ ಆಫ್ ಎಕ್ಸಲೆನ್ಸ್ ಕ್ಯಾಂಪಸ್‌ನಲ್ಲಿ ನಿರ್ಮಿಸಿರುವ ನೂತನ ಈಜುಕೊಳದ ಉದ್ಘಾಟಿಸಿದ ಸಂದರ್ಭ.

ಶಿಕ್ಷಣ ಕಲಿಕೆಯ ಜೊತೆಗೆ ಬಾಲ್ಯದ ಚಟುವಟಿಕೆಗಳನ್ನು ಪ್ರೋತ್ಸಾಹಿಸಲು ಸವಲತ್ತು ಒದಗಿಸುವುದು ಅತ್ಯಂತ ಮುಖ್ಯ. ಅಕ್ಷರ ಕಲಿಕೆಯ ಜೊತೆಗೆ ಮಕ್ಕಳಲ್ಲಿರುವ ಕ್ರೀಡೆ ಹಾಗೂ ಸಾಂಸ್ಕೃತಿಕ ಪ್ರತಿಭೆ ಅನಾವರಣಗೊಳ್ಳುವಂತಾಗಲು ಪೂರಕ ವ್ಯವಸ್ಥೆ ಕಲ್ಪಿಸಬೇಕು ಎಂದು ಹೇಳಿದರು.

ಹಿಂದಿನ ದಿನಗಳಲ್ಲಿ ಮನೆಯೇ ಒಂದು ರೀತಿಯ ಪಾಠಶಾಲೆಯಾಗಿತ್ತು. ನೆರೆ–ಹೊರೆ ಸಂಬಂಧಗಳು ಬಾಲ್ಯದ ಚಟುವಟಿಕೆಗಳಿಗೆ ಪ್ರೇರಣೆಯಾಗಿತ್ತು. ಕೆರೆ–ಕಟ್ಟೆಗಳಲ್ಲಿ ಈಜುವ ಅವಕಾಶಗಳು ದೊರೆಯುತ್ತಿತ್ತು. ಆದರೆ ಇಂದು ಗ್ರಾಮೀಣ ಪ್ರದೇಶದಲ್ಲಿಯೂ ಅಂತಹ ಚಟುವಟಿಕೆಗಳಲ್ಲಿ ಮಕ್ಕಳು ತೊಡಗಿಕೊಳ್ಳಲು ಅವಕಾಶಗಳು ಕ್ಷೀಣಿಸುತ್ತಿವೆ. ಪಟ್ಟಣ ಪ್ರದೇಶಗಳಲ್ಲಂತೂ ಕಾಂಕ್ರೀಟ್ ಕಾಡು ವಿಸ್ತಾರಗೊಳ್ಳುತ್ತಿದ್ದು, ಮಕ್ಕಳ ದೈಹಿಕ ಚಟುವಟಿಕೆಗಳಿಗೆ ಅವಕಾಶಗಳು ಮರೀಚಿಕೆಯಾಗಿದೆ. ಈ ನಿಟ್ಟಿನಲ್ಲಿ ಶಿಕ್ಷಣ ಸಂಸ್ಥೆಗಳೇ ಮಕ್ಕಳಿಗೆ ಸಹಜ ಬಾಲ್ಯ ಒದಗಿಸುವ ಜವಾಬ್ದಾರಿ ಹೊತ್ತುಕೊಂಡರೆ ಅದು ಮಕ್ಕಳಿಗೆ ಕೊಡಬಹುದಾದ ಪರಿಪೂರ್ಣ ಶಿಕ್ಷಣದ ಅಡಿಪಾಯವಾಗುತ್ತದೆ ಎಂದರು.

ಈ ನಿಟ್ಟಿನಲ್ಲಿ ನೈಪುಣ್ಯ ಸ್ಕೂಲ್ ಆಫ್ ಎಕ್ಸಲೆನ್ಸ್ ತನ್ನ ಕ್ಯಾಂಪಸ್‌ನಲ್ಲಿ ಉತ್ತಮ ಈಜುಕೊಳ ನಿರ್ಮಿಸಿ ಮಕ್ಕಳಿಗೆ ಈಜು ಕಲಿಕೆಗೆ ಅವಕಾಶ ಕಲ್ಪಿಸಿ, ಅವರು ಕ್ರೀಡಾ ಸಾಧಕರಾಗಲು ಪ್ರೇರೇಪಿಸುವ ಸಂಕಲ್ಪ ತೊಟ್ಟಿರುವುದು ನಿಜಕ್ಕೂ ಶ್ಲಾಘನೀಯ. ಇಂದಿನ ಮಕ್ಕಳು ಪರಿಸರ ಹಾಗೂ ಆರೋಗ್ಯ ಕಾಳಜಿ ಹೊಂದಲು ಸೈಕಲ್ ಹಾಗೂ ಈಜು ಅಭ್ಯಾಸವನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ಪೋಷಕರು ವಿಶೇಷ ಗಮನಹರಿಸಬೇಕೆಂದು ಸಲಹೆ ನೀಡಿದರು.

ಸಂಸ್ಥೆಯ ಅಧ್ಯಕ್ಷ ಆರ್.ರಘು ಮಾತನಾಡಿ, ನಮ್ಮ ಶಾಲೆಯ ಆವರಣದಲ್ಲಿ 3ರಿಂದ 17 ವರ್ಷದವರೆಗಿನ ಮಕ್ಕಳು ಈಜು ಕಲಿಕೆ ಹಾಗೂ ಅಭ್ಯಾಸದಲ್ಲಿ ತೊಡಗಿಕೊಳ್ಳಲು ಎರಡು ಬಗೆಯ ಸುಸಜ್ಜಿತ ಈಜುಕೊಳಗಳನ್ನು ನಿರ್ಮಿಸಲಾಗಿದೆ. ಶಾಲೆ ಮುಗಿದ ನಂತರ ಹೊರಗಿನ ಮಕ್ಕಳಿಗೂ ಈಜು ಕಲಿಕೆಗೆ ಅವಕಾಶ ಮಾಡಿಕೊಡಲಾಗುವುದು ಎಂದು ತಿಳಿಸಿದರು. ಸಂಸ್ಥೆಯ ಕಾರ್ಯದರ್ಶಿ ಆರ್.ಕೌಟಿಲ್ಯ, ಪ್ರಾಂಶುಪಾಲ ಎಂ.ಎನ್.ಮಹೇಂದ್ರ, ಉಪ ಪ್ರಾಂಶುಪಾಲೆ ಶೀನಾ ಕೆ.ಗುರ್ನಾನಿ, ಹಾಗೂ ಇತರ ಶಿಕ್ಷಕರು, ಶಿಕ್ಷಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಈಜುಪಟುಗಳು ಹಾಜರಿದ್ದರು.

ಬರಮನಿ ಮತ್ತೆ ಕರ್ತವ್ಯಕ್ಕೆ ಹಾಜರು

ಮುಖ್ಯಮಂತ್ರಿ ಕಪಾಳಮೋಕ್ಷ ಮಾಡಲು ಮುಂದಾದ ಘಟನೆಯಿಂದ ತೀವ್ರ ನೊಂದು ಸರ್ಕಾರಕ್ಕೆ ರಾಜೀನಾಮೆ ಪತ್ರ ಕಳುಹಿಸಿದ್ದೇನೆ ಎಂದು ಧಾರವಾಡದ ಹೆಚ್ಚುವರಿ ಪೊಲೀಸ್ ಅಧೀಕ್ಷಕ ನಾರಾಯಣ ಭರಮನಿ ಹೇಳಿದ್ದರು. ಇದಾದ ಬಳಿಕ ಸಿಎಂ ಮತ್ತು ಗೃಹ ಸಚಿವರು ಕರೆ ಮಾಡಿ ಸಮಾಧಾನ ಮಾಡಿ ನಿವೃತ್ತಿ ನಿರ್ಧಾರ ಹಿಂತೆಗೆದುಕೊಳ್ಳುವಂತೆ ಮಾಡಿದ್ದಾರೆ. ಇಂದು ಎಂದಿನಂತೆ ಕರ್ತವ್ಯಕ್ಕೆ ಎಎಸ್ ಪಿ ನಾರಾಯಣ ಭರಮನಿ ಹಾಜರಾಜರು.

ನನ್ನ ಮನಸಿನ ಭಾವನೆಗಳನ್ನು ಮೇಲಧಿಕಾರಿಗಳಿಗೆ ಹಾಗೂ ಸರ್ಕಾರಕ್ಕೆ ತಿಳಿಯಪಡಿಸಿದ್ದೇನೆ. ಮೇಲಧಿಕಾರಿಗಳೊಂದಿಗೆ ಮಾತನಾಡಿದ್ದೇನೆ. ಸಿಎಂ ಹಾಗೂ ಗೃಹ ಸಚಿವರು ಮಾತನಾಡಿದ್ದಾರೆ. ಮುಂದಿನ ನಿರ್ಧಾರ ಸರ್ಕಾರ ಕೈಗೊಳ್ಳುತ್ತದೆ. ಈಗ ಕರ್ತವ್ಯಕ್ಕೆ ಹಾಜರಾಗಿದ್ದೇನೆ ಎಂದು ಹೇಳಿದರು. ತಮ್ಮ ರಾಜೀನಾಮೆ ಪತ್ರದಲ್ಲಿ ನಾರಾಯಣ ಭರಮನಿಯವರು ಸುದೀರ್ಘವಾಗಿ ಬರೆದಿದ್ದರು. ಸಿಎಂ ಅವರು ಸಾರ್ವಜನಿಕವಾಗಿ ಕಪಾಳಮೋಕ್ಷ ಮಾಡಲು ಮುಂದಾಗಿದ್ದು ನನಗೆ ತೀವ್ರ ಅವಮಾನವಾಗಿದೆ. ಈ ಘಟನೆಯಿಂದ ಬಹಳ ನೊಂದು ಹಿರಿಯ ಪೊಲೀಸ್ ಅಧಿಕಾರಿ ಹುದ್ದೆಯಿಂದ ಸ್ವಯಂ ನಿವೃತ್ತಿ ಪಡೆಯಲು ಇಚ್ಛಿಸುತ್ತಿದ್ದೇನೆ ಎಂದಿದ್ದರು.

ರಾಜ್ಯಾದ್ಯಂತ ಅಸಹಕಾರ ಚಳವಳಿ

ಹೇಳಿ, ಗೊಂದಲ ಸೃಷ್ಟಿಸಲೆಂದೇ 4 ತಿಂಗಳ ಹಿಂದೆಯೇ ನ್ಯಾಯಮೂರ್ತಿ ನಾಗಮೋಹನದಾಸ್ ನೇತೃತ್ವದ ಸಮಿತಿ ರಚಿಸಿದ್ದಾರೆ. ಇದೀಗ ಸಮೀಕ್ಷೆ ಸರಿಯಾಗಿಲ್ಲ ಎಂಬ ವರದಿಗಳು ಬರುತ್ತಿದ್ದು, ಸರ್ಕಾರ ಗೊಂದಲ ಸೃಷ್ಟಿಸಿ ಒಳ ಮೀಸಲಾತಿ ಮಾಡದಿರುವ ಹುನ್ನಾರ ಸೃಷ್ಟಿಸುತ್ತಿರುವ ಆತಂಕ ನಿರ್ಮಾಣವಾಗಿದೆ.

ಮುಖ್ಯಮಂತ್ರಿ ಅವರಿಗೆ ಸಾಮಾಜಿಕ ಕಳಕಳಿ, ಕಾಳಜಿ ಇದ್ದಿದ್ದರೆ ಒಳ ಮೀಸಲಾತಿ ಜಾರಿ ಮಾಡುತ್ತಿದ್ದರು. ಕಾಂಗ್ರೆಸ್ ಅಧಿನಾಯಕಿ ಸೋನಿಯಾ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ 2023ರ ಚುನಾವಣಾ ಪ್ರಣಾಳಿಕೆಯಲ್ಲಿ ಮೊದಲನೇ ಸಂಪುಟ ಸಭೆಯಲ್ಲೇ ಒಳಮೀಸಲಾತಿ ಜಾರಿ ಮಾಡುವ ವಾಗ್ದಾನ ಮಾಡಿದ್ದರು.

ಹೋರಾಟ ಬೆಂಬಲಿಸಿ ಪ್ರಧಾನಿ ನರೇಂದ್ರ ಮೋದಿ ಸರ್ಕಾರವು ಸುಪ್ರೀಂಕೋರ್ಟ್‌ಗೆ ತನ್ನ ಅಭಿಪ್ರಾಯವನ್ನು ಅಟಾರ್ನಿ ಜನರಲ್ ಮತ್ತು ಸಾಲಿಸಿಟರ್ ಮೂಲಕ ತಿಳಿಸಿ, ಕೇಂದ್ರ ಸರ್ಕಾರ ಸಾಮಾಜಿಕ ನ್ಯಾಯ ಮತ್ತು ಒಳಮೀಸಲಾತಿಗೆ ಬದ್ಧ ಎಂದಿದೆ. ಒಳ ಮೀಸಲಾತಿ ನೀಡಲು ರಾಜ್ಯ ಸರ್ಕಾರಗಳಿಗೆ ಅಧಿಕಾರವಿದೆ ಎಂಬುದಾಗಿ ಸುಪ್ರೀಂ ಕೋರ್ಟ್ ಹೇಳಿದೆ ಎಂದರು.

ಕೇಂದ್ರದ ಮಾಜಿ ಸಚಿವ ಎ.ನಾರಾಯಣಸ್ವಾಮಿ ಮಾತನಾಡಿ, ಒಳ ಮೀಸಲಾತಿ ಜಾರಿ ಸಂಬಂಧ ಸಿದ್ದರಾಮಯ್ಯ ಸರ್ಕಾರ ಷಡ್ಯಂತ್ರ ಮಾಡುತ್ತಿದೆ, ಮಾದಿಗ ಸಮುದಾಯದ 30 ವರ್ಷದ ಹೋರಾಟದ ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದೆ ಎಂದರು. ರಾಜ್ಯದಲ್ಲಿ ಮಾದಿಗರಿಗೆ ಪ್ರತ್ಯೇಕ ಮೀಸಲಾತಿ ಕೊಡಬೇಕು, 15 ದಿನದೊಳಗೆ ಮೀಸಲಾತಿ ನೀಡದಿದ್ದಲ್ಲಿ ಅಸಹಕಾರ ಚಳವಳಿ ನಡೆಸುವುದಾಗಿ ತಿಳಿಸಿದರು.

ಎಂಎಲ್‌ಸಿ ರವಿಕುಮಾರ್ ಮೇಲೆ ನಿಯಮಾವಳಿಗಳ ಪ್ರಕಾರ ಕ್ರಮ: ಹೊರಟ್ಟಿ

ಬೆಂಗಳೂರು, ಜು.3– ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಬಗ್ಗೆ ಅವಹೇಳನಕಾರಿ ಮಾತಾಡಿರುವ ಬಿಜೆಪಿ ಎಂಎಲ್‌ಸಿ ರವಿಕುಮಾರ್ ವಿರುದ್ಧ ಕ್ರಮಕ್ಕೆ ಪ್ರದೇಶ



ಕಾಂಗ್ರೆಸ್ ಕಮಿಟಿಯಿಂದ ದೂರು ಬಂದಿದೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದ್ದು, ನಿಯಮಾವಳಿಗಳ ಪ್ರಕಾರ ಕ್ರಮ ಕೈಗೊಳ್ಳುವುದಾಗಿ ಹೇಳಿದ್ದಾರೆ.

ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೀಗೆ ದೂರು ಬಂದಿದೆ. ನಿಮ್ಮ ಅಭಿಪ್ರಾಯ ಕೊಡಿ ಎಂದು ರವಿಕುಮಾರ್ ಅವರಿಗೆ ನಾನು ಪತ್ರ ಬರೆದಿದ್ದೇನೆ. ಅವರು ಅಭಿಪ್ರಾಯ ಕೊಟ್ಟ ಮೇಲೆ ಮುಂದಿನ ತೀರ್ಮಾನ ಮಾಡುತ್ತೇನೆ ಎಂದಿದ್ದಾರೆ.

ರವಿಕುಮಾರ್ ಅವರ ಸದಸ್ಯತ್ವ ರದ್ದು ಮಾಡುವ ಅಧಿಕಾರ ನನಗೆ ಇಲ್ಲ. ಕಾನೂನು ತಜ್ಞರ ಅಭಿಪ್ರಾಯ ಪಡೆದು ಮುಂದಿನ ತೀರ್ಮಾನ ಮಾಡುತ್ತೇವೆ. ವಿಧಾನ ಪರಿಷತ್ ನಿಯಮದ ಪ್ರಕಾರ ಮುಂದಿನ ಕ್ರಮ ತೆಗೆದುಕೊಳ್ಳುತ್ತೇವೆ. ರವಿಕುಮಾರ್ ಅಭಿಪ್ರಾಯ ಪಡೆಯದೇ ನಾನೇನು ಕ್ರಮ ತೆಗೆದುಕೊಳ್ಳಲು ಆಗಲ್ಲ ಅಂತ ಸ್ಪಷ್ಟಪಡಿಸಿದ್ದಾರೆ. ಇದು ವಿಧಾನಸೌಧ ಪರಿಮಿತಿಯಲ್ಲಿ ನಡೆದಿದೆ ಅದಕ್ಕೆ ನಾನು ರವಿಕುಮಾರ್‌ಗೆ ಪತ್ರ ಬರೆದಿದ್ದೇನೆ. ಪತ್ರಕ್ಕೆ ಅವರ ಅಭಿಪ್ರಾಯ ಬರಲಿ, ರಾಜ್ಯಸಭೆ ಸೆಕ್ರೆಟರಿ ಜನರಲ್ ಅವರ ಅಭಿಪ್ರಾಯ ಪಡೆಯುತ್ತೇನೆ. ಪೊಲೀಸ್ ಕೇಸ್ ಬಗ್ಗೆ ನನಗೆ ಗೊತ್ತಿಲ್ಲ. ಶಾಸಕರನ್ನು ಅರೆಸ್ಟ್ ಮಾಡಿದ್ದರೆ ನಮಗೆ ಮಾಹಿತಿ ಕೊಡಬೇಕು ಅಷ್ಟೇ ನಾವು ರವಿಕುಮಾರ್ ಅಭಿಪ್ರಾಯ ಪಡೆದು ನಿಯಮದ ಪ್ರಕಾರ ಕ್ರಮ ತೆಗೆದುಕೊಳ್ತೀನಿ ಎಂದು ತಿಳಿಸಿದ್ದಾರೆ.

ಶಾಲಿನಿ ರಜನೀಶ್ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ನೀಡಿದ್ದರೆ ನೇಣು ಹಾಕಿಕೊಳ್ಳುತ್ತೇನೆ

ಬೆಂಗಳೂರು, ಜು.3– ತನ್ನ ವಿರುದ್ಧ ಎಫ್ಐಆರ್ ದಾಖಲಾದ ಬೆನ್ನಲ್ಲೇ ಎಂಎಲ್‌ಸಿ ಎನ್.ರವಿಕುಮಾರ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ವಿರುದ್ಧ ನಾನು ಯಾವುದೇ ಅವಹೇಳನಕಾರಿಯಾಗಿ ಹೇಳಿಕೆ ನೀಡಿಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ.



ಈ ಸಂಬಂಧ ಮಾಧ್ಯಮಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಶಾಲಿನಿ ರಜನೀಶ್ ಅವರ ಬಗ್ಗೆ ಬಹಳ ಗೌರವ ಇದೆ. ಅವರ ಬಗ್ಗೆ ಯಾವುದೇ ಆಕ್ಷೇಪಾರ್ಹ ಹೇಳಿಕೆ ಕೊಟ್ಟಿಲ್ಲ. ಆಕ್ಷೇಪಾರ್ಹ ಹೇಳಿಕೆ ನೀಡಿದ್ದರೆ ನಾನು ನೇಣು ಹಾಕಿಕೊಳ್ಳುತ್ತೇನೆ ಎಂದು ಹೇಳಿದ್ದಾರೆ.

ಮುಖ್ಯ ಕಾರ್ಯದರ್ಶಿಯವರು 24 ಗಂಟೆ ಬ್ಯುಸಿ ಇದ್ದಾರೆ. ಹಾಗಾಗಿ ಅವರು ಹಗಲು ರಾತ್ರಿ ಕೆಲಸ ಮಾಡುತ್ತಿದ್ದಾರೆ ಎಂದೆ. ಹಗಲಲ್ಲಿ ಸಿಎಂ ಕಾರ್ಯಕ್ರಮಗಳಲ್ಲಿ ಭಾಗವಹಿಸ್ತಾರೆ, ರಾತ್ರಿಯೆಲ್ಲ ಸರ್ಕಾರದ ಕೆಲಸ ಮಾಡ್ತಾರೆ ಅಂದೆ. ಇದರೊಳಗೆ ಏನು ತಪ್ಪಿದೆ? ನಾನು ಅವಾಚ್ಯ ಶಬ್ದ ಬಳಸಿಲ್ಲ ಎಂದು ತಿಳಿಸಿದರು. ಅವಾಚ್ಯ ಶಬ್ದ ಬಳಸಿದರೆ ಕಾಂಗ್ರೆಸ್‌ನವರು ಬಹಿರಂಗಪಡಿಸಲಿ. ನನಗೂ ನನ್ನ ಮನೆಯಲ್ಲಿ ಸಹೋದರಿಯರು ಇದ್ದಾರೆ. ಯಾರ ಜತೆ ಹೇಗೆ ಮಾತನಾಡಬೇಕೆಂಬ ಪರಿಜ್ಞಾನ ಇದೆ. ಮುಖ್ಯ ಕಾರ್ಯದರ್ಶಿಗೆ ಆ ರೀತಿ ಮಾತಾಡಲು ಸಾಧ್ಯಾನಾ? ಯಾರಿಗೇ ಆಗಲೀ ಆತರಹ ಮಾತಾಡೋದು ಸಾಧ್ಯನಾ? ಅವಾಚ್ಯ ಶಬ್ಧ ಇದ್ದರೆ ನೇಣು ಹಾಕಿಕೊಳ್ತೇನೆ ನನ್ನ ವಿರುದ್ಧ ದ್ವೇಷದಿಂದ ಕಾಂಗ್ರೆಸ್‌ನವರು ದೂರು ಕೊಟ್ಟಿದ್ದಾರೆ ಎಂದು ರವಿಕುಮಾರ್ ಸ್ಪಷ್ಟಪಡಿಸಿದರು.

ಮೈಸೂರು ಮಿತ್ರ

ಕೇರಳದಲ್ಲಿ ರಸ್ತೆ ಅಪಘಾತ; ಮೈಸೂರು ಜಿಮ್ ಟ್ರೇನರ್ ಸಾವು



ಮೈಸೂರು, ಜು.3(ಆರ್‌ಕೆ)–ಕೇರಳದಲ್ಲಿ ಸಂಭವಿಸಿದ ರಸ್ತೆ ಅಪಘಾತದಲ್ಲಿ ಮೈಸೂರಿನ ಜಿಮ್ ಟ್ರೇನರ್‌ವೋರ್ವ ತನ್ನ ಜನ್ಮದಿನದಂದೇ ಸಾವನ್ನಪ್ಪಿದ ಘಟನೆ ಜುಲೈ 1ರಂದು ನಡೆದಿದೆ.

ಮೈಸೂರಿನ ಮೇಟಗಳ್ಳಿ ನಿವಾಸಿ ಅನಂತಭೂಷಣ್(31) ಸಾವನ್ನಪ್ಪಿದ ಯುವಕ. ಹುಟ್ಟುಹಬ್ಬದ ಅಂಗವಾಗಿ ಬೈಕಿನಲ್ಲಿ ಕೇರಳದ ದೇವಸ್ಥಾನಕ್ಕೆ ಹೋಗಿ ಹಿಂದಿರುಗುತ್ತಿದ್ದಾಗ ಕೇರಳ–ಕರ್ನಾಟಕ ಗಡಿಯ ಕಟ್ಟಿಂಗಲ ಬಳಿ ಎದುರಿಗೆ ಬಂದ ಬಸ್ಸು ಅಪ್ಪಳಿಸಿದ ಪರಿಣಾಮ ಆತ ಸಾವನ್ನಪ್ಪಿದ್ದಾನೆ.

ಕೇರಳದ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮರಣೋತ್ತರ ಪರೀಕ್ಷೆ ನಡೆಸಿ ಮೃತದೇಹವನ್ನು ಜುಲೈ 2ರಂದು ವಾರಸುದಾರರಿಗೆ ಒಪ್ಪಿಸಿದರು. ಅನಂತಭೂಷಣ್ ಪಾರ್ಥಿವ ಶರೀರವನ್ನು ಮೈಸೂರಿಗೆ ತಂದು ಆತ ಟ್ರೇನರ್ ಆಗಿ ಕೆಲಸ ಮಾಡುತ್ತಿದ್ದ ಸಿದ್ಧಾರ್ಥನಗರದ ಜಿಮ್ನಾಶಿಯಂನಲ್ಲಿ ಕೆಲಕಾಲ ಇರಿಸಿ ಸಿಬ್ಬಂದಿ ಅಂತಿಮ ನಮನ ಸಲ್ಲಿಸಿದ ಬಳಿಕ ಮೇಟಗಳ್ಳಿಗೆ ಕೊಂಡೊಯ್ದು ಅಂತ್ಯಕ್ರಿಯೆ ನೆರವೇರಿಸಲಾಯಿತು ಎಂದು ಮೂಲಗಳು ತಿಳಿಸಿವೆ.

ಮೈಸೂರು ಅಭಿವೃದ್ಧಿ ಪ್ರಾಧಿಕಾರದ ಬಳಿ ವಾಟರ್ ಟ್ಯಾಂಕ್ ಕಾಮಗಾರಿ ನನೆಗುದಿಗೆ

ಮೈಸೂರು, ಜು.3(ಆರ್‌ಕೆ)–ಮೈಸೂರಿನ ಹೃದಯ ಭಾಗದ ಕೆಲ ವಸತಿ ಬಡಾವಣೆಗಳಿಗೆ ಕುಡಿಯುವ ನೀರು ಪೂರೈಸಲೆಂದು ಯುವರಾಜ ಕಾಲೇಜು ಆವರಣದ ಮೈಸೂರು ಅಭಿವೃದ್ಧಿ ಪ್ರಾಧಿಕಾರದ (ಎಂಡಿಎ) ಜಂಕ್ಷನ್ ಬಳಿ ಜೆಎಲ್‌ಬಿ ರಸ್ತೆಯಲ್ಲಿ ನಿರ್ಮಿಸುತ್ತಿರುವ ಓವರ್‌ಹೆಡ್ ವಾಟರ್ ಟ್ಯಾಂಕ್ ಕಾಮಗಾರಿ 16 ತಿಂಗಳು ಕಳೆದರೂ ಪೂರ್ಣಗೊಂಡಿಲ್ಲ.

ಮೈಸೂರು ಮಹಾನಗರ ಪಾಲಿಕೆಯ ವಾಣಿವಿಲಾಸ ವಾಟರ್ ವರ್ಕ್ಸ್‌ನಿಂದ 3.10 ಕೋಟಿ ರೂ. ಅಂದಾಜು ವೆಚ್ಚದಲ್ಲಿ ನಿರ್ಮಿಸುತ್ತಿರುವ ಓವರ್‌ಹೆಡ್ ವಾಟರ್ ಟ್ಯಾಂಕ್ ನಿರ್ಮಾಣಕ್ಕೆ 2024ರ ಮಾರ್ಚ್ ಮಾಹೆಯಲ್ಲಿ ಗುದ್ದಲಿ ಪೂಜೆ ನೆರವೇರಿಸಲಾಗಿತ್ತು. ಪಾಲಿಕೆಯ 15ನೇ ಹಣಕಾಸು ಆಯೋಗದ ಅನುದಾನದಡಿ ಕೈಗೊಂಡಿರುವ 10 ಲಕ್ಷ ಲೀಟರ್ ನೀರು ಸಂಗ್ರಹ ಸಾಮರ್ಥ್ಯದ ವಾಟರ್ ಟ್ಯಾಂಕ್ ಕಾಮಗಾರಿಯನ್ನು ತುಮಕೂರು ಮೂಲದ ಎಂ.ಎನ್.ರಮೇಶ್ ಕನ್‌ಸ್ಟ್ರಕ್ಷನ್ ಗುತ್ತಿಗೆದಾರ ಸಂಸ್ಥೆಗೆ ಒಪ್ಪಿಸಲಾಗಿತ್ತು.

ಮೈಸೂರು ನಗರದ ದೇವರಾಜ ಮೊಹಲ್ಲಾ, ಬೆಳ್ಳಿಕಟ್ಟೆ ಮಿಷನ್, ಸುಣ್ಣದಕೇರಿ, ಕುಕರವಾಡಿ, ಹೊಸಕೇರಿ, ಚಾಮರಾಜಪುರಂ ಸೇರಿದಂತೆ ಸುತ್ತ ಮುತ್ತಲಿನ ಸುಮಾರು 25,000 ಜನಸಂಖ್ಯೆ ಇರುವ ವಸತಿ ಬಡಾವಣೆಗಳಿಗೆ ನೀರು ಪೂರೈಸುವುದು ಇದರ ಉದ್ದೇಶವಾಗಿದೆ.

> "ಮೈಸೂರು ಅಭಿವೃದ್ಧಿ ಪ್ರಾಧಿಕಾರ(ಎಂಡಿಎ)ದ ಸರ್ಕಲ್ ಬಳಿ ಜೆಎಲ್‌ಬಿ ರಸ್ತೆಯಲ್ಲಿ ಪಾಲಿಕೆ ಜಾಗದಲ್ಲಿ 10 ಲಕ್ಷ ಲೀಟರ್ ನೀರು ಸಂಗ್ರಹ ಸಾಮರ್ಥ್ಯದ ಓವರ್‌ಹೆಡ್ ಟ್ಯಾಂಕ್ ನಿರ್ಮಾಣ ಮಾಡಲಾಗುತ್ತಿತ್ತು. ಆದರೆ 15ನೇ ಹಣಕಾಸು ಆಯೋಗದ ಅನುದಾನ ನಿಗದಿತ ಸಮಯಕ್ಕೆ ಬಳಕೆಯಾಗದೆ ವಾಪಸ್ ಹೋದ ಕಾರಣ ವಿಳಂಬವಾಗಿದೆ. ಈಗ ಜನರಲ್ ಗ್ರಾಂಟ್‌ನಲ್ಲಿ ಹಣ ಪಾವತಿಸಲು ತೀರ್ಮಾನಿಸಲಾಗಿದೆ. ಜೊತೆ ಸಂಪರ್ಕ ಮಾರ್ಗದ 80 ಲಕ್ಷ ರೂ. ಕಾಮಗಾರಿಗೆ ಈಗ ಅನುಮೋದನೆಯಾಗಿರುವುದರಿಂದ ಮೂರ್ನಾಲ್ಕು ತಿಂಗಳಲ್ಲಿ ಕಾಮಗಾರಿ ಪೂರ್ಣಗೊಳಿಸಿ ಟ್ಯಾಂಕ್ ಸೇವೆಗೆ ಕಲ್ಪಿಸಲಾಗುವುದು."
>
> -ಶಿಲ್ಪಾ, ಎಕ್ಸಿಕ್ಯೂಟಿವ್ ಇಂಜಿನಿಯರ್, ವಾಣಿ ವಿಲಾಸ ವಾಟರ್ ವರ್ಕ್ಸ್



ಮೈಸೂರಿನ ಜೆಎಲ್‌ಬಿ ರಸ್ತೆಯ ಎಂಡಿಎ ಜಂಕ್ಷನ್ ಬಳಿ ಯುವರಾಜ ಕಾಲೇಜು ಆವರಣದಲ್ಲಿ ನಿರ್ಮಿಸುತ್ತಿರುವ ಓವರ್‌ಹೆಡ್ ವಾಟರ್ ಟ್ಯಾಂಕ್

ಆರಂಭದಲ್ಲಿ ವೇಗವಾಗಿ ನಡೆದ ಕಾಮಗಾರಿಯು ನಂತರ ನಿಧಾನವಾಯಿತು. ಪಾಲಿಕೆಯಲ್ಲಿ ಜನಪ್ರತಿನಿಧಿಗಳಿಲ್ಲ ಎಂಬ ಕಾರಣಕ್ಕಾಗಿ 15ನೇ ಹಣಕಾಸು ಆಯೋಗದ ಅನುದಾನವನ್ನು ಸರ್ಕಾರ ವಾಪಸ್ ಪಡೆದಿರುವುದರಿಂದ ಗುತ್ತಿಗೆದಾರನಿಗೆ ಹಣ ನೀಡದಿರುವ ದರಿಂದ ಕೆಲಸವನ್ನು ಕೆಲಕಾಲ ಸ್ಥಗಿತಗೊಳಿಸಲಾಗಿತ್ತು.

ನಂತರ ಜನರಲ್ ಗ್ರಾಂಟ್‌ನಿಂದ ಹಣ ನೀಡುವುದಾಗಿ ಪಾಲಿಕೆ ಭರವಸೆ ನೀಡಿದ ಬಳಿಕವಷ್ಟೇ ಕಾಮಗಾರಿ ಪುನಾರಂಭಗೊಂಡಿತ್ತು. ಟ್ಯಾಂಕ್‌ನ ಸಿವಿಲ್ ಕಾಮಗಾರಿ ಪೂರ್ಣವಾಗಿದ್ದು, ಯಾದವಗಿರಿಯ ನೆಲಮಟ್ಟದ ಜಲಸಂಗ್ರಹಾಗಾರದಿಂದ ಈ ಓವರ್‌ಹೆಡ್ ಟ್ಯಾಂಕ್‌ಗೆ ನೀರು ತುಂಬಿಸಲು ಸಂಪರ್ಕ ಕೊಳವೆ ಮಾರ್ಗದ 80ಲಕ್ಷ ರೂ. ವೆಚ್ಚದ ಕಾಮಗಾರಿ ನಡೆಯಬೇಕಾಗಿದ್ದು, ಜನರಲ್ ಗ್ರಾಂಟ್‌ನಲ್ಲಿ ಹಣ ಪಾವತಿ ಮಾಡದೇ ಲಿಂಕಿಂಗ್ ಕೆಲಸ ಮಾಡುವುದಿಲ್ಲ ಎಂದು ಗುತ್ತಿಗೆದಾರ ಪಟ್ಟುಹಿಡಿದ್ದಾರೆ ಎಂದು ಹೇಳಲಾಗಿದೆ.

16 ತಿಂಗಳ ಹಿಂದೆ ಆರಂಭವಾದ ಕಾಮಗಾರಿ ಪೂರ್ಣಗೊಳ್ಳದ ಪರಿಣಾಮ ಜೆಎಲ್‌ಬಿ ರಸ್ತೆಯ ಬದಿ ಕಾಲವಾಧಿ ಆಕ್ರಮಿಸಿರುವುದರಿಂದ ನಿರ್ಮಾಣ ಹಂತದ ವಾಟರ್ ಟ್ಯಾಂಕ್ ಅಸ್ಥಿಪಂಜರದಂತೆ ನಿಂತಿದ್ದು, ನೋಡಿದವರು ಏಕೆ ಹೀಗೆ ಕೆಲಸ ಬಾಕಿ ಇದೆ ಎಂದು ಬೇಸರಪಡುವಂತಾಗಿದೆ. ನಿತ್ಯ ಅದೇ ರಸ್ತೆಯಲ್ಲಿ ಓಡಾಡುವ ಪಾಲಿಕೆ, ವಾಣಿವಿಲಾಸ ವಾಟರ್ ವರ್ಕ್ಸ್ ಅಧಿಕಾರಿಗಳಿಗೆ ಪೂರ್ಣಗೊಳ್ಳದೇ ಅನಾಥವಾಗಿ ನಿಂತಿರುವ ಈ ವಾಟರ್ ಟ್ಯಾಂಕ್‌ನ ಪರಿವೆಯೇ ಇಲ್ಲ.

ರಾಜ್ಯದ ಆಶಾಕಿರಣ ಯೋಜನೆಗೆ ವಿಶ್ವ ಆರೋಗ್ಯ ಸಂಸ್ಥೆ ಮೆಚ್ಚುಗೆ ಸಮಗ್ರ ಮೌಲ್ಯಮಾಪನಕ್ಕೆ ನಿರ್ಧಾರ

ಬೆಂಗಳೂರು, ಜು.3– ರಾಜ್ಯ ಸರ್ಕಾರ ಆರಂಭಿಸಿದ ಕಣ್ಣಿನ ಆರೈಕೆಗೆ ಸಂಬಂಧಿಸಿದ ಆಶಾ ಕಿರಣ ಯೋಜನೆಯ ಬಗ್ಗೆ ವಿಶ್ವ ಆರೋಗ್ಯ ಸಂಸ್ಥೆ ಮೆಚ್ಚುಗೆ ವ್ಯಕ್ತಪಡಿಸಿದ್ದು, ಯೋಜನೆಯ ಸಮಗ್ರ ಮೌಲ್ಯಮಾಪನ ಮತ್ತು ಜನ–ಕೇಂದ್ರಿತ ಕಣ್ಣಿನ ಆರೋಗ್ಯಕ್ಕಾಗಿ ಜಾಗತಿಕ ಮಾದರಿಯಾಗಿ ದಾಖಲಿಸುವ ಪ್ರಸ್ತಾಪ ಮಾಡಿದೆ.

ಈ ಸಂಬಂಧ ವಿಶ್ವ ಆರೋಗ್ಯ ಸಂಸ್ಥೆಯು ಭಾರತದ ಪ್ರತಿನಿಧಿ ಡಾ. ರೊಡೆರಿಕೊ ಎಚ್ ಆಫ್ರಿನ್ ಅವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹರ್ಷ್ ಗುಪ್ತಾ ಅವರಿಗೆ ಪತ್ರ ಬರೆದಿದ್ದು, ವಿಶ್ವ ಆರೋಗ್ಯ ಸಂಸ್ಥೆಯು ತನ್ನ ಪ್ರಮಾಣಿತ ಸಾಧನಗಳಾದ ಕಣ್ಣಿನ ಆರೈಕೆ ಪರಿಸ್ಥಿತಿ ವಿಶ್ಲೇಷಣೆ ಪರಿಕರ ಮತ್ತು ಕಣ್ಣಿನ ಆರೈಕೆ ಸೂಚಕ ಮೆನು ಬಳಸಿಕೊಂಡು ಕಾರ್ಯಕ್ರಮದ ಸಮಗ್ರ ಮೌಲ್ಯಮಾಪನ ಮಾಡುತ್ತದೆ ಎಂದು ಹೇಳಿದ್ದಾರೆ.

ಯೋಜನೆಯ ಪ್ರಕ್ರಿಯೆಗಳು, ಫಲಿತಾಂಶಗಳು ಮತ್ತು ಉತ್ತಮ ಅಭ್ಯಾಸಗಳನ್ನು ನಿರ್ಣಯಿಸುವುದು ಮತ್ತು ಕಣ್ಣಿನ ಆರೈಕೆಯಲ್ಲಿ ಜಾಗತಿಕ ಜ್ಞಾನ ಹಂಚಿಕೆಗೆ ಕೊಡುಗೆ ನೀಡುವುದು ಇದರ ಉದ್ದೇಶವಾಗಿದೆ. ಈ ಮೌಲ್ಯಮಾಪನವನ್ನು ವಿಶ್ವ ಆರೋಗ್ಯ ಸಂಸ್ಥೆ ರಾಜ್ಯಕ್ಕೆ ಯಾವುದೇ ವೆಚ್ಚವಿಲ್ಲದೆ ಸ್ವತಂತ್ರವಾಗಿ ನಡೆಸುತ್ತದೆ ಎಂದು ಪತ್ರದಲ್ಲಿ ತಿಳಿಸಲಾಗಿದೆ. ಮೌಲ್ಯ ಮಾಪನ ಪ್ರಕ್ರಿಯೆ ನಡೆಸಲು ನೋಡಲ್ ಅಧಿಕಾರಿಯನ್ನು ನಾಮನಿರ್ದೇಶನ ಮಾಡುವಂತೆ ವಿಶ್ವ ಆರೋಗ್ಯ ಸಂಸ್ಥೆ ರಾಜ್ಯ ಸರ್ಕಾರವನ್ನು ಕೇಳಿಕೊಂಡಿದೆ.

ಯುವರ್ ಫ್ಯೂಚರ್ ಇನ್ ಕ್ಲಿನಿಕಲ್ ರಿಸರ್ಚ್: ಎಕ್ಸ್‌ಪ್ಲೋರ್, ಎಂಗೇಜ್, ಎಕ್ಸೆಲ್ ಕುರಿತು ವಿಚಾರ ಸಂಕಿರಣ

ಮೈಸೂರು, ಜು.3–ಮೈಸೂರಿನ ಶಾರದಾ ವಿಲಾಸ ಫಾರ್ಮಸಿ ಕಾಲೇಜು, ನೀಲಸರಿ ಕ್ಲಿನಿಕಲ್ ರಿಸರ್ಚ್ ಕನ್ಸಲ್ಟೆನ್ಸಿ ಪ್ರೈವೇಟ್ ಲಿಮಿಟೆಡ್ ಸಹಯೋಗದೊಂದಿಗೆ ಶಾರದಾ ವಿಲಾಸ ಫಾರ್ಮಸಿ ಕಾಲೇಜಿನಲ್ಲಿ ಜು.5ರಂದು ಬೆಳಗ್ಗೆ 10.30 ಗಂಟೆಗೆ ಪ್ರೊ. ಚಿನ್ನಸ್ವಾಮಿ ಶೆಟ್ಟಿ ಸಭಾಂಗಣದಲ್ಲಿ ಯುವರ್ ಫ್ಯೂಚರ್ ಇನ್ ಕ್ಲಿನಿಕಲ್ ರಿಸರ್ಚ್: ಎಕ್ಸ್‌ಪ್ಲೋರ್, ಎಂಗೇಜ್, ಎಕ್ಸೆಲ್ ಕುರಿತು ವಿಚಾರ ಸಂಕಿರಣ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಜಿಸಿ ಸದಸ್ಯರು ಹಾಗೂ ಯಶಸ್ವಿನಿ ವೈದ್ಯಕೀಯ ಕೇಂದ್ರದ ಮಾಲೀಕರಾದ ಡಾ. ಎಚ್.ಸುನೀಲ್ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಶಾರದಾ ವಿಲಾಸ ಶಿಕ್ಷಣ ಸಂಸ್ಥೆಗಳ ಗೌರವ ಕಾರ್ಯದರ್ಶಿ ಆರ್. ನರಸಿಂಹ, ಜೆಎಸ್‌ಎಸ್ ವೈದ್ಯಕೀಯ ಕಾಲೇಜಿನ ಸೆಂಟರ್ ಫಾರ್ ಕ್ಲಿನಿಕಲ್ ರಿಸರ್ಚ್ ಎಕ್ಸಲೆನ್ಸ್ ಮುಖ್ಯಸ್ಥ ಡಾ. ಪ್ರತಿಭಾ ಪೆರೇರಾ, ನೀಲಸರಿ ಕ್ಲಿನಿಕಲ್ ರಿಸರ್ಚ್ ಕನ್ಸಲ್ಟೆನ್ಸಿ ಪ್ರೈವೇಟ್ ಲಿಮಿಟೆಡ್ ನಿರ್ದೇಶಕರಾದ ಡಾ. ಲಕ್ಷ್ಮಿ ಆರ್.ಜ್ಯೋತಿನಂಗರಂ ಮತ್ತು ಸ್ಟ್ರಾಟಜಿ ಲೀಡ್ ಪ್ರಾಂಶುಪಾಲರಾದ ಡಾ. ನಂಜರಾಜೇ ಅರಸ್ ಭಾಗವಹಿಸಲಿದ್ದಾರೆ. ಶಾರದಾ ವಿಲಾಸ ಫಾರ್ಮಸಿ ಕಾಲೇಜಿನ ಪ್ರಾಂಶುಪಾಲ ಡಾ. ಹನುಮಂತಚಾರ್ ಜೋಶಿ ಅಧ್ಯಕ್ಷತೆ ವಹಿಸಲಿದ್ದಾರೆ.

ಬೋಗಾದಿ ಪಟ್ಟಣ ಪಂಚಾಯತಿ ವತಿಯಿಂದ ಪ್ರಧಾನಮಂತ್ರಿ ಆವಾಸ್ ಯೋಜನೆಗೆ ಅರ್ಜಿ ಆಹ್ವಾನ

ಮೈಸೂರು,ಜು.3– ಭಾರತ ಸರ್ಕಾರದ ಪ್ರಧಾನಮಂತ್ರಿ ಆವಾಸ್ (ನಗರ) 2.0 ಯೋಜನೆಯನ್ನು ಸರ್ವರಿಗೂ ಸೂರು ಒದಗಿಸಲು ಸೆ.1 ರಿಂದ ಅನ್ವಯವಾಗುವಂತೆ ಜಾರಿಗೊಳಿಸಲಾಗಿದ್ದು, ಪ್ರಧಾನ ಮಂತ್ರಿ ಆವಾಸ್ ನಗರ ಯೋಜನೆಯಡಿ ಬೇಡಿಕೆ ಪ್ರಧಾನ ಮಂತ್ರಿ ಆವಾಸ್ ನಗರ ಯೋಜನೆಯಡಿ ಬೇಡಿಕೆ ಸಮೀಕ್ಷೆಯ ವಿವರಗಳನ್ನು ನಮೂದಿಸಲು ಕೇಂದ್ರ ಸರ್ಕಾರವು Unified Web Portal ಆನ್‌ಲೈನ್ ವ್ಯವಸ್ಥೆಯನ್ನು ಮಾಡಿದ್ದು, ಸ್ವತಃ ಫಲಾನುಭವಿಗಳು ಕೂಡ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಬೋಗಾದಿ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿರುವ ಅರ್ಹ ವಸತಿ ರಹಿತ, ನಿವೇಶನ ರಹಿತ ಫಲಾನುಭವಿಗಳು ಪ್ರಧಾನಮಂತ್ರಿ ಆವಾಸ್ (ನಗರ)2.0 ಯೋಜನೆಯಡಿ ರೂ. 1.50 ಲಕ್ಷ ಸಹಾಯಧನವನ್ನು ಪಡೆದು ವಸತಿ ಸೌಕರ್ಯ ಪಡೆಯಲು ಈ URL https://pmay-urban.gov.in ಮೂಲಕ ಜುಲೈ 15 ರೊಳಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0821–2331099 ನ್ನು ಸಂಪರ್ಕಿಸಬಹುದು ಎಂದು ಬೋಗಾದಿ ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಾವು ಬೆಳೆಗಾರರಿಗೆ 101 ಕೋಟಿ ಬಿಡುಗಡೆ ಮಾಡಿದ ರಾಜ್ಯ ಸರ್ಕಾರ

ಬೆಂಗಳೂರು, ಜು.3– ಮಾವು ಬೆಳೆಗಾರರ ಸಂಕಷ್ಟಕ್ಕೆ ಸ್ಪಂದಿಸಿದ್ದ ರಾಜ್ಯ ಸರ್ಕಾರ ಈ ಮೊದಲು ತಿಳಿಸಿದಂತೆ ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿ ಬೆಲೆ ವ್ಯತ್ಯಾಸ ಪಾವತಿಗೆ 101 ಕೋಟಿ ರೂ ಬಿಡುಗಡೆಗೆ ಆದೇಶ ಹೊರಡಿಸಿದೆ.

ಆವರ್ತ ನಿಧಿಯಿಂದ ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮಾರುಕಟ್ಟೆ ನಿಗಮದ ವ್ಯವಸ್ಥಾಪಕ ನಿರ್ದೇಶಕರಿಗೆ ಹಣ ಬಿಡುಗಡೆ ಮಾಡುವಂತೆ ರಾಜ್ಯ ಕೃಷಿ ಮಾರಾಟ ಮಂಡಳಿಯ ವ್ಯವಸ್ಥಾಪಕ ನಿರ್ದೇಶಕರಿಗೆ ಸೂಚಿಸಲಾಗಿದೆ.

ಅಲ್ಲದೆ ಈಗಾಗಲೇ ಘೋಷಿಸಿರುವಂತೆ ಶೇ 50 ರಷ್ಟು ಮೊತ್ತವನ್ನು ಕೇಂದ್ರ ಸರ್ಕಾರದಿಂದ ಮರುಪಾವತಿ ಪಡೆಯಲು ಸಹ ಕ್ರಮ ವಹಿಸುವಂತೆ ಆದೇಶದಲ್ಲಿ ನಿರ್ದೇಶನ ನೀಡಲಾಗಿದೆ. ರಾಜ್ಯದಲ್ಲಿ ಮಾವು ಬೆಲೆ ಕುಸಿತವಾಗಿ ರೈತರು ಸಂಕಷ್ಟಕ್ಕೆ ಸಿಲುಕಿದ್ದ ಸಂದರ್ಭದಲ್ಲಿ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಅವರು ಕೇಂದ್ರ ಸರ್ಕಾರದ ಗಮನ ಸೆಳೆದು, ಮನವಿಗಳನ್ನು ಅರ್ಪಿಸಿ ಮಾರುಕಟ್ಟೆ ಮಧ್ಯ ಪ್ರವೇಶ ಯೋಜನೆಯಡಿ ಬೆಲೆ ವ್ಯತ್ಯಾಸ ಪಾವತಿಗೆ ಕೇಂದ್ರ ಕೃಷಿ ಸಚಿವರ ಸಮ್ಮತಿ ಪಡೆಯುವಲ್ಲಿ ಯಶಸ್ವಿಯಾಗಿದ್ದರು.

ಮೈಸೂರಿನ ನೇತ್ರಧಾಮ ಆಸ್ಪತ್ರೆಯಲ್ಲಿ ಸರಳ ಗ್ಲುಕೋಮಾ ಶಸ್ತ್ರಚಿಕಿತ್ಸಾ ಕೇಂದ್ರ ಆರಂಭ

ಮೈಸೂರು, ಜು.3(ಬಿಎಲ್‌ಯು)– ಮೈಸೂರಿನ ನೇತ್ರಧಾಮ ಸೂಪರ್ ಸ್ಪೆಷಾಲಿಟಿ ಕಣ್ಣಿನ ಆಸ್ಪತ್ರೆಯು ನಗರದ ಮೊದಲ ಸರಳ ಗ್ಲುಕೋಮಾ ಶಸ್ತ್ರ ಚಿಕಿತ್ಸಾ ಶ್ರೇಷ್ಠತಾ ಕೇಂದ್ರವನ್ನು ಆರಂಭಿಸಿದೆ ಎಂದು ಆಸ್ಪತ್ರೆಯ ಅಧೀಕ್ಷಕ ಡಾ.ಚೇತನ್ ಆನಂದ್ ತಿಳಿಸಿದರು.

ನಗರದ ಚಾಮರಾಜಪುರಂನಲ್ಲಿರುವ ಆಸ್ಪತ್ರೆಯಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ಲುಕೋಮಾ ರೋಗಿಗಳಿಗೆ ತ್ವರಿತವಾಗಿ ಚೇತರಿಸಿಕೊಳ್ಳುವ, ಕಡಿಮೆ ತೊಡಕುಗಳು, ಕಡಿಮೆ ಅಡ್ಡ ಪರಿಣಾಮಗಳು ಮತ್ತು ಜೀವಿತಾವಧಿಯ ಔಷಧಿಗಳ ಮೇಲಿನ ಅವಲಂಬನೆಯನ್ನು ಇದು ಕಡಿಮೆ ಮಾಡಲಿದೆ ಎಂದು ಹೇಳಿದರು.

ವಿಶಿಷ್ಟ ಸಾಧನ ಬಳಸಿ ಕಡಿಮೆ ನೋವಿನ ಮತ್ತು ಕ್ಷಿಪ್ರ ಚೇತರಿಕೆಯ ಸಣ್ಣ ಛೇದನದ ಸರಳ ಗ್ಲುಕೋಮಾ ಶಸ್ತ್ರಚಿಕಿತ್ಸೆ ಒಳಗೊಂಡಿರುವ ಶ್ರೇಷ್ಠತಾ ಕೇಂದ್ರ ಇದಾಗಿದೆ ಎಂದು ಡಾ.ಚೇತನ ಆನಂದ್ ತಿಳಿಸಿದರು.

ಗ್ಲುಕೋಮಾ ದೇಶದಾದ್ಯಂತ ಸುಮಾರು 1.8 ಕೋಟಿ ಜನರ ಮೇಲೆ ಪರಿಣಾಮ ಬೀರುತ್ತಿದೆ. ಇದರಲ್ಲಿ ಶೇಕಡ 12 ಕ್ಕಿಂತ ಹೆಚ್ಚು ಜನರಲ್ಲಿ ಕುರುಡುತನಕ್ಕೆ ಕಾರಣವಾಗಿದೆ ಎಂದು ಹೇಳಿದರು.

ಮಂಡ್ಯ, ಹಾಸನ, ಚಾಮರಾಜನಗರ, ಮಡಿಕೇರಿ ಮತ್ತು ಕೇರಳದ ಕೆಲವು ಭಾಗದ ಜನರು ಸುಧಾರಿತ ಗ್ಲುಕೋಮಾ ಶಸ್ತ್ರಚಿಕಿತ್ಸೆಗಾಗಿ ಬೆಂಗಳೂರಿನ ಆಸ್ಪತ್ರೆಗಳಿಗೆ ಹೋಗಬೇಕಿತ್ತು. ಈಗ ನಮ್ಮ ಆಸ್ಪತ್ರೆಯಲ್ಲಿಯೇ ಜಾಗತಿಕ ಗುಣಮಟ್ಟದ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಡಾ. ಚೇತನ್ ಆನಂದ್ ಮಾಹಿತಿ ನೀಡಿದರು. ಆಸ್ಪತ್ರೆಯ ಸೀನಿಯರ್ ಕನ್ಸಲ್ಟೆಂಟ್ ಡಾ.ಮೋನಿಕಾ ಆನಂದ್, ಹೆಚ್.ಆರ್. ಜನರಲ್ ಮ್ಯಾನೇಜರ್ ರಘು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಭಕ್ತನ ಸೋಗಿನಲ್ಲಿ ಬಂದು ದೇವಿಯ ತಾಳಿ ಕದ್ದ ಖದೀಮ

ಮೈಸೂರು, ಜು.3– ಭಕ್ತನ ಸೋಗಿನಲ್ಲಿ ದೇವಿಯ ತಾಳಿಯನ್ನೇ ಕಳವು ಮಾಡಿರುವ ಘಟನೆ ಮೈಸೂರಿನ ಗಾಯತ್ರಿಪುರಂನಲ್ಲಿ ನಡೆದಿದೆ. ಇಲ್ಲಿನ ಚಾಮುಂಡೇಶ್ವರಿ ದೇವಸ್ಥಾನದಲ್ಲಿ ಬುಧವಾರ ಬೆಳಗ್ಗೆ ಈ ಘಟನೆ ನಡೆದಿದ್ದು, ಅರ್ಚಕರು ದೇವಾಲಯದ ಹೊರ ಆವರಣವನ್ನು ಸ್ವಚ್ಛಗೊಳಿಸುವಾಗ ಭಕ್ತನ ಸೋಗಿನಲ್ಲಿ ಬಂದ ಖದೀಮನೊಬ್ಬ ಗರ್ಭಗುಡಿಯೊಳಗೆ ಹೋಗಿ ದೇವಿಗೆ ಧರಿಸಿದ್ದ ತಾಳಿಯನ್ನು ಕಳವು ಮಾಡಿಕೊಂಡು, ಪರಾರಿಯಾಗಿದ್ದಾನೆ. ಅಷ್ಟರಲ್ಲಾಗಲೇ ದೇವಿಗೆ ಅಲಂಕಾರ ಮಾಡಿ, ಪೂಜೆ ನೆರವೇರಿಸಿದ್ದರಿಂದ ತಾಳಿ ಕಳುವಾಗಿರುವುದು ಅರ್ಚಕರ ಗಮನಕ್ಕೆ ಬಂದಿಲ್ಲ. ನಿನ್ನೆ ಸಂಜೆ ಸಿಸಿಟಿವಿ ಪರಿಶೀಲಿಸುವಾಗ ಖದೀಮನ ದುಷ್ಕೃತ್ಯ ಬೆಳಕಿಗೆ ಬಂದಿದೆ. ಈ ಸಂಬಂಧ ದೇವಸ್ಥಾನ ಆಡಳಿತ ಮಂಡಳಿಯವರು ನೀಡಿರುವ ದೂರಿನನ್ವಯ ನಜರ್‌ಬಾದ್ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು, ಕಳ್ಳನ ಪತ್ತೆಗೆ ಕ್ರಮ ಕೈಗೊಂಡಿದ್ದಾರೆ.

ಜು.9, ಕಾರ್ಮಿಕ ಸಂಘಟನೆಗಳಿಂದ ದೇಶವ್ಯಾಪ್ತಿ ಸಾರ್ವತ್ರಿಕ ಮುಷ್ಕರ

ಮೈಸೂರು, ಜು.3(ಜಿಎ)–ಕೇಂದ್ರ ಸರ್ಕಾರ ಬಂಡವಾಳಶಾಹಿಗಳ ಪರವಾಗಿ ಕಾರ್ಮಿಕರ ಕಾನೂನುಗಳನ್ನು ತಿದ್ದುಪಡಿ ಮಾಡಿದೆ. ಇದರಿಂದಾಗಿ ಕಾರ್ಖಾನೆಗಳು ಕಾರ್ಮಿಕರನ್ನು ಜೀತದಾಳುಗಳಂತೆ ದುಡಿಸಿಕೊಳ್ಳುತ್ತಿವೆ. ಹೀಗಾಗಿ ಇದನ್ನು ವಿರೋಧಿಸಿ ಹಾಗೂ ಕಾರ್ಮಿಕ, ರೈತ ಪರ ಧೋರಣೆ ಅನುಸರಿಸಬೇಕೆಂದು ಆಗ್ರಹಿಸಿ ಜು.9 ರಂದು ಕೇಂದ್ರೀಯ ಕಾರ್ಮಿಕ ಸಂಘಟನೆಗಳು ದೇಶವ್ಯಾಪಿ ಸಾರ್ವತ್ರಿಕ ಮುಷ್ಕರಕ್ಕೆ ಕರೆ ನೀಡಿವೆ ಎಂದು ಎಐಟಿಯುಸಿ ಕಾರ್ಮಿಕ ಸಂಘಟನೆ ಮುಖಂಡ ಎನ್.ಕೆ. ದೇವದಾಸ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆಲಸದ ಅವಧಿ 8 ಗಂಟೆಯಾಗಿಯೇ ಮುಂದುವರಿಯಬೇಕು, ಮುಷ್ಕರದ ಹಕ್ಕು, ಸಂಘ ಕಟ್ಟುವ ಹಕ್ಕು, ಇನ್ನಿತರ ಹಕ್ಕುಗಳನ್ನು ಇಲ್ಲವಾಗಿಸಬಾರದು. ಇಂದಿನ ಬೆಲೆಗಳಿಗೆ ಅನುಗುಣವಾಗಿ ಎಲ್ಲ ಸಂಘಟಿತ, ಅಸಂಘಟಿತ, ಗುತ್ತಿಗೆ ಕಾರ್ಮಿಕರು, ಸ್ಕೀಂ ನೌಕರರಿಗೆ ರಾಷ್ಟ್ರವ್ಯಾಪಿ 26 ಸಾವಿರ, ರಾಜ್ಯವ್ಯಾಪಿ 36 ಸಾವಿರ ಕನಿಷ್ಠ ವೇತನ ನಿಗದಿಪಡಿಸಬೇಕು ಎಂದು ಒತ್ತಾಯಿಸಲಾಗುವುದು ಎಂದರು.

ಅಂದು ಬೆಳಗ್ಗೆ 10ಕ್ಕೆ ನಗರದ ಗಾಂಧಿ ಚೌಕದಲ್ಲಿ ಕಾರ್ಮಿಕರು, ರೈತರು ಜಮಾವಣೆಗೊಂಡು ಕೆ.ಟಿ. ಸ್ಟ್ರೀಟ್, ಇರ್ವಿನ್ ರಸ್ತೆ, ಮಕ್ಕಾಜಿ ಚೌಕದ ಮೂಲಕ ಗಾಂಧಿ ಚೌಕಕ್ಕೇ ಬಂದು ಸೇರಲಿದ್ದಾರೆ. ಇಲ್ಲಿ ಸಾರ್ವಜನಿಕ ಸಭೆ ನಡೆಯಲಿದೆ ಎಂದು ತಿಳಿಸಿದರು.

ಕಟ್ಟಡ ಕಾರ್ಮಿಕರು, ಆಟೋ, ಟ್ಯಾಕ್ಸಿ ಚಾಲಕರು, ಮನೆ ಕೆಲಸಗಾರರು, ಬೀದಿ ಬದಿ ವ್ಯಾಪಾರಿಗಳು, ಟೈಲರ್‌ಗಳು, ಮೊದಲಾದವರಿಗೆ ಮಾಸಿಕ ಕನಿಷ್ಠ 9 ಸಾವಿರ ಪಿಂಚಣಿ ಹಾಗೂ ಸಾಮಾಜಿಕ ಭದ್ರತೆ ಒದಗಿಸಬೇಕು ಎಂಬುದು ಸಹಾ ತಮ್ಮ ಬೇಡಿಕೆಗಳಲ್ಲಿ ಒಂದಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ವಿವಿಧ ಕಾರ್ಮಿಕ ಸಂಘಟನೆ ಮುಖಂಡರಾದ ಚಂದ್ರಶೇಖರ ಮೇಟಿ, ಎನ್.ಕೆ. ಬಾಲಾಜಿರಾವ್, ಎಚ್.ಎಂ. ಬಸವರಾಜು, ಸೋಮರಾಜ ಅರಸ್, ಯಶೋಧರ್ ಉಪಸ್ಥಿತರಿದ್ದರು.

ಕೆ.ಆರ್.ಶ್ರೀನಿವಾಸನ್ ಐಪಿಎಸ್ ನಗರದಲ್ಲಿ ನಿಲ್ಲದ ಖದೀಮರ ಕಾಟ

• ದಿನವೂ ಒಂದಲ್ಲ ಒಂದು ಕಳ್ಳತನ • ಪೊಲೀಸರಿಗೆ ದೂರಿತ್ತರೆ ಪರಿಣಾಮಕಾರಿ ಕ್ರಮ ಇದುವರೆಗೂ ಕೈಗೊಂಡಿಲ್ಲ; ನಿವಾಸಿಗಳ ಆರೋಪ

ಮೈಸೂರು, ಜು.3(ಎಂಕೆ)– ಮೈಸೂರಿನ ರಿಂಗ್ ರೋಡ್ ಸಮೀಪದಲ್ಲಿರುವ ಕೆ.ಆರ್.ಶ್ರೀನಿವಾಸನ್ ಐಪಿಎಸ್ ನಗರ(3ನೇ ಹಂತ ಲಲಿತಾದ್ರಿಪುರ)ದಲ್ಲಿ ಕಳ್ಳತನ ಪ್ರಕರಣಗಳು ನಿರಂತರವಾಗಿ ನಡೆಯುತ್ತಲೇ ಇದ್ದರೂ ನಗರ ಪೊಲೀಸ್ ಇಲಾಖೆ ಕಣ್ಮುಚ್ಚಿ ಕುಳಿತಿರುವಂತಿದೆ..!

ನಿವೃತ್ತ ಪೊಲೀಸ್ ಅಧಿಕಾರಿಗಳೇ ವಾಸವಾಗಿರುವ ಬಡಾವಣೆಯಲ್ಲಿ ಭದ್ರತೆ ಲೋಪ, ತೀವ್ರ ನಿರ್ಲಕ್ಷ್ಯತೆಯಿಂದಾಗಿ ತಿಂಗಳಲ್ಲಿ ಕನಿಷ್ಠ ಎರಡ್ಮೂರು ಮನೆಗಳಲ್ಲಾದರೂ ಚಿನ್ನಾಭರಣ ದರೋಡೆ ಘಟನೆಗಳು ನಡೆಯುತ್ತಿದ್ದು, ಕಂಪ್ಲೇಂಟ್ ಕೊಟ್ಟರೂ 'ಸಿ' ರಿಪೋರ್ಟ್(ಪತ್ತೆಯಾಗದ ಪ್ರಕರಣ) ಮಾಡಿ, ಪ್ರಕರಣಗಳನ್ನು ಕೈ ಬಿಡಲಾಗುತ್ತಿದೆ ಎಂದು ನಿವೃತ್ತ ಪೊಲೀಸ್ ಅಧಿಕಾರಿಗಳೇ ಪೊಲೀಸರ ಕಾರ್ಯವೈಖರಿ ಕಂಡು ಬೇಸತ್ತು ದೂರುತ್ತಿದ್ದಾರೆ.

ನಿರ್ಮಾಣ ಹಂತದಲ್ಲಿರುವ ಮನೆಗಳಲ್ಲಿ ಸ್ವಿಚ್‌ಬೋರ್ಡ್‌ಗಳನ್ನು ಕಳಚಿ ಬೆಲೆ ಬಾಳುವ ವಯರ್‌ಗಳು, ಕಬ್ಬಿಣದ ವಸ್ತುಗಳು, ಬಾಗಿಲು ಮೀಟಿ ಮನೆಗಳ್ಳತನ ಇನ್ನಿತರೆ ಪದಾರ್ಥಗಳ ದರೋಡೆ ಪ್ರಕರಣಗಳು ನಡೆಯುತ್ತಲೇ ಇದ್ದರೂ, ಬಡಾವಣೆ ವ್ಯಾಪ್ತಿಯ ಆಲನಹಳ್ಳಿ ಠಾಣೆ ಪೊಲೀಸರು ಯಾವುದೇ ಭದ್ರತೆ ನೀಡುತ್ತಿಲ್ಲ. ಕಳ್ಳತನ ಪ್ರಕರಣಗಳನ್ನು ಪತ್ತೆ ಮಾಡುತ್ತಿಲ್ಲ ಎಂದು ತೀವ್ರ ಅಸಮಾಧಾನ ಹೊರಹಾಕಿದ್ದಾರೆ.

ರಾತ್ರಿ ವೇಳೆ ಪೊಲೀಸ್ ಬೀಟ್ ಹಾಕಬೇಕು. ಆದರೆ, ಕಳ್ಳತನ ಪ್ರಕರಣಗಳು ನಡೆಯುತ್ತಲೇ ಇದ್ದರೂ ಪೊಲೀಸ್ ಬೀಟ್ ಹಾಕಬೇಕು ಎಂಬ ವ್ಯವಧಾನವೂ ಠಾಣೆ ಇನ್ಸ್‌ಪೆಕ್ಟರ್‌ಗೆ ಇಲ್ಲವಾಗಿದೆ. ಅವರ ಕಾರ್ಯವೈಖರಿಯೇ ನಮ್ಮ ಮನೆ ಪದಾರ್ಥಗಳನ್ನು ಕಳ್ಳರ ಪಾಲು ಮಾಡುತ್ತಿದೆ ಎಂದು ತಾವುಗಳು ಇನ್ಸ್‌ಪೆಕ್ಟರ್ ಆಗಿ ಸೇವೆ ಸಲ್ಲಿಸಿ ನಿವೃತ್ತಿಯಾಗಿರುವ ಹಲವರು 'ಮೈಸೂರು ಮಿತ್ರ'ನಲ್ಲಿ ಅಳಲು ತೋಡಿಕೊಂಡಿದ್ದಾರೆ.



ಪೊಲೀಸರು ಮೊದಲಿನಂತಿಲ್ಲ...!

ಮೊದಲೆಲ್ಲಾ ಪ್ರಕರಣ ನಡೆದ ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡು ಪತ್ತೆ ಹಚ್ಚುವ ಕೆಲಸ ಮಾಡುತ್ತಿದ್ದೆವು. ಈಗ ಘಟನೆ ನಡೆದು ಗಂಟೆ ಬಳಿಕ ಒಂದಿಬ್ಬರು ಸಿಬ್ಬಂದಿ ಬರುತ್ತಾರೆ. ಆಮೇಲೆ ಐದಾರು ಗಂಟೆ ನಂತರ ಶ್ವಾನದಳ ಕರೆತಂದು ಮಹಜರು ಮಾಡುತ್ತಾರೆ. ಇದರ ನಡುವೆ ಚಿನ್ನಾಭರಣ ಕಳೆದುಕೊಂಡವರಿಂದ ಕಂಪ್ಲೈಂಟ್ ತೆಗೆದುಕೊಳ್ಳದೇ ಠಾಣೆಯಲ್ಲೇ ಗಂಟೆಗಟ್ಟಲೇ ಕೂರಿಸುತ್ತಾರೆ. ಯಾವಾಗ ನೋಡಿದರೂ ಕೈಯ್ಯಲ್ಲಿ ಮೊಬೈಲ್ ಇಟ್ಕೊಂಡ್ ನೋಡ್ತಾ ಇರ್ತಾರೆ. ಒಟ್ಟಿನಲ್ಲಿ ಈಗಿನ ಪೊಲೀಸರು ಮೊದಲಿನಂತಿಲ್ಲ....!

- ನೊಂದ ನಿವೃತ್ತ ಪೊಲೀಸ್ ಅಧಿಕಾರಿಗಳು

ತೀವ್ರ ನಿರ್ಲಕ್ಷ್ಯತೆ: ಕಳ್ಳತನ ನಡೆದು ಎಷ್ಟೋ ಹೊತ್ತಾದ ಮೇಲೆ ಸ್ಥಳ ಮಹಜರಿಗೆ ಬರುತ್ತಾರೆ. ಕಂಪ್ಲೈಂಟ್ ಕೊಟ್ಟರೂ ಎಫ್‌ಐಆರ್ ಮಾಡಲ್ಲ. ಕರೆ ಮಾಡಿದರೂ ಕರೆ ಸ್ವೀಕರಿಸಿ ಮಾತಾಡಲ್ಲ. ಠಾಣೆಗೆ ಭೇಟಿ ಕೊಟ್ಟರೂ ಸಮಸ್ಯೆ ಏನೆಂದು ಸರಿಯಾಗಿ ಕೇಳಿ ಪ್ರತಿಕ್ರಿಯಿಸೋದಿಲ್ಲ. ಇವರ ತೀವ್ರ ನಿರ್ಲಕ್ಷ್ಯತೆಯಿಂದ ಪರಿತಪಿಸುತ್ತಿದ್ದೇವೆ ಎಂದು ವಿಷಾದ ವ್ಯಕ್ತಪಡಿಸಿದ್ದಾರೆ.

ಕಳ್ಳತನಕ್ಕೆ ಪ್ರಯತ್ನ ನಡೆದಿದೆ...

ನಿನ್ನೆ ರಾತ್ರಿಯೂ ಇಲ್ಲಿನ ನಿವಾಸಿಯೊಬ್ಬರ ಮನೆಯಲ್ಲಿ ಕಳ್ಳತನ ಪ್ರಯತ್ನ ನಡೆದಿದ್ದು, ಅದೃಷ್ಟವಶಾತ್ ಕಳ್ಳರಿಗೆ ಚಿನ್ನಾಭರಣ ಸಿಕ್ಕಿಲ್ಲ. ಘಟನೆ ವಿಷಯ ತಿಳಿದು ಸ್ಥಳ ಪರಿಶೀಲನೆ ನಡೆಸಿದಾಗ ಮನೆಯ ಬೀರುವಿನಲ್ಲಿಟ್ಟಿದ್ದ 57 ಗ್ರಾಂ ಚಿನ್ನಾಭರಣ, 57 ಸಾವಿರ ರೂ ನಗದು ಸುರಕ್ಷಿತವಾಗಿದೆ. ಕೂಡಲೇ ಪ್ರತಿನಿತ್ಯ ಪೊಲೀಸ್ ಬೀಟ್ ನಡೆಸಿ, ಭದ್ರತೆ ನೀಡುವಂತೆ ಠಾಣೆ ಪೊಲೀಸರಿಗೆ ಸೂಚಿಸಲಾಗುವುದು.

- ಸುಂದರ್‌ರಾಜ್, ಡಿಸಿಪಿ, ಅಪರಾಧ ಮತ್ತು ಸಂಚಾರ ವಿಭಾಗ

ದುಡ್ಡು ಮಾಡೋಕೆ ಬಂದಿರೋರು!: ಐಪಿಎಸ್ ನಗರದಲ್ಲಿ ಮನೆ ಕಟ್ಟಿ ಐದಾರು ವರ್ಷಗಳಾಗಿದ್ದು, ಇದುವರೆಗೆ ಹಲವು ಮನೆಗಳಲ್ಲಿ ಕಳ್ಳತನವಾಗಿದೆ. ನಿನ್ನೆ(ಜು.2) ರಾತ್ರಿಯೂ ಖದೀಮರು ಮನೆ ಬಾಗಿಲನ್ನು ಮೀಟಿ ಕಳ್ಳತನ ಪ್ರಯತ್ನ ನಡೆದಿದೆ. ಇಷ್ಟೆಲ್ಲಾ ನಡೆಯುತ್ತಿದ್ದರೂ ಸ್ಥಳೀಯ ನಿವಾಸಿಗಳನ್ನು ಭೇಟಿ ಮಾಡಿ, ಸಮಸ್ಯೆ ಕೇಳುವ, ಕನಿಷ್ಠ ಕಾಳಜಿ, ಕನಿಷ್ಠ ಭದ್ರತೆ ನೀಡುವ ಮನಸ್ಥಿತಿ ಇಲ್ಲಿದ ಆಲನಹಳ್ಳಿ ಠಾಣೆ ಪೊಲೀಸರಿಗಿಲ್ಲ. ಇವರು ಜನ ಸೇವೆ ಮಾಡಲು ಬಂದಿಲ್ಲ... ದುಡ್ಡು ಮಾಡೋಕೆ ಬಂದಿದ್ದಾರೆ... ಮಂತ್ರಿಗಳ ಶಿಫಾರಸ್ಸಿನ ಮೇಲೆ ವರ್ಗಾವಣೆ ಮಾಡಿಸಿಕೊಂಡು ಬಂದೋರು ಜನರ ಕಷ್ಟ ಕೇಳ್ತಾರಾ... ಎಂದು ಖಾರವಾಗಿ ಪ್ರತಿಕ್ರಿಯೆ ನೀಡಿದ್ದಾರೆ.

ದೇಶ - ವಿದೇಶ

ಉಗ್ರರಿಂದ ಮೂವರು ಭಾರತೀಯರ ಅಪಹರಣ

ಮಾಲಿ: ಮಾಲಿಯಲ್ಲಿ ಸಿಮೆಂಟ್ ಕಾರ್ಖಾನೆಯಲ್ಲಿ ಕೆಲಸ ಮಾಡುತ್ತಿದ್ದ ಮೂವರು ಭಾರತೀಯರನ್ನು ನಿಷೇಧಿತ ಉಗ್ರಗಾಮಿ ಸಂಘಟನೆ ಅಲ್–ಖೈದಾ ಜೊತೆ ನಂಟು ಹೊಂದಿರುವ ಉಗ್ರರು ಅಪಹರಿಸಿದ್ದಾರೆ ಎಂದು ಅಧಿಕಾರಿಗಳು ಗುರುವಾರ ಖಚಿತಪಡಿಸಿದ್ದಾರೆ. ಪಶ್ಚಿಮ ಮಾಲಿಯ ಕೇಯೆಸ್‌ನಲ್ಲಿರುವ ಡೈಮಂಡ್ ಸಿಮೆಂಟ್ ಫ್ಯಾಕ್ಟರಿ ಮೇಲೆ ಭಾರಿ ಶಸ್ತ್ರಸಜ್ಜಿತ ದಾಳಿಕೋರರು ಸಂಘಟಿತ ದಾಳಿ ನಡೆಸಿದಾಗ ಈ ಘಟನೆ ನಡೆದಿದೆ.

ದಾಳಿ ವೇಳೆ ಬಂದೂಕುಧಾರಿಗಳು ಕಾರ್ಖಾನೆಗೆ ನುಗ್ಗಿ ಕಾರ್ಮಿಕರನ್ನು ಒತ್ತೆಯಾಳಾಗಿ ತೆಗೆದುಕೊಂಡಿದ್ದಾರೆ ಎಂದು ಸ್ಥಳೀಯ ವರದಿಗಳು ಹೇಳಿವೆ. ಮಾಲಿಯಾದ್ಯಂತ ಅನೇಕ ದಾಳಿಗಳನ್ನು ನಡೆಸಿರುವ ಅಲ್–ಖೈದಾ–ಸಂಬಂಧಿತ ಜಮಾತ್ ನುಸ್ರತ್ ಅಲ್–ಇಸ್ಲಾಂ ವಾಲ್–ಮುಸ್ಲಿಮಿನ್ ಈ ಅಪಹರಣ ನಡೆಸಿರುವ ಸಾಧ್ಯತೆಯಿದೆ ಎನ್ನಲಾಗಿದೆ.

ಈ ದಾಳಿ ಬಗ್ಗೆ ಪ್ರತಿಕ್ರಿಯಿಸಿರುವ ಭಾರತೀಯ ವಿದೇಶಾಂಗ ವ್ಯವಹಾರಗಳ ಸಚಿವಾಲಯ (MEA) ಇದನ್ನು ಶೋಚನೀಯ ಹಿಂಸಾಚಾರದಕೃತ್ಯ ಎಂದು ಖಂಡಿಸಿದ್ದು, ಕಾರ್ಮಿಕರ ಸುರಕ್ಷಿತ ಮತ್ತು ತ್ವರಿತ ಬಿಡುಗಡೆಯನ್ನು ಖಾತ್ರಿಪಡಿಸಲು ಮಾಲಿ ಸರ್ಕಾರವನ್ನು ಒತ್ತಾಯಿಸಿದೆ.

55 ವರ್ಷದ ಸಂಬಂಧಿಯನ್ನು ಮದುವೆಯಾಗಲು ಪತಿಯನ್ನು ಕೊಂದ ಪತ್ನಿ



ಪಾಟ್ನ: ಇತ್ತೀಚಿನ ದಿನಗಳಲ್ಲಿ ವಿವಾಹ ನಂತರ ಸಂಗಾತಿಯನ್ನು ಹತ್ಯೆ ಮಾಡುತ್ತಿರುವ ಪ್ರಕರಣಗಳು ಹೆಚ್ಚಾಗಿ ವರದಿಯಾಗುತ್ತಿದ್ದು, ಬಿಹಾರದಲ್ಲಿ ಇಂಥದ್ದೇ ಒಂದು ಘಟನೆ ನಡೆದಿದೆ. ಬಿಹಾರದ ಔರಂಗಾಬಾದ್ ಜಿಲ್ಲೆಯಲ್ಲಿ 25 ವರ್ಷದ ವ್ಯಕ್ತಿಯೊಬ್ಬರನ್ನು ಅವರ ಪತ್ನಿಯೇ ಹತ್ಯೆ ಮಾಡಿದ್ದಾಳೆ. ವಿವಾಹವಾದ 45 ದಿನಗಳಲ್ಲಿ ಈ ಅನಾಹುತ ನಡೆದಿದೆ. ಪೊಲೀಸರ ಪ್ರಕಾರ ನವವಿವಾಹಿತೆ ಗುಂಜಾ ದೇವಿ ತನ್ನ ಸೋದರ ಸಂಬಂಧಿ ಜೀವನ್ ಸಿಂಗ್ (55) ಅವರೊಂದಿಗೆ ಸಂಬಂಧ ಹೊಂದಿದ್ದಳು, ಶೂಟರ್‌ಗಳನ್ನು ನೇಮಿಸಿಕೊಂಡು ತನ್ನ ಪತಿ ಪ್ರಿಯಾಂಶು ಅವರನ್ನು ಕೊಲ್ಲಲು ಸಂಚು ರೂಪಿಸಿದ್ದಳು. ಈ ಹತ್ಯೆ ಪ್ರಕರಣದಲ್ಲಿ 20ರ ಹರೆಯದ ದೇವಿ ಮತ್ತು ಇಬ್ಬರು ಶೂಟರ್‌ಗಳನ್ನು ಬಂಧಿಸಲಾಗಿದ್ದು, ಸಿಂಗ್ ಅವರನ್ನು ಪತ್ತೆಹಚ್ಚುವ ಪ್ರಯತ್ನಗಳು ನಡೆಯುತ್ತಿವೆ.

ದೇವಿ ಮತ್ತು ಸಿಂಗ್ ಸಂಬಂಧದಲ್ಲಿದ್ದರು ಮತ್ತು ಪರಸ್ಪರ ಮದುವೆಯಾಗಲು ಬಯಸಿದ್ದರು ಆದರೆ ಅವರ ಕುಟುಂಬಗಳು ಅದಕ್ಕೆ ಒಲವು ತೋರಲಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ದೇವಿಯ ಕುಟುಂಬ ಎರಡು ತಿಂಗಳ ಹಿಂದೆ ನಬಿನಗರ ಪೊಲೀಸ್ ಠಾಣೆ ವ್ಯಾಪ್ತಿಯ ಬರ್ವಾನ್ ಗ್ರಾಮದ ನಿವಾಸಿ ಪ್ರಿಯಾಂಶು ಅವರೊಂದಿಗೆ ಅವಳನ್ನು ಬಲವಂತವಾಗಿ ಮದುವೆ ಮಾಡಿಸಿತು.

ಗಾಜಾ ಮೇಲೆ ಇಸ್ರೇಲ್ ಭೀಕರ ದಾಳಿ: 48 ಗಂಟೆಗಳಲ್ಲಿ 300 ಪ್ಯಾಲೇಸ್ತೀನಿಯರ ಸಾವು

ಗಾಜಾ: ಕಳೆದ 48 ಗಂಟೆಗಳಲ್ಲಿ ಗಾಜಾದ ಮೇಲೆ ಇಸ್ರೇಲ್ ನಡೆಸಿದ ಭೀಕರ ದಾಳಿಯಲ್ಲಿ 300ಕ್ಕೂ ಹೆಚ್ಚು ಪ್ಯಾಲೇಸ್ತೀನಿಯರು ಮೃತಪಟ್ಟಿದ್ದಾರೆ. ಕಳೆದ ರಾತ್ರಿ ಗಾಜಾದಲ್ಲಿ ರಾತ್ರಿಯಿಡೀ ನಡೆದ ವಾಯುದಾಳಿ ಮತ್ತು ಗುಂಡಿನ ದಾಳಿಯಲ್ಲಿ 82 ಪ್ಯಾಲೆಸ್ತೀನಿಯನ್ನರು ಸಾವನ್ನಪ್ಪಿದ್ದು ಅವರ ಪೈಕಿ 38 ಜನರು ಅಗತ್ಯ ಮಾನವೀಯ ನೆರವು ಪಡೆಯಲು ಹೋಗುತ್ತಿದ್ದಾಗ ಸಾವನ್ನಪ್ಪಿದ್ದಾರೆ. ಈ ಘಟನೆಯ ಬಗ್ಗೆ ಗಾಜಾ ಆಸ್ಪತ್ರೆಗಳು ಮತ್ತು ಆರೋಗ್ಯ ಸಚಿವಾಲಯಕ್ಕೆ ಮಾಹಿತಿ ನೀಡಲಾಯಿತು.

ಒಂದು ದಿನದ ಹಿಂದಿನವರೆಗೂ ಹಮಾಸ್ ಮತ್ತು ಇಸ್ರೇಲ್ ನಡುವೆ ಕದನ ವಿರಾಮ ಸಂಭವಿಸುತ್ತದೆ. ಮತ್ತೊಂದು ವಿನಾಶಕಾರಿ ಯುದ್ಧ ನಿಲ್ಲುತ್ತದೆ ಎಂದು ತೋರುತ್ತಿತ್ತು. ಆದರೆ, ಕೆಲವೇ ಗಂಟೆಗಳ ನಂತರ ಗಾಜಾದಲ್ಲಿ ಮತ್ತೊಮ್ಮೆ ಸಾವು–ನೋವುಗಳು ಸಂಭವಿಸಿವೆ. 'ಗಾಜಾ ಮಾನವೀಯ ಪ್ರತಿಷ್ಠಾನ'ಕ್ಕೆ ಸಂಬಂಧಿಸಿದ ಸ್ಥಳಗಳಲ್ಲಿ ಐದು ಜನರು ಸಾವನ್ನಪ್ಪಿದರು. 33 ಜನರು ಗಾಜಾ ಪಟ್ಟಿಯ ಇತರ ಸ್ಥಳಗಳಿಗೆ ಸಹಾಯ ಸಾಮಗ್ರಿಗಳನ್ನು ಪೂರೈಸುವ ಟ್ರಕ್‌ಗಳಿಗಾಗಿ ಕಾಯುತ್ತಿದ್ದಾಗ ಸಾವನ್ನಪ್ಪಿದರು. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಂಗಳವಾರ ಗಾಜಾದಲ್ಲಿ 60 ದಿನಗಳ ಕದನ ವಿರಾಮದ ನಿಯಮಗಳಿಗೆ ಇಸ್ರೇಲ್ ಒಪ್ಪಿಕೊಂಡಿದೆ ಮತ್ತು ಒಪ್ಪಂದವನ್ನು ಒಪ್ಪಿಕೊಳ್ಳುವಂತೆ ಹಮಾಸ್‌ಗೆ ಎಚ್ಚರಿಕೆ ನೀಡಿದರು.

ಇಂಡೋನೇಷ್ಯಾದಲ್ಲಿ ದೋಣಿ ಮುಳುಗಿ 4 ಸಾವು, 38 ಮಂದಿ ನಾಪತ್ತೆ



ಇಂಡೋನೇಷ್ಯಾ: ಜನಪ್ರಿಯ ರೆಸಾರ್ಟ್ ದ್ವೀಪ ಬಾಲಿಗೆ ಹೋಗುವ ದಾರಿಯಲ್ಲಿ ದೋಣಿ ಮಗುಚಿ ಕನಿಷ್ಠ ನಾಲ್ವರು ಸಾವನ್ನಪ್ಪಿದ್ದು, 38 ಮಂದಿ ನಾಪತ್ತೆಯಾಗಿದ್ದಾರೆ. ದೋಣಿ ಮಗುಚಿದ ಸುದ್ದಿ ಕೇಳಿ ತಕ್ಷಣ ಕಾರ್ಯಪ್ರವೃತ್ತರಾದ ರಕ್ಷಣಾ ಸಿಬ್ಬಂದಿ ಹಲವರನ್ನು ರಕ್ಷಿಸಿದೆ ಎಂದು ಸ್ಥಳೀಯ ಶೋಧ ಮತ್ತು ರಕ್ಷಣಾ ಸಂಸ್ಥೆ ತಿಳಿಸಿದೆ.

ಇಂಡೋನೇಷ್ಯಾದ ಪ್ರಮುಖ ದ್ವೀಪ ಜಾವಾದಿಂದ ಪ್ರಸಿದ್ಧ ರಜಾ ತಾಣಕ್ಕೆ ಸಾಗುತ್ತಿದ್ದಾಗ ಬಾಲಿ ಜಲಸಂಧಿಯಲ್ಲಿ ಬುಧವಾರ ಮಧ್ಯರಾತ್ರಿ ಬೋಟ್ ಮುಳುಗಿದೆ ಎಂದು ಸುರಬಯಾ ಶೋಧ ಮತ್ತು ರಕ್ಷಣಾ ಸಂಸ್ಥೆ ಗುರುವಾರ ನೀಡಿರುವ ತನ್ನ ಹೇಳಿಕೆಯಲ್ಲಿ ತಿಳಿಸಿದೆ. ದೋಣಿಯಲ್ಲಿ ಒಟ್ಟು 53 ಪ್ರಯಾಣಿಕರು ಮತ್ತು 12 ಸಿಬ್ಬಂದಿ ಇದ್ದರು ಎಂದು ರಕ್ಷಣಾ ಸಂಸ್ಥೆ ಹೇಳಿದೆ. ಗುರುವಾರ ಮುಂಜಾನೆ ವೇಳೆಗೆ ಕೆಲವರನ್ನು ರಕ್ಷಣೆ ಮಾಡಲಾಗಿದೆ ಎಂದು ಕೂಡಾ ತಿಳಿದು ಬಂದಿದೆ.

ರಕ್ಷಣಾ ಕಾರ್ಯ ಭರದಿಂದ ಸಾಗುತ್ತಿದೆ. ಶೋಧ ಕಾರ್ಯಗಳಿಗೆ ಸಹಾಯ ಮಾಡಲು ಸುರಬಯಾದಿಂದ ದೊಡ್ಡ ಹಡಗನ್ನು ಕಳುಹಿಸಲಾಗಿದೆ ಎಂದು ಬಾಲಿಯಲ್ಲಿನ ಮೂಲಗಳು ತಿಳಿಸಿವೆ.

ಕೋವಿಶೀಲ್ಡ್ ಲಸಿಕೆ ಸುರಕ್ಷಿತವಾಗಿದೆ, ಹಠಾತ್ ಸಾವಿಗೆ ಸಂಬಂಧವಿಲ್ಲ

ಸೀರಮ್ ಇನ್‌ಸ್ಟಿಟ್ಯೂಟ್ ಸ್ಪಷ್ಟನೆ

ನವದೆಹಲಿ, ಜು.3– ಹಠಾತ್ ಹೃದಯಾಘಾತದಿಂದ ಸಂಭವಿಸುತ್ತಿರುವ ಸಾವುಗಳಿಗೆ ಕೊರೊನಾ ವ್ಯಾಕ್ಸಿನ್ ಕಾರಣವಲ್ಲ ಎಂದು ಲಸಿಕೆ ತಯಾರಕ ಸೀರಮ್ ಇನ್‌ಸ್ಟಿಟ್ಯೂಟ್ ಆಫ್ ಇಂಡಿಯಾ ಹೇಳಿದೆ. ತಮ್ಮ ಕೋವಿಶೀಲ್ಡ್ ಲಸಿಕೆ ಸುರಕ್ಷಿತವಾಗಿದೆ ಎಂದು ಇದೇ ವೇಳೆ ಅದು ಸ್ಪಷ್ಟಪಡಿಸಿದೆ.

ಸೀರಮ್ ಇನ್‌ಸ್ಟಿಟ್ಯೂಟ್ ತಮ್ಮ ಔಷಧವು ಕೋವಿಡ್–19 ವಿರುದ್ಧ ರಕ್ಷಣೆ ನೀಡುವಲ್ಲಿ ಪರಿಣಾಮಕಾರಿಯಾಗಿದೆ. ಕೋವಿಶೀಲ್ಡ್ ಲಸಿಕೆಯ ಸುರಕ್ಷತೆ ಮತ್ತು ಪರಿಣಾಮಕಾರಿತ್ವವನ್ನು ವಿಶ್ವಾದ್ಯಂತ ಹಲವಾರು ಕ್ಲಿನಿಕಲ್ ಪರೀಕ್ಷೆಗಳು ಮತ್ತು ನಿಯಂತ್ರಕ ಸಂಸ್ಥೆಗಳ ಮೌಲ್ಯಮಾಪನದಿಂದ ದೃಢೀಕರಿಸಲಾಗಿದೆ. ಲಸಿಕೆಗೆ ಸಂಬಂಧಿಸಿದಂತೆ ಯಾವುದೇ ಗಂಭೀರ ದುಷ್ಪರಿಣಾಮಗಳಿಗೆ ವೈಜ್ಞಾನಿಕ ಆಧಾರವಿಲ್ಲ ಎಂದು ಸಂಸ್ಥೆ ವಾದಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇತ್ತೀಚೆಗೆ ರಾಜ್ಯದಲ್ಲಿ ಕೋವಿಶೀಲ್ಡ್ ಲಸಿಕೆ ತೆಗೆದುಕೊಂಡ ಕೆಲವರು ಹೃದಯಾಘಾತದಿಂದ ಮೃತಪಟ್ಟಿರುವ ಸಾಧ್ಯತೆಯ ಬಗ್ಗೆ ಆತಂಕ ವ್ಯಕ್ತಪಡಿಸಿದ್ದರು. ಈ ಹೇಳಿಕೆಯು ಸಾರ್ವಜನಿಕರಲ್ಲಿ ಗೊಂದಲ ಮತ್ತು ಚರ್ಚೆಗೆ ಕಾರಣವಾಗಿತ್ತು. ಆದರೆ ಸೀರಂ ತನ್ನ ಲಸಿಕೆಯ ಸುರಕ್ಷತೆಯನ್ನು ಪುನರುಚ್ಚರಿಸಿದ್ದು, ಇಂತಹ ಆರೋಪಗಳಿಗೆ ಯಾವುದೇ ವೈಜ್ಞಾನಿಕ ಸಾಕ್ಷ್ಯಾಧಾರಗಳಿಲ್ಲ ಎಂದು ತಿಳಿಸಿದೆ.

ಮೈಸೂರು ಮಿತ್ರ ಶುಕ್ರವಾರ 4 ಜುಲೈ 2025

ಕಳತ್ಮಾಡು ಗ್ರಾಮದಲ್ಲಿ ಕಾಡಾನೆಗಳ ದಾಳಿ, ಫಸಲು ನಾಶ



ಮಡಿಕೇರಿ,ಜು.3– ಭತ್ತದ ಸಸಿ ಮಡಿಗಳನ್ನು ಕಾಡಾನೆಗಳು ತಿಂದು ತುಳಿದು ನಾಶ ಮಾಡಿದ ಘಟನೆ ಅಮ್ಮತ್ತಿ ಹೊಸೂರು ಪಂಚಾಯಿತಿ ವ್ಯಾಪ್ತಿಯ ಕಳತ್ಮಾಡು ಗ್ರಾಮದಲ್ಲಿ ನಡೆದಿದೆ.

ಅಲ್ಲಿನ ನಿವಾಸಿ ಕತ್ರಿಕೊಲ್ಲಿ ದೇವಿ ಮತ್ತು ಕೊಲ್ಲಿರ ದಿನು ಅವರಿಗೆ ಸೇರಿದ ಭತ್ತದ ಗದ್ದೆಗಳಲ್ಲಿ ಬಿತ್ತನೆ ಮಾಡಿದ್ದ ಭತ್ತದ ಸಸಿ ಮಡಿ ಕಾಡಾನೆಗಳು ತುಳಿದು ನಾಶ ಪಡಿಸಿವೆ. ಬೆಳಗಿನ ಜಾವ ಕಾಡಾನೆಗಳು ದಾಂಧಲೆ ನಡೆಸಿದ್ದು, ಕೃಷಿ ಫಸಲಿಗೂ ಹಾನಿ ಮಾಡಿವೆ. ಕಾಡಾನೆ ದಾಳಿ ತಪ್ಪಿಸಲು ಆನೆಗಳನ್ನು ಸ್ಥಳಾಂತರ ಮಾಡುವ ನಿಟ್ಟಿನಲ್ಲಿ ತಕ್ಷಣ ಕ್ರಮ ಕೈಗೊಳ್ಳಬೇಕು. ಕೃಷಿ ಹಾನಿಗೆ ತಕ್ಷಣವೇ ಪರಿಹಾರ ಒದಗಿಸಬೇಕೆಂದು ಅರಣ್ಯ ಇಲಾಖೆಯನ್ನು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಮಳೆಗೆ ಉರುಳಿದ ಔದುಂಬರ ವೃಕ್ಷ



ಮಳೆಗೆ ಉರುಳಿ ಬಿದ್ದಿರುವ ಪುರಾತನ ಕಾಲದ ಬೃಹತ್ ಔದುಂಬರ ವೃಕ್ಷ.

ಮಡಿಕೇರಿ,ಜು.3– ನಗರದ ಜನರಲ್ ತಿಮ್ಮಯ್ಯ ಜಿಲ್ಲಾ ಕ್ರೀಡಾಂಗಣ ಬಳಿಯಿರುವ ಕೋಲ್ ಮಂದ್‌ನಲ್ಲಿ ಎರಡು ಶತಮಾನಕ್ಕೂ ಹೆಚ್ಚು ಕಾಲದಿಂದ ಬೆಳೆದು ನಿಂತಿದ್ದ ಬೃಹತ್ ಗಾತ್ರದ ಔದುಂಬರ ವೃಕ್ಷ(ಅತ್ತಿ ಹಣ್ಣಿನ ಮರ) ಮಳೆಗೆ ಉರುಳಿ ಬಿದ್ದಿದೆ.

200ಕ್ಕೂ ಹೆಚ್ಚು ವರ್ಷಗಳ ಇತಿಹಾಸ ಹೊಂದಿದ್ದ ಮರದ ಅರ್ಧಭಾಗ ಧರೆಗೆ ಉರುಳಿದ್ದು, ಪರಿಸರ ಪ್ರೇಮಿಗಳಿಗೆ ಬೇಸರ ಮೂಡಿಸಿದೆ. ಈ ಮರದ ಬುಡದಲ್ಲಿ ಕೊಡಗನ್ನು ಆಳುತ್ತಿದ್ದ ರಾಜರು ಆನೆಗಳನ್ನು ಕಟ್ಟಿ ಹಾಕುತ್ತಿದ್ದರು ಎನ್ನಲಾಗುತ್ತಿದೆ. ಜಿಲ್ಲೆಯಲ್ಲಿರುವ ನೂರಾರು ವರ್ಷಗಳ ಇತಿಹಾಸ ಹೊಂದಿದ ಮರಗಳ ಪೈಕಿ ಈ ಬೃಹತ್ ಗಾತ್ರದ ಔದುಂಬರ ವೃಕ್ಷ ಕೂಡ ಒಂದಾಗಿದ್ದು, ಪುತ್ತರಿ ಹಬ್ಬದಂದು ಇದೇ ಮರವಿದ್ದ ಮಂದ್‌ನಲ್ಲಿ ಪುತ್ತರಿ ಕೋಲಾಟವನ್ನೂ ಕೂಡ ಆಯೋಜಿಸಲಾಗುತ್ತಿತ್ತು. ಶಾಲಾ ಮಕ್ಕಳು ಮತ್ತು ವಯೋ ವೃದ್ಧರಿಗೂ ನೆರಳಿನ ಆಶ್ರಯ ನೀಡುತ್ತಿದ್ದ ಮರ ಬಿದ್ದಿದ್ದು, ಇನ್ನುಳಿದ ಅರ್ಧ ಭಾಗ ಬೀಳುವ ಹಂತದಲ್ಲಿದೆ.

ಕೆ.ಗಣೇಶ್ ನಿಧನ



ನಾಪೋಕ್ಲು, ಜು.3– ಇಲ್ಲಿಗೆ ಸಮೀಪದ ಚೋನಕೆರೆ ನಿವಾಸಿ ಹಿರಿಯ ರಾಜಕಾರಣಿ ಕೊಂಬಂಡ ಕೆ. ಗಣೇಶ್ (78) ಗುರುವಾರ ನಿಧನರಾದರು.

ನಾಪೋಕ್ಲು ಗ್ರಾಮ ಪಂಚಾಯಿತಿಯ ಅಧ್ಯಕ್ಷರಾಗಿದ್ದರು. ಜೊತೆಗೆ ಸೇರಿದಂತೆ ವಿವಿಧ ಸಂಘ–ಸಂಸ್ಥೆಗಳಲ್ಲಿ ನಿರ್ವಹಿಸುತ್ತಿದ್ದ ಶ್ರೀಯುತರ ಅಂತ್ಯಕ್ರಿಯೆ ಶುಕ್ರವಾರ ಮೃತರ ಸ್ವಗ್ರಾಮದಲ್ಲಿ ನಡೆಸಲಾಗುವುದು. ಮೃತರು ಪತ್ನಿ ಹಾಗೂ ಇಬ್ಬರು ಪುತ್ರರು, ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.

ಸ್ಥಳೀಯ ಗ್ರಾಮ ಪಂಚಾಯಿತಿ ಮತ್ತು ಚೇಂಬರ್ ಆಫ್ ಕಾಮರ್ಸ್ ಮೃತರ ಗೌರವಾರ್ಥ ಸಂತಾಪ ಸೂಚಿಸುವ ಸಲುವಾಗಿ ಶುಕ್ರವಾರ ಮಧ್ಯಾಹ್ನ 12 ಗಂಟೆಯಿಂದ ಒಂದು ಗಂಟೆಯವರೆಗೆ ಎಲ್ಲಾ ವರ್ತಕರು ಅಂಗಡಿ ಮುಂಗಟ್ಟುಗಳನ್ನು ಮುಚ್ಚಿ ಬಂದ್ ಆಚರಿಸಲು ಪ್ರಕಟಣೆಯಲ್ಲಿ ಸೂಚಿಸಿದೆ.

ಪ್ರಕೃತಿ ವಿಕೋಪ, ತುರ್ತು ಸಂದರ್ಭದಲ್ಲಿ ಪೊಲೀಸರೊಂದಿಗೆ ಎಲ್ಲರ ಸಹಕಾರ ಅಗತ್ಯ

ಕೊಡಗು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಮನವಿ

ಮಡಿಕೇರಿ, ಜು.3– ಪ್ರಕೃತಿ ವಿಕೋಪ ಹಾಗೂ ತುರ್ತು ಸಂದರ್ಭಗಳಲ್ಲಿ ಸಾರ್ವಜನಿಕರು ಹಾಗೂ ಸಂಘ ಸಂಸ್ಥೆಗಳ ಸ್ವಯಂ ಸೇವಕರು ಪೊಲೀಸ್ ಇಲಾಖೆಯೊಂದಿಗೆ ಕೈ ಜೋಡಿಸಬೇಕು ಎಂದು ಕೊಡಗು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಮನವಿ ಮಾಡಿದ್ದಾರೆ.

ಪ್ರಾಕೃತಿಕ ವಿಕೋಪ ಮತ್ತು ರಕ್ಷಣಾ ಕಾರ್ಯಾಚರಣೆಗಳ ಕುರಿತು ನಗರದ ಪೊಲೀಸ್ ಸಮುದಾಯ ಭವನ ಮೈತ್ರಿಯಲ್ಲಿ ವಿವಿಧ ಸಂಘ ಸಂಸ್ಥೆಗಳ ಸಭೆ ನಡೆಸಲಾಯಿತು. ಪ್ರಕೃತಿ ವಿಕೋಪ ಸಂದರ್ಭ ಸಾರ್ವಜನಿಕರ ಪಾತ್ರದ ಕುರಿತು ಸಭೆಯಲ್ಲಿ ಮಾಹಿತಿ ಹಂಚಿಕೊಳ್ಳಲಾಯಿತು.



ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಮಾತನಾಡುತ್ತಿರುವುದು.

ಬಳಿಕ ಮಾತನಾಡಿದ ಎಸ್.ಪಿ ರಾಮರಾಜನ್ ಪ್ರಕೃತಿ ವಿಕೋಪ ಹಾಗೂ ತುರ್ತು ಸಂದರ್ಭಗಳಲ್ಲಿ ಸಾರ್ವಜನಿಕರ ಪಾತ್ರ ಬಹಳ ಮುಖ್ಯವಾಗಿದೆ. ಈ ಭಾರಿ ಹೆಚ್ಚಿನ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. 65 ವರ್ಷಗಳ ಬಳಿಕ ಈ ರೀತಿ ಮಳೆಯಾಗಿದೆ ಎನ್ನಲಾಗಿದೆ. ಅಲ್ಲದೇ ಈ ವರ್ಷವೂ ಅತೀ ಹೆಚ್ಚು ಮಳೆಯಾಗುತ್ತಿರುವುದರಿಂದ ಜಿಲ್ಲೆಯ ನದಿಗಳು, ಜಲಾಶಯ, ಕೆರೆ, ಹಳ್ಳ, ತೋಡು ಹಾಗೂ ಇತರೆ ಜಲಮೂಲಗಳು ಈಗಾಗಲೇ ತುಂಬಿ ಹರಿಯುತ್ತಿದೆ ಮುಂದಿನ ದಿನಗಳಲ್ಲಿಯೂ ಹೆಚ್ಚಿನ ಮಳೆಯಾಗುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ತಜ್ಞರ ಸಲಹೆಯಂತೆ ಮುಂಜಾಗ್ರತಾ ಕ್ರಮವಹಿಸಲು ಸಾರ್ವಜನಿಕರ ಪಾತ್ರ ಬಹಳ ಅಗತ್ಯ ಎಂದು ಹೇಳಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಬಾರಿಕೆ ದಿನೇಶ್ ಕುಮಾರ್ ಮಾತನಾಡಿ, ತುರ್ತು ಪರಿಸ್ಥಿತಿಯ ಸಂದರ್ಭ ಸ್ಥಳೀಯರು ಪೊಲೀಸ್ ಇಲಾಖೆ ಜೊತೆಯಲ್ಲಿ ಕೈ ಜೋಡಿಸಿದರೆ ಪೊಲೀಸರಿಗೂ ತಮ್ಮ ಜವಾಬ್ದಾರಿ ನಿರ್ವಹಿಸಲು ಸಹಕಾರಿಯಾಗಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ನಗರದ ರಸ್ತೆಗಳು ಬಹಳ ಕಿರಿದಾಗಿದ್ದು ಪಾರ್ಕಿಂಗ್ ಸಮಸ್ಯೆ ಹೆಚ್ಚಿದೆ. ಇದನ್ನು ಪರಿಹರಿಸಲು ಬದಲಿ ರಸ್ತೆ ಕಲ್ಪಿಸುವ ಪಯತ್ನ ನಡೆಯುತ್ತಿದೆ ಎಂದರು.

ವಿಪತ್ತು ನಿರ್ವಹಣಾ ಅಧಿಕಾರಿ ಅನನ್ಯ ವಾಸುದೇವ್ ಮಾತನಾಡಿ ಯಾವುದೇ ಅನಾಹುತಗಳು ಘಟಿಸುವ ಮುನ್ನ ಪ್ರಕೃತಿ ಕೆಲವೊಂದು ಸೂಚನೆಗಳನ್ನು ನೀಡುತ್ತದೆ. ಅನಾಹುತಗಳು ಸಂಭವಿಸಿದಾಗ ಸ್ಥಳೀಯ ಮಟ್ಟದಲ್ಲೆ ರಕ್ಷಣಾ ಕಾರ್ಯಾಚರಣೆ ಮಾಡಲು ಪಂಚಾಯಿತಿ ಮಟ್ಟದಲ್ಲೆ ರಕ್ಷಣಾ ತಂಡ ಕೂಡ ಇದ್ದು ನೆರವಿಗೆ ಬರಲಿದೆ. ಕೊಡಗಿನಲ್ಲಿ ಈಗಾಗಲೇ ಎನ್‌ಡಿಆರ್‌ಎಫ್ ತಂಡವಿದ್ದು ಪ್ರವಾಹ, ಪ್ರಕೃತಿ ವಿಕೋಪ ಎದುರಿಸಲು ಸನ್ನದ್ಧರಾಗಿದ್ದಾರೆ. ಜನತೆ ಭಯಪಡುವ ಅಗತ್ಯವಿಲ್ಲ ಎಂದು ಹೇಳಿದರು.

ಅಗ್ನಿಶಾಮಕ ಠಾಣಾಧಿಕಾರಿ ಶೋಬಿತ್ ಮಾತನಾಡಿ ಅಗ್ನಿಶಾಮಕ ಇಲಾಖೆ ಕೂಡ ಈ ಬಾರಿಯ ಮಳೆಗಾಲ ಎದುರಿಸಲು ಸಜ್ಜಾಗಿದೆ. ಯಾವುದೇ ತುರ್ತು ಸಂದರ್ಭ ಎದುರಾದಲ್ಲಿ ತರಬೇತಿ ಹೊಂದಿದ ನಮ್ಮ ಸಿಬ್ಬಂದಿಗಳು ರಕ್ಷಣೆಗೆ ಸಿದ್ಧರಿದ್ದಾರೆ ಎಂದು ಮಾಹಿತಿ ನೀಡಿದರು. ಸಭೆಯಲ್ಲಿ ಪೊಲೀಸ್ ಅಧಿಕಾರಿಗಳು, ಸಿಬ್ಬಂದಿಗಳು, ನಗರದ ಸಂಘ ಸಂಸ್ಥೆಗಳು ಹಾಗೂ ಸಾರ್ವಜನಿಕರು ಪಾಲ್ಗೊಂಡಿದ್ದರು.

ಆಶಾಕಿರಣ ದೃಷ್ಟಿ ಕೇಂದ್ರಗಳ ಉದ್ಘಾಟನೆ

ಕುಶಾಲನಗರ, ಜು.3– ರಾಷ್ಟ್ರೀಯ ಅಂಧತ್ವ ನಿವಾರಣಾ ಆಶಾಕಿರಣ ಕಾರ್ಯಕ್ರಮದಡಿ ಮಡಿಕೇರಿ ವೈದ್ಯಕೀಯ ಕಾಲೇಜು, ಸಮುದಾಯ ಆರೋಗ್ಯ ಕೇಂದ್ರ ಮತ್ತು ಸಾರ್ವಜನಿಕ ಆಸ್ಪತ್ರೆಗಳ ಎಂಟು ಕಡೆ ಆಶಾಕಿರಣ ದೃಷ್ಟಿ ಕೇಂದ್ರ ಉದ್ಘಾಟಿಸಲಾಯಿತು.

ಇಲ್ಲಿನ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಶಸ್ತ್ರಚಿಕಿತ್ಸಕರೂ ಆದ ಆಡಳಿತ ವೈದ್ಯಾಧಿಕಾರಿ ಡಾ.ಮಧುಸೂಧನ್ ಕಾರ್ಯಕ್ರಮ ಉದ್ಘಾಟಿಸಿ ಉಚಿತ ಕನ್ನಡಕವನ್ನು ವಿತರಿಸಿದರು.

ಅಂಧತ್ವ ನಿವಾರಣ ಕಾರ್ಯಕ್ರಮದ ಅನುಷ್ಠಾನ ಅಧಿಕಾರಿ ಡಾ.ಆನಂದ್ ಮಾತನಾಡಿ, ಆಶಾ ಕಿರಣ ಕಾರ್ಯಕ್ರಮದ ಮೂಲ ಉದ್ದೇಶ ರಾಜ್ಯ ಮತ್ತು ಜಿಲ್ಲೆಯನ್ನು ಅಂದತ್ವ ಮುಕ್ತವನ್ನಾಗಿಸುವ ಉದ್ದೇಶವಾಗಿದೆ.

ಕುಶಾಲನಗರ ಸಮುದಾಯ ಆರೋಗ್ಯ ಕೇಂದ್ರದ ಡಾ. ಶಿವಕುಮಾರ್, ಡಾ.ಕೀರ್ತಿ ರಾಜ್ ಡಾ.ಪ್ರತಿಭಾ, ಡಾ.ಅಂಜಲಿ ಕೃಷ್ಣಯ್ಯ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಾಂತಿ, ನೇತ್ರಾಧಿಕಾರಿ ಆದರ್ಶ್, ಲಿಪಿಕ ನೌಕರ ಷಣ್ಮುಖ, ವಿಶುಕುಮಾರ್, ಸೋಮವಾರಪೇಟೆ ಸಾರ್ವಜನಿಕ ಆಸ್ಪತ್ರೆಯಲ್ಲಿ ಡಾ.ಜಮೀರ್, ಡಾ. ಶಿವಪ್ರಸಾದ್, ಡಾ.ಕಿರಣ್, ಡಾ. ಅಫ್ರೀನಾ, ಮೀನಾಕ್ಷಿ ನೇತ್ರಾಧಿಕಾರಿ ಚೇತನ್, ಸಿಬ್ಬಂದಿ ವರ್ಗ ಪಾಲ್ಗೊಂಡಿದ್ದರು. ಆಶಾಕಿರಣ ದೃಷ್ಟಿ ಕೇಂದ್ರಗಳನ್ನು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಉದ್ಘಾಟಿಸಿದರು.

ಮಡಿಕೇರಿಯಲ್ಲಿ ಭಾರತ್ ಸ್ಕೌಟ್ಸ್, ಗೈಡ್ಸ್ ಜಿಲ್ಲಾ ತರಬೇತಿ ಭವನ ನಿರ್ಮಾಣಕ್ಕೆ 2 ಕೋಟಿ ರೂ. ಬಿಡುಗಡೆ



ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯ ಕಿರುಹೊತ್ತಿಗೆಯನ್ನು ಬಿಡುಗಡೆ ಮಾಡುತ್ತಿರುವುದು.

ಮಡಿಕೇರಿ, ಜು.3– ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ತರಬೇತಿ ಭವನ ನಿರ್ಮಾಣಕ್ಕೆ 2 ಕೋಟಿ ರೂ. ಅನುದಾನ ಬಿಡುಗಡೆ ಮಾಡಲಾಗುವುದು ಎಂದು ಭಾರತ ಸ್ಕೌಟ್ಸ್ ಮತ್ತು ಗೈಡ್ಸ್‌ನ ರಾಜ್ಯ ಮುಖ್ಯ ಆಯುಕ್ತರಾದ ಪಿ.ಜಿ.ಆರ್.ಸಿಂಧ್ಯ ತಿಳಿಸಿದ್ದಾರೆ.

ನಗರದ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಪೊನ್ನಮ್ಮ ಕುಶಾಲಪ್ಪ ಭವನದ ಸಭಾಂಗಣದಲ್ಲಿ ಗುರುವಾರ ನಡೆದ ಪದಾಧಿಕಾರಿಗಳ ಸಮಾಲೋಚನಾ ಸಭೆಯಲ್ಲಿ ಅವರು ಮಾತನಾಡಿದರು. ಸರ್ಕಾರ ಸ್ಕೌಟ್ಸ್ ಮತ್ತು ಗೈಡ್ಸ್ ಅಭಿವೃದ್ಧಿಗಾಗಿ ಅಗತ್ಯ ಸಹಕಾರ ನೀಡುತ್ತಿದ್ದು, ಆ ನಿಟ್ಟಿನಲ್ಲಿ ಇದನ್ನು ಬಳಸಿಕೊಂಡು ಅಭಿವೃದ್ಧಿಯತ್ತ ಮುನ್ನಡೆಯಬೇಕು ಎಂದು ಸಲಹೆ ನೀಡಿದ ಅವರು, ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಗೆ ಸರ್ಕಾರದಿಂದ ಬಿಡುಗಡೆಯಾಗುವ ಅನುದಾನವನ್ನು ಸ್ಥಳೀಯ ಸಂಘಟನೆಗಳಿಗೂ ಒದಗಿಸಲಾಗುವುದು. ಆ ನಿಟ್ಟಿನಲ್ಲಿ ಖರ್ಚು ವೆಚ್ಚದ ಸಮಗ್ರ ದಾಖಲೆ ಒದಗಿಸುವಂತಾಗಬೇಕು ಎಂದು ಪಿಜಿಆರ್ ಸಿಂಧ್ಯ ಅವರು ಇದೇ ಸಂದರ್ಭದಲ್ಲಿ ತಿಳಿಸಿದರು.

ಕೊಡಗು ಜಿಲ್ಲೆಯಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯು 1918ರಲ್ಲಿಯೇ ಆರಂಭವಾಗಿದೆ. ಎಲ್ಲರ ಸಹಕಾರದಿಂದ ಕ್ರಿಯಾಶೀಲ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುತ್ತಿರುವುದು ಸಂತಸ ತಂದಿದೆ. ಜಿಲ್ಲಾಡಳಿತ ಸಹ ಸಂಪೂರ್ಣ ಸಹಕಾರ ನೀಡುತ್ತಿದ್ದು, ಸ್ಕೌಟ್ಸ್ ಮತ್ತು ಗೈಡ್ಸ್ ಭವನ ನಿರ್ಮಾಣಕ್ಕೆ ನಿರಾಪೇಕ್ಷಣಾ ಪತ್ರ ಸಹ ನೀಡಿದೆ ಎಂದು ಶ್ಲಾಘಿಸಿದರು.

ಸಂಸ್ಥೆಯ ಸಹ ಆಯುಕ್ತ ಬಸವರಾಜ್, ರಾಜ್ಯ ಸಂಘಟಕರಾದ ಪ್ರಭಾಕರ ಭಟ್, ಟಿ.ಜಿ.ಪ್ರೇಮ್ ಕುಮಾರ್ ಮಾತನಾಡಿದರು. ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಸಿ.ರಂಗಧಾಮಪ್ಪ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಜ್ಯೋತಿ, ಕ್ಷೇತ್ರ ಶಿಕ್ಷಣಾಧಿಕಾರಿ ಡಾ ಬಿ.ಸಿ.ದೊಡ್ಡೇಗೌಡ, ಜಿಲ್ಲಾ ಗೈಡ್ಸ್ ಆಯುಕ್ತೆ ರಾಣಿ ಮಾಚಯ್ಯ, ಜಿಲ್ಲಾ ಸ್ಥಾನಿಕ ಆಯುಕ್ತ ಎಚ್.ಆರ್.ಮುತ್ತಪ್ಪ, ಕಾರ್ಯದರ್ಶಿ ಎಂ.ಎಂ.ಷಾಂತಿ, ಸಹ ಕಾರ್ಯದರ್ಶಿ ಬೊಳ್ಳಜಿರ ಬಿ.ಅಯ್ಯಪ್ಪ, ಪಿಆರ್‌ಓ ಟಿ.ಜಿ.ಪ್ರೇಮಕುಮಾರ್, ತರಬೇತಿ ಆಯುಕ್ತರಾದ ಮೈಥಿಲಿರಾವ್, ಕೆಯುರಂಜಿತ, ಪಿ.ಎಚ್. ಅಲೀಮ, ವಿವಿಧ ಸ್ಥಳೀಯ ಸಂಸ್ಥೆ ಅಧ್ಯಕ್ಷರಾದ ವಿಜೇತ, ಹರಿಣಿ ವಿಜಯ್ ಇತರರಿದ್ದರು.

ಭವಿಷ್ಯವನ್ನೆ ಬದಲಾಯಿಸುವ ವಿದ್ಯಾರ್ಥಿಗಳ ಪರಿಶ್ರಮ



ವಿರಾಜಪೇಟೆ: ಶೈಕ್ಷಣಿಕ ಹಂತದಲ್ಲಿ ವಿದ್ಯಾರ್ಥಿಗಳು ಹಾಕುವ ಪರಿಶ್ರಮವು ಕೇವಲ ಅವರ ಭವಿಷ್ಯವನ್ನು ಮಾತ್ರವಲ್ಲ, ಕುಟುಂಬದ ಭವಿಷ್ಯವನ್ನೆ ಬದಲಾಯಿಸುವ ಶಕ್ತಿಯನ್ನು ಹೊಂದಿದೆ ಎಂದು ಮಂಗಳೂರಿನ ಎಕ್ಸ್‌ಪರ್ಟ್ ಪದವಿಪೂರ್ವಕಾಲೇಜಿನ ಸಿ.ಇ.ಟಿ ತರಬೇತಿದಾರ ಡಾ.ಪ್ರಶಾಂತ್ ರಾವ್ ಅಭಿಪ್ರಾಯಪಟ್ಟಿದ್ದಾರೆ.

ಪಟ್ಟಣದ ಸಂತ ಅನ್ನಮ್ಮ ಪದವಿ ಪೂರ್ವ ಕಾಲೇಜಿನಲ್ಲಿ ಚಾಣಕ್ಯ ಕೋಚಿಂಗ್ ಕೇಂದ್ರದ ಸಹಯೋಗದೊಂದಿಗೆ ಕಾಲೇಜಿನ ವಿದ್ಯಾರ್ಥಿಗಳು ಮತ್ತು ಪೋಷಕರಿಗೆ ನಡೆದ ಸ್ಪರ್ಧಾತ್ಮಕ ಪರೀಕ್ಷೆಯ ಮಹತ್ವ ಹಾಗೂ ಸಿದ್ಧತೆಯ ಕುರಿತ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ನಗರ ಪ್ರದೇಶಗಳಿಗೆ ಹೋಲಿಸಿದಾಗ ಸೌಲಭ್ಯಗಳ ಕೊರತೆಗಳಿಂದಾಗಿ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳ ಸಾಧನೆಗೆ ಅಡ್ಡಿಯಾಗಿದೆ. ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಕೂಡ ಬುದ್ಧಿವಂತರಾಗಿದ್ದು, ವಾರ್ಷಿಕ ಪರೀಕ್ಷೆಯಲ್ಲಿ ನಗರ ಪ್ರದೇಶದ ವಿದ್ಯಾರ್ಥಿಗಳಷ್ಟೆ ಉತ್ತಮ ಅಂಕ ಗಳಿಸುತ್ತಾರೆ. ಆದರೆ ಅಗತ್ಯ ಸಿದ್ಧತೆಯಿಲ್ಲವಾದ್ದರಿಂದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸುವಲ್ಲಿ ವಿಫಲವಾಗುತ್ತಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಸಂತ ಅನ್ನಮ್ಮ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ರೆ.ಫಾ. ಮದಲೈ ಮುತ್ತು ಮಾತನಾಡಿದರು. ಕಾಲೇಜಿನ ಉಪನ್ಯಾಸಕ ಡಾ.ಹೇಮಂತ್, ಉಪನ್ಯಾಸಕಿಯರಾದ ರಶ್ಮಿ ಬಿ.ಎಂ ಹಾಗೂ ಅಶ್ವಿನಿ ಮಾತನಾಡಿದರು. ವೇದಿಕೆಯಲ್ಲಿ ಉಪನ್ಯಾಸಕ ರಾದ ಜೋಮೋನ್ ಥೋಮಸ್, ನೋಹ ವಿವೇಕ್, ಜಯಿದ್, ಮೋಹನಾಕ್ಷಿ ಉಪಸ್ಥಿತರಿದ್ದರು.

ಪ್ರಗತಿಪರ ರೈತನ ಹೊಲದಲ್ಲಿ ರಾಗಿ ಬಿತ್ತನೆ ಮಾಡಿದ ಕೃಷಿ ಸಚಿವ

• ಜಿಲ್ಲೆಯಲ್ಲಿ ಬಿತ್ತನೆ ಅಭಿಯಾನಕ್ಕೆ ಚಾಲನೆ • ಅರ್ಹ ಫಲಾನುಭವಿ ರೈತರಿಗೆ ಕೃಷಿ ಯಂತ್ರೋಪಕರಣ ವಿತರಣೆ

ಹನೂರು, ಜು.3– ತಾಲೂಕಿನ ಚಿಂಚಳ್ಳಿ ಗ್ರಾಮದ ಪ್ರಗತಿಪರ ರೈತ ದಯಾನಂದ್ ಅವರ ಜಮೀನಿನಲ್ಲಿ ಕೃಷಿ ಸಚಿವ ಚೆಲುವರಾಯಸ್ವಾಮಿ ರಾಗಿ ಬಿತ್ತನೆ ಮಾಡುವ ಮೂಲಕ ಜಿಲ್ಲೆಯಲ್ಲಿ ಬಿತ್ತನೆ ಅಭಿಯಾನಕ್ಕೆ ಚಾಲನೆ ನೀಡಿದರು.





ಕೃಷಿ ಸಚಿವ ಚೆಲುವರಾಯಸ್ವಾಮಿ ರಾಗಿ ಬಿತ್ತನೆ ಮಾಡುವ ಮೂಲಕ ಬಿತ್ತನೆ ಅಭಿಯಾನಕ್ಕೆ ಚಾಲನೆ ನೀಡಿದರು. ಎಡಚಿತ್ರದಲ್ಲಿ ಸಭಾ ಕಾರ್ಯಕ್ರಮವನ್ನು ಸಚಿವ ವೆಂಕಟೇಶ್ ಉದ್ಘಾಟಿಸುತ್ತಿರುವುದನ್ನು ಕಾಣಬಹುದು.

ಬಳಿಕ ಸಚಿವರು ಮಾತನಾಡಿ, ಸರ್ಕಾರ 5 ಗ್ಯಾರೆಂಟಿಗಳ ನಡುವೆಯೂ ರೈತರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಕೃಷಿ ಇಲಾಖೆಯ ಮೂಲಕ ಹಲವು ಸೌಲಭ್ಯಗಳನ್ನು ನೀಡಿದೆ. ಪ್ರತಿಯೊಬ್ಬ ರೈತರು ಇದನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ವ್ಯವಸಾಯ ಕಷ್ಟಪಟ್ಟು ಮಾಡುವ ದುಡಿಮೆಯಾಗಿದ್ದು ರೈತರು ನಿತ್ಯ ಜಮೀನಿಗೆ ಹೋಗಬೇಕು. ಆಗೊಮ್ಮೆ– ಈಗೊಮ್ಮೆ ಜಮೀನಿಗೆ ಹೋದರೆ ಯಾವುದೇ ಆದಾಯ ಬರಲು ಸಾಧವಿಲ್ಲ. ಒಂದೆಕ್ಕೆರೆ, ಎರಡೆಕ್ಕೆರೆ ಜಮೀನಿದ್ದವರೂ ಲಕ್ಷಗಟ್ಟಲೆ ಆದಾಯ ಕಾಣಬಹುದು. ಆದರೆ ನಿತ್ಯ ಜಮೀನಿಗೆ ಹೋಗಬೇಕು. ಕೂಲಿಗೆ ಹೇಳಿ ರಾಜಕೀಯ ಸಮಾರಂಭ, ಜಗಲಿ ಕಟ್ಟೆಯಲ್ಲಿ ಕೂರಬಾರದು ಎಂದರು.

ನಂತರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ವೆಂಕಟೇಶ್ ಮಾತನಾಡಿ, ಪ್ರತಿಯೊಬ್ಬ ರೈತರು ಹಿಂದಿನ ವ್ಯವಸಾಯ ಪದ್ಧತಿಯನ್ನು ಬಿಟ್ಟು ವೈಜ್ಞಾನಿಕವಾಗಿ ತಂತ್ರಜ್ಞಾನ ಅಳವಡಿಸಿಕೊಂಡು ಬೆಳೆ ಬೆಳೆಯಬೇಕು. ನಿರಂತರವಾಗಿ ಒಂದೇ ಬೆಳೆ ಬೆಳೆಯದೆ ಬೇರೆ ಬೇರೆ ಬೆಳೆ ಬೆಳೆಯಬೇಕು ಎಂದು ರೈತರಿಗೆ ಸಲಹೆ ನೀಡಿದರು.

ಅದ್ದೂರಿ ಸ್ವಾಗತ: ಇನ್ನೂ ಕಾರ್ಯಕ್ರಮಕ್ಕೆ ಪಂಚೆ, ಜುಬ್ಬಾ ಧರಿಸಿ ಬಂದಿದ್ದ ಸಚಿವರಿಗೆ ಹಸಿರು ಶಾಲು ಹೊದಿಸಿ ಕೃಷಿ ಇಲಾಖೆಯಿಂದ ಸ್ವಾಗತ ಕೋರಲಾಯಿತು.

ಬಳಿಕ, ಸಚಿವರು ಎತ್ತುಗಳಿಗೆ ನಮಸ್ಕರಿಸಿ, ನೇಗಿಲು ಹಿಡಿದು ರಾಗಿ ಬಿತ್ತಿದರು. ಕೃಷಿ ಸಚಿವರಿಗೆ ಜಿಲ್ಲಾ ಉಸ್ತುವಾರಿ ಸಚಿವ ವೆಂಕಟೇಶ್ ಹಾಗೂ ಶಾಸಕ ಮಂಜುನಾಥ್ ಸಾಥ್ ನೀಡಿದರು. ಬೀಜ ಬಿತ್ತನೆ ಬಳಿಕ ರೈತ ಫಲಾನುಭವಿಗಳಿಗೆ ಕೃಷಿ ಯಂತ್ರೋಪಕರಣಗಳನ್ನು ಸಚಿವರು ವಿತರಿಸಿದರು.

ಇನ್ನು, ಕಳೆದ ಕೆಲವು ದಿನಗಳ ಹಿಂದೆಯಷ್ಟೇ ಇದೇ ಜಮೀನಿನಲ್ಲಿ ಏರ್ಪಡಿಸಿದ್ದ ಮಾವು ಮೇಳದಲ್ಲಿ 5 ನಿಮಿಷದಲ್ಲಿ ಹೆಚ್ಚು ಮಾವುಗಳನ್ನು ತಿಂದ ವಿದ್ಯಾರ್ಥಿಗಳನ್ನು ಸಚಿವರು ಸನ್ಮಾನಿಸಿದರು.

ಸದ್ಯಕ್ಕೆ ಸಿಎಂ ಸ್ಥಾನ ಖಾಲಿಯಿಲ್ಲ: ಸದ್ಯಕ್ಕೆ ರಾಜ್ಯದಲ್ಲಿ ಮುಖ್ಯಮಂತ್ರಿ ಸ್ಥಾನ ಖಾಲಿಯಿಲ್ಲ ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಸ್ಪಷ್ಟನೆ ಪಡಿಸಿದ್ದಾರೆ.

ಹನೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಅಧಿಕಾರದಿಂದ ಇಳಿಸುತ್ತೇವೆ ಎಂದು ಯಾರು ಹೇಳಿದ್ದಾರೆ. ಬಿಜೆಪಿ ಅವರು ಕಿತಾಪತಿ ಮಾಡುತ್ತಿದ್ದಾರೆ. ನಮ್ಮಲ್ಲಿ ಹೈಕಮಾಂಡ್ ಇದೆ, ಎಲ್ಲವನ್ನೂ ಅವರು ನೋಡಿಕೊಳ್ಳುತ್ತಾರೆ. ಸದ್ಯಕ್ಕೆ ಸಿಎಂ ಸ್ಥಾನ ಖಾಲಿಯಿಲ್ಲ. 5 ವರ್ಷ ಸರ್ಕಾರ ಇರಲಿದೆ. ಸಿದ್ದರಾಮಯ್ಯನವರೇ ಮುಖ್ಯಮಂತ್ರಿ ಆಗಿರುತ್ತಾರೆ. ಬಿಜೆಪಿಯವರಿಗೆ ಇದನ್ನು ತಡೆದುಕೊಳ್ಳಲಾಗದೇ ಒದ್ದಾಡುತ್ತಿದ್ದಾರೆ ಎಂದು ಕಿಡಿಕಾರಿದರು.

ಇನ್ನು, ಡಿಕೆಶಿ ಶಸ್ತ್ರತ್ಯಾಗ ಮಾಡಿದ್ರಾ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಡಿಕೆಶಿ ಒಬ್ಬರು ಅಧ್ಯಕ್ಷರಿದ್ದಾರೆ, ಏನೇನೋ ಹೇಳೋಕೆ ಆಗಲ್ಲ. ಡಿಕೆಶಿ ಹಾಗೂ ಸಿಎಂ ಅನ್ಯೋನ್ಯವಾಗಿದ್ದಾರೆ ಎಂದರು.

> ಕಾಂಗ್ರೆಸ್ ಸರ್ಕಾರ ಯಾವ ರೀತಿ ಕೆಲಸ ಮಾಡುತ್ತಿದೆ ಎಂದು ನಿಮಗೆಲ್ಲಾ ಗೊತ್ತಿದೆ. ಗ್ಯಾರಂಟಿ ಬಂದು ಹಾಳಾಗೊಯ್ತು ಅಂತಾರೆ ಕೃಷಿ ಉಪಕರಣ ಕೊಡುವುದನ್ನು ನಿಲ್ಲಿಸಿದ್ದೇವಾ, ವಿಧವಾ ವೇತನ, ವೃದ್ಧಾಪ್ಯ ವೇತನ ಕೊಡುವುದನ್ನು ನಿಲ್ಲಿಸಿದ್ದೇವಾ, ಬಡ್ಡಿ ರಹಿತ ಸಾಲ ಕೊಡುವುದನ್ನು ನಿಲ್ಲಿಸಿದ್ದೇವಾ, ಬಿಜೆಪಿ ಆಡಳಿತವೂ ಗೊತ್ತು, ಕಾಂಗ್ರೆಸ್ಸಿನ ಅಭಿವೃದ್ಧಿ ಆಡಳಿತವೂ ನಿಮಗೆ ಗೊತ್ತಿದೆ.
> – ಚೆಲುವರಾಯಸ್ವಾಮಿ, ಕೃಷಿ ಸಚಿವರು.

ಕಾರ್ಯಕ್ರಮದಲ್ಲಿ ಶಾಸಕ ಎಂ.ಆರ್. ಮಂಜುನಾಥ್, ಮಾಜಿ ಶಾಸಕ ಆರ್. ನರೇಂದ್ರ ಕಾಡಾ ಅಧ್ಯಕ್ಷ ಮರಿಸ್ವಾಮಿ, ಜಿಲ್ಲಾಧಿಕಾರಿ ಶಿಲ್ಪಾನಾಗ್, ಜಿಪಂ ಸಿಇಒ ಮೋನಾ ರೋತ್, ಎಸ್ಪಿ ಡಾ.ಬಿ.ಟಿ. ಕವಿತಾ ಇದ್ದರು.

ಗುಂಡ್ಲುಪೇಟೆಯಲ್ಲಿ ಜು.14 ರಿಂದ ಉಚಿತ ಮದ್ಯವರ್ಜನ ಶಿಬಿರ



ಪತ್ರಿಕಾಗೋಷ್ಠಿಯಲ್ಲಿ ಡಾ.ಎಂ.ಪಿ.ಸೋಮಶೇಖರ್ ಮಾತನಾಡಿದರು.

ಗುಂಡ್ಲುಪೇಟೆ, ಜು.3(ಸೋಮ್.ಜಿ)– ಪಟ್ಟಣದ ಜೆಎಸ್‌ಎಸ್ ಅನುಭವ ಮಂಟಪದಲ್ಲಿ ಜು.14 ರಿಂದ 23ರವರೆಗೆ 21ನೆಯ ಉಚಿತ ಮದ್ಯವರ್ಜನ ಶಿಬಿರ ಆಯೋಜಿಸಲಾಗಿದೆ ಎಂದು ಶಿಬಿರದ ಸಂಚಾಲಕ ಡಾ.ಎಂ.ಪಿ. ಸೋಮಶೇಖರ್ ಹೇಳಿದರು.

ಪಟ್ಟಣದ ಜೆಎಸ್‌ಎಸ್ ಕಾಲೇಜಿನಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸುತ್ತೂರು ಮಹಾಸಂಸ್ಥಾನ ಮಠ ಮತ್ತು ಹಾಲಹಳ್ಳಿ ಸಂಗಮ ಪ್ರತಿಷ್ಠಾನದ ಸಹಯೋಗದಲ್ಲಿ ಈ ಉಚಿತ ಮದ್ಯವರ್ಜನ ಶಿಬಿರ ಹಮ್ಮಿಕೊಳ್ಳಲಾಗಿದೆ. ಮದ್ಯಪಾನದಿಂದ ಜನರ ಆರೋಗ್ಯ ಕೆಡುತ್ತದೆ. ಸಾಮಾಜಿಕ ಘನತೆ ಮತ್ತು ಗೌರವಕ್ಕೆ ಕುಂದುಂಟಾಗುತ್ತದೆ. ಒಬ್ಬನೇ ಸದಸ್ಯ ಮದ್ಯ ವ್ಯಸನಿಯಾದರೂ ಕುಟುಂಬದ 18 ಮಂದಿ ವಿವಿಧ ರೀತಿಯ ತೊಂದರೆಗಳಿಗೆ ಒಳಗಾಗುತ್ತಾರೆ. ಮದ್ಯವ್ಯಸನದಿಂದ ಸಾಂಸಾರಿಕ ಜೀವನವೂ ಹದಗೆಡುತ್ತದೆ. ಕುಟುಂಬದ ಶಾಂತಿ, ನೆಮ್ಮದಿಗಳ ಇಲ್ಲವಾಗುತ್ತವೆ. ಇಂತಹ ಸಮಸ್ಯೆಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಿ ವ್ಯಸನ ಮುಕ್ತರನ್ನಾಗಿಸುವುದು ಶಿಬಿರದ ಉದ್ದೇಶವಾಗಿದೆ ಎಂದರು.

ಈ ಉದ್ದೇಶದಿಂದ ಸುತ್ತೂರು ಮಠಾಧ್ಯಕ್ಷರಾದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿಯವರ ಮಾರ್ಗದರ್ಶನದಲ್ಲಿ ಈಗಾಗಲೇ ಮೈಸೂರು – ಚಾಮರಾಜನಗರ ಜಿಲ್ಲೆಯ ವಿವಿದೆಡೆ 2014 ರಿಂದ ಇಲ್ಲಿಯವರೆಗೆ 20 ಉಚಿತ ಶಿಬಿರಗಳನ್ನು ಮಾಡಿದ್ದು, ಇದರಲ್ಲಿ ಸರಿ ಸುಮಾರು 1052 ಮದ್ಯ ವ್ಯಸನಿಗಳು ಶಿಬಿರದಲ್ಲಿ ಭಾಗವಹಿಸಿದ್ದರು. ಅದರಲ್ಲಿ ಶೇಕಡ 30 ರಿಂದ 40 ರಷ್ಟು ಮಂದಿ ಮದ್ಯವನ್ನು ತೊರೆದು ಉತ್ತಮವಾದ ಜೀವನ ನಡೆಸಿಕೊಂಡು ಸ್ವಾವಲಂಭಿಗಳಾಗಿ ಬದುಕುತ್ತಿದ್ದಾರೆ ಎಂದರು.

ಮಾಹಿತಿಗಾಗಿ ಪಿ.ಮಲ್ಲು ಚನ್ನಂಜಯ್ಯನ ಹುಂಡಿ 9900076045, ಮಡಹಳ್ಳಿ ಮಣಿ 9972726351, ಸಂಗಮ ಪ್ರತಿಷ್ಠಾನದ ಮಂಜುನಾಥ್ 9886838810ನ್ನು ಸಂಪರ್ಕಿಸಿ.

ವನ್ಯಜೀವಿಗಳ ಹತ್ಯೆ ತಡೆಗೆ ತುರ್ತು ಕ್ರಮ ಕೈಗೊಳ್ಳಿ

ಚಾಮರಾಜನಗರ, ಜು.3– ಕಾಡಂಚಿನ ಪ್ರದೇಶ, ಗ್ರಾಮಗಳಲ್ಲಿ ವನ್ಯಜೀವಿಗಳು ಹಾಗೂ ಜಾನುವಾರುಗಳ ಹತ್ಯೆ ನಡೆಯದಂತೆ ಕಟ್ಟುನಿಟ್ಟಿನ ತುರ್ತು ಮುಂಜಾಗ್ರತಾ ಕ್ರಮಗಳನ್ನು ಅರಣ್ಯ ಇಲಾಖೆ ಅಧಿಕಾರಿಗಳು ವಹಿಸುವಂತೆ ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ತಾಕೀತು ಮಾಡಿದರು.



ಅಧಿಕಾರಿಗಳ ಸಭೆ ನಡೆಸುತ್ತಿರುವ ಜಿಲ್ಲಾ ಉಸ್ತುವಾರಿ ಸಚಿವ ಕೆ. ವೆಂಕಟೇಶ್.

> ಅರಣ್ಯ ಹಾಗೂ ಇದರ ಸಮೀಪದ ಗ್ರಾಮಗಳಲ್ಲಿ ಗಸ್ತು ಹೆಚ್ಚಿಸಬೇಕು. ರಾತ್ರಿಯ ವೇಳೆಯಲ್ಲೂ ವಿಶೇಷ ಗಸ್ತು ವ್ಯವಸ್ಥೆ ಇರಬೇಕು. ವಾಚರ್‌ಗಳು ಇನ್ನಿತರ ಅರಣ್ಯ ಸಿಬ್ಬಂದಿಯನ್ನು ನಿಯೋಜಿಸಿ ಅರಣ್ಯ ಅಧಿಕಾರಿಗಳು ಮೇಲುಸ್ತುವಾರಿ ಮಾಡಿದರೆ ಪ್ರಾಣಿಗಳ ಉಪಟಳ ತಪ್ಪಿಸಬಹುದಾಗಿದೆ. ವನ್ಯಜೀವಿಗಳು ಜಾನುವಾರು ಮೇಲೆ ದಾಳಿ ಮಾಡಿದಾಗ ರೈತರನ್ನು, ಗ್ರಾಮಸ್ಥರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸಾಂತ್ವನ ಹೇಳಬೇಕು. ಜಾನುವಾರುಗಳ ರಕ್ಷಣೆಗೆ ಶೀಘ್ರ ಸ್ಪಂದಿಸಿ ಮಾಹಿತಿ ತಿಳಿವಳಿಕೆ ನೀಡಬೇಕಿದೆ. – ಕೆ.ವೆಂಕಟೇಶ್

ಇತ್ತೀಚೆಗೆ ಮಲೈ ಮಹದೇಶ್ವರ ವನ್ಯಜೀವಿ ವಿಭಾಗದ ಹೂಗ್ಯಂ ವಲಯದಲ್ಲಿ ಸಂಭವಿಸಿದ ಹುಲಿಗಳ ಅಸಹಜ ಸಾವು ಹಾಗೂ ಗುಂಡ್ಲುಪೇಟೆ ವಲಯದ ಕಂದೇಗಾಲ ಭಾಗದಲ್ಲಿ ಕೋತಿಗಳ ಮರಣಕ್ಕೆ ಸಂಬಂಧಿಸಿದಂತೆ ಹನೂರು ಪಟ್ಟಣದ ಪ್ರವಾಸಿ ಮಂದಿರದಲ್ಲಿಂದು ಜಿಲ್ಲಾಧಿಕಾರಿಗಳು, ಅರಣ್ಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ವಿವರ ಪಡೆದರು.

ಹುಲಿಗಳ ಸಾವಿಗೆ ಸಂಬಂಧಿಸಿದಂತೆ ನಡೆಯುತ್ತಿರುವ ಕೇಂದ್ರ ಹಾಗೂ ರಾಜ್ಯಮಟ್ಟದ ಅಧಿಕಾರಿಗಳ ತನಿಖಾ ತಂಡದ ಬಗ್ಗೆ ಪೂರ್ಣ ಮಾಹಿತಿ ಪಡೆದುಕೊಂಡು ತನಿಖೆಯು ಯಾವ ಹಂತದಲ್ಲಿದೆ ಎಂಬ ಬಗ್ಗೆಯು ಅರಣ್ಯ ಅಧಿಕಾರಿಗಳಿಂದ ಜಿಲ್ಲಾ ಉಸ್ತುವಾರಿ ಸಚಿವರು ವಿವರ ಪಡೆದರು.

ಅರಣ್ಯದಂಚಿನ ಗ್ರಾಮಗಳಲ್ಲಿ ಜಾನುವಾರುಗಳ ಸಂರಕ್ಷಣೆಗೆ ಅರಣ್ಯ ಅಧಿಕಾರಿಗಳು ಹೆಚ್ಚಿನ ಮುತುವರ್ಜಿ ವಹಿಸಬೇಕು. ವನ್ಯಜೀವಿಗಳು ಆಹಾರ ಅರಸಿ ಗ್ರಾಮಗಳಿಗೆ ಬರದಂತೆ ಅರಣ್ಯದಲ್ಲೇ ಸೂಕ್ತ ಆಹಾರ ನೀರು ಒದಗಿಸುವ ಕಾರ್ಯವನ್ನು ತುರ್ತಾಗಿ ಮಾಡಬೇಕು. ಜಾನುವಾರುಗಳಿಗೆ ಕಾಡು ಸಮೀಪದ ಗ್ರಾಮಗಳಲ್ಲೇ ನರೇಗಾ ಯೋಜನೆಯಡಿ ಮೇವು ಬೆಳೆಸಿ, ಕೆರೆಗಳನ್ನು ನಿರ್ಮಿಸಿ ಅನುಕೂಲ ಮಾಡಿಕೊಡಬೇಕು. ಸ್ಥಳೀಯ ಭಾಗದ ಜಾನುವಾರುಗಳಿಗೆ ಮೇವು ನೀರು ಕೊರತೆಯಾಗಬಾರದು ಎಂದು ಸಚಿವರು ನಿರ್ದೇಶನ ನೀಡಿದರು.

ಮಲೈ ಮಹದೇಶ್ವರ ವನ್ಯಜೀವಿ ವಿಭಾಗದ ಹೊರಗುತ್ತಿಗೆ ವಾಚರ್ ಸಿಬ್ಬಂದಿಗೆ ಸಕಾಲದಲ್ಲಿ ವೇತನ ಪಾವತಿಸುವುದು ಸಂಬಂಧಪಟ್ಟ ಅರಣ್ಯ ಇಲಾಖೆಯ ಅಧಿಕಾರಿಗಳ ಮುಖ್ಯ ಜವಾಬ್ದಾರಿಯಾಗಿದೆ. ಈ ವಿಷಯದಲ್ಲಿ ನಿರ್ಲಕ್ಷ್ಯ ವಹಿಸದೆ ಉನ್ನತ ಮಟ್ಟದ ಅಧಿಕಾರಿಗಳ ಗಮನಕ್ಕೆ ತಂದು ಪರಿಹರಿಸಬೇಕು. ಅರಣ್ಯ ಇಲಾಖೆ ವಿಶೇಷವಾಗಿ ಕಾಡಂಚಿನ ಭಾಗಗಳ ಪ್ರಾಣಿಗಳು, ಜನ ಜಾನುವಾರುಗಳಿಗೆ ಸೂಕ್ತ ರಕ್ಷಣೆ, ಮೂಲ ಸೌಕರ್ಯ ಒದಗಿಸುವ ನಿಟ್ಟಿನಲ್ಲಿ ಅಗತ್ಯವಿರುವ ಅನುದಾನದ ನೆರವು ಮಂಜೂರು ಮಾಡಿಸಲು ಕ್ರಮ ತೆಗೆದುಕೊಳ್ಳಲಾಗುವುದೆಂದು ಕೆ.ವೆಂಕಟೇಶ್ ತಿಳಿಸಿದರು. ಈ ವೇಳೆ ಶಾಸಕರು ಸೇರಿದಂತೆ ಹಲವರು ಉಪಸ್ಥಿತರಿದ್ದರು.

ನಾಳೆ ಸಾಧಕರಿಗೆ ಸನ್ಮಾನ ಕಾರ್ಯಕ್ರಮ



ಸುದ್ದಿಗೋಷ್ಠಿಯಲ್ಲಿ ಮಾತನಾಡುತ್ತಿರುವ ಮೂಡ್ಲುಪುರ ನಂದೀಶ್.

ಚಾಮರಾಜನಗರ: ನಗರದ ಶಿವಕುಮಾರ ಸ್ವಾಮಿ ಭವನದಲ್ಲಿ ಜು.5ರಂದು ಬೆಳಗ್ಗೆ 10ಗಂಟೆಗೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ಜಿಲ್ಲಾ ಹಾಗೂ ತಾಲೂಕು ಘಟಕದಿಂದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿರುವ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಮೂಡ್ಲುಪುರ ನಂದೀಶ್ ಹೇಳಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಅಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ರಾಷ್ಟ್ರೀಯ ಅಧ್ಯಕ್ಷ ಶಾಮನೂರು ಶಿವಶಂಕರಪ್ಪ ಅವರನ್ನು ಸನ್ಮಾನಿಸಲಾಗುವುದು ಎಂದು ತಿಳಿಸಿದರು.

ಸುತ್ತೂರು ಮಠದ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಚಾಮರಾಜನಗರ ಸಿದ್ದಮಲ್ಲೇಶ್ವರ ವಿರಕ್ತ ಮಠದ ಚನ್ನಬಸವ ಸ್ವಾಮೀಜಿ, ಮರಿಯಾಲ ಮುರುಘಾ ರಾಜೇಂದ್ರ ಮಠದ ಇಮ್ಮಡಿ ಮುರುಘರಾಜೇಂದ್ರ ಸ್ವಾಮೀಜಿ, ಹರವೆ ಮಠದ ಸರ್ಪಭೂಷಣ ಸ್ವಾಮೀಜಿ ಕಾರ್ಯಕ್ರಮದ ಸಾನಿಧ್ಯ ವಹಿಸುವರು, ಅರಣ್ಯ ಸಚಿವ ಪ್ರಕಾಶ್ ಬಿ.ಖಂಡ್ರೆ ಉದ್ಘಾಟಿಸುವರು.

ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್, ನಿವೃತ್ತ ಐಪಿಎಸ್ ಅಧಿಕಾರಿ ಶಂಕರಮಹದೇವ ಬಿದರಿ, ವೀರಶೈವ–ಲಿಂಗಾಯತ ಅಭಿವೃದ್ಧಿ ನಿಗಮದ ರಾಜ್ಯಾಧ್ಯಕ್ಷ ವಿಜಯಾನಂದ ಕಾಶಪ್ಪನವರ್, ಮಾಜಿ ಶಾಸಕ ವಾಟಾಳ್ ನಾಗರಾಜ್ ಭಾಗವಹಿಸುವರು

ಸಾಧಕರಿಗೆ ಸನ್ಮಾನ

ನಂಜನಗೂಡು ತಾಲೂಕಿನ ಚಂದ್ರವಾಡಿ ಗ್ರಾಮದ ರೈತ ದಂಪತಿ ಪರಮೇಶ್ ಹಾಗೂ ಯೋಗೇಶ್ವರಿ, ಮಲೆ ಮಹದೇಶ್ವರ ಬೆಟ್ಟದ ಸಾಲೂರು ಮಠದ ಶ್ರೀಗಳು, ಖೋಖೋಪಟು ಕುರುಬೂರು ಚೈತ್ರ, ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಸ್ವಾಮಿ ಪೊನ್ನಾಚಿ, ಭರತನಾಟ್ಯ ಪ್ರಶಸ್ತಿ ವಿಜೇತ ಶಿಕ್ಷಕರಾದ ಅನಿತಾ, ರಂಗಕರ್ಮಿ ಎಂ.ಪಿ. ರಾಜಣ್ಣ, ಕೊತ್ತಲವಾಡಿ ಗ್ರಾಮದ ಡಾ.ಯೋಗೇಶ್, ಪ್ರಕಾಶ್ ಪುಟ್ಟಪ್ಪ, ಸರಿಗಮಪ ಖ್ಯಾತಿಯ ಬೀದರ್ ಶಿವಾನಿ ಅವರನ್ನು ಸನ್ಮಾನಿಸಲಾಗುತ್ತದೆ.

ಬಿಗ್‌ಬಾಸ್ ಮುಂದಿನ 4 ವರ್ಷವೂ ಕಿಚ್ಚ ಸುದೀಪ್ ಅವರೇ ನಿರೂಪಕ



ಈ ಸಲ ಬಿಗ್‌ಬಾಸ್-12 ಅನ್ನು ಕಿಚ್ಚ ಸುದೀಪ್ ಅವರೇ ನಡೆಸಿಕೊಡುವುದು ಖಚಿತವಾಗಿದೆ. ಕಳೆದ ಬಾರಿ ಮುಂದಿನ ಸೀಸನ್‌ನ್ನು ನಾನು ನಡೆಸಿಕೊಡುವುದಿಲ್ಲ ಎಂದವರು ಹೇಳಿದಾಗಿನಿಂದ ಈ ಬಗ್ಗೆ ಚರ್ಚೆ ನಡೆಯುತ್ತಲೇ ಇತ್ತು. ಈಗ ಅದೆಲ್ಲಕ್ಕೂ ತೆರೆಬಿದ್ದಿದೆ. ಬಿಗ್‌ಬಾಸ್ ಸೀಸನ್-12 ಮಾತ್ರವಲ್ಲ, ಮುಂದಿನ ನಾಲ್ಕು ಸೀಸನ್‌ಗೂ ಸುದೀಪ್ ಅವರೇ ನಿರೂಪಕರಾಗಿರಲಿದ್ದಾರೆ. ಹೌದು, ಕಲರ್ಸ್ ವಾಹಿನಿಯ ಜೊತೆ ಸುದೀಪ್ ಹೊಸ ಅಗ್ರಿಮೆಂಟ್ ಮಾಡಿಕೊಂಡಿದ್ದು, ಮುಂದಿನ ನಾಲ್ಕು ಸೀಸನ್‌ಗಳನ್ನು ಅವರೇ ಹೋಸ್ಟ್ ಮಾಡಲಿದ್ದಾರೆ. ಈ ವಿಷಯವನ್ನು ಸುದೀಪ್ ಅವರೇ ಮೊನ್ನೆ ನಡೆದ ಬಿಗ್ ಬಾಸ್ ಪತ್ರಿಕಾಗೋಷ್ಠಿಯಲ್ಲಿ ಹೇಳಿದ್ದಾರೆ.

ಈ ಕುರಿತು ಮಾತನಾಡಿದ ಕಲರ್ಸ್ ವಾಹಿನಿಯ ಪ್ರಶಾಂತ್ ನಾಯಕ್, ಸುದೀಪ್ ಅವರು ಟ್ವೀಟ್ ಮಾಡಿದ ಮೇಲೂ ನಾವು ಬೇರೆ ಆಪ್ಷನ್ ಇಟ್ಟುಕೊಂಡಿರಲಿಲ್ಲ. ಅವರೇ ನಮ್ಮ ಆಯ್ಕೆಯಾಗಿದ್ದರು. ಬಿಗ್‌ಬಾಸ್ ಅಂದ್ರೆ ಸುದೀಪ್, ಸುದೀಪ್ ಅಂದ್ರೆ ಬಿಗ್‌ಬಾಸ್. ಹಾಗಾಗಿ, ನಾವು ಅವರನ್ನು ಕನ್ವಿನ್ಸ್ ಮಾಡಿದೆವು. ನಾಡಿನ ಜನರ ಅಭಿಪ್ರಾಯದ ಮುಂದೆ ನಾವು ಏನೂ ಅಲ್ಲ. ಈ ಶೋವನ್ನು ಕನ್ನಡ ಜನರು ಅಷ್ಟರಮಟ್ಟಿಗೆ ಇಷ್ಟಪಟ್ಟು ನೋಡುತ್ತಿದ್ದಾರೆ. ಅವರೆಲ್ಲ ಸುದೀಪ್ ಅವರೇ ಬೇಕೆಂದು ಕೇಳುತ್ತಿದ್ದಾರೆ. ಜನರ ಅಭಿಪ್ರಾಯಕ್ಕೆ ನಾವು ಗೌರವ ಕೊಡಲೇಬೇಕು ಎಂದು ಹೇಳಿದರು.

ಇದರ ಮಧ್ಯೆ ಬಿಗ್‌ಬಾಸ್ ಶೋಗೆ ಪಡೆಯುವ ಸಂಭಾವನೆ ಜಾಸ್ತಿ ಆಗಿದೆಯಾ ಎಂಬ ಬಗ್ಗೆ ಮಾತನಾಡಿದ ಸುದೀಪ್, ನಾವು ಕೊಡುವ ಮನೆ ಬಾಡಿಗೆಯೇ ಪ್ರತಿವರ್ಷ 10% ಜಾಸ್ತಿ ಆಗುತ್ತದೆ. ಆದರೆ ನಾನು ಲೀಸ್‌ಗೂ ಹೋಗಲ್ಲ, ರೆಂಟಿಗೂ ಹೋಗಲ್ಲ. ನಮ್ಮದೇ ಅಂತ ಒಂದು ಮಾರ್ಕೆಟ್ ಇರುತ್ತೆ ತಾನೇ? ಸಿನಿಮಾಕ್ಕೆ ಪಡೆಯುವುದಕ್ಕಿಂತ ಸ್ವಲ್ಪ ಜಾಸ್ತಿನೇ ಅಂತ ಅಂದುಕೊಳ್ಳಿ, ಆದರೆ, ಅದು ಮುಖ್ಯವಲ್ಲ. ನಾನು ಶೋವನ್ನು ಮಾಡಲ್ಲ, ನನಗೆ ಇಷ್ಟು ಹಣ ಬೇಕು ಅನ್ನೋದೆಲ್ಲಾ ಪಬ್ಲಿಕ್ ಆಗಿ ಮಾತಾಡುವ ವಿಷಯನೇ ಅಲ್ಲ. ಇಲ್ಲಿ ದುಡ್ಡು ಮುಖ್ಯವಾಗಲ್ಲ ಎಂದು ಹೇಳಿದ್ದಾರೆ. ಶೋ ಪ್ರಾರಂಭವಾಗುವ ದಿನಾಂಕವನ್ನು ಸದ್ಯದಲ್ಲೇ ತಿಳಿಸುವುದಾಗಿ ಹೇಳಿರುವ ಪ್ರಶಾಂತ್ ಈ ಸಲ 12 ವಿವಿಧ ಕೆಟಗರಿಯಲ್ಲಿ ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದಾಗಿ ಹೇಳಿದರು.



ಶೇ.90ರಷ್ಟು ಮೈಸೂರಲ್ಲೇ ನಡೀತು

'ಕುಂಟೆಬಿಲ್ಲೆ'

ಒಂದು ಕಾಲದಲ್ಲಿ ಮೈಸೂರಿನ ಪ್ರೀಮಿಯರ್ ಸ್ಟುಡಿಯೋ ಎಂದರೆ ಬೆಂಗಳೂರಿನ ಕಂಠೀರವ ಸ್ಟುಡಿಯೋ ಬಿಟ್ಟರೆ ರಾಜ್ಯದ ಎರಡನೇ ಅತಿ ದೊಡ್ಡ ಚಿತ್ರೀಕರಣ ತಾಣವಾಗಿತ್ತು. ಅಲ್ಲದೆ ಯಾರೇ ಸಿನಿಮಾ ಮಾಡಿದರೂ ಚಿತ್ರೀಕರಣಕ್ಕೆ ಪ್ರಶಸ್ತವಾದ ತಾಣ ಎಂದು ಆಯ್ಕೆ ಮಾಡಿಕೊಳ್ಳುವುದೇ ಮೈಸೂರನ್ನು. ಇದೀಗ ದಕ್ಷಯಜ್ಞ, ತರ್ಲೆವಿಲೇಜ್, ಹೂವಿನ ಹಾರದಂಥ ಚಿತ್ರಗಳ ಸಾಹಿತಿ ಮತ್ತು ನಿರ್ದೇಶಕರಾದ ಸಿದ್ದೇಗೌಡ ಜಿಬಿಎಸ್ ಅವರು ತಮ್ಮ ನಿರ್ದೇಶನದ ಕುಂಟೆಬಿಲ್ಲೆ ಚಿತ್ರದ ಬಹುತೇಕ ಶೂಟಿಂಗ್ ಅಲ್ಲದೆ ಪೋಸ್ಟ್ ಪ್ರೊಡಕ್ಷನ್ ಕೆಲಸಗಳನ್ನು ಮೈಸೂರಿನಲ್ಲೇ ಮಾಡಿ ಮುಗಿಸಿದ್ದಾರೆ, ಅಂದರೆ ಚಿತ್ರದ 90% ಪೋಸ್ಟ್ ಪ್ರೊಡಕ್ಷನ್ ಕೆಲಸಗಳನ್ನು ಮೈಸೂರಿನಲ್ಲಿ ಮಾಡಿಕೊಂಡಿದ್ದಾರೆ.

ಮೈಸೂರಿನಲ್ಲಿರುವ ಜೀವಿತ ಕ್ರಿಯೇಷನ್ ಸಂಸ್ಥೆಯಲ್ಲಿ ಚಿತ್ರದ ಎಡಿಟಿಂಗ್ ಮಾಡಿಸಿ, ಬೋಗಾದಿ ಎರಡನೇ ಹಂತದಲ್ಲಿರುವ ಮಿಡ್ ಸ್ಟುಡಿಯೋದಲ್ಲಿ ಚಿತ್ರದ ಡಬ್ಬಿಂಗ್ ಕೆಲಸಗಳನ್ನು ಮಾಡಿಸಿದ್ದಾರೆ. ಅಲ್ಲದೆ ಕುವೆಂಪು ನಗರದ ಶೂನ್ಯಕ ಸ್ಟುಡಿಯೋದಲ್ಲಿ ಡಿ.ಐ.(ಕಲರಿಂಗ್) ಮಾಡಿಸಿ ರಾಮಕೃಷ್ಣನಗರದ ಪವನ್ ಸ್ಟುಡಿಯೋದಲ್ಲಿ ಸಿಜಿ ವರ್ಕ್ ಮಾಡಿಸಿದ್ದಾರೆ. ಹಾಗೇ ಗಂಗೋತ್ರಿ ಲೇಔಟ್‌ನಲ್ಲಿರುವ ಹರಿಕಾವ್ಯ ಅವರ ಸ್ಟುಡಿಯೋದಲ್ಲಿ ಸದ್ಯ ಚಿತ್ರದ ರೀರೆಕಾರ್ಡಿಂಗ್ ಕೆಲಸವನ್ನು ಮಾಡಿಸುತ್ತಿದ್ದಾರೆ.

ಇನ್ನು, ಚಿತ್ರದ 5.1 ಮತ್ತು ಸೆನ್ಸಾರ್‌ಗೆ ಮಾತ್ರ ಬೆಂಗಳೂರಿಗೆ ಹೋಗಬೇಕಾಗುತ್ತದೆ. ಇನ್ನು, ಮೈಸೂರಿನಲ್ಲಿ ಉದ್ದೇಶಿತ ಚಿತ್ರನಗರಿ ಪ್ರಾರಂಭವಾದರೆ ಸಿನಿಮಾ ಪ್ರಿವ್ಯೂ ಥಿಯೇಟರ್ ಕೂಡ ಸಿಗುತ್ತದೆ ಹೀಗೆ ಒಂದು ಸಿನಿಮಾದ ಪೋಸ್ಟ್ ಪ್ರೊಡಕ್ಷನ್ ಕೆಲಸಗಳಿಗೆ ಬೆಂಗಳೂರನ್ನೇ ನೆಚ್ಚಿಕೊಂಡು ಕೂರಬೇಕಾಗಿಲ್ಲ. ಎಲ್ಲ ಸೌಲಭ್ಯಗಳೂ ಮೈಸೂರಲ್ಲೇ ಸಿಗುತ್ತವೆ ಎಂದು ನಿರ್ದೇಶಕ ಸಿದ್ದೇಗೌಡ ಅವರು ತಮ್ಮ ಚಿತ್ರದ ಮೂಲಕ ತೋರಿಸಿಕೊಟ್ಟಿದ್ದಾರೆ. ಮುಂದೆ ಬರುವ ಮೈಸೂರಿನ ಪ್ರತಿಭೆಗಳಿಗೆ ಅನುಕೂಲವಾಗುತ್ತದೆ ಎಂದು ಹೇಳಿದ್ದಾರೆ,

ಕುಂಟೆಬಿಲ್ಲೆ ಚಿತ್ರವನ್ನು ಜೀವಿತ ಕ್ರಿಯೇಶನ್ಸ್ ಮೂಲಕ ಎಸ್.ಬಿ. ಶಿವ ಪಡುವಾರಹಳ್ಳಿ ಹಾಗೂ ಕೆ.ಜಿ.ಕೊಪ್ಪಲಿನ ಕುಮಾರ್‌ಗೌಡ ಅವರು ನಿರ್ಮಾಣ ಮಾಡಿದ್ದಾರೆ. ವಿಶೇಷವಾಗಿ ಈ ಚಿತ್ರದಲ್ಲಿ ಕಾರ್ಯನಿರ್ವಹಿಸಿರುವ ತಂತ್ರಜ್ಞರಲ್ಲಿ ಬಹುಪಾಲು ಮಂದಿ ಮೈಸೂರಿನವರೇ ಆಗಿದ್ದಾರೆ. ಯುವನಟ ಯದು, ಮೇಘಶ್ರೀ ಚಿತ್ರದ ನಾಯಕ, ನಾಯಕಿಯಾಗಿ ನಟಿಸಿದ್ದು, ಉಳಿದಂತೆ ಹಿರಿಯ ನಟ ಸುಚೇಂದ್ರಪ್ರಸಾದ್, ಶಂಕರ್ ಅಶ್ವಥ್, ಸುಧಾ ಬೆಳವಾಡಿ, ಇನ್ನೂ ಮುಂತಾದವರು ಕುಂಟೆಬಿಲ್ಲೆ ಚಿತ್ರದಲ್ಲಿ ಅಭಿನಯಿಸಿದ್ದಾರೆ.

ಕ್ಯಾಪಿಟಲ್ ಸಿಟಿಯಲ್ಲಿ 90ರ ದಶಕದ ಭೂಗತಲೋಕ



ತೊಂಭತ್ತರ ದಶಕದಲ್ಲಿ ಅಂಡರ್‌ವರ್ಲ್ಡ್ ಚಟುವಟಿಕೆ ಹೇಗೆಲ್ಲಾ ನಡೆಯುತ್ತಿತ್ತು. ಜತೆಗೆ ಆ ಕಾಲದ ರಿವೇಂಜ್ ಸ್ಟೋರಿಯನ್ನಿಟ್ಟುಕೊಂಡು ಆರ್. ಅನಂತರಾಜು ನಿರ್ದೇಶಿಸಿರುವ ಕ್ಯಾಪಿಟಲ್ ಸಿಟಿ ಚಿತ್ರ ಈ ವಾರ ರಿಲೀಸಾಗುತ್ತಿದೆ. ಇತ್ತೀಚೆಗೆ ನಡೆದ ಟ್ರೈಲರ್ ಬಿಡುಗಡೆ ಸಮಾರಂಭದಲ್ಲಿ ನಾಯಕ ರಾಜೀವ್‌ರೆಡ್ಡಿ, ನಿರ್ದೇಶಕ ಆರ್. ಅನಂತರಾಜು ಸಿನಿಮಾ ಕುರಿತಂತೆ ಮಾಹಿತಿ ಹಂಚಿಕೊಂಡರು.

ಆರ್.ಅನಂತರಾಜು ಮಾತನಾಡಿ, ಇದು ನನ್ನ ನಿರ್ದೇಶನದ 11ನೇ ಚಿತ್ರ, 90ರ ಕಾಲದ ಬೆಂಗಳೂರು ಭೂಗತ ಜಗತ್ತಿನ ಸುತ್ತ ನಡೆಯುವ ಕಥೆ. ಒಂದು ತೊಂದರೆಯಲ್ಲಿ ಸಿಕ್ಕಿಹಾಕಿಕೊಳ್ಳುವ ನಾಯಕ ನಂತರ ಹೇಗೆ ಅದರಿಂದ ಹೊರಬರುತ್ತಾನೆ ಎನ್ನುವುದೇ ಕ್ಯಾಪಿಟಲ್ ಸಿಟಿ ಕಥಾಹಂದರ. ನೋಡಲು ಇದೊಂದು ಆಕ್ಷನ್ ಚಿತ್ರ ಎನಿಸಿದರೂ ಮನರಂಜನೆಗೆ ಬೇಕಾದ ಎಲ್ಲಾ ಅಂಶಗಳನ್ನೂ ಒಳಗೊಂಡಿದೆ. ರಾಜೀವ್‌ರೆಡ್ಡಿ ಜತೆ ಪ್ರೇರಣಾ ನಾಯಕಿಯಾಗಿ ನಟಿಸಿದ್ದಾರೆ. ಖಳನಟನಾಗಿ ರವಿಶಂಕರ್ ಅದ್ಭುತವಾಗಿ ನಟಿಸಿದ್ದಾರೆ. ಸುಮನ್, ಶರತ್ ಲೋಹಿತಾಶ್ವರಂಥ ಹಿರಿಯ ಕಲಾವಿದರು ಅಭಿನಯಿಸಿದ್ದಾರೆ. ಸಹ ನಿರ್ಮಾಪಕರಾದ ಕರ್ನಲ್ ರಾಜೇಂದ್ರ ಕೂಡ ನಟಿಸಿದ್ದಾರೆ ಎಂದರು.

ನಾಯಕ ರಾಜೀವ್ ರೆಡ್ಡಿ ಮಾತನಾಡುತ್ತಾ, ಇದೊಂದು ರಿವೆಂಜ್ ಕಥೆಯಾಗಿದ್ದು, ಈ ಚಿತ್ರದಲ್ಲಿ ನನ್ನ ಪಾತ್ರಕ್ಕೆ ಐದು ಗೆಟಪ್ ಇದೆ, ನಿಮಗೆ ತೊಂದರೆಯಾದಾಗ ನಿಮ್ಮನ್ನು ನೀವು ಹೇಗೆ ಕಾಪಾಡಿಕೊಳ್ಳುತ್ತೀರಿ ಎನ್ನುವುದೇ ಚಿತ್ರದ ಕಾನ್ಸೆಪ್ಟ್, ರವಿಶಂಕರ್, ಸುಮನ್‌ರಂಥ ಹಿರಿಯರೊಂದಿಗೆ ಅಭಿನಯಿಸಿ ಸಾಕಷ್ಟು ಕಲಿತೆ ಎಂದು ಹೇಳಿದರು.

ನಿರ್ಮಾಪಕ ಕರ್ನಲ್ ರಾಜೇಂದ್ರ ಮಾತನಾಡಿ, ಈ ಚಿತ್ರ ಯಶಸ್ವಿಯಾದರೆ ಇನ್ನಷ್ಟು ಸಿನಿಮಾ ಮಾಡುತ್ತೇವೆ. 200ಕ್ಕೂ ಹೆಚ್ಚು ಚಿತ್ರಮಂದಿರಗಳಲ್ಲಿ ಸಿನಿಮಾ ರಿಲೀಸಾಗುತ್ತಿದೆ ಎಂದರೆ, ಉಳಿದ ನಿರ್ಮಾಪಕರಾದ ಮಂಜುನಾಥ್, ಕೃಷ್ಣಮೂರ್ತಿ ಮಾತನಾಡಿ, ಚಿತ್ರತಂಡದ ಸಹಕಾರದಿಂದ ಸಿನಿಮಾ ಚೆನ್ನಾಗಿ ಮೂಡಿಬಂದಿದೆ ಎಂದರು. ಸಂಗೀತ ನಿರ್ದೇಶಕ ಎಸ್.ನಾಗು ಮಾತನಾಡಿ, ಚಿತ್ರದಲ್ಲಿ ಮೂರು ಹಾಡುಗಳಿದ್ದು, ಬೇರೆ ಬೇರೆ ಜಾನರ್‌ನಲ್ಲಿವೆ. ವಿಜಯ್ ಪ್ರಕಾಶ್, ಅನುರಾಧಾಭಟ್, ಸುಪ್ರಿಯಾ ಲೋಹಿತ್, ಶಮಿತಾ ಮಲ್ನಾಡ್ ದನಿಯಾಗಿದ್ದಾರೆ ಎಂದರು. ಛಾಯಾಗ್ರಾಹಕ ಪ್ರದೀಪ್ ಕೂಡ ಪತ್ರಿಕಾಗೋಷ್ಠಿಯಲ್ಲಿದ್ದರು.

ಹೆಣ್ಣುಮಕ್ಕಳನ್ನು ಉಳಿಸಿ ಎಂದು 25 ದಿನ ಪೂರೈಸಿದ 'ತಾಯವ್ವ'



ಕಳೆದ ತಿಂಗಳು ತೆರೆಕಂಡ, ಗ್ರಾಮೀಣ ಭಾಗದ ಸೂಲಗಿತ್ತಿಯೊಬ್ಬಳ ಕಥೆಯನ್ನು ಒಳಗೊಂಡ 'ತಾಯವ್ವ' ಚಿತ್ರ ಇದೀಗ ಯಶಸ್ವಿಯಾಗಿ 25 ದಿನಗಳ ಪ್ರದರ್ಶನ ಪೂರೈಸಿ ಮುನ್ನಡೆದಿದೆ. ಅಮರ ಫಿಲಂಸ್ ಅಡಿಯಲ್ಲಿ ಗೀತಪ್ರಿಯಾ ಅವರು ಈ ಚಿತ್ರವನ್ನು ನಿರ್ಮಿಸಿದ್ದರು, ಅಲ್ಲದೆ ತಾಯವ್ವಾಗಿ ಪ್ರಬುದ್ಧ ಅಭಿನಯ ನೀಡುವ ಮೂಲಕ ಎಲ್ಲರ ಗಮನ ಸೆಳೆದಿದ್ದರು. ಮಹಿಳಾ ಪ್ರಧಾನ ಕಥಾಹಂದರ ಒಳಗೊಂಡ ಈ ಚಿತ್ರದಲ್ಲಿ ಗ್ರಾಮೀಣ ಭಾಗದ ಹಿರಿಜೀವ, ಸೂಲಗಿತ್ತಿ ತಾಯವ್ವ ಎಂಬ ಮಹಿಳೆಯ ಸತ್ವಪೂರ್ಣ ಬದುಕನ್ನು ಅನಾವರಣ ಮಾಡಲಾಗಿತ್ತು. ಈಗಾಗಲೇ ಚಿತ್ರಕ್ಕೆ ಎಲ್ಲ ಕಡೆಯಿಂದ ಪ್ರೇಕ್ಷಕರು ಮತ್ತು ವಿಮರ್ಶಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದ್ದು, ಈ ಖುಷಿಯನ್ನು ಹಂಚಿಕೊಳ್ಳುವ ಸಲುವಾಗಿ ಚಿತ್ರತಂಡ, ಯಶಸ್ವಿ ಪತ್ರಿಕಾಗೋಷ್ಠಿಯನ್ನು ಆಯೋಜಿಸಿತ್ತು.

ಈ ವೇದಿಕೆಯಲ್ಲಿ ಹಿರಿಯ ನಟ ಸುರೇಶ್ ಹೆಬ್ಳೀಕರ್, ಸಂಗೀತ ನಿರ್ದೇಶಕ ಕೆ.ಕಲ್ಯಾಣ್, ಲಹರಿ ವೇಲು, ಹಿರಿಯ ನಿರ್ದೇಶಕ ಯೋಗರಾಜ್ ಭಟ್, ಹರಿಪ್ರಸಾದ್ ಜಯಣ್ಣ, ನಿರ್ಮಾಪಕ ಸಿಲ್ಕ್ ಮಂಜು, ಕೃಪಾನಿಧಿ ಸಮೂಹ ಶಿಕ್ಷಣ ಸಂಸ್ಥೆಗಳ ಸುರೇಶ್ ನಾಗಪಾಲ್, ನಿರಂಜನ್‌ಶೆಟ್ಟಿ, ಸಿಂಧೂ ಲೋಕನಾಥ್ ಸೇರಿದಂತೆ ಅನೇಕ ಗಣ್ಯರು ಹಾಜರಿದ್ದರು.

ಇದೇ ವೇಳೆ ಮಾತನಾಡಿದ ಚಿತ್ರದ ನಿರ್ಮಾಪಕಿ ಗೀತಪ್ರಿಯಾ, ಗ್ರಾಮೀಣ ಸೂಲಗಿತ್ತಿಯೊಬ್ಬಳ ಬದುಕಿನ ಅನಾವರಣವನ್ನು ತಾಯವ್ವ ಸಿನಿಮಾದ ಮೂಲಕ ನಾವು ಮಾಡಿದ್ದೇವೆ. ಸೂಲಗಿತ್ತಿ ನರಸಮ್ಮ ಅವರಂಥ ಗ್ರಾಮೀಣ ಭಾಗದ ಅನೇಕ ಸೂಲಗಿತ್ತಿ ಮಹಿಳೆಯರ ಜೀವನವನ್ನು ಪ್ರೇರಣೆಯಾಗಿ ತೆಗೆದುಕೊಂಡು ಈ ಚಿತ್ರವನ್ನು ನಿರ್ಮಿಸಿದ್ದೆವು. ಸಿನಿಮಾ ಬಿಡುಗಡೆಯಾದ ನಂತರ ಪ್ರೇಕ್ಷಕರು ಮತ್ತು ಮಾಧ್ಯಮಗಳಿಂದ ಚಿತ್ರಕ್ಕೆ ಉತ್ತಮ ಪ್ರತಿಕ್ರಿಯೆ ಸಿಗುತ್ತಿದೆ. ತಾಯವ್ವ ಸಿನಿಮಾ ನೋಡಿದ ಪ್ರತಿಯೊಬ್ಬರೂ ಚಿತ್ರದ ಕಂಟೆಂಟ್ ಬಗ್ಗೆ ಮೆಚ್ಚುಗೆಯ ಮಾತುಗಳನ್ನಾಡುತ್ತಿದ್ದಾರೆ. ಹೆಣ್ಣುಮಕ್ಕಳನ್ನು ಉಳಿಸಿ, ಹೆಣ್ಣುಮಕ್ಕಳನ್ನು ಬೆಳೆಸಿ ಎಂಬ ಸಾಮಾಜಮುಖಿ ಸಂದೇಶ ಸಿನಿಮಾ ನೋಡಿದ ಪ್ರತಿಯೊಬ್ಬರ ಮನ ಮುಟ್ಟಿದೆ ಎಂದರು.

ನಮ್ಮ ಮೊದಲ ಸಿನಿಮಾಕ್ಕೇ ಇಷ್ಟೊಂದು ದೊಡ್ಡಮಟ್ಟದ ಪ್ರತಿಕ್ರಿಯೆ ಸಿಗುತ್ತದೆ ಎಂದು ನಾವು ನಿರೀಕ್ಷಿಸಿರಲಿಲ್ಲ. ತಾಯವ್ವ ಸಿನಿಮಾನ ಪ್ರೇಕ್ಷಕರು ಮೆಚ್ಚಿ ಮಾತನಾಡುತ್ತಿರುವುದಕ್ಕೆ ತುಂಬಾ ಖುಷಿಯಾಗುತ್ತಿದೆ. ಮುಂದೆಯೂ ಇಂಥದ್ದೇ ಸಾಮಾಜಿಕ ಕಥಾಹಂದರದ ಕಥೆಗಳನ್ನು ಇಟ್ಟುಕೊಂಡು ಸಿನಿಮಾ ಮಾಡಿ ತೆರೆಮೇಲೆ ತರಲು ನಮಗೆ ಪ್ರೋತ್ಸಾಹಿಸಿದಂತಾಗಿದೆ' ಎಂದೂ ಗೀತಪ್ರಿಯಾ ಹೇಳಿದರು.



'ತಾಯವ್ವ' ತಂಡ

ಸಿನಿಪದಬಂಧ-583

ಉಮ್ಮತ್ತೂರು ಇಂದುಶೇಖರ್

ಮೊ.9880820462



1				2					3	4
								5		
		6				7		8		
9			10		11					
									12	
	13					14				
15	16						17			
						18				
19				20						

ಎಡದಿಂದ ಬಲಕ್ಕೆ

1. ಅಂಬರೀಷ್ – ಗೀತಾ ಅಭಿನಯಕ್ಕೆ ಈರಂಕಿ ಶರ್ಮಾ ನಿರ್ದೇಶಕ 7
3. ಶಿವಣ್ಣ ಲಾಂಗು ಹಿಡಿದ ಸಾಧು 2
6. ನವರಸ ನಾಯಕನ ರಾಜಕೀಯ ವಿಡಂಬನಾತ್ಮಕ ಚಿತ್ರವಿದು 5
8. ಶಿವಣ್ಣ "ಗಂಡು ಕುರಿ" 3
9. "ಹುಡುಗಿ ಕಣ್ಣು ಲೋಡೆಡ್ ಗನ್ನು, ಹಾರ್ಟಿಗೆ ಬುಲೆಟ್ಟು... ", ಗೀತೆಯ ಚಿತ್ರ 4
11. ಗಣೇಶ್, ದಿಗಂತ್, ರಾಜೇಶ್ ಕೃಷ್ಣನ್ ಅಭಿನಯದ ಚಿತ್ರ 4
13. ಮಹೇಶ್ವರನೊಂದಿಗೆ ಬಂದವರು 4
14. ವಿಷ್ಣುವರ್ಧನ್ "ಹೀರೋ" 5
15. ಸಾಂಸ್ಕೃತಿಕ ನಗರಿಯ ಪುಷ್ಪ ತೆರೆಯ ಮೇಲೂ ಘಮ್ ಎಂದಿದೆ 6
17. ನಟಿಸಲು ಬಂದ ನಟಿ 4
19. ಸನಾದಿ ನುಡಿಸಿದವನು 3
20. ಅನಂತ್‌ನಾಗ್ ಅಭಿನಯದಲ್ಲಿ ಸಮುದ್ರ ನಿಶ್ಚಲ ಗೊಂಡಿದೆ 7

ಮೇಲಿನಿಂದ ಕೆಳಕ್ಕೆ

1. ಮದನ್ ಮಲ್ಲು ಅತೀ ಬುದ್ಧಿವಂತ 5
2. ಆರಾಧಿಸುವೆ ಎಂದಾಗ ಬಂದ ಕೊಬ್ಬಿದ ಹೆಣ್ಣು 4
4. ಉಡುಗೊರೆ ನೀಡಿದ ತಾಯಿಯ ಗೃಹ 5
5. ರಸಿಕ ಚಿತ್ರದ ಹಾಡಿನಲ್ಲಿ ಮಳೆಯು ಹೀಗೆ ಹಿಡ್ಕೊಂತು 4
7. ರಾಜ್‌ಕುಮಾರ್ ಅಭಿನಯದ ಹೆತ್ತವಳ ಕೂಗು 6
10. ಪುನೀತ್ ರಾಜ್‌ಕುಮಾರ್ ಯುದ್ಧ ಶೂರ 5
12. ದುನಿಯಾ ವಿಜಯ್ ಕಲ್ಯಾಣಿರಾಜ್ ಅವರ ಪುತ್ರ 6
16. ವಿಷ್ಣುವರ್ಧನ್ – ಶೃತಿ ಅಭಿನಯದ ಚಿತ್ರ 3
18. ದರ್ಶನ್ "ಸೇವಕ" 2

ಹೆಸರು ______
ವಿಳಾಸ ______
______
ದೂರವಾಣಿ ಸಂಖ್ಯೆ ______

ಸಿನಿ ಪದಬಂಧ 582ರ ಉತ್ತರ

ಆ	ರು	ಮೂ	ರು	ಒಂ	ಭ	ತ್ತು			ಕಾ	ಸು
ಷಾ				ದೇ				ಓ		ಖಿ
ಢ		ಮಿ	ನು	ಗು	ತಾ	ರೆ		ಪ್ರೇ	ಮಿ	ಸಂ
ಭೂ				ರಿ		ಡಿ		ಮ		ಸಾ
ತಿ	ಲೋ	ತ್ತ	ಮೆ		ಓ	ಮೇ	ಘ	ವೇ		ರ
			ರ			ಡ್			ಮಾ	
	ಕ	ರಾ	ವ	ಳಿ		ಗಂ	ಧ	ರ್ವ	ಗಿ	ರಿ
			ಣಿ			ಡ			ಯ	
ಒ	ಲ	ವು	ಗೆ	ಲು	ವು		ಗಿ	ರಿ	ಕ	ನ್ಯೆ
	ಗೋ					ನ್ಯಾ			ನ	
ಅ	ರಿ	ವು		ಸ	ಮ	ಯ	ಕ್ಕೊಂ	ದು	ಸು	ಳ್ಳು

ವಿಜೇತರು: ಎ.ರಾಮಪ್ರಸಾದ್ (ಎನ್‌ಜಿಒ), ದಶಮಿ ನಿಲಯ, ಚಾಮಲಾಪುರ ಹುಂಡಿ, ನಂಜನಗೂಡು

ವಿಳಾಸ: 'ಸಿನಿಬಂಧ' ವಿಭಾಗ, 'ಮೈಸೂರು ಮಿತ್ರ' ದಿನಪತ್ರಿಕೆ, ಬನ್ನಿಮಂಟಪ, ಮೈಸೂರು-570 015

ಗೆಲುವಿನ ಹಾದಿಯಲ್ಲಿ ರೈತರ ಪರ ಕಾಳಜಿ ಇರುವ ಚಿತ್ರ 'ಅಥಣಿ'



ಕಳೆದ ವಾರ ರಾಜ್ಯಾದ್ಯಂತ ತೆರೆಕಂಡ ಅಥಣಿ ಚಿತ್ರ ಯಶಸ್ವೀ ಪ್ರದರ್ಶನ ಕಾಣುತ್ತಿದೆ, ರೈತರ ಸಮಸ್ಯೆ ಬಗ್ಗೆ ಮಾಡಿರುವ ಈ ಚಿತ್ರ ನೋಡಿದವರೆಲ್ಲ ಚಿತ್ರದ ಕಂಟೆಂಟ್ ಹಾಗೂ ಹಾಡುಗಳನ್ನು ಮೆಚ್ಚಿಕೊಂಡಿದ್ದಾರೆ. ಇದೀಗ ಚಿತ್ರ ಯಶಸ್ವಿಯಾಗಿ ಎರಡನೇ ವಾರಕ್ಕೆ ಕಾಲಿಟ್ಟಿದೆ. ಚಿತ್ರ ನೋಡಿದ ಯಾರೊಬ್ಬರೂ ಚೆನ್ನಾಗಿಲ್ಲ ಎಂದು ಹೇಳುತ್ತಿಲ್ಲ. ಹೊಸ ತಂಡದ ಚಿತ್ರವಾದ್ದರಿಂದ ಕಲೆಕ್ಷನ್ ಕೂಡ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಈ ಗೆಲುವಿನ ಸಂತಸವನ್ನು ಚಿತ್ರ ತಂಡ ಮಾಧ್ಯಮ ಮಿತ್ರರೊಂದಿಗೆ ಹಂಚಿಕೊಂಡಿತು. ಇದೇ ಸಂದರ್ಭದಲ್ಲಿ ಚಿತ್ರದ ನಿರ್ದೇಶಕರು ಹಾಗೂ ನಾಯಕರೂ ಆದ ಸಮರ್ಥ್ ಎಂ. ಹಾಗೂ ನಿರ್ಮಾಪಕರಾದ ವಾಸುದೇವ ದೊಡ್ಡ ಹೆಜ್ಜಾಜಿ ಅವರ ಹುಟ್ಟು ಹಬ್ಬ ಕೂಡ ಬಂದಿದ್ದು, ಚಿತ್ರತಂಡಕ್ಕೆ ಡಬಲ್ ಖುಷಿ ನೀಡಿದೆ. ಈ ಚಿತ್ರದಲ್ಲಿ ಸಮಾಜಕ್ಕೆ ನಮ್ಮ ರೈತರ ಬಗ್ಗೆ ಒಂದೊಳ್ಳೆ ಸಂದೇಶ ಹೇಳಲಾಗಿದ್ದು ಪ್ರೇಕ್ಷಕರನ್ನು ಸೆಳೆಯುತ್ತಿದೆ.

ರೈತರಪರ ಕಾಳಜಿ ಇರುವ ನಮ್ಮ ಚಿತ್ರವನ್ನು ನೋಡಿ ಕರ್ನಾಟಕದ ಜನತೆ ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ. ಇದು ನಮ್ಮ ಶ್ರಮಕ್ಕೆ ಸಿಕ್ಕ ಪ್ರತಿಫಲ ಎಂದೇ ನಾವೆಲ್ಲ ಭಾವಿಸುತ್ತೇವೆ, ನಿರ್ಮಾಪಕರಾದ ವಾಸುದೇವ್ ಆರ್. ದೊಡ್ಡಹೆಜ್ಜಾಜಿ ಅವರು ತುಂಬಾ ಖುಷಿಯಲ್ಲಿದ್ದಾರೆ. ಮತ್ತು ಇದೇ ಚಿತ್ರತಂಡವನ್ನು ಇಟ್ಟುಕೊಂಡು ಸದ್ಯದಲ್ಲೇ ಮತ್ತೊಂದು ಚಿತ್ರವನ್ನು ನಿರ್ಮಾಣ ಮಾಡುವುದಾಗಿ ಭರವಸೆ ನೀಡಿದ್ದಾರೆ. ಸದ್ಯದಲ್ಲೇ ನಮ್ಮ ಮುಂದಿನ ಚಿತ್ರದ ಮುಹೂರ್ತ ನಡೆಯೋ ದಿನಾಂಕವನ್ನು ಪ್ರಕಟಿಸಲಿದ್ದೇವೆ. ಅಥಣಿ ಚಿತ್ರದಲ್ಲಿ ಹರ್ಷ ಕೋಗೋಡು ಅವರ ಉತ್ತಮ ಸಂಗೀತ ನೋಡುಗರನ್ನು ಸೆಳೆಯುತ್ತಿದೆ. ವಿನು ಮನಸು ಅವರ ಹಿನ್ನೆಲೆ ಸಂಗೀತ ಕೂಡ ಚಿತ್ರದ ಓಟಕ್ಕೆ ಸಾಥ್ ನೀಡಿದೆ. ಸಂದೀಪ್ ಹೊನ್ನಳ್ಳಿ ಅವರ ಕ್ಯಾಮೆರಾ ವರ್ಕ್ ಅದಕ್ಕೆ ಪೂರಕವಾಗಿದೆ. ಇನ್ನು ಈ ಚಿತ್ರಕ್ಕೆ ಶ್ರೀರಜನಿ ಎನ್. ಪರಿಸರ ಪ್ರೇಮಿ ಅವರು ಕಾರ್ಯಕಾರಿ ನಿರ್ಮಾಪಕರಾಗಿ ಎಲ್ಲ ಜವಾಬ್ದಾರಿ ವಹಿಸಿಕೊಂಡು ಚಿತ್ರದ ಗೆಲುವಿಗೆ ಸಹಕಾರಿಯಾಗಿದ್ದಾರೆ ಎಂದ ನಿರ್ದೇಶಕ ಕಮ್ ನಾಯಕನಟ ಸಮರ್ಥ ಅವರು ಚಿತ್ರತಂಡದ ಎಲ್ಲರನ್ನೂ ಮೆಚ್ಚಿ ಮಾತನಾಡಿದರು. ಇನ್ನು ಚಿತ್ರದ ನಾಯಕಿಯಾಗಿ ಹುಬ್ಬಳ್ಳಿ ಮೂಲದ ಮಧು ಅವರು ಅಭಿನಯಿಸಿದ್ದಾರೆ. ಉಳಿದಂತೆ ಹಿರಿಯ ಕಲಾವಿದರಾದ ಶೋಭರಾಜ್, ಭವ್ಯ, ನಾಗೇಂದ್ರ ಅರಸ್, ಹನುಮಂತೇಗೌಡ, ಶೋಭಾ ತುಮಕೂರು, ರಾಜು ಕೆಸರುಮಡು, ಮೂರ್ತಿ, ವಿಷ್ಣುಪ್ರಿಯ ಅಲ್ಲದೆ ಇತ್ತೀಚೆಗಷ್ಟೇ ಅಕಾಲಿಕ ಮರಣಕ್ಕೆ ತುತ್ತಾದ ರಾಕೇಶ್ ಪೂಜಾರಿ ಕೂಡ ಈ ಚಿತ್ರದಲ್ಲಿ ಅಭಿನಯಿಸಿದ್ದಾರೆ.

ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ ರಾಜ್ಯ ಸರ್ಕಾರ ದಿಟ್ಟ ಕ್ರಮ

6 ಕೋಟಿ ವೆಚ್ಚದ ರಸ್ತೆ, ಚರಂಡಿ ಕಾಮಗಾರಿಗೆ ಸಚಿವ ಹೆಚ್‌ಸಿಎಂ ಚಾಲನೆ

ತಿ.ನರಸೀಪುರ, ಜು.3– ಗ್ರಾಮೀಣ ಪ್ರದೇಶದ ಅಭಿವೃದ್ಧಿಗೆ ಸರ್ಕಾರ ದಿಟ್ಟ ಕ್ರಮ ಕೈಗೊಂಡಿದ್ದು, ರಸ್ತೆ ಸುಧಾರಣೆಗೆ ಪ್ರಥಮ ಆದ್ಯತೆ ನೀಡಿ, ಅಭಿವೃದ್ಧಿಗೆ ಒತ್ತು ನೀಡಲಾಗುತ್ತದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ತಿಳಿಸಿದರು.

ತಾಲೂಕು ಕ್ಷೇತ್ರ ವ್ಯಾಪ್ತಿಯ ಕೇತಹಳ್ಳಿ, ಕರೋಹಟ್ಟಿ, ಹೊಸೂರುಂಡಿ, ವಾಟಾಳು, ಮೂಗೂರು ಗ್ರಾಮಗಳಲ್ಲಿ ಟಿಎಸ್‌ಪಿ ಅನುದಾನಡಡಿ ಅಂದಾಜು 6 ಕೋಟಿ ವೆಚ್ಚದಲ್ಲಿ ರಸ್ತೆ ನಿರ್ಮಾಣ ಹಾಗೂ ಚರಂಡಿ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಗ್ರಾಮೀಣ ಪ್ರದೇಶಗಳು ಅಭಿವೃದ್ಧಿಯಾಗಬೇಕಾದರೆ ಉತ್ತಮ ರಸ್ತೆಗಳು ಅವಶ್ಯಕ. ಆ ನಿಟ್ಟಿನಲ್ಲಿ ಸರ್ಕಾರ ಹಲವು ಯೋಜನೆಗಳ ಮೂಲಕ ಅನುದಾನ ನೀಡುತ್ತಿದೆ. ಇತ್ತೀಚಿನ ದಿನಗಳಲ್ಲಿ ಗ್ರಾಮೀಣ ಭಾಗದ ರಸ್ತೆಗಳು ಅಭಿವೃದ್ಧಿ ಹೊಂದುತ್ತಿವೆ. ಇದರಿಂದ ರೈತಾಪಿ ವರ್ಗ, ಶ್ರೀಸಾಮಾನ್ಯರಿಗೆ ಹೊಲಗದ್ದೆಗಳಿಗೆ ತೆರಳಲು, ಬೆಳೆದ ಫಸಲನ್ನು ಮಾರಾಟಕ್ಕೆ ತೆಗೆದುಕೊಂಡು ಹೋಗಲು ಬಹಳಷ್ಟು ಅನುಕೂಲವಾಗಿದೆ ಎಂದರು.

ಕ್ಷೇತ್ರದ ಗ್ರಾಮೀಣ ಭಾಗದಲ್ಲಿ ದುಸ್ಥಿತಿಯಲ್ಲಿರುವ ರಸ್ತೆಗಳನ್ನು ಕ್ರಿಯಾಯೋಜನೆ ತಯಾರಿಸಿ ಹಂತ ಹಂತವಾಗಿ ಅಭಿವೃದ್ಧಿಪಡಿಸಲಾಗುವುದು. ಗ್ರಾಮಗಳ ನಡುವೆ ಸಂಪರ್ಕ ಕಲ್ಪಿಸಲು ರಸ್ತೆಗಳ ಅಭಿವೃದ್ಧಿ ಹಾಗೂ ದುರಸ್ಥಿ ಕಾರ್ಯ ನಡೆದಿದ್ದು, ಅಗತ್ಯವಿರುವ ರಸ್ತೆಗಳ ಕಾಮಗಾರಿಗೆ ಮುಂಬರುವ ದಿನಗಳಲ್ಲಿ ಸರ್ಕಾರದಿಂದ ಅನುದಾನ ತರುವುದಾಗಿ ಭರವಸೆ ನೀಡಿದರು.

ಗ್ರಾಮೀಣ ರೈತರ ಹಿತ ಕಾಯುವ ಮೂಲಕ ಅವರಿಗೆ ಎಲ್ಲಾ ರೀತಿಯ ಅನುಕೂಲ ಕಲ್ಪಿಸಲು ತಾವು ಸಿದ್ಧರಾಗಿದ್ದು, ಕ್ಷೇತ್ರದ ಜನತೆಯ ಕಲ್ಯಾಣ ತಮಗೆ ಮುಖ್ಯವಾಗಿದೆ ಎಂದರು.

ಈ ವೇಳೆ ಸಚಿವರು ತಾಲೂಕಿನ ಕರೋಹಟ್ಟಿ, ಕೇತಹಳ್ಳಿ, ಯರಗನಹಳ್ಳಿ, ವಾಟಾಳು ಗ್ರಾಮಗಳಲ್ಲಿ ಎಸ್‌ಸಿಪಿ ಅನುದಾನದಡಿ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು. ವಾಟಾಳುಪುರದಲ್ಲಿ 1.80 ಕೋಟಿ ರೂ.



ಕರೋಹಟ್ಟಿಯಲ್ಲಿ ರಸ್ತೆ, ಚರಂಡಿ ಅಭಿವೃದ್ಧಿ ಕಾಮಗಾರಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಭೂಮಿ ಪೂಜೆ ನೆರವೇರಿಸಿದರು.

ವೆಚ್ಚದಲ್ಲಿ ನಿರ್ಮಿಸಿರುವ ನೂತನ ಆಸ್ಪತ್ರೆ ಲೋಕಾರ್ಪಣೆ, ಕ್ಷೇತ್ರ ವ್ಯಾಪ್ತಿಯ ಹೊರಳಹಳ್ಳಿ, ಕೊಡಗಹಳ್ಳಿ ಹಾಗೂ ಮೂಗೂರು ಗ್ರಾಮಗಳಲ್ಲಿ ತಲಾ 50 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಲಾಗುವ ಪಶು ಆಸ್ಪತ್ರೆಗೆ ಭೂಮಿ ಪೂಜೆ, ಮೂಗೂರಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಭವನ ಹಾಗೂ ಶ್ರೀರಾಂಪುರದಲ್ಲಿ

> ಗ್ರಾಮೀಣ ಭಾಗದ ಜನರಿಗೆ ಉತ್ತಮ ರಸ್ತೆ ಕುಡಿಯುವ ನೀರು, ಸಾರಿಗೆ, ವಿದ್ಯುತ್, ಶಿಕ್ಷಣ ಸೇರಿದಂತೆ ಎಲ್ಲಾ ಮೂಲ ಸೌಕರ್ಯ ಒದಗಿಸಲು ನಿರಂತರವಾಗಿ ಶ್ರಮಿಸಲಾಗುತ್ತಿದೆ. ಈಗಾಗಲೇ ಕ್ಷೇತ್ರದಲ್ಲಿ ನೂರಾರು ಕೋಟಿ ಅನುದಾನದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಮಾಡಲಾಗಿದ್ದು, ಮುಂಬರುವ ದಿನಗಳಲ್ಲಿ ಮತ್ತಷ್ಟು ಅನುದಾನದೊಂದಿಗೆ ಉಳಿದಿರುವ ಸಣ್ಣ ಪುಟ್ಟ ಕಾಮಗಾರಿಗಳನ್ನು ಪೂರ್ಣಗೊಳಿಸಲು ಆದ್ಯತೆ ನೀಡಲಾಗುತ್ತದೆ. – ಡಾ.ಹೆಚ್.ಸಿ.ಮಹದೇವಪ್ಪ, ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ.

ಎಸ್‌ಸಿಪಿ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗೆ ಗುದ್ದಲಿ ಪೂಜೆ, ಮೂಗೂರಲ್ಲಿ 1.70 ಕೋಟಿ ವೆಚ್ಚದ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜು ಕಟ್ಟಡ ನಿರ್ಮಾಣ ಕಾಮಗಾರಿಗೆ ಗುದ್ದಲಿ ಪೂಜೆ, ದೇವಸ್ಥಾನ ಜೀರ್ಣೋದ್ಧಾರ ಕಾಮಗಾರಿ ಹಾಗೂ ಬೆಸ್ಕಾಂ ವತಿಯಿಂದ ಮಾದರಿ ಗ್ರಾಮದ ಕಾಮಗಾರಿಗೆ ಸಚಿವರು ಭೂಮಿ ಪೂಜೆ ಸಲ್ಲಿಸಿದರು.

ಮಾಜಿ ಶಾಸಕಿ ಸುನೀತಾ ವೀರಪ್ಪಗೌಡ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಡಿ.ಬಸವರಾಜು, ಕೆಡಿಪಿ ಸದಸ್ಯೆ ವೀಣಾ ಶಿವಕುಮಾರ್, ಪ್ರೊ.ಬಿ.ಕೆ. ಜ್ಞಾನಪ್ರಕಾಶ್, ತಾಪಂ ಮಾಜಿ ಅಧ್ಯಕ್ಷ ಉಮೇಶ್, ಡೈರಿ ಅಧ್ಯಕ್ಷ ಕುಮಾರ್, ಕರೋಹಟ್ಟಿ ಗ್ರಾಪಂ ಅಧ್ಯಕ್ಷೆ ಪುಟ್ಟಬಸಮ್ಮ, ಉಪಾಧ್ಯಕ್ಷ ರೇವಣ್ಣ, ಮಾಜಿ ಅಧ್ಯಕ್ಷ ರೇವಣ್ಣ, ಸದಸ್ಯ ಸುರೇಶ್, ಕುಂಬಾರ ಸಂಘದ ಸಂಸ್ಥಾಪಕ ಅಧ್ಯಕ್ಷ ರಾಜಣ್ಣ, ಕಾಂಗ್ರೆಸ್ ಹಿಂದುಳಿದ ವರ್ಗಗಳ ವಿಭಾಗದ ರಾಜ್ಯ ಕಾರ್ಯದರ್ಶಿ ಕೆ.ಆರ್.ಶೇಷಾದ್ರಿ ಯಾದವ್, ಹೆಚ್.ಸಿ.ಮಹದೇವಪ್ಪ ಅಭಿಮಾನಿ ಬಳಗದ ಜಿಲ್ಲಾಧ್ಯಕ್ಷ ಕಗ್ಗಲಿಪುರ ಕೆ.ಎಂ.ಮಧುಕುಮಾರ್, ಪ್ರಥಮ ದರ್ಜೆ ಗುತ್ತಿಗೆದಾರ ದಸ್ತಗೀರ್, ಯಾಚೇನಹಳ್ಳಿ ಅಶೋಕ್, ತಾಪಂ ಮಾಜಿ ಅಧ್ಯಕ್ಷ ಎಂ. ಮಲ್ಲಿಕಾರ್ಜುನಸ್ವಾಮಿ, ಸದಸ್ಯ ನರಸಿಂಹ ಮಾದನಾಯಕ, ಮಲ್ಲಣ್ಣ, ಆಪ್ತ ಸಹಾಯಕ ಬಸವರಾಜು, ಮರಿಗೌಡ, ಚನ್ನಕೇಶವ, ಶಿವಣ್ಣ, ಸಿದ್ದಶೆಟ್ಟಿ, ಡಿ.ಆರ್.ಮೂರ್ತಿ, ಶಾಂತರಾಜು ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಹಾಜರಿದ್ದರು.

ಶಾಸಕ ಪುಟ್ಟರಂಗಶೆಟ್ಟಿಗೆ ಸಚಿವ ಸ್ಥಾನ ನೀಡಿ

ಉಪ್ಪಾರ ಸಮುದಾಯದ ಜಿಲ್ಲಾಧ್ಯಕ್ಷ ನಾಗರಾಜು ಒತ್ತಾಯ

ನಂಜನಗೂಡು, ಜು.3– ಉಪ್ಪಾರ ಸಮುದಾಯದ ಏಕೈಕ ಶಾಸಕ ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ನೀಡುವಂತೆ ಕಾಂಗ್ರೆಸ್ ವರಿಷ್ಠರನ್ನು ಉಪ್ಪಾರ ಸಮುದಾಯದ ಜಿಲ್ಲಾಧ್ಯಕ್ಷ ಕರಳಾಪುರ ನಾಗರಾಜು ಒತ್ತಾಯಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಸುಮಾರು ಮೂರುವರೆ ಲಕ್ಷ ಉಪ್ಪಾರ ಸಮುದಾಯದವರಿದ್ದು, ವಿಧಾನಸಭೆ ಮತ್ತು ಲೋಕಸಭೆ ಸೇರಿದಂತೆ ಹಲವು ಚುನಾವಣೆಗಳಲ್ಲಿ ನಮ್ಮ ಸಮುದಾಯ ಮಹತ್ವದ ಪಾತ್ರ ವಹಿಸಲಿದೆ. ಅಲ್ಲದೇ ಶೇ.80ರಷ್ಟು ಉಪ್ಪಾರ ಸಮುದಾಯದವರು ಕಾಂಗ್ರೆಸ್ ಪಕ್ಷ ಬೆಂಬಲಿಸುತ್ತಾ ಬಂದಿದ್ದಾರೆ. ಹಿಂದುಳಿದ ವರ್ಗದ ನಾಯಕರೂ ಆದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ನಮ್ಮ ಜನಾಂಗಕ್ಕೆ ರಾಜಕೀಯ ಸ್ಥಾನಮಾನ ನೀಡಲು ನಮ್ಮ ಸಮುದಾಯದ ಏಕೈಕ ಶಾಸಕ ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ನೀಡಬೇಕು. ಇಲ್ಲವಾದಲ್ಲಿ ಮುಂದಿನ ಚುನಾವಣೆಗಳಲ್ಲಿ ಚಿತ್ರಣವೇ ಬೇರೆಯಾಗಲಿದೆ ಎಂದು ಎಚ್ಚರಿಸಿದರು.



ಸುದ್ದಿಗೋಷ್ಠಿಯಲ್ಲಿ ಉಪ್ಪಾರ ಸಮುದಾಯದ ಜಿಲ್ಲಾಧ್ಯಕ್ಷ ನಾಗರಾಜು ಮಾತನಾಡಿದರು.

ಉಪ್ಪಾರ ಮುಖಂಡ ಕನಕನಗರ ಮಹದೇವ್ರ ಮಾತನಾಡಿ, ಉಪ್ಪಾರ ಸಮುದಾಯ ರಾಜಕೀಯ ಮತ್ತು ಶೈಕ್ಷಣಿಕವಾಗಿ ಹಿಂದುಳಿದ ಸಮುದಾಯವಾಗಿದೆ. ಶಾಸಕ ಪುಟ್ಟರಂಗಶೆಟ್ಟಿ ಅವರು ರಾಜ್ಯದಲ್ಲಿ ಉಪ್ಪಾರ ಸಮುದಾಯವನ್ನು ಸಂಘಟನೆಗೊಳಿಸಿ, ಒಟ್ಟಾಗಿ ತೆಗೆದುಕೊಂಡು ಹೋಗುವ ಕೆಲಸ ಮಾಡುತ್ತಿದ್ದಾರೆ, ನಮ್ಮ ಜನಾಂಗಕ್ಕೆ ಸಿಎಂ ಸಿದ್ದರಾಮಯ್ಯರವರು ರಾಜಕೀಯ ಶಕ್ತಿ ನೀಡುವ ಸಲುವಾಗಿ ಶಾಸಕ ಪುಟ್ಟರಂಗಶೆಟ್ಟಿಗೆ ಸಚಿವ ಸ್ಥಾನ ನೀಡಬೇಕು ಎಂದರು.

ತಾಪಂ ಮಾಜಿ ಸದಸ್ಯ ಹೆಚ್.ಎಸ್.ಮೂಗಶೆಟ್ಟಿ ಮಾತನಾಡಿ, ಪುಟ್ಟರಂಗಶೆಟ್ಟಿಯವರು ಜನಾಂಗದ ನಾಡಿಮಿಡಿತ ಅರಿತು ಸೇವೆ ಸಲ್ಲಿಸುವ ಮೂಲಕ ಸಮುದಾಯ ಸಂಘಟಿಸುತ್ತಿದ್ದಾರೆ. ಅವರ ಮಾತಿಗೆ ಸಮುದಾಯದಲ್ಲಿ ಹೆಚ್ಚಿನ ಬೆಲೆ ಇದೆ. ಅಲ್ಲದೇ ಅವರು ಸತತ 4 ಬಾರಿ ಶಾಸಕರಾಗಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುವಲ್ಲಿ ಅವರ ಪಾತ್ರವೂ ಹೆಚ್ಚಾಗಿದೆ. ಕೆಲಸ ಮಾಡಿದವರಿಗೆ ಫಲ ಸಿಗಬೇಕು. ಈ ಹಿನ್ನೆಲೆಯಲ್ಲಿ ಅವರನ್ನು ಸಚಿವರನ್ನಾಗಿ ಮಾಡಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಉಪ್ಪಾರ ಸಮುದಾಯದ ಪ್ರಧಾನ ಕಾರ್ಯದರ್ಶಿ ನಾಗರಾಜು, ಉಪ್ಪಾರ ಸಮುದಾಯದ ಜಿಲ್ಲಾ ಉಪಾಧ್ಯಕ್ಷ ಹೈದಕೇರಿ ನಾಗರಾಜು, ಮುಖಂಡರಾದ ಶ್ರೀನಿವಾಸ್ ಉಪಸ್ಥಿತರಿದ್ದರು.

ಕೆ.ಆರ್.ನಗರ ಪುರಸಭೆಗೆ ಪಲ್ಲವಿ ಉಪಾಧ್ಯಕ್ಷೆ

ಕೆ.ಆರ್.ನಗರ, ಜು.3– ಪಟ್ಟಣದ ಪುರಸಭೆ ಉಪಾಧ್ಯಕ್ಷೆಯಾಗಿ 1ನೇ ವಾರ್ಡ್‌ನ ಕಾಂಗ್ರೆಸ್ ಸದಸ್ಯೆ ಪಲ್ಲವಿ ಆನಂದ್ ಅವಿರೋಧವಾಗಿ ಆಯ್ಕೆಯಾದರು.

ಈ ಹಿಂದಿನ ಉಪಾಧ್ಯಕ್ಷೆ ವಸಂತಮ್ಮ ಕೃಷ್ಣೇಗೌಡರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಪುರಸಭೆಯ ಕೃಷ್ಣರಾಜೇಂದ್ರ ಸಭಾಂಗಣದಲ್ಲಿ ಗುರುವಾರ ನಡೆದ ಚುನಾವಣೆಯಲ್ಲಿ ಪಲ್ಲವಿ ಆನಂದ್ ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ, ತಹಸೀಲ್ದಾರ್ ಜಿ.ಸುರೇಂದ್ರಮೂರ್ತಿ ಪ್ರಕಟಿಸಿದರು.

ಚುನಾವಣಾ ಸಭೆಯಲ್ಲಿ ಅಧ್ಯಕ್ಷ ಶಿವುನಾಯಕ್, ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಅಧ್ಯಕ್ಷ ಮಿಕ್ಸರ್ ಶಂಕರ್, ಸದಸ್ಯರಾದ ಪ್ರಕಾಶ್, ಸೈಯದ್ ಸಿದ್ದಿಕ್, ಕೆ.ಜಿ.ಸುಬ್ರಹ್ಮಣ್ಯ, ಕೆ.ಎಲ್.ಜಗದೀಶ್, ಉಮೇಶ್, ನಟರಾಜು, ಕೆ.ಬಿ.ವೀಣಾ, ಅಶ್ವಿನಿ, ಶಂಕರ್ ಸ್ವಾಮಿ, ತೋಂಟದಾರ್ಯ, ಮುಖ್ಯಾಧಿಕಾರಿ ಬಿ.ವಿ.ವೆಂಕಟೇಶ್ ಇದ್ದರು.



ಪುರಸಭೆ ಉಪಾಧ್ಯಕ್ಷೆ ಪಲ್ಲವಿ ಅವರನ್ನು ಸನ್ಮಾನಿಸಲಾಯಿತು.

ನೂತನ ಉಪಾಧ್ಯಕ್ಷೆ ಪಲ್ಲವಿ ಮಾತನಾಡಿ, ಪಕ್ಷದ ವರಿಷ್ಠರು ನನಗೆ ವಹಿಸಿರುವ ಜವಾಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸಿ ಪಟ್ಟಣದ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದರು.

ಎಂಸಿಡಿಸಿಸಿ ಬ್ಯಾಂಕ್ ನಿರ್ದೇಶಕ ದೊಡ್ಡಸ್ವಾಮೇಗೌಡ ಮಾತನಾಡಿ, ಚುನಾಯಿತ ಜನಪ್ರತಿನಿಧಿಗಳು ಜನರ ಸಂಕಷ್ಟಕ್ಕೆ ಸ್ಪಂದಿಸಬೇಕು. ಮತದಾರರು ನಿಮ್ಮ ಕೈ ಬಿಡುವುದಿಲ್ಲ. ಈ ವಿಚಾರ ಅರಿತು ನೀವು ಜನಸೇವೆ ಮಾಡಿ ಎಂದರು.

ಉಪಾಧ್ಯಕ್ಷರ ಆಯ್ಕೆಯಾಗುತ್ತಿದ್ದಂತೆ ಕಾಂಗ್ರೆಸ್ ಮುಖಂಡರು ಮತ್ತು ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿದರು. ಉಪಾಧ್ಯಕ್ಷೆ ಪಲ್ಲವಿ ಅವರನ್ನು ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಕೆ.ಎಸ್. ಮಹೇಶ್, ನಿರ್ದೇಶಕ ಪ್ರಸನ್ನಕುಮಾರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಎಸ್. ಮಹದೇವ್, ವಕ್ತಾರ ಸೈಯದ್ ಜಾಬೀರ್, ಕಾಂಗ್ರೆಸ್ ಮುಖಂಡರಾದ ಆದರ್ಶ, ಧರ್ಮರಾಜು, ಜಗದೀಶ್, ಆನಂದ, ಕುಮಾರ್, ಮನು, ಕಾರ್ತಿಕ್, ಕಿರಣ್, ಟಿಎಪಿಸಿಎಂಎಸ್ ಮಾಜಿ ಮಾಜಿ ನಿರ್ದೇಶಕ ಡಿ.ಸಿ.ರವಿ, ಅಡಗೂರು ಗ್ರಾಪಂ ಮಾಜಿ ಅಧ್ಯಕ್ಷ ಕೆ.ಮಹದೇವ್ ಅಭಿನಂದಿಸಿದರು.

ನಿವೃತ್ತ ಮುಖ್ಯ ಶಿಕ್ಷಕರಿಗೆ ಬೀಳ್ಕೊಡುಗೆ



ನಿವೃತ್ತ ಮುಖ್ಯ ಶಿಕ್ಷಕ ಕೃಷ್ಣೇಗೌಡರನ್ನು ಸನ್ಮಾನಿಸಲಾಯಿತು.

ಚುಂಚನಕಟ್ಟೆ, ಜು.3– ಗ್ರಾಮೀಣ ಕೆಂಚನಹಳ್ಳಿ ಶಾಲೆಯನ್ನು ಮಾದರಿ ಶಾಲೆಯನ್ನಾಗಿಸಿದ ಕೀರ್ತಿ ಶಾಲಾ ಶಿಕ್ಷಕರಿಗೆ ಸಲ್ಲುತ್ತದೆ ಎಂದು ಕುಪ್ಪಹಳ್ಳಿ ಕ್ಲಸ್ಟರ್‌ನ ಸಂಪನ್ಮೂಲ ವ್ಯಕ್ತಿ ಎಸ್.ವಸಂತ ಕುಮಾರ್ ತಿಳಿಸಿದರು.

ಸಾಲಿಗ್ರಾಮ ತಾಲೂಕಿನ ಕುಪ್ಪಹಳ್ಳಿ ಕ್ಲಸ್ಟರ್‌ನ ಸರ್ಕಾರಿ ಹಿರಿಯ ಪ್ರಾಥಮಿಕ ಕೆಂಚನಹಳ್ಳಿ ಶಾಲೆಯ ಮುಖ್ಯ ಶಿಕ್ಷಕ ಕೆ.ಪಿ. ಕೃಷ್ಣೇಗೌಡರ ಸೇವಾ ನಿವೃತ್ತಿ ಅಭಿನಂದನೆ ಮತ್ತು ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕೆಂಚನಹಳ್ಳಿ ಶಾಲೆ ಮಾದರಿ ಶಿಕ್ಷಕರನ್ನು ಒಳಗೊಂಡಿದ್ದು, ಗ್ರಾಮಸ್ಥರ ಮತ್ತು ಪೋಷಕರ ಮತ್ತು ಎಸ್‌ಡಿಎಂಸಿ ಸಹಕಾರದಿಂದ ಶಾಲಾ ಮಕ್ಕಳ ಶೈಕ್ಷಣಿಕ ಗುಣಮಟ್ಟ ಉತ್ತಮವಾಗಿದ್ದು, ಶಾಲಾ ಮಕ್ಕಳ ದಾಖಲಾತಿ ಹೆಚ್ಚಾಗುವುದರ ಮೂಲಕ ಗ್ರಾಮೀಣ ಶಾಲೆಗಳ ಸುಧಾರಣೆ ಕಾಣಬಹುದು ಎಂದರು.

ಇದೇ ವೇಳೆ ಕೃಷ್ಣೇಗೌಡರ ಸುದೀರ್ಘ 31 ವರ್ಷಗಳ ಸೇವೆಯನ್ನು ಸ್ಮರಿಸಿ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ರವಿ, ಕ್ಲಸ್ಟರ್‌ನ ಮುಖ್ಯ ಶಿಕ್ಷಕರಾದ ಪ್ರಕಾಶ, ಮಂಜುನಾಥ, ಶಿಕ್ಷಕರಾದ ಸುಧಾಮಣಿ, ಜಲೇಂದ್ರ, ಚಿತ್ರಶೇಖರ, ಮಹದೇವ, ಭದ್ರಯ್ಯ, ಹೇಮಂತ ಕುಮಾರ, ಪಲ್ಲವಿ, ಕೋಮಲ, ಸುಜಾತ, ಉಮೇಶ, ರಮೇಶ, ಕುಮಾರಶೆಟ್ಟಿ, ದಶರಥ, ಚಿಕ್ಕೇಗೌಡ, ಕವಿತಾ, ಪದೀಪ, ಕೆಂಚನಹಳ್ಳಿ ಶಾಲೆ ಶಿಕ್ಷಕರಾದ ಶಿವಣ್ಣ, ರಾಘವೇಂದ್ರ, ಶಿವಣ್ಣ, ಇತರರಿದ್ದರು.

ವ್ಯಕ್ತಿ ನಾಪತ್ತೆ

ಹೆಚ್.ಡಿ.ಕೋಟೆ, ಜು.3– ತಾಲೂಕಿನ ಎನ್.ಬೇಗೂರು ಗ್ರಾಮದ ರೈತ ರಾಜಪ್ಪ (54) ನಾಪತ್ತೆಯಾಗಿದ್ದಾರೆ ಎಂದು ಅವರ ಪತ್ನಿ ರಂಜಿತಾ ಅಂತರಸಂತೆ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಬೆಳೆ ಪರಿಹಾರದ ಹಣ ತರುತ್ತೇನೆಂದು 3 ತಿಂಗಳ ಹಿಂದೆ ಹೆಚ್.ಡಿ.ಕೋಟೆಗೆ ಹೋದವರು ಮರಳಿ ಬಂದಿಲ್ಲ. ಇವರ ಬಗ್ಗೆ ಸುಳಿವು ಸಿಕ್ಕಲ್ಲಿ 9611869841 ಮತ್ತು 9972517954 ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

ಅರಣ್ಯ ಇಲಾಖೆ ಸಿಬ್ಬಂದಿ ಹಿತ ಕಾಯುವುದು ಆದ್ಯ ಕರ್ತವ್ಯ

ರಾಜ್ಯ ವನ್ಯಜೀವಿ ಮಂಡಳಿ ಸದಸ್ಯ ಧ್ರುವ್ ಪಾಟೀಲ್

ಹೆಚ್.ಡಿ.ಕೋಟೆ, ಜು.3– ರಾಜ್ಯದ ಅರಣ್ಯ ಸಂಪತ್ತು ರಕ್ಷಣೆಗೆ ಶ್ರಮಿಸುತ್ತಿರುವ ಅರಣ್ಯ ಇಲಾಖೆ ಸಿಬ್ಬಂದಿ ಹಾಗೂ ಹೊರಗುತ್ತಿಗೆ ನೌಕರರ ಹಿತಾಸಕ್ತಿ ಕಾಯುವುದು ಆದ್ಯ ಕರ್ತವ್ಯವಾಗಿದ್ದು, ಆ ನಿಟ್ಟಿನಲ್ಲಿ ತುರ್ತು ಪರಿಸ್ಥಿತಿಗೆ ನೆರವಾಗುವ ಅಗತ್ಯ ಪರಿಕರಗಳಿರುವ ವಿಶೇಷ ಕಿಟ್ ನೀಡಲಾಗುತ್ತಿದೆ ಎಂದು ರಾಜ್ಯ ವನ್ಯಜೀವಿ ಮಂಡಳಿ ಸದಸ್ಯ ಧ್ರುವ್ ಪಾಟೀಲ್ ತಿಳಿಸಿದರು.

ತಾಲೂಕಿನ ದಮ್ಮನಕಟ್ಟೆ ವನ್ಯಜೀವಿ ಸಫಾರಿ ಕೇಂದ್ರದಲ್ಲಿ ಅರಣ್ಯ ಇಲಾಖೆ ಸಿಬ್ಬಂದಿಗೆ ಹಮ್ಮಿಕೊಂಡಿದ್ದ ವಿಶೇಷ ಕಿಟ್ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಾಡಿನ ಅಪೂರ್ವ ವನಸಿರಿ ಹಾಗೂ ವನ್ಯಜೀವಿಗಳ ರಕ್ಷಣೆಗೆ ಮುಂಚೂಣಿಯಲ್ಲಿರುವ ಗಸ್ತು ಅರಣ್ಯಪಾಲಕರು, ಅರಣ್ಯ ವೀಕ್ಷಕರು, ದಿನಗೂಲಿ ಮತ್ತು ಕ್ಷೇಮಾಭಿವೃದ್ಧಿ ನೌಕರರು ಸೇರಿದಂತೆ ವಾಹನ ಚಾಲಕರು ತಮ್ಮ ರಕ್ಷಣೆ ನಿರ್ಲಕ್ಷಿಸಿ ಅತ್ಯಂತ ದುರ್ಗಮ ಹಾದಿ ಹಾಗೂ ದಟ್ಟ ಕಾಡಿನೊಳಗೆ ವಾರಾನುಗಟ್ಟಲೆ ಮಳೆ, ಗಾಳಿ, ಬಿಸಿಲು ಎನ್ನದೆ ತಮ್ಮ ಕುಟುಂಬಗಳಿಂದ ದೂರ ಉಳಿದು ತುರ್ತು ಸಂದರ್ಭಗಳಲ್ಲೂ ಅಗತ್ಯ ಮೂಲ ಸೌಲಭ್ಯಗಳಿಲ್ಲದೇ ಕಾರ್ಯ ನಿರ್ವಹಿಸುವುದನ್ನು ಈ ಹಿಂದೆ ತಾವೇ ಖುದ್ದಾಗಿ ಪರಿಶೀಲಿಸಿದ್ದು, ಇಂತಹ ಪರಿಸ್ಥಿತಿಯನ್ನು ಸಾಧ್ಯವಾದಷ್ಟು ನಿಯಂತ್ರಿಸುವ ಸಲುವಾಗಿ ವಿಶೇಷ ಸುರಕ್ಷತಾ ಪರಿಕರಗಳಿರುವ 9100 ಕಿಟ್‌ಗಳನ್ನು ರಾಜ್ಯ ಸಾಬೂನು ಮತ್ತು ಮಾರ್ಜಕಗಳ ಲಿಮಿಟೆಡ್ ಸಹಭಾಗಿತ್ವದೊಂದಿಗೆ ಸಿಎಸ್‌ಆರ್ ನಿಧಿಯಲ್ಲಿ ರಾಜ್ಯಾದ್ಯಂತ ಅರಣ್ಯ ಸಿಬ್ಬಂದಿಗೆ ವಿತರಿಸಲಾಗುತ್ತಿದೆ. ಈ ಕಿಟ್‌ನಲ್ಲಿ ಮಳೆ ಸುರಕ್ಷಿತ ಕವಚ, ವಿಶೇಷವಾಗಿ ವಿನ್ಯಾಸಗೊಂಡ ಸದೃಢ ಬೂಟುಗಳು, ಕುಡಿಯುವ ನೀರಿನ ಬಾಟಲ್ ಹಾಗೂ ರಕ್ಷಣಾಯುಧ ಪರಿಕರಗಳನ್ನಿಡುವ ವಿಶೇಷ ಬ್ಯಾಗ್ ಒಳಗೊಂಡ ಕಿಟ್ ಇದಾಗಿದ್ದು, ಸಿಬ್ಬಂದಿಗಳು ಇದರ ಸದ್ಬಳಕೆ ಮಾಡಿಕೊಂಡು ಸುರಕ್ಷತೆ ಕಾಯ್ದುಕೊಳ್ಳಬೇಕು ಎಂದು ಸಲಹೆ ನೀಡಿದರು.



ದಮ್ಮನಕಟ್ಟೆ ವನ್ಯಜೀವಿ ಸಫಾರಿ ಕೇಂದ್ರದಲ್ಲಿ ಅರಣ್ಯ ಇಲಾಖೆ ಸಿಬ್ಬಂದಿಗೆ ವಿಶೇಷ ಕಿಟ್ ವಿತರಿಸಲಾಯಿತು.

ಕೆಎಸ್‌ಡಿಎಲ್ ವ್ಯವಸ್ಥಾಪಕ ನಿರ್ದೇಶಕ ಪಿ.ಕೆ.ಪ್ರಶಾಂತ್ ಮಾತನಾಡಿ, ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಮತ್ತು ಅಧ್ಯಕ್ಷ ಅಪ್ಪಾಜಿ ನಾಡಗೌಡರ ಅಧಿಕಾರವಧಿಯಲ್ಲಿ ಸಂಸ್ಥೆ 415 ಕೋಟಿ ಲಾಭ ಗಳಿಸಿದ್ದು, ಇದರಲ್ಲಿ 7 ಕೋಟಿ ಸಿಎಸ್‌ಆರ್ ಅನುದಾನದಲ್ಲಿ 2 ಕೋಟಿ ರೂ.ಗಳನ್ನು ಅರಣ್ಯ ರಕ್ಷಿಸುವ ಶ್ರಮಿಕ ಸಿಬ್ಬಂದಿಗಳ ರಕ್ಷಣೆಗೆ ಮೀಸಲಿಟ್ಟು ಸಚಿವ ಎಂ.ಬಿ.ಪಾಟೀಲ್ ಹಾಗೂ ವನ್ಯಜೀವಿ ಮಂಡಳಿ ಸದಸ್ಯ ಧ್ರುವ್ ಪಾಟೀಲ್ ಅವರ ನೇತೃತ್ವದಲ್ಲಿ ವಿಶೇಷವಾಗಿ ವಿನ್ಯಾಸಗೊಳಿಸಿರುವ ಈ ಕಿಟ್ ಮಾಡಿರುವುದು ಅತ್ಯಂತ ಸಂತೋಷ ಹಾಗೂ ನಮ್ಮಲ್ಲಿ ಬದ್ಧತೆಯನ್ನು ಮೂಡಿಸುವಂತೆ ಮಾಡಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಹೆಚ್ಚು ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಸಿಕೊಳ್ಳುವಂತೆ ಮಾಡಿದೆ ಎಂದರು.

> ಅರಣ್ಯ ಇಲಾಖೆ ಸಿಬ್ಬಂದಿ ಸುರಕ್ಷತಾ ಕಲ್ಯಾಣಕ್ಕಾಗಿ ಕೆಎಸ್‌ಡಿಎಲ್ ಸಂಸ್ಥೆ ಕೋಟ್ಯಾಂತರ ರೂ. ವ್ಯಯಿಸಿ ದೊಡ್ಡ ಮಟ್ಟದಲ್ಲಿ ಸಹಕಾರ ನೀಡಿ ಅಂತರ ಸಂತೆ, ಮೇಟಿಕುಪ್ಪೆ ಹಾಗೂ ಡಿ.ಬಿ.ಕುಪ್ಪೆ ವಲಯದ ನೂರಾರು ಸಿಬ್ಬಂದಿಗೆ ಅತ್ಯುತ್ತಮ ಕಿಟ್‌ಗಳನ್ನು ವಿತರಿಸುವ ಮೂಲಕ ಉತ್ತಮವಾಗಿ ಕಾರ್ಯನಿರ್ವಹಿಸಲು ಪ್ರೋತ್ಸಾಹ ನೀಡಿರುವುದು ನಿಜಕ್ಕೂ ಶ್ಲಾಘನೀಯ. ಧ್ರುವ್ ಪಾಟೀಲ್ ಅವರ ಅರಣ್ಯ ಮತ್ತು ವನ್ಯಜೀವಿಗಳ ಬಗ್ಗೆ, ಸಿಬ್ಬಂದಿಗಳ ಕುರಿತು ಕಾಳಜಿ ವಹಿಸಿರುವಂತಹದು ನಿಜಕ್ಕೂ ಪ್ರಶಂಸನೀಯ. –ಸೀಮಾ, ಡಿಸಿಎಫ್ ಹುಣಸೂರು ವನ್ಯಜೀವಿ ವಿಭಾಗ.

ಕಾರ್ಯಕ್ರಮದಲ್ಲಿ ಮೇಟಿಕುಪ್ಪೆ ಉಪ ವಿಭಾಗದ ಎಸಿಎಫ್ ಮಧು, ಅಂತರ ಸಂತೆ ವನ್ಯಜೀವಿ ವಲಯದ ಆರ್‌ಎಫ್‌ಓ ಸಿದ್ದರಾಜು, ಡಿ.ಬಿ.ಕುಪ್ಪೆ ಆರ್‌ಎಫ್‌ಓ ಹನುಮಂತರಾಜು, ಮೇಟಿಕುಪ್ಪೆ ಆರ್‌ಎಫ್‌ಓ ರಶ್ಮಿ, ಡಿಆರ್‌ಎಫ್‌ಓ ವಿನೋದ್ ರಾಜ್ ಸೇರಿದಂತೆ ಇತರೆ ಅಧಿಕಾರಿಗಳು 3 ವಲಯದ ನೂರಾರು ಸಿಬ್ಬಂದಿಗಳು ಸೇರಿದಂತೆ ಇನ್ನಿತರರಿದ್ದರು.

ಸ್ಮಶಾನ ಭೂಮಿ ಮಂಜೂರಿಗೆ ಮನವಿ ಸಲ್ಲಿಕೆ



ಹುಣಸೂರು ತಾಲೂಕಿನ ಚಿಕ್ಕಹುಣಸೂರು ಬಾಚಳ್ಳಿ ರಸ್ತೆಯಲ್ಲಿರುವ ಅಂಬೇಡ್ಕರ್ ನಗರಕ್ಕೆ 1 ಎಕರೆ ಸ್ಮಶಾನಕ್ಕೆ ಭೂಮಿ ಮಂಜೂರು ಮಾಡಿಕೊಡುವಂತೆ ತಹಸೀಲ್ದಾರ್ ಮಂಜುನಾಥ್ ಅವರಿಗೆ ದಸಂಸದಿಂದ ಮನವಿ ಸಲ್ಲಿಸಲಾಯಿತು. ಈ ವೇಳೆ ಮುಖಂಡ ನಿಂಗರಾಜ್ ಮಲ್ಲಾಡಿ, ದೇವೇಂದ್ರ, ಗಜೇಂದ್ರ, ಮಲ್ಲಿಕ್ ಪಾಷಾ, ಅಂಬೇಡ್ಕರ್ ನಗರದ ಶೇಖರ, ಹರೀಶ, ಸುರೇಶ, ವೆಂಕಟೇಶ, ರಾಮಚಂದ್ರ, ಆದಿವಾಸಿ ಮುಖಂಡರಾದ ವಸಂತ, ಕಣ್ಣಮ್ಮ, ಮಂಜುಳಾ, ಶೋಭಮ್ಮ, ಕಿಟ್ಟಮ್ಮ, ವೇಣು ಗೋಪಾಲ, ಕುಮಾರ, ದಾಸಪ್ಪ ಇತರರಿದ್ದರು.

ಜು.6, ವಾರ್ಷಿಕ ಮಹಾಸಭೆ

ಸರಗೂರು, ಜು.3– ಹೆಚ್.ಡಿ.ಕೋಟೆ ಹಾಗೂ ಸರಗೂರು ತಾಲೂಕಿನ ನಾಮಧಾರಿಗೌಡ ಯುವಕ ಸಂಘದ 15ನೇ ವಾರ್ಷಿಕ ಮಹಾಸಭೆ ಜು.6ರಂದು ಬೆಳಗ್ಗೆ 10 ಗಂಟೆಗೆ ಪಟ್ಟಣದ ನಾಮ ಧಾರಿಗೌಡ ಸಮುದಾಯ ಭವನದಲ್ಲಿ ನಡೆಯಲಿದೆ.

ಕಾರ್ಯಕ್ರಮವನ್ನು ಸಮಾಜದ ತಾಲೂಕು ಸಮಿತಿ ಅಧ್ಯಕ್ಷ ಭೀಮ್ ರಾಜ್ ಉದ್ಘಾಟಿಸುವರು. ನಿವೃತ್ತ ಕೃಷಿ ಅಧಿಕಾರಿ ಕೃಷ್ಣಯ್ಯ, ಪತ್ರಕರ್ತ ಎಂ.ಸುಬ್ರಹ್ಮಣ್ಯ ಭಾಗವಹಿಸುವರು. ಸಂಘದ ಅಧ್ಯಕ್ಷ ಭರತ್ ಚಾಮರಾಜು ಅಧ್ಯಕ್ಷತೆ ವಹಿಸುವರು. ಇದೇ ವೇಳೆ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ಸಮುದಾಯದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವುದು ಎಂದು ಪ್ರಕರಣೆ ತಿಳಿಸಿದೆ.


ಡಾ.ಬಾಬು ಜಗಜೀವನರಾಂ ಸಂಘಕ್ಕೆ ಅರ್ಜುನ್ ರಮೇಶ್ ಅಧ್ಯಕ್ಷ

ಸಂಘದ ಅಭಿವೃದ್ಧಿಗಾಗಿ ಶ್ರಮಿಸುತ್ತೇನೆ: ನೂತನ ಅಧ್ಯಕ್ಷ ಭರವಸೆ

ತಿ.ನರಸೀಪುರ, ಜು.3– ತಾಲೂಕು ಬಾಬು ಜಗಜೀವನರಾಂ ಸಂಘ ರಾಜ್ಯ ಮಟ್ಟದಲ್ಲಿ ಹೆಸರು ಗಳಿಸಲು ಶ್ರಮಿಸಲಿದ್ದು, ಆ ಮೂಲಕ ಸಂಘಕ್ಕೆ ಪುನರುಜ್ಜೀವನ ನೀಡುವ ಕೆಲಸ ಮಾಡುತ್ತೇನೆ ಎಂದು ಪುರಸಭೆ ಸದಸ್ಯ ಹಾಗೂ ಡಾ.ಬಾಬು ಜಗಜೀವನರಾಂ ಸಂಘದ ನೂತನ ಅಧ್ಯಕ್ಷ ಅರ್ಜುನ್ ರಮೇಶ್ ತಿಳಿಸಿದರು.

ಪಟ್ಟಣದ ಪಿಡಬ್ಲ್ಯೂಡಿ ಅತಿಥಿ ಗೃಹದಲ್ಲಿ ನಡೆದ ಮಾದಿಗ ಸಮಾಜದ ಮುಖಂಡರ ಸಭೆಯಲ್ಲಿ ಡಾ.ಬಾಬು ಜಗಜೀವನರಾಂ ಸಂಘದ ಅಧ್ಯಕ್ಷರಾಗಿ ಸರ್ವಾನುಮತದಿಂದ ಆಯ್ಕೆಗೊಂಡ ನಂತರ ಮಾತನಾಡಿದ ಅವರು, ಸಂಘವು ಅನಿವಾರ್ಯ ಕಾರಣಗಳಿಂದ ತನ್ನ ಕಾರ್ಯ ಚಟುವಟಿಕೆಗಳನ್ನು ಕುಂಠಿತಗೊಳಿಸಿತ್ತು. ಈಗ ಮತ್ತೆ ಅದಕ್ಕೆ ಶಕ್ತಿ ನೀಡುವ ಜವಾಬ್ದಾರಿ ನನ್ನ ಮೇಲಿದ್ದು, ಅದನ್ನು ಸಮಾಜದ ಮುಖಂಡರ ಸಹಕಾರದೊಂದಿಗೆ ಪ್ರಾಮಾಣಿಕವಾಗಿ ಮಾಡಲಾಗುತ್ತದೆ ಎಂದರು.

ಈ ಹಿಂದೆ ಸಂಘ ಸರ್ಕಾರಿ ಶಾಲೆಯಲ್ಲಿ ಶೌಚಾಲಯ ನಿರ್ಮಾಣ ಸೇರಿದಂತೆ ಮಂಗಿಪಚ್ಚನಹುಂಡಿ, ಕಳ್ಳೀಪುರ ಗ್ರಾಮದ ಸ್ಮಶಾನ ಹೋರಾಟಕ್ಕೆ ಬೆಂಬಲ ನೀಡಿತ್ತು. ಬದಲಾದ ಬೆಳವಣಿಗೆಯಲ್ಲಿ ಸಂಘದ ಕಾರ್ಯ ಚಟುವಟಿಕೆ ಎಲ್ಲೋ ಒಂದು ಕಡೆ ಕುಂಠಿತವಾಗಿತ್ತು. ಇದನ್ನು ಮನಗಂಡ ಸಮಾಜದ ವಿವಿಧ ಗ್ರಾಮಗಳ ಮುಖಂಡರು, ಗ್ರಾಪಂ ಸದಸ್ಯರು, ಯಜಮಾನರು ಸೇರಿದಂತೆ ಬಾಬು ಜಗಜೀವನರಾಂ ಜನ ಕಲ್ಯಾಣ ಟ್ರಸ್ಟ್ ಅಧ್ಯಕ್ಷ ಮಲಿಯೂರು ಶಂಕರ್ ಸಹ ಸಂಘದ ನೇತೃತ್ವ ವಹಿಸಿಕೊಳ್ಳುವಂತೆ ನನ್ನ ಮೇಲೆ ಒತ್ತಡ ಹೇರಿದ್ದರು. ಹಾಗಾಗಿ ಹಿರಿಯರು, ಸಮಾಜದ ಮುಖಂಡರ ಮಾತಿಗೆ ಮನ್ನಣೆ ನೀಡಿ ಸಂಘ ಮುನ್ನಡೆಸುವ ನೇತೃತ್ವ ವಹಿಸಿಕೊಂಡಿದ್ದೇನೆ. ಇದಕ್ಕಾಗಿ ತಾಲೂಕಿನ ಎಲ್ಲಾ ಸಮಾಜದ ಸಹಕಾರ ಕೋರುತ್ತೇನೆ ಎಂದರು.



ಡಾ.ಬಾಬು ಜಗಜೀವನರಾಂ ಸಂಘದ ನೂತನ ಅಧ್ಯಕ್ಷರನ್ನಾಗಿ ಪುರಸಭೆ ಸದಸ್ಯ ಅರ್ಜುನ್ ರಮೇಶ್ ಆಯ್ಕೆಯಾದರು.

ಇದೀಗ ಅಧ್ಯಕ್ಷನಾಗಿ ಆಯ್ಕೆಯಾಗಿದ್ದು, ಮೊದಲಿಗೆ ತಾಲೂಕಿನ ಎಲ್ಲಾ ಗ್ರಾಮಗಳಿಗೆ ಭೇಟಿ ನೀಡಿ ಸಂಘದ ಕಾರ್ಯ ಚಟುವಟಿಕೆಗಳ ಬಗ್ಗೆ ಗ್ರಾಮಸ್ಥರ ಸಮ್ಮುಖದಲ್ಲಿ ಚರ್ಚಿಸಿ ಅಭಿಪ್ರಾಯ ಸಂಗ್ರಹಿಸುವ ಕೆಲಸ ಮಾಡಲಾಗುತ್ತದೆ ಎಂದರು.

ಡಾ.ಬಾಬು ಭವನದಲ್ಲಿ ಸಂಘದ ಕಚೇರಿ: ತಾಲೂಕಿನ ಡಾ.ಬಾಬು ಜಗಜೀವನರಾಂ ಭವನದಲ್ಲಿ ಸಂಘದ ನೂತನ ಕಚೇರಿ ತೆರೆಯಲಾಗುತ್ತದೆ. ಯಾವುದೇ ಸಮಸ್ಯೆಗಳಿದ್ದರೂ ತಮ್ಮನ್ನು ಸಂಪರ್ಕಿಸಿದಲ್ಲಿ ಸಮಸ್ಯೆ ಬಗೆಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುತ್ತದೆ. ಸಂಘಕ್ಕೆ ಈಗ ಅಧ್ಯಕ್ಷರ ಆಯ್ಕೆ ಮಾಡಲಾಗಿದ್ದು, ಶೀಘ್ರ ಪದಾಧಿಕಾರಿಗಳ ಆಯ್ಕೆ ಮಾಡಲಾಗುತ್ತದೆ ಎಂದರು.

ರಾಜಕೀಯ ಸಂಘಟನೆಯಲ್ಲ

ಈ ಸಂಘ ಯಾವುದೇ ರಾಜಕೀಯ ಪಕ್ಷದ ಸಂಘವಲ್ಲ. ಜನಾಂಗಕ್ಕೆ ಸೇರಿದ ಸಂಘವಾಗಿರುವುದರಿಂದ ಸಮಾಜದವರನ್ನು ವಿಶ್ವಾಸಕ್ಕೆ ಪಡೆದು ಅವರ ಸಲಹೆ ಸಹಕಾರ ಪಡೆದು ಸಂಘಕ್ಕೆ ಒಳ್ಳೆಯ ಹೆಸರು ತಂದುಕೊಡುವ ಕೆಲಸಕ್ಕೆ ಮುಂದಾಗುತ್ತೇನೆ. ನನ್ನ ತಂದೆ ಮಾಜಿ ಎಂಎಲ್‌ಸಿ ಸಿ.ರಮೇಶ್ ಆಶೀರ್ವಾದ ಇಲ್ಲದೇ ನಾನೇನು ಮಾಡಲಾಗಲ್ಲ. ಹಾಗಾಗಿ ಅವರ ಆಶೀರ್ವಾದದೊಂದಿಗೆ ಸಂಘ ಮುಂದುವರೆಸಲು ಮುನ್ನುಡಿ ಬರೆಯುವ ಕೆಲಸ ಮಾಡುತ್ತೇನೆ ಎಂದು ಅರ್ಜುನ್ ತಿಳಿಸಿದರು.

ಎಡಗೈ ಜನಾಂಗಕ್ಕೆ ಶಾಸಕ ಸ್ಥಾನ ಸಿಗಲಿ: ಮೊದಲಿನಿಂದಲೂ ಕ್ಷೇತ್ರದಲ್ಲಿ ಎಡಗೈ ಜನಾಂಗದವರು ಶಾಸಕರಾಗಬೇಕೆಂಬ ಕೂಗಿದೆ. ಹೀಗಾಗಿ ಈ ಸಂಘಟನೆ ಮೂಲಕ ಜನಾಂಗದವರು ಶಾಸಕರಾಗಬೇಕೆನ್ನುವ ಕೂಗಿಗೆ ಪುಷ್ಟಿ ನೀಡುವ ಕೆಲಸ ಮಾಡಲಾಗುತ್ತದೆ ಎಂದರು.

ಕನ್ನಡ ರಕ್ಷಣಾ ವೇದಿಕೆ ಜಿಲ್ಲಾ ಉಪಾಧ್ಯಕ್ಷ ಕೆ.ರಾಚು ಮಾತನಾಡಿದರು. ಬಾಬು ಜಗಜೀವನರಾಮ್ ಜನ ಕಲ್ಯಾಣ ಟ್ರಸ್ಟ್ ಅಧ್ಯಕ್ಷ ಮಲಿಯೂರು ಶಂಕರ್, ಕಿರಗಸೂರು ಗ್ರಾಪಂ ಮಾಜಿ ಅಧ್ಯಕ್ಷ ನಿಂಗರಾಜು, ಸಿ.ಡಿ.ವೆಂಕಟೇಶ್, ಶಿವರಾಜ್, ಮಹದೇವಸ್ವಾಮಿ, ಬಿಎಸ್‌ಎನ್‌ಎಲ್ ಜಯರಾಮು, ನಂಜುಂಡಸ್ವಾಮಿ, ನಾಗರಾಜು, ರಾಜಣ್ಣ, ಶ್ರೀಧರ್, ರಾಚಪ್ಪ, ಹೆಚ್.ನಾಗರಾಜ್ ಸೇರಿದಂತೆ ಸಮಾಜದ ಮುಖಂಡರು ಹಾಜರಿದ್ದರು.

ಆಕಸ್ಮಿಕ ಬೆಂಕಿಗೆ ಬ್ಯಾರನ್ ಭಸ್ಮ

ಚುಂಚನಕಟ್ಟೆ, ಜು.3– ಆಕಸ್ಮಿಕ ಬೆಂಕಿ ತಗುಲಿ ತಂಬಾಕು ಹದಗೊಳಿಸುವ ಬ್ಯಾರನ್ ಸಂಪೂರ್ಣ ಸುಟ್ಟು ಹೋಗಿರುವ ಘಟನೆ ಸಾಲಿಗ್ರಾಮ ತಾಲೂಕಿನ ಕುಪ್ಪೆ ಗ್ರಾಮದಲ್ಲಿ ಗುರುವಾರ ನಡೆದಿದೆ.

ಗ್ರಾಮದ ವಿಶ್ವೇಶ್ವರಯ್ಯ ಎಂಬುವರಿಗೆ ಸೇರಿದ ತಂಬಾಕು ಹದಗೊಳಿಸುವ ಬ್ಯಾರನ್ ಸುಟ್ಟು ಹೋಗಿದ್ದು, ಸುಮಾರು 5 ಲಕ್ಷ ನಷ್ಟ ಸಂಭವಿಸಿದೆ ಎಂದು ಅಂದಾಜಿಸಲಾಗಿದೆ. ಶನಿವಾರ ಬೆಳಗಿನ ಜಾವ ಈ ಘಟನೆ ನಡೆದಿದ್ದು, ತಕ್ಷಣ ವಿಶ್ವೇಶ್ವರಯ್ಯ ಕುಟುಂಬಸ್ಥರು, ಗ್ರಾಮಸ್ಥರು ಎಚ್ಚೆತ್ತುಕೊಂಡು ಬೆಂಕಿ ಆರಿಸಿ ಮುಂದೆ ಆಗಬಹುದಾಗಿದ್ದ ಅನಾಹುತ ತಪ್ಪಿಸಿದ್ದು, ಕೆ.ಆರ್.ನಗರ ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕಾಗಮಿಸಿ ಬೆಂಕಿ ನಂದಿಸಿದರು.

ಘಟನಾ ಸ್ಥಳಕ್ಕೆ ಕಟ್ಟೆಮಳಲವಾಡಿ ವಿಭಾಗದ ತಂಬಾಕು ಮಂಡಳಿ ಅಧಿಕಾರಿಗಳಾದ ಸಿದ್ದರಾಜು, ಹರೀಶ್, ಸರ್ವೇ ಅಧಿಕಾರಿ ಆರ್.ಎಸ್.ಪ್ರಕಾಶ್ ಭೇಟಿ ನೀಡಿ ಪರಿಶೀಲಿಸಿ ತಂಬಾಕು ಮಂಡಳಿಯಿಂದ ಸಿಗುವ ಪರಿಹಾರ ಒದಗಿಸುವ ಭರವಸೆ ನೀಡಿದರು.



ಆಕಸ್ಮಿಕ ಬೆಂಕಿಗೆ ಬ್ಯಾರನ್ ಸುಟ್ಟು ಹೋಗಿರುವುದು.

ಡಿ.ಮಂಜುನಾಥ್ ನಿಧನ



ಹುಣಸೂರು, ಜು.3– ನಗರದ ಬಿಇಓ ಕಚೇರಿ ಪತ್ರಾಂಕಿತ ವ್ಯವಸ್ಥಾಪಕ ಡಿ.ಮಂಜುನಾಥ್ (55) ಬುಧವಾರ ರಾತ್ರಿ ನಿಧನರಾದರು. ಮೃತರು ಪತ್ನಿ ಮಂಜುಳಾ, ಇಬ್ಬರು ಮಕ್ಕಳು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸ್ವಗ್ರಾಮ ಕಟ್ಟೆಮಳಲವಾಡಿಯಲ್ಲಿ ಗುರುವಾರ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಮಿತ್ರ

ನಾಗನಹಳ್ಳಿ, ಸಿದ್ದಲಿಂಗಪುರ ವ್ಯಾಪ್ತಿಯ ವಿವಿಧ ಗ್ರಾಮಗಳಿಗೆ ಶೀಘ್ರ ಶುದ್ಧ ಕುಡಿಯುವ ನೀರು ಪೂರೈಕೆ

● ಶಾಸಕ ಜಿ.ಟಿ.ದೇವೇಗೌಡರು ಭರವಸೆ ● ಬೆಲವತ್ತದಲ್ಲಿ ಎರಡು ವಾಟರ್ ಟ್ಯಾಂಕ್ ನಿರ್ಮಾಣಕ್ಕೆ ಗುದ್ದಲಿ ಪೂಜೆ

ಮೈಸೂರು, ಜು.3– ನಾಗನಹಳ್ಳಿ ಮತ್ತು ಸಿದ್ದಲಿಂಗಪುರ ಗ್ರಾಮ ಪಂಚಾಯತಿ ವ್ಯಾಪ್ತಿಯ ಗ್ರಾಮಗಳಿಗೆ ಕಾವೇರಿ ನದಿಯಿಂದ ಶೀಘ್ರದಲ್ಲೇ ಶುದ್ಧ ಕುಡಿಯುವ ನೀರನ್ನು ಒದಗಿಸಲಾಗುವುದು. ಹಂತ ಹಂತವಾಗಿ ಕ್ಷೇತ್ರದ ಎಲ್ಲಾ ಗ್ರಾಮಗಳು, ಬಡಾವಣೆಗಳಿಗೆ ನೀರು ಪೂರೈಸಲು ಅಗತ್ಯ ಕ್ರಮಕೈಗೊಳ್ಳಲಾಗುವುದು ಎಂದು ಚಾಮುಂಡೇಶ್ವರಿ ಶಾಸಕ ಜಿ.ಟಿ.ದೇವೇಗೌಡರು ತಿಳಿಸಿದರು.

ಚಾಮುಂಡೇಶ್ವರಿ ಕ್ಷೇತ್ರದ ಬೆಲವತ್ತ ಗ್ರಾಮದಲ್ಲಿ 1 ಲಕ್ಷದ 75 ಸಾವಿರ ಲೀಟರ್ ಮತ್ತು 1 ಲಕ್ಷದ 5 ಸಾವಿರದ ಎರಡು ಟ್ಯಾಂಕ್‌ಗಳ ನಿರ್ಮಾಣಕ್ಕೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದರು. ರಮ್ಮನಹಳ್ಳಿ ಗ್ರಾಮದಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕದಿಂದ ಬೆಲವತ್ತ ಗ್ರಾಮದಲ್ಲಿ ನಿರ್ಮಾಣವಾಗಲಿರುವ ಟ್ಯಾಂಕ್‌ಗೆ ನೀರು ಬಂದು, ಅಲ್ಲಿಂದ ಎಲ್ಲಾ ಗ್ರಾಮಗಳಿಗೆ ಕುಡಿಯುವ ನೀರನ್ನು ಒದಗಿಸಲಾಗುವುದು ಎಂದು ತಿಳಿಸಿದರು.

ಈ ಕಾಮಗಾರಿಗೆ 30 ಕೋಟಿ ರೂ. ಮಂಜೂರಾಗಿದ್ದು, ಮುಂದಿನ ವರ್ಷದಲ್ಲಿ ಎಲ್ಲಾ ಗ್ರಾಮಗಳಿಗೆ ಕುಡಿಯುವ ನೀರನ್ನು ಒದಗಿಸಲಾಗುವುದು ಎಂದು ತಿಳಿಸಿದರು. ಸಿದ್ದಲಿಂಗಪುರ, ಕೆ.ಆರ್.ಮಿಲ್, ಬೆಲವತ್ತ, ಹಳೇ ಕೆಸರೆ, ಕಾಮನಕೆರೆಹುಂಡಿ, ನಾಗನಹಳ್ಳಿ, ಶ್ಯಾದನಹಳ್ಳಿ, ಲಕ್ಷ್ಮಿಪುರ ಹಾಗೂ ಕಳಸ್ತವಾಡಿ ಗ್ರಾಮಗಳಿಗೆ ಶಾಶ್ವತವಾದ ಕುಡಿಯುವ ನೀರನ್ನು ಒದಗಿಸಲಾಗುವುದು.

ಖಾಸಗಿ ಬಡಾವಣೆಗಳಿಗೂ ನೀರು ಹರಿಸಲು ಕ್ರಮವಹಿಸಲಾಗಿದೆ. ಅದಕ್ಕಾಗಿ ಯೋಜನೆಯನ್ನು ರೂಪಿಸಿದ್ದು, ಮುಂದಿನ ಎಂಡಿಎ ಸಭೆಯಲ್ಲಿ ಅನುಮೋದನೆ ಸಿಗಲಿದೆ ಎಂದರು. ಬೆಲವತ್ತ ಗ್ರಾಮದಲ್ಲಿ ಈಗಾಗಲೇ 8 ಕೋಟಿ ರೂ. ಅನುದಾನದಲ್ಲಿ ರಸ್ತೆ, ಚರಂಡಿ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಬಾಕಿ ಇರುವ ಮಳೆ ನೀರು ಚರಂಡಿ ಹಾಗೂ ಒಳಚರಂಡಿ ಕಾಮಗಾರಿಯನ್ನು ಶೀಘ್ರ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಮೈಸೂರು ನಗರದಿಂದ ಹಳೆ ಕೆಸರೆ ಗಾಮದ ಹತ್ತಿರ ಮಳೆ ನೀರು ಚರಂಡಿಯಲ್ಲಿ ಕೊಳಚೆ ನೀರು ಹರಿದು ಬರುತ್ತಿದ್ದು, ಈ ನೀರು ಅಕ್ಕ–ಪಕ್ಕದ ಜಮೀನುಗಳಿಗೆ ಹೋಗಿ ರೈತರು ವ್ಯವಸಾಯ ಮಾಡಲು ಸಾಧ್ಯವಾಗುತ್ತಿಲ್ಲ ಎನ್ನುವುದನ್ನು ರೈತರು ತಿಳಿಸಿದನ್ನು ಪರಿಗಣಿಸಿದ ಶಾಸಕರು, ಕೂಡಲೇ ನಗರಪಾಲಿಕೆ ಆಯುಕ್ತರಾದ ಶೇಖ್ ತನ್ವೀರ್ ಆಸಿಫ್ ಅವರೊಂದಿಗೆ ದೂರವಾಣಿ ಮೂಲಕ ಸಮಾಲೋಚಿಸಿ ಮಳೆ ನೀರು ಚರಂಡಿ ಕಾಮಗಾರಿಯನ್ನು ಕೈಗೊಂಡು ರೈತರಿಗೆ ಅನುಕೂಲ ಮಾಡಿಕೊಡುವಂತೆ ಸೂಚಿಸಿದರು. ಬೆಂಗಳೂರು–ಮೈಸೂರು ರಸ್ತೆಯಲ್ಲಿ ನಿರ್ಮಾಣ ಮಾಡಿರುವ ಸ್ಕೈವಾಕ್ ಕಾಮಗಾರಿಯನ್ನು ಕೂಡಲೇ ಪೂರ್ಣಗೊಳಿಸಲು ಹಾಗೂ ಎನ್‌ಎಚ್‌ಎ ವತಿಯಿಂದ ಬಸ್ ನಿಲ್ದಾಣಗಳನ್ನು ನಿರ್ಮಾಣ ಮಾಡಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಜಿಪಂ ಮಾಜಿ ಸದಸ್ಯ ನಾಗನಹಳ್ಳಿ ದಿನೇಶ್, ಮುಖಂಡ ಮಂಜುಗೌಡ, ತಾಪಂ ಮಾಜಿ ಅಧ್ಯಕ್ಷ ಬೆಲವತ್ತ ಕುಮಾರ್, ಮಾಜಿ ಸದಸ್ಯ ರೇವಣ್ಣ, ಸಿದ್ದಲಿಂಗಪುರ ಗ್ರಾಪಂ ಅಧ್ಯಕ್ಷ ಮಹಾದೇಶ್, ಸಿದ್ದಲಿಂಗಪುರ ಮಂಜು, ನಾಗನಹಳ್ಳಿ ಗ್ರಾಪಂ ಅಧ್ಯಕ್ಷರಾದ ರಶ್ಮಿ ಮಂಜು, ಉಪಾಧ್ಯಕ್ಷರಾದ ಜ್ಯೋತಿ, ಮಾಜಿ ಅಧ್ಯಕ್ಷ ಭಾಸ್ಕರ್, ಸದಸ್ಯರಾದ ಶ್ರೀನಿವಾಸ್, ರವಿಕಾಂತ್, ಪ್ರೇಮಮ್ಮ, ವಿನೋದ್ ಕುಮಾರ್ ನಾಯ್ಡು ಕಮಲಾಕ್ಷಿ, ದಶರಥ, ಗಂಗಾಧರ್, ಗುರು, ತೀರ್ಥಕುಮಾರ್, ವೆಂಕಟೇಶ್, ಶಶಿಕಲಾ, ಪ್ರಕಾಶ, ರಾಘವೇಂದ್ರ, ವಿನುತ, ಕೆ.ಆರ್.ಮಿಲ್. ಆಶಾ, ಸುಜಾತ ಹಾಗೂ ಹಲವಾರು ಮುಖಂಡರು ಭಾಗವಹಿಸಿದ್ದರು.



ಬೆಲವತ್ತ ಗ್ರಾಮದಲ್ಲಿ ಎರಡು ವಾಟರ್ ಟ್ಯಾಂಕ್‌ಗಳ ನಿರ್ಮಾಣಕ್ಕೆ ಶಾಸಕ ಜಿ.ಟಿ.ದೇವೇಗೌಡರು ಗುದ್ದಲಿ ಪೂಜೆ ನೆರವೇರಿಸಿದರು.

ಚಾಮುಂಡೇಶ್ವರಿ ಕ್ಷೇತ್ರದ ಬೆಲವತ್ತ ಗ್ರಾಮದಲ್ಲಿ 1 ಲಕ್ಷದ 75 ಸಾವಿರ ಲೀಟರ್ ಮತ್ತು 1 ಲಕ್ಷದ 5 ಸಾವಿರದ ಎರಡು ಟ್ಯಾಂಕ್‌ಗಳ ನಿರ್ಮಾಣಕ್ಕೆ ಶಾಸಕ ಜಿ.ಟಿ.ದೇವೇಗೌಡ ಗುದ್ದಲಿ ಪೂಜೆ ನೆರವೇರಿಸಿದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಫಿನಿಕ್ಸ್ (ತ) + ಮಾರ್ಗನ್ (ತ)	2+2 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಮಾದೇವ (ಕ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಸಿತಾರೆ ಜಮೀನ್ ಪರ್ (ಹಿಂ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಕುಲದಲ್ಲಿ ಕೀಳ್ಯಾವುದೋ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಮಾದೇವ (ಕ)	4 ಪ್ರದರ್ಶನಗಳು
ರಾಜಕಮಲ್	
3ಬಿಹೆಚ್‌ಕೆ (ತೆ)	4 ಪ್ರದರ್ಶನಗಳು
ಸಂಗಂ	
ಪೆನ್‌ಡ್ರೈವ್ (ಕ)	4 ಪ್ರದರ್ಶನಗಳು
ಲಿಡೋ	
ಜಂಗಲ್ ಮಂಗಲ್ (ಕ) + ಕ್ಯಾಪಿಟಲ್ ಸಿಟಿ (ಕ)	2+2 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಭಗೀರಥ (ಕ) + ನವಗ್ರಹ (ಕ)	1+3 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	28 ಇಯರ್ಸ್ ಲೇಟರ್ (ಇಂ): ಬೆ.10.40ಕ್ಕೆ, ರಾ.7.55ಕ್ಕೆ, ಡಿಎನ್‌ಎ (ತ): ಮ.1.10ಕ್ಕೆ, ಕುಬೇರಾ (ತೆ): ಸಂ.4.05ಕ್ಕೆ, ಸಿತಾರೆ ಜಮೀನ್ ಪರ್ (ಹಿಂ): ರಾ.10.25ಕ್ಕೆ.
ಸ್ಕ್ರೀನ್ 2	ಇಲಿಯೋ (3ಡಿ)(ಇಂ): ಬೆ.11.30ಕ್ಕೆ, ಮ.1.45ಕ್ಕೆ, ಸಿತಾರೆ ಜಮೀನ್ ಪರ್ (ಹಿಂ): ಸಂ.4ಕ್ಕೆ, ರಾ.7.10ಕ್ಕೆ, ಯುನೈಟೆಡ್ ಕಿಂಗ್‌ಡಮ್ ಆಫ್ ಕೇರಳ (ಮ): ರಾ.10.20ಕ್ಕೆ.
ಸ್ಕ್ರೀನ್ 3	ಮಾದೇವ (ಕ): ಬೆ.10.30ಕ್ಕೆ, ರಾ.7.10ಕ್ಕೆ, ಮಾತೊಂದ ಹೇಳುವೆ (ಕ): ಮ.1.15ಕ್ಕೆ, 28 ಇಯರ್ಸ್ ಲೇಟರ್ (ಇಂ): ಸಂ.4.30ಕ್ಕೆ, ವ್ಯಾಸನಸಮೇತಂ ಬಂಧುಮಿತ್ರ (ಮ): ರಾ.10ಕ್ಕೆ.
ಸ್ಕ್ರೀನ್ 4	ಕುಬೇರಾ (ತೆ): ಬೆ.10.30ಕ್ಕೆ, ಸಂ.6.25ಕ್ಕೆ, ರಾ.10.15ಕ್ಕೆ, ಕುಬೇರಾ (ತ): ಮ.2.20ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಎಡಗೈಯೇ ಅಪಘಾತಕ್ಕೆ ಕಾರಣ (ಕ): ಮ.1.45ಕ್ಕೆ, ಸಂ.4.25ಕ್ಕೆ, ಸಂ.6.50ಕ್ಕೆ, ಮಾದೇವ (ಕ): ರಾ.9.15ಕ್ಕೆ.
ಸ್ಕ್ರೀನ್ 2	ಮಾದೇವ (ಕ): ಮ.1.15ಕ್ಕೆ, ಸಂ.4.30ಕ್ಕೆ, ರಾ.7.30ಕ್ಕೆ.
ಸ್ಕ್ರೀನ್ 3	ಯುದ್ಧಕಾಂಡ 2 (ಕ): ಸಂ.6.50ಕ್ಕೆ.
ಸ್ಕ್ರೀನ್ 4	ಹೌಸ್‌ಫುಲ್ 5ಎ (ಹಿಂ): ಮ.1.15ಕ್ಕೆ, ಸಂ.4.30ಕ್ಕೆ, ರಾ.7.44ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಅತಿವೇಗ, ನಿರ್ಲಕ್ಷ್ಯದ ವಾಹನ ಚಾಲನೆಯಿಂದ ಉಂಟಾಗುವ ಸಾವಿಗೆ ವಿಮಾ ಕಂಪನಿ ಪರಿಹಾರ ನೀಡಬೇಕಾಗಿಲ್ಲ: ಸುಪ್ರೀಂ ಕೋರ್ಟ್

ನವದೆಹಲಿ, ಜು.3– ಅತಿವೇಗ ಮತ್ತು ಅಜಾಗರೂಕ ವಾಹನ ಚಾಲನೆಯಿಂದ ಸಾವಿಗೀಡಾದ ವ್ಯಕ್ತಿಯ ಕುಟುಂಬಗಳಿಗೆ ಯಾವುದೇ ವಿಮಾ ಕಂಪನಿಗಳು ಪರಿಹಾರವನ್ನು ಪಾವತಿಸಬೇಕಾಗಿಲ್ಲ ಎಂದು ಸುಪ್ರೀಂ ಕೋರ್ಟ್ ಹೇಳಿದೆ.

ಅತಿವೇಗದಲ್ಲಿ ಕಾರು ಚಾಲನೆ ಮಾಡಿ ಸಾವಿಗೀಡಾದ ವ್ಯಕ್ತಿಯ ಪತ್ನಿ, ಮಗ ಮತ್ತು ಪೋಷಕರು ಕೋರಿದ 80 ಲಕ್ಷ ಪರಿಹಾರವನ್ನು ನೀಡಲು ನ್ಯಾಯಮೂರ್ತಿಗಳಾದ ಪಿಎಸ್ ನರಸಿಂಹ ಮತ್ತು ಆರ್ ಮಹಾದೇವನ್ ಅವರಿದ್ದ ಪೀಠವು ನಿರಾಕರಿಸಿದೆ.

ಕಳೆದ ವರ್ಷ ನವೆಂಬರ್ 23 ರಂದು ಕರ್ನಾಟಕ ಹೈಕೋರ್ಟ್ ನೀಡಿದ್ದ ಆದೇಶದಲ್ಲಿ ಮಧ್ಯಪ್ರವೇಶಿಸಲು ಸುಪ್ರೀಂ ಕೋರ್ಟ್ ನಿರಾಕರಿಸಿದೆ. ಮೃತ ವ್ಯಕ್ತಿಯ ಕುಟುಂಬಸ್ಥರು ಪರಿಹಾರ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿತ್ತು.

ನಾವು ಹೈಕೋರ್ಟ್ ನೀಡಿರುವ ತೀರ್ಪಿನಲ್ಲಿ ಹಸ್ತಕ್ಷೇಪ ಮಾಡಲು ಒಲವು ತೋರುತ್ತಿಲ್ಲ. ಆದ್ದರಿಂದ, ವಿಶೇಷ ರಜೆ ಅರ್ಜಿಯನ್ನು ವಜಾಗೊಳಿಸಲಾಗಿದೆ ಎಂದು ಬುಧವಾರ ಹೊರಡಿಸಿದ ಆದೇಶದಲ್ಲಿ ಪೀಠ ತಿಳಿಸಿದೆ.

2014ರ ಜೂನ್ 18 ರಂದು ಎನ್‌ಎಸ್ ರವೀಶ ಎಂಬುವವರು ಮಲ್ಲಸಂದ್ರ ಗ್ರಾಮದಿಂದ ಅರಸೀಕೆರೆ ಪಟ್ಟಣಕ್ಕೆ ಕಾರಿನಲ್ಲಿ ಹೋಗುತ್ತಿದ್ದಾಗ ಅಪಘಾತ ಸಂಭವಿಸಿತ್ತು ಅವರ ತಂದೆ, ಸಹೋದರಿ ಮತ್ತು ಅವರ ಮಕ್ಕಳು ಕೂಡ ಅದೇ ಕಾರಿನಲ್ಲಿ ಪ್ರಯಾಣಿಸುತ್ತಿದ್ದರು.

ರವೀಶ ಸಂಚಾರ ನಿಯಮಗಳನ್ನು ಪಾಲಿಸದೆ ನಿರ್ಲಕ್ಷ್ಯದಿಂದ ಕಾರನ್ನು ಚಲಾಯಿಸಿದ್ದಾರೆ ಮತ್ತು ನಿಯಂತ್ರಣ ಕಳೆದುಕೊಂಡ ವಾಹನ ರಸ್ತೆಯಲ್ಲಿ ಪಲ್ಟಿ ಹೊಡೆದಿತ್ತು. ಅಪಘಾತದಲ್ಲಿ ರವೀಶ್ ಮೃತಪಟ್ಟಿದ್ದರು ಎಂದು ನ್ಯಾಯಾಲಯ ಗಮನಿಸಿದೆ.

ಮೃತ ವ್ಯಕ್ತಿಯ ಅತಿವೇಗ ಮತ್ತು ನಿರ್ಲಕ್ಷ್ಯದ ಚಾಲನೆಯಿಂದ ಅಪಘಾತ ಸಂಭವಿಸಿರುವುದರಿಂದ ಮತ್ತು ಅವರು ಸ್ವಯಂ ದೌರ್ಜನ್ಯ ಎಸಗಿರುವುದರಿಂದ, ಕಾನೂನುಬದ್ಧ ವಾರಸುದಾರರು ಅವರ ಸಾವಿಗೆ ಯಾವುದೇ ಪರಿಹಾರವನ್ನು ಪಡೆಯಲು ಸಾಧ್ಯವಿಲ್ಲ. ಏಕೆಂದರೆ, ಅದು ನಿಯಮಗಳನ್ನು ಉಲ್ಲಂಘನೆ ಮಾಡಿದ ವ್ಯಕ್ತಿಯು ತನ್ನಿಂದಲೇ ಆದ ತಪ್ಪುಗಳಿಗೆ ಪರಿಹಾರವನ್ನು ಪಡೆದಂತೆ ಆಗುತ್ತದೆ ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ.

ಆಷಾಢ ಶುಕ್ರವಾರ: ಚಾಮುಂಡಿಬೆಟ್ಟದಲ್ಲಿ ಮೂಲಸೌಕರ್ಯ ಕಲ್ಪಿಸಲು ಆಗ್ರಹ

ಮೈಸೂರು, ಜು.3(ಜಿಎ)–ಚಾಮುಂಡಿಬೆಟ್ಟದಲ್ಲಿ ಆಷಾಢ ಶುಕ್ರವಾರ ಹಿನ್ನೆಲೆಯಲ್ಲಿ ದೇವಸ್ಥಾನಕ್ಕೆ ಬರುವ ಭಕ್ತಾದಿಗಳಿಗೆ ಮೂಲ ಸೌಕರ್ಯ ಕಲ್ಪಿಸಲು ಹಾಗೂ ವಿಶೇಷ ದರ್ಶನಕ್ಕೆಂದು ನಿಗದಿ ಮಾಡಿರುವ 2000 ರೂ. ಶುಲ್ಕ ವ್ಯವಸ್ಥೆಯನ್ನು ಕೂಡಲೇ ರದ್ದು ಪಡಿಸಬೇಕೆಂದು ಕರ್ನಾಟಕ ಪ್ರಜಾ ಪಾರ್ಟಿ (ರೈತ ಪರ್ವ)ದ ರಾಜ್ಯಾಧ್ಯಕ್ಷ ಡಾ.ಬಿ. ಶಿವಣ್ಣ ಆಗ್ರಹಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಾಮುಂಡಿಬೆಟ್ಟದ ಚಾಮುಂಡೇಶ್ವರಿ ದೇವಸ್ಥಾನ ವಿಶ್ವಖ್ಯಾತಿ ಪಡೆದಿದೆ. ಆಷಾಢ ಮಾಸದಲ್ಲಿ ಲಕ್ಷಾಂತರ ಭಕ್ತರು ಆಗಮಿಸುತ್ತಾರೆ. ಆಷಾಢ ಶುಕ್ರವಾರಗಳಲ್ಲಿಯಂತೂ ಇವರ ಸಂಖ್ಯೆ ಅಪಾರವಾಗಿರುತ್ತದೆ. ಆದರೆ ಈ ವೇಳೆ ದರ್ಶನಕ್ಕೆ ತಾರತಮ್ಯ ಏಕೆ ಎಂದು ಪ್ರಶ್ನಿಸಿದರು.

ಬೆಟ್ಟಕ್ಕೆ ಬರುವವರಿಗೆ ಸರಿಯಾದ ಮೂಲಸೌಕರ್ಯ ಇಲ್ಲ. ಶೌಚಾಲಯ ವ್ಯವಸ್ಥೆಯೂ ಅಸಮರ್ಪಕವಾಗಿದೆ. ಈ ಹಿಂದೆಂದೂ ದರ್ಶನಕ್ಕೆ 2 ಸಾವಿರ ಶುಲ್ಕ ನಿಗದಿ ಮಾಡಿದ ಇತಿಹಾಸವೇ ಇಲ್ಲ. ವಿಐಪಿಗಳಿರಲೀ, ಜನಸಾಮಾನ್ಯರಿರಲೀ ಎಲ್ಲರಿಗೂ ದರ್ಶನಾವಕಾಶ ಒದಗಿಸಬೇಕಾದುದು ದೇವಸ್ಥಾನದ ಕರ್ತವ್ಯ. ಹೀಗಿರುವಾಗ ತಾರತಮ್ಯ ಮಾಡುವುದು ಸರಿಯಲ್ಲ ಎಂದರು. ತಿರುಪತಿ, ಕೊಲ್ಲೂರು, ಶೃಂಗೇರಿಗಳಲ್ಲಿಯಂತೆ ಚಾಮುಂಡಿಬೆಟ್ಟದ ದೇವಸ್ಥಾನವನ್ನೂ ಬೆಳಗ್ಗೆ 5ಕ್ಕೆ ತೆರೆದರೆ ಎಲ್ಲರಿಗೂ ಸುಲಭ ದರ್ಶನವಾಗುತ್ತದೆ. ಇತ್ತ ಜಿಲ್ಲಾಡಳಿತ ಗಮನ ಹರಿಸಬೇಕು. 2 ಸಾವಿರ ರೂ. ಶುಲ್ಕ ವಿಧಿಸುವ ಪದ್ಧತಿ ರದ್ದು ಮಾಡಬೇಕೆಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ನಾಗಸುಂದರ್, ಕುಮಾರ್, ಮಂಜುನಾಥ್, ಭಾಗ್ಯಮ್ಮ, ಸ್ವಾಮಿನಾಯಕ ಉಪಸ್ಥಿತರಿದ್ದರು.

ಮೈಸೂರು ಪಾಲಿಕೆ ಇ–ಖಾತಾ ವ್ಯವಸ್ಥೆಯಲ್ಲಿ ತಾಂತ್ರಿಕ ದೋಷ

ಇ-ಖಾತಾ ಆಗದೆ ಉಳಿದಿರುವ 8 ಸಾವಿರ ಅರ್ಜಿಗಳು

ಮೈಸೂರು, ಜು.3(ಜಿಎ)–ಇ–ಖಾತೆ ವ್ಯವಸ್ಥೆಯಲ್ಲಿ ತಾಂತ್ರಿಕ ದೋಷವಿದ್ದು, ಮೈಸೂರು ನಗರಪಾಲಿಕೆ ವ್ಯಾಪ್ತಿಯಲ್ಲಿ 9 ವಲಯ ಕಚೇರಿಯಲ್ಲಿ 8 ಸಾವಿರ ಅರ್ಜಿಗಳು ಇ–ಖಾತೆ ಆಗದೇ ಸಾರ್ವಜನಿಕರು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದ್ದು, ತಕ್ಷಣ ತಂತ್ರಾಂಶ ಸರಿಪಡಿಸುವಂತೆ ಎಂದು ಮಾಜಿ ಮೇಯರ್ ಶಿವಕುಮಾರ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಒಂದು ತಿಂಗಳಿನಿಂದ ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯ 9 ವಲಯ ಕಚೇರಿಯಲ್ಲಿ 8 ಸಾವಿರಕ್ಕೂ ಅಧಿಕ ಅರ್ಜಿಗಳು ಬಂದಿದ್ದು, ಇ–ಖಾತೆ ಆಗದೇ ಉಳಿದಿದೆ. ಮುಖ್ಯಮಂತ್ರಿಗಳ ತವರು ಜಿಲ್ಲೆಯಲ್ಲಿ ಮಾತ್ರವಲ್ಲ ರಾಜ್ಯದಾದ್ಯಂತ ಇದೇ ಸಮಸ್ಯೆ ತಾಂಡವವಾಡುತ್ತಿದ್ದು, ಇದರಿಂದ ಸಾರ್ವಜನಿಕರು ನಿತ್ಯವು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ ಎಂದು ದೂರಿದರು.

ಇ–ಖಾತೆ ತಂತ್ರಾಂಶವು ರಾಜ್ಯ ಸರ್ಕಾರ ಅವೈಜ್ಞಾನಿಕವಾಗಿ ಜಾರಿಗೆ ತಂದಿದೆ. ಯಾವುದೇ ಹೊಸ ತಂತ್ರಾಂಶ ರೂಪಿಸಬೇಕಾದರೇ ಮೊದಲು ಕೆಲವು ಸ್ಥಳೀಯ ಸಂಸ್ಥೆಗಳಲ್ಲಿ ಅದನ್ನು ಪ್ರಾಯೋಗೀಕವಾಗಿ ಅಳವಡಿಸಿ ಅದರ ಸಾಧಕ–ಬಾಧಕಗಳ ಬಗ್ಗೆ ಯೋಚಿಸಿ ನಂತರ ಅದನ್ನು ಜಾರಿಗೆ ತರಬೇಕು. ಆದರೆ, ಇ–ಖಾತಾ ತಂತ್ರಾಂಶವನ್ನು ಯಾವುದೇ ಪೂರ್ವ ತಯಾರಿ ಇಲ್ಲದೆ ಜಾರಿಗೆ ತಂದಿರುವುದು ಸರಿಯೇ ಎಂದು ಪ್ರಶ್ನಿಸಿದರು.

ಬೆಂಗಳೂರನ್ನು ಐಟಿ ಸಿಟಿ ಎಂದು ಹೇಳಿಕೊಳ್ಳುತ್ತೇವೆ. ಆದರೆ, ನಮ್ಮ ಸರ್ಕಾರದ ತಂತ್ರಾಂಶವೇ ಸರಿ ಇಲ್ಲ. ಮುಂಬಯಿ, ಜೋಯಿಡಾ, ದೆಹಲಿ ಮೊದಲಾದ ಕಡೆಗಳಲ್ಲಿ ಇ–ಖಾತೆ ನೀಡಿಕೆ ವ್ಯವಸ್ಥೆ ಜಾರಿಯಲ್ಲಿದೆ. ಅಲ್ಲಿ ಅತ್ಯಾಧುನಿಕ ತಂತ್ರಾಂಶ ಬಳಸಿರುವ ಕಾರಣ ಇ–ಖಾತಾ ಬೆರಳ ತುದಿಯಲ್ಲಿಯೇ ಸಿಗುತ್ತಿದೆ. ಆದರೆ ನಮ್ಮಲ್ಲಿನ ತಂತ್ರಾಂಶ ತೀರಾ ಹಿಂದುಳಿದದ್ದಾಗಿದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಮೈಸೂರು ನಗರದಲ್ಲಿಯೇ ಸುಮಾರು 2.5 ಲಕ್ಷ ಆಸ್ತಿಗಳಿವೆ. ಮಾಲೀಕರು ಇ–ಖಾತೆಗಾಗಿ ಅರ್ಜಿ ಸಲ್ಲಿಸಿದರೆ ಒಂದೊಂದು ಅರ್ಜಿ ಮಾಹಿತಿಯನ್ನು ಸಾಫ್ಟ್‌ವೇರ್‌ಗೆ ಭರ್ತಿ ಮಾಡಲು ಸುಮಾರು ಅರ್ಧ ದಿನ ಹಿಡಿಯುತ್ತಿದೆ. ಜೊತೆಗೆ ಅರ್ಜಿ ಸಲ್ಲಿಸಲೆಂದೇ ವೃದ್ಧರು, ಮಹಿಳೆಯರು ಪಾಲಿಕೆಯ 9 ವಲಯ ಕಚೇರಿಗಳ ಎದುರು ಗಂಟೆಗಟ್ಟಲೆ ಕಾದು ನಿಲ್ಲುವಂತಾಗಿದೆ. ಮುಖ್ಯಮಂತ್ರಿಗಳು ಕೂಡಲೇ ಈ ಸಮಸ್ಯೆ ಬಗ್ಗೆ ಗಮನಹರಿಸಬೇಕು ಎಂದು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾಜಿ ಉಪ ಮೇಯರ್ ರೂಪ, ಪಾಲಿಕೆ ಮಾಜಿ ಸದಸ್ಯ ಬಿ.ವಿ.ಮಂಜುನಾಥ್ ಉಪಸ್ಥಿತರಿದ್ದರು.



ಕೇಂದ್ರದ 105 ಕೋಟಿ ರಾಜ್ಯ ಸರ್ಕಾರದಿಂದ ಬಳಕೆ

ಕೇಂದ್ರದ 15ನೇ ಹಣಕಾಸು ಆಯೋಗದಿಂದ ಮೈಸೂರು ಮಹಾನಗರ ಪಾಲಿಕೆಗೆ 2023–24ರ ಸಾಲಿನಲ್ಲಿ 26 ಕೋಟಿ ರೂ. ಅನುದಾನ ಮೊದಲ ಹಂತದಲ್ಲಿ ಬಂದಿದೆ. ಆದರೆ, ಸ್ಥಳೀಯ ಸಂಸ್ಥೆಯಲ್ಲಿ ಪ್ರತಿನಿಧಿಗಳಿಲ್ಲದ ಕಾರಣ ರಾಜ್ಯ ಸರ್ಕಾರ ಅದನ್ನು ಬಳಸಿಕೊಂಡಿದೆ. ಹೀಗೆ ವಿವಿಧ ಹಂತದಲ್ಲಿ 105 ಕೋಟಿ ರೂ. ಹಣವನ್ನು ರಾಜ್ಯ ಸರ್ಕಾರ ಬಳಸಿಕೊಂಡು ರಾಜ್ಯದ ವಿವಿಧ ನಗರದಲ್ಲಿ ಪ್ರತಿನಿಧಿಗಳಿರುವ ಸ್ಥಳೀಯ ಸಂಸ್ಥೆಗಳಿಗೆ ಹಣ ನೀಡಿದ್ದೇವೆ ಎಂದು ವರದಿ ನೀಡಿದ್ದಾರೆ. ಆದರೆ ಎಲ್ಲಿಗೆ ಹಣ ಖರ್ಚು ಮಾಡಿದ್ದಾರೆ ಎಂಬುದರ ಬಗ್ಗೆ ಮಾಹಿತಿಯೇ ಇಲ್ಲ. ಆದರೆ, ಕಾಂಗ್ರೆಸ್ ಮುಖಂಡರು ಕೇಂದ್ರ ಸರ್ಕಾರ ಹಣ ವಾಪಸ್ ತೆಗೆದುಕೊಂಡಿದೆ ಎಂದು ಹೇಳಿಕೊಂಡು ತಿರುಗುತ್ತಿದ್ದಾರೆ.

-ಎಂ.ಯು.ಸುಬ್ಬಯ್ಯ, ಪಾಲಿಕೆ ಮಾಜಿ ಸದಸ್ಯ

ಎಂಬಿಬಿಎಸ್ ಶಿಕ್ಷಣ ಪಡೆಯುವ ಬಗ್ಗೆ ನಾಳೆ ಮೈಸೂರಲ್ಲಿ ಕಾರ್ಯಾಗಾರ

ಮೈಸೂರು, ಜು.3(ಜಿಎ)–ಬೆಂಗಳೂರಿನ ವಿಜಯನಗರದಲ್ಲಿರುವ ಮಿಡ್‌ವೇ ಅಬ್ರೋಡ್ ಎಜುಕೇಶನ್ ಸಲ್ಯೂಷನ್ಸ್ ಸಂಸ್ಥೆ ವತಿಯಿಂದ ಜು.5 ರಂದು ಮಧ್ಯಾಹ್ನ 3.30 ರಿಂದ ಸಂಜೆ 5.30 ರವರೆಗೆ ಮೈಸೂರಿನ ಇನ್‌ಸ್ಟಿಟ್ಯೂಟ್ ಆಫ್ ಎಂಜಿನಿಯರ್ಸ್ ಸಭಾಂಗಣದಲ್ಲಿ ವಿದೇಶದಲ್ಲಿ ಎಂಬಿಬಿಎಸ್ ಮೊದಲಾದ ಶಿಕ್ಷಣ ಪಡೆಯುವ ಬಗೆಗಿನ ಅನುಕೂಲತೆಗಳ ಮಾಹಿತಿ ಕಾರ್ಯಾಗಾರ ಆಯೋಜಿಸಲಾಗಿದೆ ಎಂದು ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕಿ ಡಾ.ಮೋನಿಕಾ ನಟರಾಜ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆ ತಾವು ದೇಶದಲ್ಲಿಯೇ ಎಂಬಿಬಿಎಸ್ ಮಾಡಲು ನಿರ್ಧರಿಸಿದಾಗ ಹಾಗೂ ವಿದೇಶದಲ್ಲಿ ವಿದ್ಯಾಭ್ಯಾಸ ಮಾಡಬೇಕೆಂದು ನಿರ್ಧರಿಸಿದಾಗ ಎದುರಾದ ತೊಡಕುಗಳನ್ನು ಗಮನದಲ್ಲಿರಿಸಿಕೊಂಡು ಹಾಗೂ ತಾವು ವಿದೇಶದಲ್ಲಿ ವಿದ್ಯಾಭ್ಯಾಸ ಮಾಡಲು ಸಾಧ್ಯವಾದುದು ಮತ್ತು ಅಲ್ಲಿನ ಅನುಕೂಲತೆಗಳನ್ನು ಗಮನದಲ್ಲಿರಿಸಿಕೊಂಡು ಈ ರೀತಿಯ ಕಾರ್ಯಾಗಾರ ಆಯೋಜಿಸುತ್ತಿದ್ದೇನೆ. ವೃತ್ತಿಯಲ್ಲಿ ತಾವು ವೈದ್ಯರಾಗಿ ಪ್ರತಿಷ್ಠಿತ ಆಸ್ಪತ್ರೆಯೊಂದರಲ್ಲಿ ಕೆಲಸ ಮಾಡುತ್ತಿದ್ದು, ಇತರರಿಗೆ ಅನುಕೂಲವಾಗಲೆಂದು ಈ ರೀತಿಯಲ್ಲಿ ನೆರವಾಗುತ್ತಿರುವುದಾಗಿ ತಿಳಿಸಿದರು. ಅಂದಿನ ಕಾರ್ಯಕ್ರಮದಲ್ಲಿ ವಿದೇಶಿ ವಿವಿಗಳ ಪ್ರೊಫೆಸರ್‌ಗಳು, ಅಧಿಕಾರಿಗಳು ಆಗಮಿಸಿ, ತಮ್ಮ ಕಾಲೇಜುಗಳಲ್ಲಿ ದೊರೆಯುವ ಸೌಲಭ್ಯ ಮಾಹಿತಿ ನೀಡಲಿದ್ದಾರೆ. ಇದು ಸಂಪೂರ್ಣ ಉಚಿತ ಕಾರ್ಯಕ್ರಮವಾಗಿದ್ದು, ಹೆಚ್ಚಿನ ಮಾಹಿತಿಗೆ ದೂ. 919019 815165ನ್ನು ಸಂಪರ್ಕಿಸಿ ಎಂದರು. ಸುದ್ದಿಗೋಷ್ಠಿಯಲ್ಲಿ ಸಂಸ್ಥೆಯ ವೆಂಕಟೇಶ್, ನಟರಾಜ್ ಉಪಸ್ಥಿತರಿದ್ದರು.

ಸಕ್ರಿಯವಾಗಿ ಕಾರ್ಯನಿರ್ವಹಿಸದ ಎಂಟು ರಾಜಕೀಯ ಪಕ್ಷಗಳಿಗೆ ಚುನಾವಣಾ ಆಯೋಗ ನೋಟಿಸ್

ಬೆಂಗಳೂರು, ಜು.3– ಬೆಂಗಳೂರು ನಗರ ಜಿಲ್ಲೆಯಲ್ಲಿ ಸಕ್ರಿಯವಾಗಿ ಕಾರ್ಯನಿರ್ವಹಿಸದ ಎಂಟು ರಾಜಕೀಯ ಪಕ್ಷಗಳನ್ನು ನೋಂದಣಿ ಪಟ್ಟಿಯಿಂದ ತೆಗೆದುಹಾಕಲು ಭಾರತ ಚುನಾವಣಾ ಆಯೋಗ ನಿರ್ಧರಿಸಿದೆ.

ಈ ಸಂಬಂಧ ಜುಲೈ 18 ರಂದು ಕರ್ನಾಟಕದ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ವಿಚಾರಣೆ ನಡೆಯಲಿದೆ ಎಂದು ಬೆಂಗಳೂರು ನಗರದ ಹೆಚ್ಚುವರಿ ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಉಪ ಆಯುಕ್ತ ಜಗದೀಶ್ ಜಿ ತಿಳಿಸಿದ್ದಾರೆ.

1951 ರ ಜನತಾ ಪ್ರಾತಿನಿಧ್ಯ ಕಾಯ್ದೆಯ ಸೆಕ್ಷನ್ 29 (A) ಅಡಿಯಲ್ಲಿ ನೋಂದಾಯಿತ ರಾಜಕೀಯ ಪಕ್ಷಗಳಾದ ನಮ್ಮ ಕಾಂಗ್ರೆಸ್, ಪ್ರಜಾ ರೈತ ರಾಜ್ಯ ಪಕ್ಷ ಕಲ್ಯಾಣ ಕ್ರಾಂತಿ ಪಕ್ಷ, ಭಾರತೀಯ ಡಾ. ಬಿ.ಆರ್. ಅಂಬೇಡ್ಕರ್ ಜನತಾ ಪಕ್ಷ, ರಕ್ಷಕ ಸೇನೆ, ಮಹಿಳಾ ಪ್ರಧಾನ ಪಕ್ಷ, ಅಂಬೇಡ್ಕರ್ ಜನತಾ ಪಕ್ಷ ಮತ್ತು ಕರ್ನಾಟಕ ಪ್ರಜಾ ವಿಕಾಸ ಪಕ್ಷಗಳಿಗೆ ಚುನಾವಣಾ ಆಯೋಗ ಶೋಕಾಸ್ ನೋಟಿಸ್ ನೀಡಿದೆ ಎಂದು ತಿಳಿಸಿದೆ.

ಈ ಪಕ್ಷಗಳು ಸಕ್ರಿಯವಾಗಿಲ್ಲದ ಕಾರಣ ಮತ್ತು ಅವುಗಳ ವಿಳಾಸಗಳನ್ನು ಪತ್ತೆಹಚ್ಚಲು ಸಾಧ್ಯವಾಗದ ಕಾರಣ, ಕಳೆದ ಆರು ವರ್ಷಗಳಿಂದ ಯಾವುದೇ ಲೋಕಸಭೆ, ವಿಧಾನಸಭೆ ಅಥವಾ ಉಪಚುನಾವಣೆಗಳಲ್ಲಿ ಸ್ಪರ್ಧಿಸಿಲ್ಲ ಎಂಬ ಕಾರಣಕ್ಕೆ, ಅವುಗಳನ್ನು ಪಟ್ಟಿಯಿಂದ ತೆಗೆದುಹಾಕಲು ನಿರ್ಧರಿಸಲಾಗಿದೆ.

ಅದಕ್ಕೂ ಮೊದಲು ಈ ರಾಜಕೀಯ ಪಕ್ಷಗಳಿಗೆ ತಮ್ಮ ಹೇಳಿಕೆಗಳನ್ನು ದಾಖಲಿಸಲು ಅವಕಾಶವನ್ನು ನೀಡಲಾಗಿದೆ. ಪಕ್ಷದ ನಾಯಕರು, ಅಧ್ಯಕ್ಷರು ಮತ್ತು ಪ್ರಧಾನ ಕಾರ್ಯದರ್ಶಿಗಳು ಜುಲೈ 18, 2025 ರಂದು ವಿಚಾರಣೆಗೆ ಪಕ್ಷದ ಅಧ್ಯಕ್ಷರು ಮತ್ತು ಪ್ರಧಾನ ಕಾರ್ಯದರ್ಶಿಗಳ ಪ್ರಮಾಣಪತ್ರ, ಇತರ ದಾಖಲೆ ಹಾಗೂ ಅರ್ಜಿಯೊಂದಿಗೆ ಹಾಜರಿರಬೇಕು ಎಂದು ತಿಳಿಸಿದೆ. ನಿಗದಿತ ಸಮಯದೊಳಗೆ ಪಕ್ಷದಿಂದ ಯಾವುದೇ ಲಿಖಿತ ಅರ್ಜಿಯನ್ನು ಸ್ವೀಕರಿಸದಿದ್ದರೆ, ಪಕ್ಷದಿಂದ ಯಾವುದೇ ಹೇಳಿಕೆ ಬಂದಿಲ್ಲ ಎಂದು ಪರಿಗಣಿಸಲಾಗುತ್ತದೆ. ಪಕ್ಷವನ್ನು ಸಂಪರ್ಕಿಸದೆಯೇ ECI ಮುಂದಿನ ನಿರ್ಧಾರವನ್ನು ತೆಗೆದುಕೊಳ್ಳುತ್ತದೆ ಎಂದು ADEO ಹೇಳಿದರು.

ಶಾಲೆ ಕಟ್ಟುವವರ ಮರೆತು ದೇವಸ್ಥಾನ ಕಟ್ಟುವರಿಗೆ ಜನ ಮತ ನೀಡುತ್ತಿದ್ದಾರೆ

ನಟ ಸುರೇಶ್ ಅಸಮಾಧಾನ

ಮೈಸೂರು, ಜು3(ಬಿಎಲ್‌ಯು)– ಶಾಲೆ ಕಟ್ಟುವವರನ್ನು ಮರೆತು ದೇವಸ್ಥಾನ ಕಟ್ಟುವವರಿಗೆ ಜನರು ಮತ ನೀಡುತ್ತಿದ್ದು, ಈ ಮೂಲಕ ಸಮಾಜ ಅವನತಿಯತ್ತ ಸಾಗುತ್ತಿದೆ ಎಂದು ಚಲನಚಿತ್ರ ನಟರೂ ಆದ ನಿರ್ದೇಶಕ ಬಿ.ಸುರೇಶ್ ಅಸಮಾಧಾನ ವ್ಯಕ್ತಪಡಿಸಿದರು.

ನಗರದ ಚಾಮರಾಜಪುರಂನ ರವಿವರ್ಮ ಚಿತ್ರಕಲಾ ಶಾಲೆಯಲ್ಲಿ ಇಂದು ನಡೆದ ಸಿನಿಮೊಟೋಗ್ರಫಿ ಮತ್ತು ಫೋಟೋಗ್ರಫಿ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮತದಾರರಲ್ಲಿ ವೈಚಾರಿಕ ಚಿಂತನೆಗಳಿದ್ದರೆ ಮತ ಹಾಕುವ ಸಂದರ್ಭದಲ್ಲಿ ಯಾವುದು ತಪ್ಪು, ಯಾವುದು ಸರಿ ಎಂದು ನಿರ್ಧರಿಸಲು ಸಹಾಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ರಾಜಧಾನಿ ಬೆಂಗಳೂರಿನ ದೇವನಹಳ್ಳಿಯಲ್ಲಿ ರೈತರ ಜಮೀನು ಸ್ವಾಧೀನ ಮಾಡಿಕೊಂಡು ಅಲ್ಲಿ ಕೈಗಾರಿಕೆ ನಿರ್ಮಾಣ ಮಾಡಲು ರಾಜ್ಯ ಸರ್ಕಾರ ಮುಂದಾಗಿದೆ. ರೈತನ ಹಿತಾಸಕ್ತಿ ಬಗ್ಗೆ ಸರ್ಕಾರ ಗಮನಹರಿಸದೆ ಕಾರ್ಪೊರೇಟ್ ವಲಯದ ಲಾಭದ ಬಗ್ಗೆ ಗಮನ ಹರಿಸಿದೆ. ಇಂತಹ ಲಾಭದ ಆಲೋಚನೆಯಿಂದ ಸಮಾಜದಲ್ಲಿ ನೆಮ್ಮದಿ ಕಾಣಲು ಸಾಧ್ಯವಿಲ್ಲ ಎಂದು ಸುರೇಶ್ ಹೇಳಿದರು.

ಲಾಭವನ್ನೆ ಮೂಲ ಉದ್ದೇಶವಾಗಿಟ್ಟುಕೊಂಡು ಕಾರ್ಪೊರೇಟ್ ಕಂಪನಿಗಳಿಗೆ ಅನುಕೂಲವಾಗುವ ಸಮಾಜ ಕಟ್ಟಬಾರದು. ಜನರ ನೆಮ್ಮದಿಯ ಬಗ್ಗೆ ಸರ್ಕಾರ ಆಲೋಚನೆ ಮಾಡಿದರೆ ಜನರ ಮುಖದಲ್ಲಿ ಮಂದಹಾಸ ಮೂಡುತ್ತದೆ. ಇದು ಸರ್ಕಾರದ ಜನಪರ ಆಡಳಿತಕ್ಕೆ ಹಿಡಿದ ಕೈಗನ್ನಡಿಯಾಗುತ್ತದೆ ಎಂದರು.

ಆಧುನಿಕತೆಯಲ್ಲಿ ಬಹಳಷ್ಟು ವಿಚಾರಗಳು ಮರೆಯಾಗುತ್ತದೆ. ಹಾಗೆಂದ ಮಾತ್ರಕ್ಕೆ ಔದ್ಯಮೀಕರಣ ಬೇಡವೇ ಬೇಡ ಎಂಬ ತೀರ್ಮಾನಕ್ಕೆ ಬರುವುದು ಬೇಡ. ಔದ್ಯಮೀಕರಣದಲ್ಲಿ ಗುಣಮಟ್ಟದ ಅಭಿವೃದ್ಧಿ ಕಾರ್ಯಗಳು ನಡೆಯಬೇಕು. ಮೈಸೂರು ಮಹಾರಾಜರ ಕಾಲದಲ್ಲಿ ನಿರ್ಮಾಣವಾದ ರಸ್ತೆಗಳು ಇನ್ನು ಕೂಡ ಗುಣಮಟ್ಟದಲ್ಲಿ ಇದೆ. ಆದರೆ ಈಗ ನೂತನವಾಗಿ ನಿರ್ಮಾಣಗೊಂಡ ರಸ್ತೆಗಳು ಆಗಾಗ್ಗೆ ಹಾಳಾಗುತ್ತಿವೆ. ಈ ಹಿನ್ನೆಲೆ ಯಾವುದೇ ಅಭಿವೃದ್ಧಿಯಾದರೂ ಅದರಲ್ಲಿ ಗುಣಮಟ್ಟ ಇರಬೇಕು ಎಂದು ತಿಳಿಸಿದರು.

ಕಲಾವಿದರು ಜನರ ಬಡತನ, ಆರ್ಥಿಕ ಜಂಜಾಟ, ಸಾಮಾಜಿಕ ಸಮಸ್ಯೆಗಳನ್ನು ಬಿಂಬಿಸುವ ಚಿತ್ರಗಳನ್ನು ಬಿಡಿಸಬೇಕು ಎಂದು ಸಲಹೆ ನೀಡಿದ ಸುರೇಶ್ ಅವರು, ಪಾನಿಪುರಿ ಮಾರಾಟ ಮಾಡುವವನು ಮುಂದಿದ್ದರೆ, ಅದರ ಮುಂದೆ ಅರಮನೆಯ ಚಿತ್ರವನ್ನು ಬಿಡಿಸಬೇಕು. ಈ ಮೂಲಕ ಅರಮನೆಯ ಅರಸೊತ್ತಿಗೆ ಒಂದೆಡೆಯಾದರೆ, ಆ ದಿನದ ದುಡಿಮೆಯಲ್ಲಿ ಬದುಕು ಸವೆಸುವ ಪಾನಿಪುರಿ ಮಾರಾಟ ಮಾಡುವ ವ್ಯಾಪಾರಸ್ಥನ ಬದುಕಿನ ವ್ಯತ್ಯಾಸವನ್ನು ಚಿತ್ರದ ಮೂಲಕ ತಿಳಿಸಬೇಕು ಎಂದು ಹೇಳಿದರು.

ಇಂದಿಗೂ ಕೂಡ ದೇಶದ ಶೇಕಡ 60 ರಷ್ಟು ಜನರ ದಿನದ ಸಂಪಾದನೆ 400 ರೂಪಾಯಿ ಮೀರುತ್ತಿಲ್ಲ. ಉದಾಹರಣೆಗೆ ಕಲಾವಿದರಾದ ನೀವು ಒಳ್ಳೆಯ ಚಿತ್ರ ಬರೆದರೂ ಖರೀದಿ ಮಾಡಲು ಯಾರೂ ಮುಂದೆ ಬರುವುದಿಲ್ಲ. ನಿಮ್ಮನ್ನೆ ಉದಾಹರಣೆಯಾಗಿಟ್ಟುಕೊಂಡು ಬದುಕಿನ ವೈರುಧ್ಯದ ಸವಾಲುಗಳನ್ನು ಚಿತ್ರದ ಮೂಲಕ ಅನಾವರಣ ಮಾಡಬೇಕು ಎಂದರು.

ಯಾವುದೇ ಚಿತ್ರವಿದ್ದರೂ ಒಳಾರ್ಥದಲ್ಲಿ ನಾನಾ ವಿಚಾರಗಳನ್ನು ಸಾರಿ ಹೇಳಬೇಕು. ಶ್ರೀಮಂತಿಕೆ ಮತ್ತು ಐಷರಾಮಿ ಬದುಕನ್ನು ಮಾತ್ರ ಬಿಂಬಿಸಿದರೆ ಅದು ಕೆಲವರಿಗೆ ಮಾತ್ರ ಸೀಮಿತವಾಗಿರುತ್ತದೆ. ಕಾಲದ ಗರ್ಭದಲ್ಲಿ ಉದುಗಿರುವ ಬಹಳಷ್ಟು ವಿಚಾರಗಳನ್ನು ಚಿತ್ರದ ಮೂಲಕ ವಿವರಿಸಿ ಹೇಳಬೇಕು ಎಂದು ಕಲಾವಿದರಿಗೆ ಸಲಹೆ ನೀಡಿದರು.

ನಾನು ಉಪನ್ಯಾಸ ನೀಡಿದ ಸಂದರ್ಭದಲ್ಲಿ ಸಂಶಯಗಳಿದ್ದರೆ ಪ್ರಶ್ನೆ ಕೇಳಬೇಕು. ಪ್ರಶ್ನೆ ಕೇಳಿದರೆ ಬದುಕುತ್ತೀರಾ, ಪ್ರಶ್ನೆಗಳಿಗೆ ಉತ್ತರ ಕಂಡುಕೊಳ್ಳುವುದು ಕಲಾವಿದರ ಬಾಳಿಗೆ ದೊಡ್ಡ ಬೆಳಕಾಗುತ್ತದೆ. ಅದು ಬಿಟ್ಟು ಸಂಶಯಗಳಿದ್ದರೂ ಪ್ರಶ್ನೆ ಕೇಳದಿದ್ದರೆ ಹೂವಿನಂತೆ ಮುದುಡಿ ಅಲ್ಲಿ ಕೂತು ಬಿಡುತ್ತೀರಾ ಎಂದು ಸುರೇಶ್ ಎಚ್ಚರಿಸಿದರು.

ನೃತ್ಯ ಕಲಾವಿದೆ ಆರ್.ರಶ್ಮಿ, ಹಿರಿಯ ಛಾಯಾಚಿತ್ರ ಕಲಾವಿದ ಎಂ.ಆರ್.ಮಂಜುನಾಥ್, ರವಿವರ್ಮ ಚಿತ್ರಕಲಾ ಶಾಲೆಯ ಪ್ರಾಚಾರ್ಯ ಶಿವಕುಮಾರ್ ಕೆಸರಮಡು ವೇದಿಕೆಯಲ್ಲಿ ಉಪಸ್ಥಿತರಿದ್ದರು.



ಮೈಸೂರಿನ ಚಾಮರಾಜಪುರಂನ ರವಿವರ್ಮ ಚಿತ್ರಕಲಾ ಶಾಲೆಯಲ್ಲಿ ಗುರುವಾರ ಚಲನಚಿತ್ರ ನಟರೂ ಆದ ನಿರ್ದೇಶಕ ಬಿ.ಸುರೇಶ್ ಅವರು ಸಿನಿಮೊಟೋಗ್ರಫಿ ಮತ್ತು ಫೋಟೋಗ್ರಫಿ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಇಂದು ಉಸ್ತುವಾರಿ ಸಚಿವರಿಂದ 'ಜನತಾ ದರ್ಶನ'

ಮೈಸೂರು,ಜು.3– ಜಿಲ್ಲಾ ಮಟ್ಟದಲ್ಲಿ ಸಾರ್ವಜನಿಕರ ಅಹವಾಲುಗಳಿಗೆ ಸೂಕ್ತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಪ್ರತಿ ಜಿಲ್ಲೆಯಲ್ಲಿಯೂ ಪ್ರತಿ ತಿಂಗಳು ಜನತಾ ದರ್ಶನ ಕಾರ್ಯಕ್ರಮ ಹಮ್ಮಿಕೊಂಡು ಸಾರ್ವಜನಿಕ ಸಮಸ್ಯೆಗಳಿಗೆ ಪರಿಹಾರೋಪಾಯಗಳನ್ನು ಒದಗಿಸುವ ಸಂಬಂಧ ಜು.4 ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯತ್ ಆವರಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್ ಸಿ ಮಹದೇವಪ್ಪ ನೇತೃತ್ವದಲ್ಲಿ ಜನತಾ ದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.



ಜನತಾ ದರ್ಶನದಲ್ಲಿ ಭಾಗವಹಿಸಿ ಸಾರ್ವಜನಿಕರು ತಮ್ಮ ಅಹವಾಲು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಸಾರ್ವಜನಿಕರು ಈ ಕಾರ್ಯಕ್ರಮವನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಜಿ. ಲಕ್ಷ್ಮಿಕಾಂತ್ ರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಿಗ್ನಲ್ ಲೈಟ್‌ನ ಹಸಿರು ದೀಪ ಬೆಳಗದೇ ಸವಾರರಿಗೆ ಕಿರಿಕಿರಿ

ಮುಂದೆ ಸಾಗಲು ಸರದಿ ಬಂದರೂ ಕೆಲಕಾಲ ನಿಂತಲ್ಲೇ ನಿಲ್ಲುವ ವಾಹನ ಸವಾರರು

ಮೈಸೂರು, ಜು.3(ಪಿಎಂ)– ವಾಹನ ಚಲಾಯಿಸಿಕೊಂಡು ಮುಂದೆ ಸಾಗಲು ಸರದಿ ಬಂದರೂ ಸವಾರರು ಕೆಲಕಾಲ ನಿಂತಲ್ಲೇ ನಿಲ್ಲುವ ಸನ್ನಿವೇಶ ನಿರ್ಮಾಣವಾಗಿದೆ. ಟ್ರಾಫಿಕ್ ಸಿಗ್ನಲ್ ಲೈಟ್‌ನ ಹಸಿರು ದೀಪ ಬೆಳಗದ ಹಿನ್ನೆಲೆಯಲ್ಲಿ ಇಂತಹ ಗೊಂದಲಕ್ಕೆ ವಾಹನ ಸವಾರರು ಸಿಲುಕುವಂತಾಗಿದೆ.

ಮಾನಸ ಗಂಗೋತ್ರಿ ಕ್ಯಾಂಪಸ್ ರಸ್ತೆ ಹಾಗೂ ಹುಣಸೂರು ರಸ್ತೆಯ ಜಂಕ್ಷನ್ ಆದ ಎಸ್.ವೆಂಕಟರಮಣಯ್ಯ ವೃತ್ತ (ಪಡುವಾರಹಳ್ಳಿ ವೃತ್ತ)ದಲ್ಲಿ ಇಂತಹ ಪರಿಸ್ಥಿತಿ ತಲೆದೋರಿ ವಾರದ ಮೇಲಾದರೂ ಸರಿಪಡಿಸುವ ಗೋಜಿಗೆ ಹೋದಂತೆ ಕಾಣುತ್ತಿಲ್ಲ. ಹೀಗಾಗಿ ವಾಹನ ಸವಾರರು ಕಿರಿಕಿರಿ ಅನುಭವಿಸುವಂತಾಗಿದೆ.

ಮೈಸೂರಿನ ಬೋಗಾದಿ ರಸ್ತೆಯ ಪಿ.ಆರ್.ತಿಪ್ಪೇಸ್ವಾಮಿ ವೃತ್ತದ ಮೂಲಕ ಗಂಗೋತ್ರಿ ಕ್ಯಾಂಪಸ್ ರಸ್ತೆಯಲ್ಲಿ (ವಿವಿಯ ಬಯಲು ರಂಗಮಂದಿರವಿರುವ ರಸ್ತೆ) ಸಾಗಿ ಪಡುವಾರಹಳ್ಳಿ, ಮಹಾರಾಣಿ ವಾಣಿಜ್ಯ ಕಾಲೇಜು, ವಾಲ್ಮೀಕಿ ರಸ್ತೆ ಸೇರಿದಂತೆ ನಗರದತ್ತ ಪ್ರವೇಶ ಪಡೆಯಲು ಇದೇ ವೃತ್ತದ ಮೂಲಕ ಹಾದು ಹೋಗಬೇಕು. ಆದರೆ ಈ ಮಾರ್ಗದಿಂದ ಬರುವವರು ಇದೀಗ ನಿತ್ಯ ಕಿರಿಕಿರಿ ಅನುಭವಿಸುವಂತಾಗಿದೆ.

ಕಾರಣ ಈ ಮಾರ್ಗದಿಂದ ಮುಂದೆ ಸಾಗಲು ಬರುವವರಿಗೆ ಸಿಗ್ನಲ್ ಲೈಟ್‌ನ ಹಸಿರು ದೀಪ ಬೆಳಗದೇ ಸಮಸ್ಯೆ ಆಗಿದೆ. ಪಡುವಾರಹಳ್ಳಿಯ 6ನೇ ಮುಖ್ಯ ರಸ್ತೆಯಲ್ಲಿ ಈ ದಿಕ್ಕಿನಿಂದ ಮುಂದೆ ಸಾಗುವವರಿಗಾಗಿ ಅಳವಡಿಸಿರುವ ಸಿಗ್ನಲ್ ಲೈಟ್‌ನಲ್ಲಿ ಹಸಿರು ದೀಪ ಬೆಳಗುವುದು ನಿಂತು ದಿನಗಳು ಕಳೆಯುತ್ತಿದ್ದರೂ ಸರಿಪಡಿಸಲು ಮುಂದಾಗಿಲ್ಲ. ವೃತ್ತದಲ್ಲಿ ನಾಲ್ಕು ದಿಕ್ಕಿಗೂ ರಸ್ತೆಗಳಿದ್ದು, ಉಳಿದ ಮೂರು ದಿಕ್ಕಿನ ಸಿಗ್ನಲ್ ಲೈಟ್‌ಗಳು ಕಾರ್ಯನಿರ್ವಹಿಸುತ್ತಿವೆ. ಆದರೆ ಸದರಿ ದಿಕ್ಕಿನ ಸಿಗ್ನಲ್ ಲೈಟ್‌ನ ಈ ಸಮಸ್ಯೆಯಿಂದ ಸವಾರರು ಪರದಾಡುವಂತಾಗಿದೆ.



ಮೈಸೂರಿನ ಹುಣಸೂರು ರಸ್ತೆಯ ಪಡುವಾರಹಳ್ಳಿಯ ವೃತ್ತದಲ್ಲಿ ಒಂದು ದಿಕ್ಕಿನ ಸಿಗ್ನಲ್ ಲೈಟ್‌ನ ಹಸಿರು ದೀಪ ಕೆಟ್ಟಿದ್ದು, ಕೇವಲ ಕೆಂಪು ದೀಪ ಮಾತ್ರ ಬೆಳಗುತ್ತದೆ. ಮುಂದೆ ಸಾಗಲು ಸಿದ್ಧರಿರುವಂತೆ ಸೂಚಿಸುವ ಹಳದಿ ದೀಪ ಸಹ ಇದರಲ್ಲಿ ಬೆಳಗುವುದಿಲ್ಲ. ಹಳದಿ ದೀಪದ ಇಂತಹ ಸಮಸ್ಯೆ ಬಹುಶಃ ನಗರದ ಬಹುತೇಕ ಸಿಗ್ನಲ್ ಲೈಟ್‌ಗಳಲ್ಲೂ ಇದೆ.

ಮುಂದೆ ಸಾಗುವ ಸರದಿ ಬಂದರೂ ಗ್ರೀನ್ ಲೈಟ್ ಬೆಳಗದ ಕಾರಣ ಕೆಲಕಾಲ ವಾಹನ ಸವಾರರು ನಿಂತಲ್ಲೇ ನಿಲ್ಲುವುದು ನಿತ್ಯ ಸಾಮಾನ್ಯವಾಗಿದೆ. ಪ್ರತಿನಿತ್ಯ ಈ ದಿಕ್ಕಿನಲ್ಲಿ ಓಡಾಡುವ ಸವಾರರಲ್ಲಿ ಹಲವರು ಕೆಂಪು ದೀಪ ಆರಿದ ನಂತರ ಮುಂದೆ ಸಾಗುತ್ತಿದ್ದರೆ, ಅಪರೂಪಕ್ಕೆ ಇಲ್ಲಿ ಸಾಗುವ ವಾಹನ ಸವಾರರಲ್ಲಿ ಬಹುತೇಕರು ಹಸಿರು ದೀಪ ಬೆಳಗದ ಹಿನ್ನೆಲೆಯಲ್ಲಿ ಗೊಂದಲದಲ್ಲಿ ಅಲ್ಲೇ ನಿಲ್ಲುವಂತಾಗಿದೆ.

ಮೈಸೂರು ವಿವಿ, ಮುಕ್ತ ವಿವಿ ವಿದ್ಯಾರ್ಥಿಗಳು, ಸಿಬ್ಬಂದಿ ಸೇರಿದಂತೆ ಮೊದಲಾದವರು ಈ ವೃತ್ತದ ಮೂಲಕ ಓಡಾಡುತ್ತಾರೆ. ಮಡಿಕೇರಿ, ಹಾಸನದ ಬಸ್‌ಗಳು ಸಹ ಇದೇ ವೃತ್ತದ ಮೂಲಕ ಓಡಾಡುತ್ತವೆ. ಒಟ್ಟಾರೆ ಇದೊಂದು ನಿತ್ಯ ವಾಹನ ದಟ್ಟಣೆ ಇರುವ ವೃತ್ತವಾಗಿದೆ. ಆದರೆ ಈ ವೃತ್ತದಲ್ಲಿನ ಸದರಿಯ ಒಂದು ದಿಕ್ಕಿನ ಸಿಗ್ನಲ್ ಲೈಟ್‌ನ ಹಸಿರು ದೀಪ ಕೆಟ್ಟು ಹೋಗಿರುವುದು ಸುಗಮ ಸಂಚಾರಕ್ಕೆ ಅಡ್ಡಿಯಾಗಿದೆ.

ಸಿಗ್ನಲ್ ಲೈಟ್ ಕೆಟ್ಟಿರುವುದು ತಡವಾಗಿ ಅರಿವಾಗಿ ಇನ್ನೇನು ಕೆಂಪು ದೀಪ ಬೆಳಗುವ ವೇಳೆಗೆ ಹಲವರು ಮುಂದೆ ಸಾಗಲು ಹೋಗುವುದು ಆಗಾಗ್ಗೆ ಕಂಡು ಬರುತ್ತಿದ್ದು, ಅದೃಷ್ಟವಶಾತ್ ಈವರೆಗೆ ಯಾವುದೇ ಅಪಘಾತ ಸಂಭವಿಸಿಲ್ಲ. ಆದರೆ ಈ ಸಮಸ್ಯೆ ಸರಿಪಡಿಸದೇ ಹೋದಲ್ಲಿ ಸವಾರರು ಗೊಂದಲದಲ್ಲಿ ಅಪಾಯಕ್ಕೆ ಸಿಲುಕುವುದು ಗ್ಯಾರಂಟಿಯಾಗಿದೆ ಇನ್ನಾದರೂ ಮೈಸೂರು ಸಂಚಾರ ಪೊಲೀಸರು ಕೆಟ್ಟಿರುವ ಈ ಸಿಗ್ನಲ್ ಲೈಟ್‌ನ ಹಸಿರು ದೀಪ ಸರಿಪಡಿಸುವ ಮೂಲಕ ಅನಾಹುತ ನಡೆಯದಂತೆ ಎಚ್ಚರ ವಹಿಸಬೇಕಿದೆ.

ಜು.8ರಂದು ಉಚಿತ ಆರೋಗ್ಯ ತಪಾಸಣಾ ಶಿಬಿರ

ಮೈಸೂರು, ಜು.3– ಎನ್‌ಜೆಎಸ್ ಚಾರಿಟೆಬಲ್ ಟ್ರಸ್ಟ್ ಮತ್ತು ಮೈಸೂರು ವೀರಶೈವ ಸಜ್ಜನ ಸಂಘದ ಸಂಯುಕ್ತಾಶ್ರಯದಲ್ಲಿ ಜು. 8 ರಂದು ಬೆಳಗ್ಗೆ 9.30 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಮಂಡಿ ಮೊಹಲ್ಲಾ, ಕಬೀರ್ ರಸ್ತೆ ಮಂಡಿ ಪೊಲೀಸ್ ಸ್ಟೇಷನ್ ಹತ್ತಿರವಿರುವ ಕಂಠಿ ಮಲ್ಲಣ್ಣನವರ ಕಲ್ಯಾಣ ಮಂದಿರದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಮಾಹಿತಿಗೆ ಹೆಚ್.ಎಸ್. ಬಸವರಾಜ್, ಮೊ. 94487 53597, ಎಂ.ಎನ್. ಜೈಪ್ರಕಾಶ್, ಮೊ. 99161 55453, 94487 38657 ಸಂಪರ್ಕಿಸಬಹುದು.



ಸೋಸಲೆ ವ್ಯಾಸರಾಜ ಮಠದ ಪೀಠಾಧಿಪತಿಗಳ ಪೀಠಾರೋಹಣ ವಾರ್ಷಿಕೋತ್ಸವ

ಮೈಸೂರು, ಜು.3– ಶ್ರೀಮನ್ ಮಧ್ವಾಚಾರ್ಯ ಮೂಲಮಹಾ ಸಂಸ್ಥಾನ ಸೋಸಲೆ ಶ್ರೀ ವ್ಯಾಸರಾಜರ ಮಠದ ಪೀಠಾಧಿಪತಿ ಶ್ರೀ ವಿದ್ಯಾಶ್ರೀಶ ತೀರ್ಥ ಸ್ವಾಮೀಜಿ 9ನೇ ಪೀಠಾರೋಹಣ ವಾರ್ಷಿಕೋತ್ಸವ ಹಾಗೂ ಶ್ರೀ ವ್ಯಾಸತೀರ್ಥ ವಿದ್ಯಾಪೀಠದ 10ನೇ ವಾರ್ಷಿಕ ಮಹೋತ್ಸವ ಸಮಾರಂಭವು ಶುಕ್ರವಾರ(ಜು.4) ನೆರವೇರಲಿದೆ.



ನಗರದ ಕೃಷ್ಣಮೂರ್ತಿಪುರಂನ ಶ್ರೀ ವ್ಯಾಸತೀರ್ಥ ವಿದ್ಯಾಪೀಠದಲ್ಲಿ ಸಂಜೆ 6 ಗಂಟೆಗೆ ಹಮ್ಮಿಕೊಂಡಿರುವ ಕಾರ್ಯಕ್ರಮದಲ್ಲಿ ಮುಳಬಾಗಿಲು ಶ್ರೀಪಾದರಾಜ ಮಠದ ಶ್ರೀ ಸುಜಯನಿಧಿ ತೀರ್ಥ ಸ್ವಾಮೀಜಿ, ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ನಿವೃತ್ತ ಐಎಎಸ್ ಅಧಿಕಾರಿಗಳಾದ ಕೆಜಯರಾಜ್, ಸುರಂಜನ, ಜಿಲ್ಲಾಧಿಕಾರಿ ಲಕ್ಷ್ಮಿಕಾಂತರೆಡ್ಡಿ, ಪದ್ಮಶ್ರೀ ಪುರಸ್ಕೃತ ಹಿರಿಯ ವಿಜ್ಞಾನಿ ಪ್ರಹ್ಲಾದ ರಾಮರಾವ್, ಹಿರಿಯ ಉದ್ಯಮಿಗಳಾದ ಡಾ.ಎಚ್.ಎಸ್.ರಾಘವೇಂದ್ರ ರಾವ್ ಮತ್ತು ಹೆಚ್.ಎಸ್.ಹರಿ ಪ್ರಸಾದ್ ಮತ್ತಿತರರು ಭಾಗವಹಿಸಲಿದ್ದಾರೆ.

ಸೋಸಲೆ ಶ್ರೀ ವಿದ್ಯಾಶ್ರೀಶ ತೀರ್ಥ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದು, ಹಿರಿಯ ವಿದ್ವಾಂಸರಾದ ಡಾ. ಆನಂದತೀರ್ಥ ಆಚಾರ್ಯ ನಾಗಸಂಪಿಗೆ ಹಾಗೂ ವಿದ್ವಾನ್ ಬ್ರಹ್ಮಣ್ಯಾಚಾರ್ಯ ಅವರು ಅಭಿನಂದನಾ ಭಾಷಣ ಮಾಡಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ತಪ್ಪು ಆದೇಶ; ಮಾಹಿತಿ ಆಯುಕ್ತ ರಾಜಶೇಖರ್ ವಿರುದ್ಧ ರಾಜ್ಯಪಾಲರಿಗೆ ದೂರು

ಮೈಸೂರು, ಜು.3– ಪ್ರಕರಣವೊಂದಕ್ಕೆ ಸಂಬಂಧಿಸಿದಂತೆ ತಪ್ಪು ಆದೇಶ ನೀಡಿರುವ ರಾಜ್ಯ ಮಾಹಿತಿ ಹಕ್ಕು ಆಯುಕ್ತ ಎಸ್.ರಾಜಶೇಖರ್ ಅವರನ್ನು ವಜಾಗೊಳಿಸಬೇಕೆಂದು ಮೈಸೂರಿನ ವಿಜಯನಗರ 2ನೇ ಹಂತದ ನಿವಾಸಿ ಆರ್.ಎನ್.ಸತ್ಯನಾರಾಯಣ ಅವರು ರಾಜ್ಯಪಾಲರಿಗೆ ಪತ್ರ ಬರೆದಿದ್ದಾರೆ.

ಮೈಸೂರಿನ ಜಿಲ್ಲಾ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಾಹನ ಚಾಲಕನಾಗಿದ್ದ ಸಯ್ಯದ್ ಮುಜೀಬ್ ಎಸ್‌ಎಸ್‌ಎಲ್‌ಸಿ ನಕಲಿ ಅಂಕಪಟ್ಟಿ ಸಲ್ಲಿಸಿ ದ್ವಿತೀಯ ದರ್ಜೆ ಸಹಾಯಕ ಹುದ್ದೆ ಗಿಟ್ಟಿಸಿಕೊಂಡಿದ್ದಲ್ಲದೇ, ಅಕ್ರಮವಾಗಿ 24,55,052 ರೂ.ಗಳನ್ನು ನಕಲಿ ವೈದ್ಯಕೀಯ ಬಿಲ್ ಸಲ್ಲಿಸಿ ಪಡೆದಿರುವುದು ತನಿಖೆಯಿಂದ ಸಾಬೀತಾಗಿದ್ದು, ಇದಕ್ಕೆ ಸಂಬಂಧಿಸಿದ ಮಾಹಿತಿ ಒದಗಿಸುವಂತೆ ಸತ್ಯನಾರಾಯಣ ಅವರು ಮಾಹಿತಿ ಹಕ್ಕು ಕಾಯಿದೆಯಡಿ ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆ ನಿರ್ದೇಶಕರ ಕಚೇರಿಯ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅರ್ಜಿ ಸಲ್ಲಿಸಿದ್ದರು.

ಆದರೆ ನಿಗದಿತ ಸಮಯದಲ್ಲಿ ತಮಗೆ ಮಾಹಿತಿ ಒದಗಿಸದ ಕಾರಣ ಅವರು ಮಾಹಿತಿ ಆಯುಕ್ತರಿಗೆ ದೂರು ಸಲ್ಲಿಸಿದ್ದು, ಮಾಹಿತಿ ಆಯುಕ್ತ ರಾಜಶೇಖರ್ ಸಮಕ್ಷಮದಲ್ಲಿ 2025ರ ಮಾ.6, ಏ.16 ಮತ್ತು ಮೇ 15ರಂದು ವಿಚಾರಣೆ ನಡೆದು ಮಾಹಿತಿ ಆಯುಕ್ತರು ಸತ್ಯನಾರಾಯಣ ಅವರಿಗೆ ಪಿಐಓ ಅವರಿಂದ ಮಾಹಿತಿ ಒದಗಿಸಿದ್ದಾರೆ.

ಆದರೆ ಅವರು ತಮ್ಮ ಆದೇಶದಲ್ಲಿ ಇದು ದಂಡ ವಿಧಿಸುವ ಪ್ರಕರಣವಲ್ಲ ಎಂದು ತಿಳಿಸಿದ್ದಾರೆ. ಅಲ್ಲದೇ ತೆರೆದ ನ್ಯಾಯಾಲಯದಲ್ಲಿ ಆದೇಶವನ್ನು ಘೋಷಿಸಿರುವುದಾಗಿ ಸುಳ್ಳು ಹೇಳಿರುತ್ತಾರೆ. ಆದ್ದರಿಂದ ಅವರನ್ನು ಸೇವೆಯಿಂದ ವಜಾಗೊಳಿಸಬೇಕು ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ದಂಡ ವಿಧಿಸುವ ಜೊತೆಗೆ ತಮಗೆ ಆರ್ಥಿಕ ನಷ್ಟ ಪರಿಹಾರ ಕೊಡಿಸುವಂತೆ ರಾಜ್ಯಪಾಲರಿಗೆ ಸತ್ಯನಾರಾಯಣ ಪತ್ರ ಬರೆದಿದ್ದಾರೆ.









ವಿಶೇಷ ಮಕ್ಕಳಿಗೆ ಪಿಜಿಯೋಥೆರಪಿ ಕೇಂದ್ರ; ವೃತ್ತಿಪರ ತರಬೇತಿ ಘಟಕ ಉದ್ಘಾಟನೆ

ಸಮರ್ಥನಂ ಸಂಸ್ಥೆ ಕಾರ್ಯ ವೈಖರಿ ಪ್ರಶಂಸಿಸಿದ ಶಾಸಕ ಹರೀಶ್‌ಗೌಡರು



ಮೈಸೂರಿನ ಸಮರ್ಥನಂ ಅಂಗವಿಕಲರ ಸಂಸ್ಥೆ ವತಿಯಿಂದ ನಿರ್ಮಿಸಿರುವ ಪಿಜಿಯೋಥೆರಪಿ ಕೇಂದ್ರ ಮತ್ತು ವೃತ್ತಿಪರ ತರಬೇತಿ ಘಟಕವನ್ನು ಶಾಸಕ ಕೆ.ಹರೀಶ್‌ಗೌಡ ಉದ್ಘಾಟಿಸಿ, ವೀಕ್ಷಿಸಿದರು.

ಮೈಸೂರು, ಜು.3– ವಿಶೇಷಚೇತನ ಮಕ್ಕಳಿಗೆ ಪಿಜಿಯೋಥೆರಪಿ(ಭೌತಚಿಕಿತ್ಸೆ) ಅತ್ಯವಶ್ಯ ಎಂದು ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ ಹೇಳಿದರು.

ಮೈಸೂರಿನ ವಿಜಯನಗರ ಎರಡನೇ ಹಂತದಲ್ಲಿರುವ ಸಮರ್ಥನಂ ಅಂಗವಿಕಲ ಸಂಸ್ಥೆಯ, ಬುದ್ಧಿ ವಿಶೇಷ ಚೇತನ ಮಕ್ಕಳ ಶಾಲೆಯ ಪಿಜಿಯೋಥೆರಪಿ ಕೇಂದ್ರ ಹಾಗೂ ವೃತ್ತಿಪರ ತರಬೇತಿ ಘಟಕಗಳ ಉದ್ಘಾಟನೆ ನೆರವೇರಿಸಿ, ಅವರು ಮಾತನಾಡಿದರು.

ವಿಶೇಷಚೇತನ ಮಕ್ಕಳು ತಮ್ಮ ದೈಹಿಕ, ಮಾನಸಿಕ ಮತ್ತು ಸಾಮಾಜಿಕ ಬೆಳವಣಿಗೆ ಹಾದಿಯಲ್ಲಿ ವಿಶಿಷ್ಟವಾದ ಸವಾಲುಗಳನ್ನು ಎದುರಿಸುತ್ತಾರೆ. ಆದ್ದರಿಂದ ವಿಶೇಷಚೇತನ ಮಕ್ಕಳ ಬೆಳವಣಿಗೆಗೆ ಸ್ಪೀಚ್ ಥೆರಪಿ, ಔದ್ಯೋಗಿಕ ಚಿಕಿತ್ಸೆ ಮತ್ತು ಮನೋವಿಜ್ಞಾನದ ಜೊತೆಗೆ ಭೌತಚಿಕಿತ್ಸೆಯು ನಿರ್ಣಾಯಕ ಪಾತ್ರ ವಹಿಸುತ್ತದೆ. ಈ ನಿಟ್ಟಿನಲ್ಲಿ ಸಮರ್ಥನಂ ಸಂಸ್ಥೆಯ ಕಾರ್ಯ ಶ್ಲಾಘನೀಯ ಎಂದರು.

ಜಿಲ್ಲಾ ಅಂಗವಿಕಲರ ಕಲ್ಯಾಣ ಅಧಿಕಾರಿ ಶಂಕರಗೌಡ ಪಟೇಲ ಮಾತನಾಡಿ, ವೃತ್ತಿಪರ ತರಬೇತಿಯು ಉದ್ಯೋಗ ಮತ್ತು ಸ್ವತಂತ್ರ ಜೀವನಕ್ಕೆ ಉತ್ತೇಜಿಸುತ್ತದೆ. ವಿಶೇಷ ಕೌಶಲ ಮತ್ತು ಪ್ರಾಯೋಗಿಕ ಅನುಭವದೊಂದಿಗೆ ಅವರನ್ನು ಸಜ್ಜುಗೊಳಿಸಲು ತರಬೇತಿಗಳು ಪೂರಕವಾಗಿವೆ. ಉದ್ಯೋಗ ಭದ್ರತೆಯೊಂದಿಗೆ ಸಮಾಜಕ್ಕೆ ಕೊಡುಗೆ ನೀಡಲು ಅಗತ್ಯವಾದ ಜ್ಞಾನ ಮತ್ತು ಸಾಮರ್ಥ್ಯವೂ ಈ ಮೂಲಕ ಲಭ್ಯವಾಗಲಿದೆ ಎಂದು ತಿಳಿಸಿದರು.

ಸಮರ್ಥನಂ ಅಂಗವಿಕಲರ ಸಂಸ್ಥೆ ಟ್ರಸ್ಟಿ ಬೂಸೆಗೌಡ ಮಾತನಾಡಿ, ವೃತ್ತಿಪರ ತರಬೇತಿ ಘಟಕದಲ್ಲಿ ಮೇಣದ ಬತ್ತಿ ತಯಾರಿಕೆ, ಆರ್ಟ್ ಅಂಡ್ ಕ್ಲೇವ್, ಟೈಲರಿಂಗ್ ಇನ್ನಿತರ ತರಬೇತಿಗಳನ್ನು ನೀಡಲಾಗುತ್ತದೆ. 18 ರಿಂದ 30 ವರ್ಷ ವಯೋಮಿತಿಯ ಮೈಲ್ಡ್ ಬುದ್ಧಿಮಾಂದ್ಯ ಮಕ್ಕಳಿಗೆ ಇಲ್ಲಿ ತರಬೇತಿಯನ್ನು ನೀಡಲಾಗುವುದು ಎಂದು ಹೇಳಿದರು.

ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ತಿಬ್ಬಯ್ಯ ಹಾಗೂ ಕರ್ನಾಟಕ ರಾಜ್ಯ ಅಂಗವಿಕಲರ ಫೆಡರೇಶನ್ ಅಧ್ಯಕ್ಷ ಶ್ರೀಧರ್ ದೀಕ್ಷಿತ್ ಮಾತನಾಡಿ, ಸಂಸ್ಥೆಯ ಕಾರ್ಯವನ್ನು ಪ್ರಶಂಸಿಸಿದರು. ಕಾರ್ಯಕ್ರಮದಲ್ಲಿ ಪ್ರಾಂಶುಪಾಲೆ ಡಾ.ಕೆ.ಗೀತಾ, ಪ್ರಸನ್ನಕುಮಾರ, ಲಾವಣ್ಯ, ಶ್ರೀನಿವಾಸ ರೆಡ್ಡಿ, ಎಂ.ಶಿವರಾಜು, ಚೈತ್ರಕುಮಾರಿ, ಮಾಂತೇಶ್, ಭ್ರಮರಾಂಭ, ಪದ್ಮ, ಬೃಂದಾಬಾಯಿ, ವಿದ್ಯಾವತಿ, ನಿಂಗಮಣಿ, ಪಾಂಡು, ಮಹದೇವು ಸೇರಿದಂತೆ ಸಿಬ್ಬಂದಿ, ವಿಶೇಷ ಚೇತನ ಮಕ್ಕಳು ಹಾಗೂ ಪೋಷಕರು ಉಪಸ್ಥಿತರಿದ್ದರು.